ಸಂಪುಟ: 05 ಸಂಚಿಕೆ: 198 ಪುಟಗಳು: 08 ಬುಧವಾರ 01 ಅಕ್ಟೋಬರ್ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ



ನಾಡಿನ ಸಮಸ್ತ ಜನತೆಗೆ ಹಾಗೂ ಪತ್ರಿಕಾ ಓದುಗರು, ವರದಿಗಾರರು, ಜಾಹೀರಾತುದಾರರಿಗೆ ಪತ್ರಿಕಾ ಬಳಗದಿಂದ

**ಆಯುಧ ಪೂಜೆ ಹಾಗೂ ವಿಜಯದಶಮಿ ಹಬ್ಬದ ಹಾರ್ದಿಕ ಶುಭಾಶಯಗಳು**

ಸೂಚನೆ: ಹಬ್ಬದ ನಿಮಿತ್ತ ಬುಧವಾರ ಕಚೇರಿಗೆ ಬಿಡುವು ಇರುವ ಕಾರಣದಿಂದ ಗುರುವಾರ ಪತ್ರಿಕೆ ಮುದ್ರಣವಾಗುವುದಿಲ್ಲ.
-ಸಂಪಾದಕರು, ಉದಯವಾಹಿನಿ

## ಕಲ್ಯಾಣ ಕಣ್ಣೀರು ವೈಮಾನಿಕ ಸಮೀಕ್ಷೆ ಶುರು

• ಉದಯವಾಹಿನಿ ಬೆಂಗಳೂರು

ಭೀಮಾ, ಕೃಷ್ಣಾ ನದಿ ಅಬ್ಬರಕ್ಕೆ ಕಲ್ಯಾಣ ಕರ್ನಾಟಕ ತತ್ತರಿಸಿ ಹೋಗಿದೆ. ಜನರ ಬದುಕು ಪ್ರವಾಹದಿಂದ ಬೀದಿಗೆ ಬಿದ್ದಿದೆ. ಸಿಎಂ ಸಿದ್ದರಾಮಯ್ಯ ಪ್ರವಾಹ ಪರಿಸ್ಥಿತಿ ಅವಲೋಕಿಸುತ್ತಿದ್ದಾರೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ವೈಮಾನಿಕ ಸಮೀಕ್ಷೆ ನಡೆಸಿದ್ದಾರೆ. ಬೀದರ್, ಕಲಬುರಗಿ, ಯಾದಗಿರಿ ಮತ್ತು ವಿಜಯಪುರ ಜಿಲ್ಲೆಯ ಹಾನಿಗೊಳಗಾದ ಪ್ರದೇಶಗಳ ವೀಕ್ಷಣೆ ಮಾಡಿದ್ದಾರೆ.

**ಪ್ರವಾಹಾರ್ಭಟಕ್ಕೆ ನಲುಗಿದ ಕಲ್ಯಾಣ ಕರ್ನಾಟಕ:** ವಿಜಯಪುರ ಜಿಲ್ಲೆ ಇಂಡಿ ತಾಲ್ಲೂಕಿನ ಖೇಡಗಿ ಗ್ರಾಮಕ್ಕೆ ಪ್ರವಾಹ ನುಗ್ಗಿದೆ. 30ಕ್ಕೂ ಹೆಚ್ಚು ಮನೆಗಳು ಸಂಪೂರ್ಣ ಜಲಾವೃತವಾಗಿದ್ದು, ಆಂಜನೇಯಸ್ವಾಮಿ ದೇಗುಲ, ಲಾಲ್‌ಸಾಬ್ ದರ್ಗಾ, ಬಸವಣ್ಣ ದೇವಸ್ಥಾನಗಳು ಜಲಾವೃತವಾಗಿವೆ. ಜನರು ತೆಪ್ಪದಲ್ಲೇ ಓಡಾಡುವ ಪರಿಸ್ಥಿತಿ ಸೃಷ್ಟಿಯಾಗಿದೆ. ಭೀಮಾನದಿ ಆರ್ಭಟಕ್ಕೆ ಭೀಕರ ಪ್ರವಾಹ ಉಂಟಾಗಿದ್ದು, ಇಡೀ ಬಸವೇಶ್ವರ ಮಠ ಜಲಾವೃತವಾಗಿದೆ. ಕುತ್ತಿಗೆವರೆಗೂ ನೀರು ಬಂದರೂ ಕಾಂತಯ್ಯ ಎಂಬುವವರು ಈಜಿಕೊಂಡು ಹೋಗಿ ಪೂಜೆ ಸಲ್ಲಿಸಿದ್ದಾರೆ. ಪ್ರವಾಹ ಇದ್ದರೂ ಮಠದಲ್ಲಿ ಪೂಜೆ ನಿಲ್ಲಿಸಲ್ಲ ಎಂದು ಹೇಳಿದ್ದಾರೆ.

ಯಾದಗಿರಿ ಜಿಲ್ಲೆ ಶಹಾಪುರದ ರೋಜಾ ಗ್ರಾಮ ಪ್ರವಾಹದಿಂದ ನಡುಗಡ್ಡೆಯಾಗಿದ್ದು, ಮೂಕ ಪ್ರಾಣಿಗಳ ರೋದನೆ ಹೇಳತೀರದಾಗಿದೆ. ಜಾನುವಾರಗಳಿಗೆ ತಿನ್ನಲು ಮೇವು ಇಲ್ಲದೆ ಜನ ಪರದಾಡುತ್ತಿದ್ದಾರೆ. ಬೋಟ್‌ನಲ್ಲಿ ಮೇವು ತರುವ ಸ್ಥಿತಿ ನಿರ್ಮಾಣವಾಗಿದೆ. ನಿರಂತರ ಮಳೆಗೆ ರಾಯಚೂರಿನಲ್ಲೂ ಅವಾಂತರ ಸೃಷ್ಟಿಯಾಗಿದೆ. ಜಿಲ್ಲೆಯಾದ್ಯಂತ ಅಪಾರ ಪ್ರಮಾಣದ ಹತ್ತಿ ಬೆಳೆ ನಾಶವಾಗಿದೆ. ಎಕರೆಗೆ 20-30 ಸಾವಿರ ಖರ್ಚು ಮಾಡಿರುವ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳ ವಿರುದ್ಧ ರೈತರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಬೆಳಗಾವಿಯಲ್ಲಿ ಘಟಪ್ರಭಾ ಅಬ್ಬರಕ್ಕೆ ಸಂಕಷ್ಟಗಳ ಪ್ರವಾಹ ಉಂಟಾಗಿದೆ. ಹುಕ್ಕೇರಿ ತಾಲ್ಲೂಕಿನ ಜಿನ್ರಾಳದಲ್ಲಿ ಗ್ರಾಮದಲ್ಲಿ ಕಟಾವಿಗೆ ಬಂದಿದ್ದ ಮೆಕ್ಕೆಜೋಳ, ಕಬ್ಬು ಬೆಳೆಗಳು ಸರ್ವನಾಶವಾಗಿವೆ. ಕಷ್ಟಪಟ್ಟು ಬೆಳೆದಿದ್ದ ಬೆಳೆ ಕಳೆದುಕೊಂಡು ರೈತರು ಕಂಗಾಲಾಗಿದ್ದಾರೆ.

ವಿಜಯೇಂದ್ರ ವಾಗ್ದಾಳಿ ಇಷ್ಟಕ್ಕೆ ನಿಲ್ಲದೇ ಯಡಿಯೂರಪ್ಪ ಏಕಾಂಗಿಯಾಗಿ ಪ್ರವಾಹ ಪ್ರದೇಶಗಳಿಗೆ ಭೇಟಿ ಕೊಟ್ಟಿದ್ದರು ಎಂದು ಹೇಳಿದ್ದಾರೆ. ಈ ಮಾತಿಗೆ ತಿರುಗೇಟು ಕೊಟ್ಟ ಸಚಿವ ಪ್ರಿಯಾಂಕ್ ಖರ್ಗೆ, ನಿಮ್ಮ ಪೂಜ್ಯ ತಂದೆ ವಿಮಾನ ನಿಲ್ದಾಣದಿಂದ ಹೊರಗೆ ಬಂದಿರಲಿಲ್ಲ ಎಂ.ಬಿ. ಪಾಟೀಲ್ ಕೇಂದ್ರದ ಜವಾಬ್ದಾರಿ ಹೆಚ್ಚಿದೆ ಎಂದಿದ್ದಾರೆ. ಕಾಂಗ್ರೆಸ್ ನಾಯಕರ ಮಾತುಗಳಿಗೆ ಹೆಚ್‌ಡಿಕೆ ಕೌಂಟರ್ ಕೊಟ್ಟಿದ್ದಾರೆ. ಕೇಂದ್ರಕ್ಕೆ ಯಾರಾದರೂ ಮನವಿ ಸಲ್ಲಿಸಿದ್ದೀರಾ ಎಂದು ಪ್ರಶ್ನಿಸಿದ್ದಾರೆ. ಜನರು ಪ್ರವಾಹಕ್ಕೆ ಸಿಲುಕಿರುವ ಈ ಸಂದರ್ಭದಲ್ಲಿ ರಾಜಕೀಯ ನಾಯಕರುಗಳ ಆರೋಪ-ಪ್ರತ್ಯಾರೋಪಗಳ ಪಟ್ಟಿ ಬೆಳೆಯುತ್ತಲೇ ಇದೆ ಎಂದು ಕಾಲೆಳೆದಿದ್ದಾರೆ.

**1** ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಸಿಎಂ ಸಿದ್ದರಾಮಯ್ಯ ವೈಮಾನಿಕ ಸಮೀಕ್ಷೆ

**2** ವೈಮಾನಿಕ ಸಮೀಕ್ಷೆ ಫೋಟೋ ಶೂಟ್ ಔಟ್ ಆಗದಿರಲಿ ಎಂದ ಆರ್. ಅಶೋಕ

**3** ವಿಮಾನ ಟೇಕಾಫ್ ಆಗುವ ಮುನ್ನ ಪರಿಹಾರದ ಹಣ ಟೇಕಾಫ್ ಆಗಲಿ ಎಂದ ವಿಪಕ್ಷದ ನಾಯಕ



### ಕ. ಕರ್ನಾಟಕಕ್ಕೆ ವಿಶೇಷ ಪ್ಯಾಕೇಜ್ ನೀಡಿ

ಕಲ್ಯಾಣ ಕರ್ನಾಟಕದ ಜನ ಸಂಕಷ್ಟದಲ್ಲಿರುವ ಈ ಪರಿಸ್ಥಿತಿಯಲ್ಲಿ ಕಾಂಗ್ರೆಸ್ ಸರ್ಕಾರ ಈ ಭಾಗದ ಜನರ ನೋವಿಗೆ ಸ್ಪಂದಿಸಬೇಕು. ಕಲ್ಯಾಣ ಕರ್ನಾಟಕಕ್ಕೆ 10,000 ಕೋಟಿ ರೂ. ವಿಶೇಷ ಆರ್ಥಿಕ ಪ್ಯಾಕೇಜ್ ಘೋಷಣೆ ಮಾಡಬೇಕು. ಘೋಷಣೆ ಮಾಡುವುದು ಮಾತ್ರವಲ್ಲ ಅದನ್ನು ಬಿಡುಗಡೆ ಮಾಡಿ ಪುನರ್ನಿರ್ಮಾಣ, ಪುನರ್ವಸತಿ ಕೆಲಸಗಳಿಗೆ ಬಳಸಿಕೊಳ್ಳಬೇಕು.

### ಪರಿಹಾರ ವಿತರಣೆಯಲ್ಲಿ ಪಾರದರ್ಶಕತೆ ಇರಲಿ

ಕಳೆದ ಎರಡು ವರ್ಷಗಳಲ್ಲಿ ನೆರೆ, ಬರ ಪರಿಸ್ಥಿತಿಗಳು ಉಂಟಾದಾಗ ಪರಿಹಾರ ವಿತರಣೆಯಲ್ಲಿ ಹಲವಾರು ಸಂತ್ರಸ್ತರು ಬಿಟ್ಟುಹೋಗಿರುವ, ಸಂತ್ರಸ್ತರು ಪರಿಹಾರಕ್ಕಾಗಿ ವರ್ಷಗಟ್ಟಲೆ ಕಚೇರಿಗಳಿಗೆ ಅಲೆದಾಟ ನಡೆಸಿರುವ ಅನೇಕ ಉದಾಹರಣೆಗಳು ಇವೆ. ಈ ಬಾರಿಯಾದರೂ ಯಾರೂ ಪರಿಹಾರದಿಂದ ವಂಚಿತರಾಗದಂತೆ ಕ್ರಮ ಕೈಗೊಳ್ಳಬೇಕು. ಅರ್ಹ ಸಂತ್ರಸ್ತರಿಗೆ ಪರಿಹಾರ ತಲುಪಿದ ಬಗ್ಗೆ ಸಂಪೂರ್ಣ ಮಾಹಿತಿ ಸಾರ್ವಜನಿಕವಾಗಿ ಲಭ್ಯವಾಗಬೇಕು ಪರಿಹಾರ ಕಾರ್ಯಗಳಲ್ಲಿ ಯಾವುದೇ ರಾಜಕೀಯ ದುರುಪಯೋಗ, ಭ್ರಷ್ಟಾಚಾರ ಆಗದಂತೆ ಎಚ್ಚರವಹಿಸಬೇಕು.

### ರಾಜಕೀಯ ನಾಯಕರ ನಡುವೆ ವಾಗ್ಯುದ್ಧ

ಸಿಎಂ ವೈಮಾನಿಕ ಸಮೀಕ್ಷೆಗೆ ಬಿಜೆಪಿ ವ್ಯಂಗ್ಯವಾಡಿದೆ. ವಿಪಕ್ಷ ನಾಯಕ ಆರ್. ಅಶೋಕ್, ನೀವು ಜನ ಘೇರಾವ್ ಮಾಡುತ್ತಾರೆಂಬ ಭೀತಿಯಿಂದ ವೈಮಾನಿಕ ಸಮೀಕ್ಷೆ ಮಾಡುತ್ತಿದ್ದೀರಾ ಎಂದು ಪ್ರಶ್ನಿಸಿದ್ದಾರೆ. ಇನ್ನು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ, ಪರಿಹಾರ ಘೋಷಿಸಿ ಸಮೀಕ್ಷೆಗೆ ಬರಬೇಕಿತ್ತು ಎಂದಿದ್ದಾರೆ. ಬಿ.ವೈ. ವಿಜಯೇಂದ್ರ ರಾಜ್ಯ ಸರ್ಕಾರದ ವಿರುದ್ಧ ಕಿಡಿಕಾರಿದ್ದಾರೆ. ಇದೊಂದು ಮುಟ್ಠಾಳರ ಸರ್ಕಾರ ಎಂದು ಕರೆದಿದ್ದಾರೆ. ಈ ಮಾತಿಗೆ ಗರಂ ಆಗಿರುವ ಸಚಿವ ಎಂ.ಬಿ. ಪಾಟೀಲ್, ಅವರೇ ಮುಟ್ಠಾಳರು ನಮಗೇನು ಹೇಳುತ್ತಾರೆ ಎಂದು ತಿರುಗೇಟು ನೀಡಿದ್ದಾರೆ.

**ಸ್ಪಾಟ್ ಪರಿಶೀಲನೆ, ಸ್ಪಾಟ್ ಚೆಕ್ ವಿತರಣೆ ಆಗಲಿ:** ನೆರೆ ಕಡಿಮೆಯಾದ ಕೂಡಲೇ, ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು ಮತ್ತು ಅಧಿಕಾರಿಗಳ ತಂಡ ಪ್ರತಿ ಗ್ರಾಮಕ್ಕೆ ಭೇಟಿ ನೀಡಿ, ಬೆಳೆ, ಆಸ್ತಿಪಾಸ್ತಿ, ಜಾನುವಾರು ನಷ್ಟದ ಸಮಗ್ರ ಸಮೀಕ್ಷೆ ನಡೆಸಬೇಕು. ಹಿಂದಿನ ಬಿಜೆಪಿ ಸರ್ಕಾರದಲ್ಲಿ ನಾನು ಕಂದಾಯ ಸಚಿವನಾಗಿದ್ದಾಗ ಅಂದಿನ ಸಿಎಂ ಯಡಿಯೂರಪ್ಪನವರು ಸ್ಥಳದಲ್ಲೇ ಚೆಕ್ ವಿತರಣೆ ಮಾಡಿದ್ದರು. ಕಾಂಗ್ರೆಸ್ ಸರ್ಕಾರವೂ ಅದೇ ರೀತಿ ಮಾಡಿ ಸ್ಥಳದಲ್ಲೇ ಚೆಕ್ ವಿತರಣೆ ಮಾಡಬೇಕು.

### ಸಾಂಕ್ರಾಮಿಕ ರೋಗ ಭೀತಿ, ಆರೋಗ್ಯ ಇಲಾಖೆ ಎಚ್ಚೆತ್ತುಕೊಳ್ಳಲಿ

ಪ್ರವಾಹ ಇಳಿದ ಮೇಲೆ ಸಾಂಕ್ರಾಮಿಕ ರೋಗಗಳು ಹರಡುವ ಭೀತಿ ಹೆಚ್ಚಾಗಿರುತ್ತದೆ. ಆರೋಗ್ಯ ಇಲಾಖೆ ತಕ್ಷಣ ಎಚ್ಚೆತ್ತುಕೊಂಡು ಕಾರ್ಯಪ್ರವೃತ್ತರಾಗಬೇಕು. ಮೊಬೈಲ್ ಆರೋಗ್ಯ ವ್ಯಾನ್‌ಗಳನ್ನು ಪ್ರತಿ ಗ್ರಾಮಕ್ಕೆ ಕಳುಹಿಸುವ ಮೂಲಕ ಅರಿವು ಮೂಡಿಸಬೇಕು, ಅಗತ್ಯ ಔಷಧಿಗಳ ಬೃಹತ್ ಶೇಖರಣೆ ಮಾಡಿಕೊಳ್ಳುವ ಜೊತೆಗೆ ಸಾಂಕ್ರಾಮಿಕ ರೋಗಗಳು ವ್ಯಾಪಕ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು.

- **ಭೀಮಾನದಿ ಭೋರ್ಗರೆತಕ್ಕೆ ಕ. ಕರ್ನಾಟಕ ತತ್ತರ**
- **ಸಿಎಂ ವೈಮಾನಿಕ ಸಮೀಕ್ಷೆ**
- **ಅಧಿಕಾರಿಗಳಿಂದ ಮಾಹಿತಿ ಪಡೆದ ಸಿಎಂ**
- **ವಿಮಾನ ಟೇಕಾಫ್ ಮುನ್ನ, ಪರಿಹಾರ ಟೇಕಾಫ್ ಆಗಲಿ' - 5 ಆಗ್ರಹಗಳು**



## ವಿಧಾನಸೌಧ ಹಾಗೂ ಸರ್ಕಾರಿ ಕಚೇರಿಗಳಲ್ಲಿ ಆಯುಧ ಪೂಜೆ ಸಂಭ್ರಮ

• ಉದಯವಾಹಿನಿ ಬೆಂಗಳೂರು

ಆಡಳಿತದ ಶಕ್ತಿ ಕೇಂದ್ರಗಳಾದ ವಿಧಾನಸೌಧ, ವಿಕಾಸಸೌಧ, ಬಹುಮಹಡಿಗಳ ಕಟ್ಟಡ ಸೇರಿದಂತೆ ರಾಜ್ಯಾದ್ಯಂತ ಬಹುತೇಕ ಸರ್ಕಾರಿ ಕಚೇರಿಗಳಲ್ಲಿ ಆಯುಧ ಪೂಜೆಯನ್ನು ಸಂಭ್ರಮ ಸಡಗರದಿಂದ ನೆರವೇರಿಸಲಾಯಿತು. ಸರ್ಕಾರಿ ಕಚೇರಿಗಳಲ್ಲದೇ ಖಾಸಗಿ ಸಂಸ್ಥೆಗಳ ಕಚೇರಿಗಳು, ಕೈಗಾರಿಕೆಗಳು, ಅಂಗಡಿ-ಮುಂಗಟ್ಟುಗಳಲ್ಲಿ ಆಯುಧ ಪೂಜೆಯನ್ನು ಮಾಡಲಾಯಿತು. ವಿಧಾನಸೌಧ, ವಿಕಾಸಸೌಧದ ವಿವಿಧ ಕಚೇರಿಗಳನ್ನು ತಳಿರು-ತೋರಣಗಳಿಂದ ಸಿಂಗರಿಸಿ, ಕಚೇರಿ ಮುಂದೆ ರಂಗೋಲಿ ಬಿಡಿಸಿ ವಿಶೇಷವಾಗಿ ಅಲಂಕರಿಸಲಾಗಿತ್ತು.

ಅದೇ ರೀತಿ ರಾಜ್ಯದ ವಿವಿಧ ಸರ್ಕಾರಿ ಕಚೇರಿಗಳು, ಖಾಸಗಿ ಸಂಸ್ಥೆಗಳಲ್ಲೂ ಕೂಡ ಅಲಂಕರಿಸಿ ಆಯುಧ ಪೂಜೆಯನ್ನು ನೆರವೇರಿಸಲಾಯಿತು. ಮತ್ತು ಗುರುವಾರ ರಜೆಯಿರುವ ಹಿನ್ನೆಲೆಯಲ್ಲಿ ಬಹುತೇಕ ಎಲ್ಲಾ ವಾಣಿಜ್ಯ ವ್ಯವಹಾರ ನಡೆಸುವ ಕಚೇರಿಗಳಲ್ಲೂ ಪೂಜೆ ಮಾಡಲಾಯಿತು.

## ತಿಮರೋಡಿ ಗಡೀಪಾರಿಗೆ ಹೈಕೋರ್ಟ್ ತಡೆಯಾಜ್ಞೆ

• ಉದಯವಾಹಿನಿ ಬೆಂಗಳೂರು

ಶ್ರೀ ಕ್ಷೇತ್ರ ಧರ್ಮಸ್ಥಳ ವಿರುದ್ಧ ಹಾಗೂ ನಿಗೂಢವಾಗಿ ಕೊಲೆಯಾದ ವಿದ್ಯಾರ್ಥಿನಿ ಸೌಜನ್ಯ ಪರ ಹೋರಾಟ ನಡೆಸುತ್ತಿದ್ದ ಮಹೇಶ್ ತಿಮರೋಡಿ ಗಡಿಪಾರಿಗೆ ಹೈಕೋರ್ಟ್ ತಡೆಯಾಜ್ಞೆ ನೀಡಿದೆ.

ತಮನ್ನು ರಾಯಚೂರು ಜಿಲ್ಲೆ ಮಾನ್ವಿ ತಾಲ್ಲೂಕಿಗೆ ಗಡಿಪಾರು ಮಾಡಿರುವುದನ್ನು ಪ್ರಶ್ನಿಸಿ ತಿಮರೋಡಿ ಪರ ವಕೀಲರು ಹೈಕೋರ್ಟ್‌ಗೆ ಮೇಲನವಿ ಅರ್ಜಿ ಸಲ್ಲಿಸಿದ್ದರು. ವಾದ-ಪ್ರತಿವಾದ ಆಲಿಸಿದ ಹೈಕೋರ್ಟ್ ರಜಾಕಾಲೀನ ಏಕಸದಸ್ಯ ಪೀಠದ ನ್ಯಾಯಮೂರ್ತಿ ಸಿ.ಎಂ.ಪೂಣಚ್ಚ ಅವರು ಗಡಿಪಾರಿಗೆ ತಡೆಯಾಜ್ಞೆ ನೀಡಿ ಆರೋಪಿ ವಿರುದ್ಧ ಯಾವುದೇ ರೀತಿಯ ಬಲವಂತದ ಕ್ರಮ ಬೇಡ ಎಂದು ನಿರ್ದೇಶನ ನೀಡಿತು. ಮುಂದಿನ ಅ.8ರವರೆಗೆ ಗಡಿಪಾರು ಮಾಡದಂತೆ ಸೂಚನೆ ನೀಡಿದ ನ್ಯಾಯಾಧೀಶರು ರಾಜ್ಯ ಗೃಹ ಇಲಾಖೆ ಪುತ್ತೂರು ಸಹಾಯಕ ಆಯುಕ್ತರು, ಭಂಟ್ವಾಳ ಉಪವಿಭಾಗದ ಉಪಪೊಲೀಸ್ ವರಿಷ್ಠಾಧಿಕಾರಿ ಮತ್ತು ಬೆಳ್ತಂಗಡಿ ಪೊಲೀಸ್ ಸಬ್ ಇನ್‌ಸ್ಪೆಕ್ಟರ್ ಅವರಿಗೂ ನೋಟಿಸ್ ಜಾರಿ ಮಾಡಿದೆ.

## ರಾಹುಲ್‌ಗಾಂಧಿ ಎದೆಗೆ ಗುಂಡುಹಾರಿಸುತ್ತೇವೆ ಎಂಬ ಹೇಳಿಕೆ : ಹರಿಪ್ರಸಾದ್ ಖಂಡನೆ

• ಉದಯವಾಹಿನಿ ಬೆಂಗಳೂರು

ರಾಹುಲ್‌ಗಾಂಧಿ ಅವರ ಎದೆಗೆ ಗುಂಡುಹಾರಿಸುತ್ತೇವೆ ಎಂದು ಬಿಜೆಪಿ ವಕ್ತಾರ ನೀಡಿರುವ ಹೇಳಿಕೆ ಬಾಯಿ ತಪ್ಪಿನಿಂದ ಬಂದಿರುವುದು ಅಲ್ಲ. ಭಾರಿ ಪಿತೂರಿ ನಡೆದಿರುವುದರ ಸಂಕೇತ ಎಂದು ಹಿರಿಯ ಕಾಂಗ್ರೆಸ್ಸಿಗ , ವಿಧಾನ ಪರಿಷತ್ ಸದಸ್ಯ ಬಿ.ಕೆ. ಹರಿಪ್ರಸಾದ್ ಆತಂಕ ವ್ಯಕ್ತಪಡಿಸಿದ್ದಾರೆ. ತಮ್ಮ ಸಾಮಾಜಿಕ ಜಾಲತಾಣದಲ್ಲಿ ಈ ಬಗ್ಗೆ ಆಕ್ರೋಶ ವ್ಯಕ್ತಪಡಿಸಿರುವ ಅವರು, ಸತ್ಯ, ಶಾಂತಿ, ಸೌಹಾರ್ದತೆ, ನ್ಯಾಯ-ನೀತಿಯ ಪ್ರತಿರೂಪವಾಗಿ ಬಾಳಿ ಬದುಕಿದ್ದ ಮಹಾತಾ ಗಾಂಧಿಯವರ ಎದೆಗೆ ಗುಂಡಿಕ್ಕಿ ಕೊಂದ ಸಂತತಿಯವರೇ ಇಂದು ದೇಶದ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ ಅವರ ಎದೆಗೆ ಗುಂಡಿಕ್ಕಿ ಕೊಲೆ ಮಾಡುತ್ತೇವೆ ಎಂದು ಘೋಷಿಸಿದ್ದಾರೆ. ಬಿಜೆಪಿಯ ಕೊಲೆಗಡುಕ ಸಂಸ್ಕೃತಿಯ ಮುಖವಾಡಕ್ಕೆ ಇದು ಕೈಗನ್ನಡಿ ಎಂದಿದ್ದಾರೆ.

## ಜಾತಿ ಗಣತಿ ವಿಷಯದಲ್ಲಿ ಸರ್ಕಾರ ಮತ್ತು 'ಕೈ'ಕಮಾಂಡ್ ಗೊಂದಲ ಮೂಡಿಸುತ್ತಿದೆ

• ಉದಯವಾಹಿನಿ ಕಲಬುರಗಿ

ಜಾತಿ ಗಣತಿ ವಿಷಯದಲ್ಲಿ ನಾವು ಗೊಂದಲ ಸೃಷ್ಟಿಸುತ್ತಿಲ್ಲ. ಕಾಂಗ್ರೆಸ್ ಸರಕಾರ ಮತ್ತು ಅವರ ಹೈಕಮಾಂಡ್ ಗೊಂದಲ ಮೂಡಿಸುತ್ತಿದೆ ಎಂದು ಸಂಸದ ಗೋವಿಂದ ಕಾರಜೋಳ ತಿರುಗೇಟು ನೀಡಿದ್ದಾರೆ.

ಆರ್ಥಿಕ, ಶೈಕ್ಷಣಿಕ ಕಾಳಜಿ ಇದ್ದರೆ 2013ರಿಂದ 2018ರ ವರೆಗೆ ಸಿದ್ದರಾಮಯ್ಯನವರೇ ಮುಖ್ಯಮಂತ್ರಿ ಆಗಿದ್ದರು. ಕಾಂತರಾಜುರವರನ್ನು ನೇಮಿಸಿ ವರದಿ ತೆಗೆದುಕೊಂಡರು. 180 ಕೋಟಿ ಖರ್ಚು ಮಾಡಿದ ಆ ವರದಿ ಏನಾಗಿದೆ? ಕಸದ ಬುಟ್ಟಿಗೆ ಹಾಕಿದ್ದಾರೆ ಎಂದು ಸಿದ್ದರಾಮಯ್ಯ ಅವರನ್ನು ತರಾಟೆಗೆ ತೆಗೆದುಕೊಂಡರು. ನಾವು ದಾರಿ ತಪ್ಪಿಸುತ್ತಿಲ್ಲ. ಸಿದ್ದರಾಮಯ್ಯನವರು- ಕಾಂಗ್ರೆಸ್ ಪಕ್ಷ ದಾರಿ ತಪ್ಪಿಸುತ್ತಿವೆ. ಅವತ್ತು ಜಾತಿಗಳ ಅಂಕಿ ಸಂಖ್ಯೆ ಬಿಡುಗಡೆ ಮಾಡಿದ್ದರು. ಗೌಪ್ಯವಾಗಿ ಇಡಬೇಕಾದ ಅಂಕಿ ಅಂಶವನ್ನು ಯಾಕೆ ಗೌಪ್ಯವಾಗಿಡಲಿಲ್ಲ? ಎಂದು ಪ್ರಶ್ನೆ ಮಾಡಿದರು.

## ಒಂದು ವಾರದೊಳಗಾಗಿ ನೇಮಕಾತಿ ನಿಯಮಾವಳಿಗಳಿಗೆ ತಿದ್ದುಪಡಿ

• ಉದಯವಾಹಿನಿ ಬೆಂಗಳೂರು

ಪೊಲೀಸ್ ಇಲಾಖೆಯಲ್ಲಿ ಸಬ್‌ಇನ್ಸ್‌ಪೆಕ್ಟರ್, ಕಾನ್ಸ್‌ಟೆಬಲ್ ಹುದ್ದೆಗಳ ನೇಮಕಾತಿಗೆ ಶಾಶ್ವತವಾಗಿ ವಯೋಮಿತಿ ಸಡಿಲಿಕೆಗೆ 1 ವಾರದೊಳಗಾಗಿ ವೃಂದಾ ಮತ್ತು ನೇಮಕಾತಿ ನಿಯಮಾವಳಿಗಳಿಗೆ ತಿದ್ದುಪಡಿ ಇರುವುದಾಗಿ ಗೃಹ ಸಚಿವ ಡಾ. ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ಒಳ ಮೀಸಲಾತಿಯ ಕಾರಣಕ್ಕಾಗಿ ನೇಮಕಾತಿಗಳು ನಡೆಯದೇ ಬಹಳಷ್ಟು ಮಂದಿ ಅವಕಾಶ ವಂಚಿತರಾಗುತ್ತಿದ್ದರು. ಅಂತವರಿಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಒಂದು ಅವಧಿಗೆ ಸೀಮಿತಗೊಂಡಂತೆ 2027ರ ವರೆಗೆ ಎಲ್ಲಾ ಇಲಾಖೆಯ ನೇಮಕಾತಿಗಳಲ್ಲೂ ವಯೋಮಿತಿ ಸಡಿಲಿಸಿದ್ದಾರೆ ಎಂದರು. ಪೊಲೀಸ್ ಇಲಾಖೆಯಲ್ಲಿ ಶಾಶ್ವತವಾಗಿ ವಯೋಮಿತಿ ಸಡಿಲಿಕೆಗೆ ಕ್ರಮ ಕೈಗೊಳ್ಳಲಾಗುತ್ತಿದೆ.

ಬೇರೆಬೇರೆ ರಾಜ್ಯಗಳಲ್ಲಿರುವ ವಯೋಮಿತಿಯ ಮಾಹಿತಿಯನ್ನು ಪಡೆಯಲಾಗಿದೆ. ಹಲವು ರಾಜ್ಯಗಳಲ್ಲಿ 27,30,33 ವರ್ಷಗಳವರೆಗೂ ವಯೋಮಿತಿ ಸಡಿಲಿಕೆಯಿದೆ. ನಮಲ್ಲೂ ಕಾನ್ಸ್‌ಟೇಬಲ್ ಮತ್ತು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಹುದ್ದೆಗಳಿಗೆ ಶಾಶ್ವತವಾಗಿ ವಯೋಮಿತಿ ಸಡಿಸಲು ಕ್ರಮಕೈಗೊಳ್ಳುವುದಾಗಿ ತಿಳಿಸಿದರು. ಧರ್ಮಸ್ಥಳದ ಪ್ರಕರಣದಲ್ಲಿ ತನಿಖೆ ವಿಳಂಬವಾಗುತ್ತಿದೆ ಎಂಬುವುದು ಸರಿಯಲ್ಲ. ಷಡ್ಯಂತ್ರ ಮಾಡಿದವರನ್ನು ಬಂಧಿಸಲು ಕಾನೂನಿನ ತೊಡಕುಗಳಿವೆ. ಬಹಳಷ್ಟು ವಿಚಾರಗಳಲ್ಲಿ ಎಫ್‌ಎಸ್‌ಎಲ್ ವರದಿಗಳು ಬಾಕಿ ಇವೆ. ಎಸ್‌ಐಟಿ ಅಧಿಕಾರಿಗಳು ತಮ ಪಾಲಿನ ಕೆಲಸಗಳನ್ನು ನಿರ್ವಹಿಸುತ್ತಿದ್ದಾರೆ. ಈ ವರೆಗೂ ಸಿಕ್ಕಿರುವ ಕೆಲ ಅಂಶಗಳನ್ನು ಪ್ರಯೋಗಾಲಯಕ್ಕೆ ಕಳುಹಿಸಿದ್ದಾರೆ. ಈ ಮೊದಲು ಸಿಕ್ಕಿರುವ ಅಂಶಗಳನ್ನು ಕ್ರೋಡೀಕರಿಸಿದ್ದಾರೆ. ಶೀಘ್ರದಲ್ಲೇ ತನಿಖೆ ಪೂರ್ಣ ಗೊಳಿಸಲು ಸೂಚಿಸಲಾಗಿದೆ ಎಂದರು.

ಈ ನಡುವೆ ಸಿಕ್ಕವರೆಲ್ಲಾ ಅರ್ಜಿ ಕೊಡುತ್ತಿದ್ದಾರೆ. ಅಲ್ಲಿ ಮೂಳೆಗಳಿವೆ. ಇಲ್ಲಿ ಮೂಳೆಗಳಿವೆ ಎಂದು ಹೇಳುತ್ತಿದ್ದಾರೆ. ಇಂತಹ ವಿಚಾರಗಳಿಗೆ ಕೊನೆಯಾಡಬೇಕಿದೆ ಎಂದರು. ಸಮಹೇಶ್ ತಿಮರೋಡಿ ಗಡಿಪಾರು ಪ್ರಕರಣವನ್ನು ನ್ಯಾಯಾಲದಲ್ಲಿ ಪ್ರಶ್ನಿಸಲಾಗಿದೆ. ಅಲ್ಲಿನ ತೀರ್ಪನ್ನು ಕಾಯುತ್ತಿದ್ದೇವೆ. ಎಲ್ಲವನ್ನೂ ಕಾನೂನಿನ ಪ್ರಕಾರವೇ ಬಂಧನ ಸೇರಿದಂತೆ ಎಲ್ಲಾ ಪ್ರಕ್ರಿಯಗಳನ್ನು ನಡೆಸಲಾಗುತ್ತದೆ. ಎಸ್‌ಐಟಿಗೆ ಸರ್ಕಾರ ಯಾವುದೇ ಸೂಚನೆಗಳನ್ನು ನೀಡುವುದಿಲ್ಲ ಎಂದರು. ತನಿಖೆಯ ಹಂತದಲ್ಲಿ ಇಂತಿಷ್ಟೇ ಕಾಲಮಿತಿ ಎಂದು ನಿಗಧಿಪಡಿಸಲು ಸಾಧ್ಯವಿಲ್ಲ. ಒಂದು ಸ್ಪಷ್ಟ ನಿರ್ಧಾರಕ್ಕೆ ಬರಲು ಪ್ರಮುಖ ಮಾಹಿತಿಗಳ ಅಗತ್ಯವಿರುತ್ತದೆ. ಎಫ್‌ಎಸ್‌ಎಲ್‌ನ ವರದಿ ಅಂತಿಮಗೊಳ್ಳಬೇಕು. ಸುಪ್ರೀಂ ಕೋರ್ಟಿನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಜಾಗೊಂಡಿರುವ ವಿಚಾರವನ್ನು ಎಸ್‌ಐಟಿ ಅಧಿಕಾರಿಗಳು ಪರಿಗಣಿಸಿ ತಮ ವರದಿಯಲ್ಲಿ ಉಲ್ಲೇಖಿಸಬಹುದು ಎಂದು ಪರಮೇಶ್ವರ್ ಹೇಳಿದರು. ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ವೇಳೆ ಮಾಹಿತಿ ಕೊಡಬಾರದು ಜನ ಬಹಿಷ್ಕಾರ ಹಾಕಬೇಕು ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಸಂಸದ ತೇಜಸ್ವಿಸೂರ್ಯ ಹೇಳಿಕೆ ಸರಿಯಲ್ಲ. 2026ರಲ್ಲಿ ಕೇಂದ್ರ ಸರ್ಕಾರ ಜನಗಣತಿ ಮತ್ತು ಜಾತಿಗಣತಿ ನಡೆಸಲಿದೆ. ಆ ಸಂದರ್ಭದಲ್ಲಿ ಬೇರೆಯರು ಮತ್ತೊಂದು ರೀತಿಯ ಹೇಳಿಕೆ ನೀಡುವಂತಾಗಬಾರದು. ಕೇಂದ್ರ ಸರ್ಕಾರದ ಜನಗಣತಿಯಲ್ಲಿ ಭಾಗವಹಿಸಬೇಡಿ ಎಂದು ಹೇಳಿದರೆ ಸರಿಹೋಗಲಿದೆಯೇ ಎಂದರು.

**ವಯೋಮಿತಿ ಸಡಿಲಿಕೆಗೆ ಕ್ರಮ**



## ಸಮೀಕ್ಷೆ ಮೂಲಕ ಗ್ಯಾರಂಟಿಗಳನ್ನು ನಿಲ್ಲಿಸಲು ಸರ್ಕಾರ ಸಂಚು : ಆರ್.ಅಶೋಕ್

### • ನ್ಯಾಯಾಲಯ ಹೇಳಿದಂತೆ ಸಮೀಕ್ಷೆ ನಡೆಯುತ್ತಿಲ್ಲ, ಇದು ಸಿದ್ದರಾಮಯ್ಯ ಅವರ ಸಮೀಕ್ಷೆ, ಗ್ಯಾರಂಟಿಗಳನ್ನು ಕಟ್ ಮಾಡಲು ಸಮೀಕ್ಷೆ

• ಉದಯವಾಹಿನಿ ಬೆಂಗಳೂರು

ಹಿಂದುಳಿದ ವರ್ಗಗಳ ಶಾಶ್ವತ ಆಯೋಗದಿಂದ ರಾಜ್ಯಾದ್ಯಂತ ನಡೆಸುತ್ತಿರುವ ಸಾಮಾಜಿಕ ಹಾಗೂ ಶೈಕ್ಷಣಿಕಯ ಉದ್ದೇಶವೇ ಗ್ಯಾರಂಟಿಗಳನ್ನು ಕಡಿತ ಮಾಡುವ ಏಕೈಕ ಗುರಿಯಾಗಿದೆ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಮತ್ತೆ ಸರ್ಕಾರದ ವಿರುದ್ಧ ಗಂಭೀರ ಆರೋಪ ಮಾಡಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾನು ಈ ಹಿಂದೆ ನೀಡಿದ ಹೇಳಿಕೆಗೆ ಬದ್ಧನಾಗಿದ್ದೇನೆ. ಶೈಕ್ಷಣಿಕ, ಸಾಮಾಜಿಕ ಸಮೀಕ್ಷೆ ಮೂಲಕ ಗ್ಯಾರಂಟಿಗಳನ್ನು ಬಂದ್ ಮಾಡಲು ಸಂಚು ರೂಪಿಸಿದ್ದಾರೆ. ಮುಂದಿನ ದಿನಗಳಲ್ಲಿ ಇದು ಜನರಿಗೆ ಗೊತ್ತಾಗಲಿದೆ ಎಂದು ಎಚ್ಚರಿಸಿದರು.

ಮಾಹಿತಿ ಪಡೆಯಲು ಬಲವಂತ ಮಾಡುವಂತಿಲ್ಲ ಎಂದು ಕೋರ್ಟ್ ಹೇಳಿದೆ. ಆದರೆ ಇವರು ಜನರ ವೈಯಕ್ತಿಕ ಮಾಹಿತಿ ಸಂಗ್ರಹ ಮಾಡುತ್ತಿದ್ದಾರೆ. ನ್ಯಾಯಾಲಯ ಹೇಳಿದಂತೆ ಸಮೀಕ್ಷೆ ನಡೆಯುತ್ತಿಲ್ಲ. ಇದು ಸಿದ್ದರಾಮಯ್ಯ ಅವರ ಸಮೀಕ್ಷೆ. ಗ್ಯಾರಂಟಿಗಳನ್ನು ಕಟ್ ಮಾಡಲು ಸಮೀಕ್ಷೆ ನಡೆಸುತ್ತಿದ್ದಾರೆ ಎಂದು ಆರೋಪಿಸಿದರು.

ಯಾವ ಪುರುಷಾರ್ಥಕ್ಕೆ ಹದಿನೈದೇ ದಿನ ನಿಗಧಿ ಮಾಡಿದ್ದೀರಿ? ತರಬೇತಿ ಕೊಡದೇ ಸಮೀಕ್ಷೆಗೆ ಗಣತಿದಾರರನ್ನು ಕಳಿಸಿದ್ದಾರೆ. ಹದಿನೈದು ದಿನಗಳಲ್ಲಿ ಪ್ರಳಯ ಆಗುತ್ತಾ? ಕೇಂದ್ರದ ಗಣತಿಯನ್ನೂ ತಪ್ಪು ದಾರಿಗೆ ಎಳೆಯಲು ಈಗಿಂದಲೇ ಪ್ರಯತ್ನ ಮಾಡುತ್ತಿದ್ದಾರೆ. ಜಾತಿ ಜಾತಿಗಳ ನಡುವೆ ಗೊಂದಲ ಸೃಷ್ಟಿಸುತ್ತಿದ್ದಾರೆ. ದುರುದ್ದೇಶ ಸ್ವಾರ್ಥ, ದುರುಳತನ ಇರುವ ಸಮೀಕ್ಷೆ ಇದು ಎಂದು ಕಿಡಿಕಾರಿದರು.

ಹಲವು ಜಾತಿ ಸಮುದಾಯಗಳು ಸಮೀಕ್ಷೆ ಅವೈಜ್ಞಾನಿಕ ಎನ್ನುತಿವೆ. ಸಮೀಕ್ಷೆಯಲ್ಲಿ ಭಾಗವಹಿಸುವುದು, ಬಿಡುವುದು ಜನರ ವಿವೇಚನೆಗೆ ಬಿಟ್ಟ ವಿಚಾರ. ಕೋರ್ಟ್ ಕೂಡ ಕಡ್ಡಾಯವಲ್ಲ ಎಂದೇ ಹೇಳಿದೆ. ಕೇಂದ್ರ ಸರ್ಕಾರ ಜಾತಿ ಗಣತಿ ಮಾಡುತ್ತಿರುವುದು ಸಂವಿಧಾನದ ಪ್ರಕಾರ. ಆದರೆ ರಾಜ್ಯ ಸರ್ಕಾರ ಮಾಡುತ್ತಿರುವುದು ಸಂವಿಧಾನ ಪ್ರಕಾರ ಅಲ್ಲ. ತೇಜಸ್ವಿ ಸೂರ್ಯ ಅವರು ತಮ ವೈಯಕ್ತಿಕ ಹೇಳಿಕೆ ನೀಡಿದ್ದಾರೆ.

ಕೋರ್ಟ್ ಪ್ರಕಾರ, ಇಷ್ಟವಿದ್ದರೆ ಮಾಹಿತಿ ಕೊಡಬಹುದು ಇಲ್ಲದಿದ್ದರೂ ಬಿಡಬಹುದು. ವೈಯಕ್ತಿಕ ಮಾಹಿತಿ ಕೊಡುವುದು, ಬಿಡುವುದು ಜನರ ತೀರ್ಮಾನ. ಎಲ್ಲಾ ಮಾಹಿತಿ ಕೊಟ್ಟರೆ ಸರ್ಕಾರದ ಸೌಲಭ್ಯಕ್ಕೆ ಕೊಕ್ ಬೀಳಬಹುದು. ಸಿದ್ದರಾಮಯ್ಯನವರದ್ದು ಜಾತಿ ಒಡೆಯುವ ಬ್ರಾಂಡ್. 15 ದಿನದಲ್ಲೇ ಸರ್ವೆ ಮಾಡಬೇಕು ಎನ್ನುವ ಆತುರ ಏಕೆ ? 15 ದಿನದಲ್ಲಿ ಸಿಎಂ ಬಿಟ್ಟೋಗುತ್ತಾರಾ? ತರಬೇತಿ ಇಲ್ಲದೇ ಸರ್ವೆಗೆ ಹೋಗುತ್ತಿದ್ದಾರೆ. ನಾಯಿಯಿಂದ ಕಚ್ಚಿಸಿಕೊಂಡು ಬರಲು ಸರ್ವೆಗೆ ಹೋಗಬೇಕಾ ? ಎಂದು ಪ್ರಶ್ನಿಸಿದರು.

ಅಂತೂ ಇಂತೂ ಸಿಎಂ ನೆರೆ ಪೀಡಿತ ಪ್ರದೇಶಗಳಿಗೆ ಹೋಗುತ್ತಿರುವುದು ಸಂತೋಷ. ಆದರೆ ವೈಮಾನಿಕ ಸಮೀಕ್ಷೆ ಯಾಕೆ? ಯಾಕೆ ರಸ್ತೆ ಮೇಲೆ ಸಿಎಂ ಹೋಗುತ್ತಿಲ್ಲ? ಸಿಎಂ ಏನು ದೆಹಲಿಯಿಂದಲೋ ಮುಂಬೈಯಿಂದಲೋ ಬರುತ್ತಿದ್ದಾರಾ? ರಸ್ತೆ ಗಳಲ್ಲಿ ರಸ್ತೆ ಗುಂಡಿಗಳಿವೆ ಅದಕ್ಕೇ ಸಿಎಂ ರಸ್ತೆ ಮಾರ್ಗದಲ್ಲಿ ನೆರೆಪೀಡಿತ ಪ್ರದೇಶಗಳ ಭೇಟಿ ಮಾಡುತ್ತಿಲ್ಲ. ರಸ್ತೆ ಮಾರ್ಗದಲ್ಲಿ ಹೋದರೆ ಜನ ಘೇರಾವ್ ಹಾಕುತ್ತಾರೆ ಎಂದು ಭಯದಿಂದ ವೈಮಾನಿಕ ಸಮೀಕ್ಷೆ ಮಾಡುತ್ತಿದ್ದಾರೆ ಸರ್ಕಾರ ನೆರೆ ಪರಿಹಾರ ಕಾರ್ಯಗಳನ್ನು ಸಮರೋಪಾದಿಯಲ್ಲಿ ಮಾಡಬೇಕಿತ್ತು. ಮಂತ್ರಿಗಳ, ಅಧಿಕಾರಿಗಳ ಒಂದು ತಂಡ ರಚಿಸಿ ಕಳಿಸಬೇಕಿತ್ತು. ಆದ್ರೆ ಇದುವರೆಗೆ ಒಬ್ಬೇಒಬ್ಬ ಮಂತ್ರಿ ನೆರೆ ಪ್ರದೇಶಗಳ ಕಡೆ ಸುಳಿದಿಲ್ಲ. ಇದು ಯಾವ ಸೀಮೆ ಸರ್ಕಾರ ಎಂದು ಜನರೇ ಪ್ರಶ್ನಿಸುತ್ತಿದ್ದಾರೆ. ನೆರೆ ಪರಿಸ್ಥಿತಿ ನಿಭಾಯಿಸುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ದೂರಿದರು.

ಸಚಿವ ಸಂಪುಟ ಪುನಾರಚನೆ ಬಗ್ಗೆ ಸಚಿವ ಜಮೀರ್ ಅಹಮದ್ ಹೇಳಿಕೆಗೆ ಪ್ರತಿಕ್ರಿಯಿಸಿದ ಅಶೋಕ್, ಇದು ತಂತ್ರ ಇಲ್ಲದೇ ನಡೀತಿರುವ ಅತಂತ್ರ ಸರ್ಕಾರ. ಜಮೀರ್ ಹೇಳಿಕೆ ಅಕ್ಟೋಬರ್ ಕ್ರಾಂತಿ ಆಗುವುದರ ಸುಳಿವು. ಒಬ್ಬೊಬ್ಬರು ಒಂದೊಂದು ಹೇಳಿಕೆ ಕೊಡುತ್ತಿದ್ದಾರೆ. ಅಕ್ಟೋಬರ್ ಕ್ರಾಂತಿ ಆಗುವುದು ಪಕ್ಕಾ. ಕ್ರಾಂತಿ ಬಗ್ಗೆ ಮಾತನಾಡಲು ಹೋಗುತ್ತಿದಾರೆ. ರಾಜಣ್ಣ ವಜಾ ಆದರು. ಒಟ್ಟಿನಲ್ಲಿ ಅಕ್ಟೋಬರ್ ಕ್ರಾಂತಿ ಆಗುವುದು ಖಚಿತ . ಅಕ್ಟೋಬರ್ ಕ್ರಾಂತಿ ಆಗಿ ಸರ್ಕಾರ ಬಿದ್ದು ಹೋದರೆ ನಾವು ಪ್ರಜಾಪ್ರಭುತ್ವ ಮಾದರಿಯಲ್ಲಿ ಚುನಾವಣೆಗೆ ಹೋಗುತ್ತೇವೆ ಎಂದರು.

**ದುರುಳತನ ಇರುವ ಸಮೀಕ್ಷೆ**

ಸಿಎಂ ಬದಲಾವಣೆ ಬಗ್ಗೆ ಕಾಂಗ್ರೆಸ್ ಸಚಿವರೇ ಹೇಳುತ್ತಿದ್ದಾರೆ. ಇದು ಅಸ್ಥಿರ ಸರ್ಕಾರ. ನಾವು ನಾಲ್ಕೈದು ತಿಂಗಳಿನಿಂದ ಅಕ್ಟೋಬರ್ ಕ್ರಾಂತಿ ಬಗ್ಗೆ ಹೇಳುತ್ತಿದ್ದೆವು. ಈಗ ಮಂತ್ರಿಯೇ ಕ್ಯಾಬಿನೆಟ್ ಪುನರ್ ರಚನೆ ಎಂದು ಹೇಳಿದ್ದಾರೆ. ಪುನರ್ ರಚನೆ ಅಂದರೆ ಮುಖ್ಯಮಂತ್ರಿಯೂ ಸೇರಿ ಬದಲಾಗುತ್ತಾರೆ, ಅಕ್ಟೋಬರ್ ಕ್ರಾಂತಿ ಎಂದ ಕಾಂಗ್ರೆಸ್ ನಾಯಕರು ಮನೆಗೆ ಹೋಗಿದ್ದಾರೆ. ಈಗ ಹೇಳುತ್ತಿರುವವರೂ ಮನೆಗೆ ಹೋಗುತ್ತಾರೆ. -ಆರ್.ಅಶೋಕ್



## ವಿಜಯದಶಮಿಯಂದು ಹರಿದಾಸ ವೈಭವ

• ಉದಯವಾಹಿನಿ, ಬೆಂಗಳೂರು



ಪರಮಪೂಜ್ಯ ಶ್ರೀ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀ ಪಾದಂಗಳವರ ಆದೇಶದಂತೆ ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್ ಕೆ ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಅಕ್ಟೋಬರ್ 2, ಗುರುವಾರ ಸಂಜೆ 5-15ಕ್ಕೆ ಕು|| ಅನನ್ಯ ಬೆಳವಾಡಿ ಇವರಿಂದ ಹರಿದಾಸ ವೈಭವ ಗಾಯನ ಕಾರ್ಯಕ್ರಮ ಏರ್ಪಡಿಸಲಾಗಿದ್ದು, ಇವರ ಗಾಯನಕ್ಕೆ ಕೀ-ಬೋರ್ಡ್ ವಾದನದಲ್ಲಿ ಶ್ರೀ ಅಮಿತ್ ಶರ್ಮಾ ಮತ್ತು ತಬಲಾ ವಾದನದಲ್ಲಿ ಶ್ರೀ ರಂಗವಿಠಲ ಸಾಥ್ ನೀಡಲಿದ್ದಾರೆ ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದ್ದಾರೆ. ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 11ನೇ ಮುಖ್ಯರಸ್ತೆ, 45ನೇ ಅಡ್ಡರಸ್ತೆ, ಜಯನಗರ 5ನೇ ಬಡಾವಣೆ, ಬೆಂಗಳೂರು 41

## ಕಿದ್ವಾಯಿ ಆಸ್ಪತ್ರೆಯಿಂದ ಪರಾರಿಯಾಗಿದ್ದ ಕೈದಿ ವಿಜಯಪುರದಲ್ಲಿ ಅರೆಸ್ಟ್

• ಉದಯವಾಹಿನಿ, ಬೆಂಗಳೂರು

ವಿಜಯಪುರ ಚಿಕಿತ್ಸೆಗೆಂದು ಬಂದಿದ್ದ ವೇಳೆ ಕಿದ್ವಾಯಿ ಆಸ್ಪತ್ರೆಯಿಂದ ಪರಾರಿಯಾಗಿದ್ದ ಕೈದಿಯನ್ನು ಸಿದ್ದಾಪುರ ಪೊಲೀಸರು ವಿಜಯಪುರದಲ್ಲಿ ಬಂಧಿಸಿದ್ದಾರೆ. ಕೈದಿ ಚೇತನ್ ಕಲ್ಯಾಣಿಯನ್ನು ಸಿದ್ದಾಪುರ ಪೊಲೀಸರು ಬಂಧಿಸಿದ್ದಾರೆ. ಕ್ಯಾನ್ಸರ್ ರೋಗದಿಂದ ಬಳಲುತ್ತಿದ್ದ ಸಜಾ ಕೈದಿಯನ್ನ ಬಿಜಾಪುರದಿಂದ ಬೆಂಗಳೂರಿನ ಪರಪ್ಪನ ಅಗ್ರಹಾರಕ್ಕೆ ಶಿಫ್ಟ್ ಮಾಡಲಾಗಿತ್ತು. ಬಾಯಿ ಕ್ಯಾನ್ಸರ್ ರೋಗದಿಂದ ಬಳಲುತ್ತಿದ್ದ ಅಪರಾಧಿಯನ್ನ ಕಿದ್ವಾಯಿ ಆಸ್ಪತ್ರೆಗೆ ಚಿಕಿತ್ಸೆಗೆ ಕರೆ ತಂದಿದ್ದ ವೇಳೆ ಜೈಲು ಸಿಬ್ಬಂದಿ ಕಣ್ತಪ್ಪಿಸಿ ಎಸ್ಕೇಪ್ ಆಗಿದ್ದಾನೆ. ಆಸ್ಪತ್ರೆ ಸಿಬ್ಬಂದಿ ಹಿಡಿಯಲು ಪ್ರಯತ್ನಿಸಿದರೂ ಸಿಗದೇ ಎಸ್ಕೇಪ್ ಆಗಿದ್ದ. ಕಳೆದ ಆ. 21ರಿಂದ ಕಿದ್ವಾಯಿ ಆಸ್ಪತ್ರೆಯಲ್ಲಿ ಒಳ ರೋಗಿಯಾಗಿ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದ ಸಜಾ ಕೈದಿ ಚೇತನ್ ಸೆ.8ರಂದು ಮಧ್ಯಾಹ್ನ 1 ಗಂಟೆ ಸುಮಾರಿಗೆ ಸಿಬ್ಬಂದಿ ಕಣ್ತಪ್ಪಿಸಿ ಪರಾರಿಯಾಗಿದ್ದ.

## ಮಹಿಳೆಯ ಖಾಸಗಿ ವಿಡಿಯೋ ಇಟ್ಕೊಂಡು ಬ್ಲಾಕ್‌ಮೇಲ್ ಆರೋಪ

• ಉದಯವಾಹಿನಿ, ಬೆಂಗಳೂರು

ಮಹಿಳೆಯ ಖಾಸಗಿ ವಿಡಿಯೋ ಇಟ್ಕೊಂಡು ಬ್ಲಾಕ್‌ಮೇಲ್ ಮಾಡುತ್ತಿದ್ದ ಇಬ್ಬರ ವಿರುದ್ಧ ಕಾಮಾಕ್ಷಿಪಾಳ್ಯ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ರೌಡಿ ಅರಸಯ್ಯನ ಗ್ಯಾಂಗ್‌ನಲ್ಲಿ ಗುರುತಿಸಿಕೊಂಡಿರುವ ಶೂಟ್ ಗಿರಿ, ಸ್ವರೂಪ್ ಎಂಬವರ ವಿರುದ್ಧ ಪ್ರಕರಣ ದಾಖಲಾಗಿದೆ. 2022ರಲ್ಲಿ ಸ್ವರೂಪ್ ಎಂಬಾತನಿಗೆ ಫೇಸ್‌ಬುಕ್‌ನಲ್ಲಿ ಮಹಿಳೆ ಪರಿಚಯವಾಗಿದ್ದಳು. ನಂತರ ಮಹಿಳೆ ಬಳಿ ಸ್ವರೂಪ್, ಕಷ್ಟ ಎಂದು ಹೇಳಿಕೊಂಡು, 4 ಲಕ್ಷ ರೂ. ಹಣ ಪಡೆದಿದ್ದ. ಮಹಿಳೆ ಹಣ ವಾಪಸ್ ಕೇಳಿದಾಗ ಆಕೆಯ ಖಾಸಗಿ ವಿಡಿಯೋ, ಫೋಟೋ ಇಟ್ಟುಕೊಂಡು ಸಾಮಾಜಿಕ ಜಾಲತಾಣದಲ್ಲಿ ಹರಿಬಿಡುವುದಾಗಿ ಬೆದರಿಕೆ ಹಾಕಿದ್ದ. ನೊಂದ ಮಹಿಳೆ ಪೊಲೀಸ್ ಠಾಣೆಗೆ ದೂರು ಕೊಡಲು ಮುಂದಾದಾಗ ಶೂಟ್ ಗಿರಿ ಹಣ ಕೊಡುವುದಾಗಿ ಮಹಿಳೆಯನ್ನು ತಡೆದಿದ್ದ. ಬಳಿಕ ಹಣ ಕೊಡದೇ, ಸ್ವರೂಪ್ ನಮ್ಮ ಹುಡುಗ ಅವನ ತಂಟೆಗೆ ಬಂದ್ರೆ ಸರಿ ಇರಲ್ಲ ಎಂದು ಬೆದರಿಕೆ ಹಾಕಿದ್ದ ಎಂದು ಆರೋಪಿಸಲಾಗಿದೆ. ಅಲ್ಲದೇ ವಿಡಿಯೋ ಹರಿಬಿಡುವುದಾಗಿ ಬೆದರಿಕೆ ಹಾಕಿದ್ದರು ಎನ್ನಲಾಗಿದೆ.

## ನಂಬರ್ ಪ್ಲೇಟ್ ಇಲ್ಲದೇ ವಾಹನ ರಸ್ತೆಗಿಳಿಸಿದ್ರೆ, ದಾಖಲಾಗುತ್ತೆ 420 ಕೇಸ್!

• ಉದಯವಾಹಿನಿ, ಬೆಂಗಳೂರು

ನಂಬರ್ ಪ್ಲೇಟ್ ಇಲ್ಲದ ವಾಹನಗಳನ್ನು ರಸ್ತೆಗೆ ಇಳಿಸಿದ್ರೆ ಸೆಕ್ಷನ್ 420 ಅಡಿಯಲ್ಲಿ ವಂಚನೆ ಪ್ರಕರಣ ದಾಖಲಿಸಲು ಬೆಂಗಳೂರು ಪೊಲೀಸರು ಮುಂದಾಗಿದ್ದಾರೆ. ನಂಬರ್ ಪ್ಲೇಟ್ ಇಲ್ಲದ ವಾಹನಗಳನ್ನು ಸೀಜ್ ಮಾಡಲಾಗುತ್ತಿದೆ. ಯಾಕೆ ಇಷ್ಟು ಕಠಿಣ ಕ್ರಮ ಎಂದರೆ, ಕೆಲವರು ಸಂಚಾರಿ ನಿಯಮ ಉಲ್ಲಂಘನೆ ಮರೆಮಾಚಲು, ಅಪರಾಧ ಕೃತ್ಯಗಳಲ್ಲಿ ಭಾಗಿಯಾಗುವ ಕೆಲ ಪುಂಡರು ವಾಹನಗಳಿಗೆ ನಂಬರ್ ಪ್ಲೇಟ್ ಹಾಕದೆ, ನಂಬರ್ ಪ್ಲೇಟ್ ವಿಕಾರಗೊಳಿಸಿ ಓಡಾಡುತ್ತಿದ್ದಾರೆ. ಅಂತವರನ್ನು ಮಟ್ಟ ಹಾಕಲು ಪೊಲೀಸರು ಕಠಿಣ ನಿರ್ಧಾರಕ್ಕೆ ಮುಂದಾಗುತ್ತಿದ್ದಾರೆ. ಪಶ್ಚಿಮ ವಿಭಾಗ ಒಂದರಲ್ಲೇ 40ಕ್ಕೂ ಹೆಚ್ಚು ವಾಹನ ಸವಾರರ ವಿರುದ್ಧ ವಂಚನೆ ಕೇಸ್ ದಾಖಲಿಸಿಸಲಾಗಿದೆ. ನಗರದ ವಿವಿಧ ವಿಭಾಗದಲ್ಲಿ ಒಟ್ಟು ನೂರಕ್ಕು ಅಧಿಕ ವಾಹನ ಸವಾರರ ವಿರುದ್ಧ ಪ್ರಕರಣ ದಾಖಲಿಸುವ ಮೂಲಕ ಬಿಸಿಮುಟ್ಟಿಸುವ ಕೆಲಸ ಮಾಡುತ್ತಿದ್ದಾರೆ. ಒಂದು ರಾತ್ರಿಯಲ್ಲಿ ನಗರದಾದ್ಯಂತ ಸುಮಾರು 1000 ವಾಹನಗಳನ್ನ ಪೊಲೀಸರು ಸೀಜ್ ಮಾಡಿದ್ದರು. ಕೆಲವರು ಸಮರ್ಪಕದ ಕಾರಣ ನೀಡಿ ವಾಹನ ಬಿಡಿಸಿಕೊಂಡು ಹೋದರೆ, ಉಳಿದವರು ಸಮರ್ಪಕವಾದ ಕಾರಣ ನೀಡದೆ ಹೋಗಿದ್ದರಿಂದ ವಂಚನೆ ಪ್ರಕರಣ ದಾಖಲಿಸಿದ್ದಾರೆ.

# ಹೊಸ ರೂಪದ ತೆರಿಗೆಗೆ ಹೊಸದೊಂದು ದಾರಿ

### ಬೆಂಗಳೂರಿನ ವೈಟ್ ಟಾಪಿಂಗ್ ರಸ್ತೆಯಲ್ಲಿ ಪಾರ್ಕ್ ಮಾಡಿದರೆ ಪಾರ್ಕಿಂಗ್ ಚಾರ್ಜ್

• ಉದಯವಾಹಿನಿ, ಬೆಂಗಳೂರು

ಹೊಸದಾಗಿ ಅಸ್ತಿತ್ವಕ್ಕೆ ಬಂದಿರುವ ಗ್ರೇಟರ್ ಬೆಂಗಳೂರು ಪ್ರಾಧಿಕಾರ, ಆದಾಯದ ಮೂಲವನ್ನು ಹೆಚ್ಚಿಸಿಕೊಳ್ಳಲು ಹೊಸಹೊಸ ಯೋಜನೆಯನ್ನು ಹಾಕಿಕೊಳ್ಳುತ್ತಿದೆ. ಇದರ ಮುಂದುವರಿದ ಭಾಗವಾಗಿ, ಕೆಲವೊಂದು ರಸ್ತೆಗಳಲ್ಲಿ ವಾಹನ ನಿಲುಗಡೆ ಮಾಡಿದರೆ, ಪಾರ್ಕಿಂಗ್ ಚಾರ್ಜ್ ಪಾವತಿಸಬೇಕಾಗುತ್ತದೆ.

ಬೆಂಗಳೂರಿನಲ್ಲಿರುವ ವೈಟ್ ಟಾಪ್ ರಸ್ತೆಗಳಲ್ಲಿ, ನಿಗದಿತ ಪಾರ್ಕಿಂಗ್ ಸ್ಥಳಗಳನ್ನು ಪಾರ್ಕಿಂಗ್ ಝೋನ್ ಅನ್ನಾಗಿ ಪರಿವರ್ತಿಸಲು ಜಿಬಿಎ ಮುಂದಾಗುವ ಸಾಧ್ಯತೆಯಿದೆ. ವೈಟ್ ಟಾಪ್ ರಸ್ತೆ ನಿರ್ಮಾಣಕ್ಕೆ ತಗಲಿರುವ ಖರ್ಚುವೆಚ್ಚ ಮತ್ತು ಹೆಚ್ಚುತ್ತಿರುವ ವಾಹನ ದಟ್ಟಣೆಯನ್ನು ನಿಯಂತ್ರಿಸುವುದು ಇದರ ಉದ್ದೇಶವಾಗಿದೆ.

ಬೆಂಗಳೂರು ಸಂಚಾರ ಪೊಲೀಸರ ಡೇಟಾ ಪ್ರಕಾರ, ರಾಜಧಾನಿಯಲ್ಲಿ ಸುಮಾರು 120 ಲಕ್ಷ ವಾಹನಗಳಿವೆ. ಈ ಪೈಕಿ ಶೇ. 82ರಷ್ಟು ದ್ವಿಚಕ್ರ ವಾಹನಗಳು. ವೈಟ್ ಟಾಪ್ ರಸ್ತೆ ನಿರ್ಮಾಣಕ್ಕೆ ತಗಲುವ ಖರ್ಚು, ಪ್ರತೀ ಕಿಲೋಮೀಟರ್ ಗೆ ಹನ್ನೆರಡು ಕೋಟಿ ರೂಪಾಯಿ. ವೈಟ್ ಟಾಪ್ಪಿಂಗ್ ರಸ್ತೆಗಳ ನಿರ್ಮಾಣ ವೆಚ್ಚ, ಡಾಂಬಾರು ರಸ್ತೆ ನಿರ್ಮಾಣಕ್ಕೆ ತಗಲುವ



ಉದಯವಾಹಿನಿ ಚಿತ್ರ

ಖರ್ಚಿಗಿಂತ ಸುಮಾರು ಹತ್ತು ಪಟ್ಟು ಹೆಚ್ಚು. ಈ ಹೆಚ್ಚುವರಿ ಹಣವನ್ನು ಹೊಂದಿಸಲು ಪಾರ್ಕಿಂಗ್ ಝೋನ್ ಮಾಡುವ ಸಾಧ್ಯತೆ ಬಹುತೇಕ ಖಚಿತ ಎಂದು ಹೇಳಲಾಗುತ್ತಿದೆ.

ಇದಲ್ಲದೇ, ಟೆಂಡರ್ ಶ್ಯೂರ್ ಮತ್ತು ಬೆಂಗಳೂರು ಸ್ಮಾರ್ಟ್ ಸಿಟಿ ಯೋಜನೆಯಡಿಯಲಿ ನಿರ್ಮಿಸಲಾದ ರಸ್ತೆಗಳನ್ನು ಸಹ ಈ ಪಾರ್ಕಿಂಗ್ ವ್ಯವಸ್ಥೆ ಅಡಿಗೆ ತರುವ ಚಿಂತನೆ ನಡೆದಿದೆ. ಇದು, ನಗರದಲ್ಲಿನ ಪಾರ್ಕಿಂಗ್ ನಿರ್ವಹಣೆಯನ್ನು ಸುಧಾರಿಸಲು ಸಹಾಯವಾಗುತ್ತದೆ ಎನ್ನುವುದು ಜಿಬಿಎ ನಿಲುವಾಗಿದೆ.

> ನಗರದಲ್ಲಿ ಪಾರ್ಕಿಂಗ್ ಸಮಸ್ಯೆ ದೊಡ್ಡದಾಗಿ ಬೆಳೆಯುತ್ತಿದೆ. ಹಲವು ಪ್ರದೇಶಗಳಲ್ಲಿ ಗಂಭೀರವಾದ ಪಾರ್ಕಿಂಗ್ ಸಮಸ್ಯೆಯಿದೆ, ಇದರಿಂದಾಗಿ ವಾಹನ ದಟ್ಟಣೆ ಹೆಚ್ಚಾಗುತ್ತಿದೆ. ಸದ್ಯ, 1,194 ಕಿಲೋಮೀಟರ್ ರಸ್ತೆಗಳನ್ನು, ನೋ ಪಾರ್ಕಿಂಗ್ ಪ್ರದೇಶ ಎಂದು ಗುರುತಿಸಲಾಗಿದೆ ಎಂದು ಸಂಚಾರ ವಿಭಾಗದ ಅಧಿಕಾರಿಗಳು ಹೇಳಿದ್ದಾರೆ.

ಇದುವರೆಗೆ ಸುಮಾರು 150 ಕಿಲೋಮೀಟರ್ ರಸ್ತೆಗಳನ್ನು ವೈಟ್ ಟಾಪ್ ಮಾಡಲಾಗಿದೆ. ಮೆಜೆಸ್ಟಿಕ್ ಸುತ್ತಮುತ್ತಲಿನ ಪ್ರದೇಶಗಳು, ಕಲ್ಯಾಣ ನಗರ ರಸ್ತೆ, ಸಂಪಿಗೆ ರಸ್ತೆ, ಆರ್ ಟಿ ನಗರ ಮುಖ್ಯ ರಸ್ತೆ, ಇಂದಿರಾನಗರ ಹಂಡ್ರೆಂಡ್ ಫೀಟ್ ರಸ್ತೆ, ಕಸ್ತೂರಿ ನಗರದಿಂದ ಬಿಇಎಲ್ ಸರ್ಕಲ್ ವರೆಗಿನ ಹೊರ ವರ್ತುಲ ರಸ್ತೆ ವೈಟ್ ಟಾಪ್ ಆಗಿದೆ.

ಕೃಷ್ಣರಾಜ ಮಾರುಕಟ್ಟೆಯ ನೆಲಮಾಳಿಗೆಯಲ್ಲಿ ಒಂದು ಪಾವತಿ ಪಾರ್ಕಿಂಗ್ ಸ್ಥಳವನ್ನು ನಿರ್ಮಿಸಲಾಗಿದೆ. ಇದು ಹಿಂದೆ, ಬೇಡವಾದ ಕಾರಣಕ್ಕೆ ಹೆಸರಾಗಿತ್ತು. ಇದನ್ನು, ಪ್ರಿನ್ಸ್ ರಾಯಲ್

> ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರ ಅಧ್ಯಕ್ಷತೆಯಲ್ಲಿ ನಡೆದ ಉನ್ನತ ಮಟ್ಟದ ಸಭೆಯಲ್ಲಿ ಈ ಬಗ್ಗೆ ಸುದೀರ್ಘವಾಗಿ ಚರ್ಚೆಯನ್ನು ನಡೆಸಲಾಗಿದೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರಕ್ಕೆ ಹೆಚ್ಚಿನ ಆದಾಯ ತರುವುದು ಇದರ ಉದ್ದೇಶವಾಗಿದೆ. ಸಂಚಾರ ಶಿಸ್ತನ್ನು ಹೆಚ್ಚಿಸುವುದು ಇದರ ಉದ್ದೇಶ ಎಂದು ಅಧಿಕಾರಿಗಳು ಹೇಳಿದ್ದಾರೆ.

ಪಾರ್ಕಿಂಗ್ ಸೊಲ್ಯೂಷನ್ಸ್ ಸಂಸ್ಥೆ ನಿರ್ವಹಿಸುತ್ತಿದೆ ಮತ್ತು ವಾರ್ಷಿಕ 40.5 ಲಕ್ಷ ರೂಪಾಯಿಯನ್ನು ಪಾಲಿಕೆಗೆ ಪಾವತಿಸುತ್ತಿದೆ. ಇನ್ನು, ಬೆಂಗಳೂರು ದಕ್ಷಿಣ ಭಾಗದ ಗಾಂಧಿ ಬಜಾರ್‌ನಲ್ಲಿ ಒಂದು ಬಹುಮಹಡಿ ಕಾರ್ ಪಾರ್ಕಿಂಗ್ ನಿರ್ಮಿಸಲಾಗಿದೆ. ಇದರ ನಿರ್ಮಾಣಕ್ಕೆ 22.31 ಕೋಟಿ ರೂಪಾಯಿ ತಗಲಿದೆ. ಇಲ್ಲಿ ನಾಲ್ಕು ಮಹಡಿಯ ಪಾರ್ಕಿಂಗ್ ಸ್ಥಳವಿದೆ.

ಇದನ್ನು ಕೂಡಾ, ಪ್ರಿನ್ಸ್ ರಾಯಲ್ ಪಾರ್ಕಿಂಗ್ ಸೊಲ್ಯೂಷನ್ಸ್ ಸಂಸ್ಥೆಗೆ ಗುತ್ತಿಗೆ ನೀಡಲಾಗಿದೆ. ಈ ಸಂಸ್ಥೆಯು ವಾರ್ಷಿಕ 15.5 ಲಕ್ಷ ರೂಪಾಯಿಗಳನ್ನು ಪಾಲಿಕೆಗೆ ಪಾವತಿಸುತ್ತಿದೆ.

## ಕಾರ್‌ನಲ್ಲಿ ಸಿಂಗಲ್ ಡ್ರೈವಿಂಗ್‌ಗೆ ದಂಡ! ಡಿಕೆಶಿ ಕೊಟ್ಟ ಸ್ಪಷ್ಟನೆ ಏನು ಗೊತ್ತಾ

• ಉದಯವಾಹಿನಿ, ಬೆಂಗಳೂರು

ಖಾಸಗಿ ಕಾರುಗಳಲ್ಲಿ ಏಕಾಂಗಿಯಾಗಿ ಪ್ರಯಾಣ ಮಾಡಿದರೆ ಇನ್ಮುಂದೆ ದಂಡ ವಿಧಿಸಲು ಅವಕಾಶ ಇದೆ ಎಂಬ ವಿಚಾರ ಸಾಕಷ್ಟು ಗೊಂದಲಕ್ಕೆ ಕಾರಣವಾಗಿತ್ತು. ಕೆಲವು ಉದ್ಯಮಿಗಳು ಕೊಟ್ಟ ಸಲಹೆಯನ್ನು ಸರ್ಕಾರ ಜಾರಿಗೆ ತರಲಿದೆ ಎಂಬ ಚರ್ಚೆಗಳು ಶುರುವಾಗಿದ್ದವು. ಪ್ರತಿಪಕ್ಷದ ನಾಯಕ ಆರ್ ಅಶೋಕ್ ಕೂಡಾ ಇದಕ್ಕೆ ಪ್ರತಿಕ್ರಿಯೆ ನೀಡಿ, ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದ್ದರು. ಆದರೆ ಇದಕ್ಕೆ ಸ್ವತಃ ಡಿಸಿಎಂ ಡಿಕೆ ಶಿವಕುಮಾರ್ ಸ್ಪಷ್ಟನೆ ನೀಡಿದ್ದಾರೆ.

**ಏನಿದು ವಿವಾದ?:** ಟ್ರಾಫಿಕ್ ಸಮಸ್ಯೆಯನ್ನು ನಿವಾರಣೆ ಮಾಡುವ ನಿಟ್ಟಿನಲ್ಲಿ ಕಾರಿನಲ್ಲಿ ಒಬ್ಬರೆ ಪ್ರಯಾಣ ಮಾಡಿದರೆ ದಂಡ ವಿಧಿಸಲು ಸರ್ಕಾರ ಮುಂದಾಗಿದೆ ಎಂಬ ನಿಟ್ಟಿನಲ್ಲಿ ಚರ್ಚೆಗಳು ನಡೆಯುತ್ತಿದ್ದವು. ನಗರದ ಅತ್ಯಂತ ಹೆಚ್ಚು ದಟ್ಟಣೆ ಇರುವ ಪ್ರದೇಶಗಳಲ್ಲಿ ಇದನ್ನು ಸರ್ಕಾರ ಜಾರಿಗೆ ತರಲಿದೆ ಎಂದು ಹೇಳಲಾಗಿತ್ತು. ಇದು ವಿವಾದಕ್ಕೆ ಕಾರಣವಾಗಿತ್ತು.

ಅದಕ್ಕಾಗಿ ಪೊಲೀಸರು ದಿನ ಬೆಳಗಾದ್ರೆ ರಸ್ತೆಯಲ್ಲಿ ಕೈ ಮುಗಿದು ಯಾವುದಕ್ಕಾದರೂ ಒಂದು ಫೈನ್ ಬರೀತೀನಿ ಅಂತಿದ್ದಾರೆ. ಹಿಮಾಚಲ



ಉದಯವಾಹಿನಿ ಚಿತ್ರ

### ಸರ್ಕಾರವನ್ನು ಜಾಡಿಸಿದ್ದ ಅಶೋಕ್

**ಕಾರಿನಲ್ಲಿ ಒಬ್ಬರೇ ಓಡಾಡಿದ್ರೆ ದಂಡ ವಿಚಾರವಾಗಿ ಪ್ರತಿಕ್ರಿಯೆ ನೀಡಿದ್ದ ವಿಪಕ್ಷದ ನಾಯಕ ಆರ್ ಅಶೋಕ್, ಬಸ್ಸಿನಲ್ಲಿ 50 ಮಂದಿಯ ಬದಲಾಗಿ 20 ಪ್ರಯಾಣಿಕರು ಪ್ರಯಾಣ ಮಾಡಿದರೆ ಯಾರಿಗೆ ದಂಡ ಹಾಕ್ತೀರಾ ಮುಖ್ಯಮಂತ್ರಿಗಳು, ಸಚಿವರು ಒಬ್ಬೊಬ್ಬರೇ ಓಡಾಡ್ತರಲ್ಲ ಅವರಿಗೆ ದಂಡ ಹಾಕ್ತೀರಾ.. ಇದೊಂದು ತುಘಲಕ್ ಆಡಳಿತ. ಇದು ಕೋರ್ಟ್‌ಗೆ ಹೋದ್ರೆ ಛೀಮಾರಿ ಹಾಕಿಸಿಕೊಳ್ತೀರಾ ಎಂದು ಎಚ್ಚರಿಕೆ ನೀಡಿದ್ದರು.**

> ಏಕಾಂಗಿಯಾಗಿ ಕಾರಿನಲ್ಲಿ ಪ್ರಯಾಣ ಮಾಡಿದರೆ ದಂಡ ವಿಧಿಸುವ ವಿಚಾರವಾಗಿ ಪ್ರತಿಕ್ರಿಯೆ ನೀಡಿದ ಡಿಸಿಎಂ ಡಿಕೆ ಶಿವಕುಮಾರ್ ಅವೆಲ್ಲಾ ಸುಳ್ಳು, ಯಾವ ಟ್ಯಾಕ್ಸ್ ಇಲ್ಲ, ಯಾವ ಸಿಂಗಲ್ ಇಲ್ಲ. ಕೆಲ ಉದ್ಯಮಿಗಳು ಸಲಹೆ ಕೊಟ್ಟಿದ್ದಾರೆ ಅಷ್ಟೇ. ಅದು ನನ್ನ ಮಟ್ಟಕ್ಕೇನು ಬಂದಿಲ್ಲ, ಪರಿಶೀಲನೆ ಮಾಡ್ತೇವೆ'' ಎಂದು ಸ್ಪಷ್ಟಪಡಿಸಿದ್ದಾರೆ.

ಪ್ರದೇಶದ ಪಾಪರ್ ಆಗಿದೆ. ಇಲ್ಲಿನ ಸರ್ಕಾರವೂ ದಿವಾಳಿ ಯಾಗಿ, ಕುಲಗೆಟ್ಟು ಹೋಗಿದೆ ಎಂದು ಕಿಡಿಕಾರಿದ್ದರು.

**ಕಾರುಗಳ ಸಂಖ್ಯೆ ಏರಿಕೆ:** ಬೆಂಗಳೂರಿನಲ್ಲಿ ಖಾಸಗಿ ಕಾರುಗಳು ಸಂಖ್ಯೆ ಏರಿಕೆಯಾಗಿದೆ.

ಹೆಚ್ಚಿನ ಸಂಖ್ಯೆಯಲ್ಲಿ ಜನರು ವಾಹನ ಖರೀದಿ ಮಾಡುತ್ತಿದ್ದಾರೆ. ದೆಹಲಿ ಈ ಹಿಂದೆ ನಂಬರ್ 1 ಇತ್ತು. ಆದರೆ ಇದೀಗ ಬೆಂಗಳೂರು ಕಾರುಗಳ ಖರೀದಿಯಲ್ಲಿ ನಂಬರ್ ಒನ್ ಆಗಿದೆ. ವಾಹನಗಳ ಸಂಖ್ಯೆಯಲ್ಲಿ ವಿಪರೀತ ಏರಿಕೆ ಆಗುತ್ತಿರುವುದು ಮಾಲಿನ್ಯ ಹೆಚ್ಚಳಕ್ಕೆ ಕಾರಣ ಆಗಬಹುದು ಎಂಬ ಆತಂಕವನ್ನು ಸೃಷ್ಟಿಸಿದೆ.

## ಅಕ್ರಮ ಕಟ್ಟಡಗಳಿಗೆ ವಿದ್ಯುತ್, ನೀರು ಸಕ್ರಮ: ಸಚಿವ ಸಂಪುಟ ತೀರ್ಮಾನ

• ಉದಯವಾಹಿನಿ, ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ, ರಾಜ್ಯದ ಇತರೆ ಕಡೆಗಳಲ್ಲಿ ನಿರ್ಮಿಸಿರುವ ಕಟ್ಟಡಗಳಿಗೆ ವಿದ್ಯುತ್, ನೀರಿನ ಸಂಪರ್ಕ ಕಲ್ಪಿಸಲು ಇರುವ ಸಮಸ್ಯೆಗಳ ಕುರಿತಂತೆ ಸಿಎಂ ನೇತೃತ್ವದಲ್ಲಿ ಸಚಿವ ಸಂಪುಟದ ಮಹತ್ವದ ಸಭೆ ನಡೆಸಲಾಗಿದೆ. ನಿಯಮ ಉಲ್ಲಂಘಿಸಿ ನಿರ್ಮಾಣಗೊಂಡಿರುವ ಕಟ್ಟಡಗಳಿಗೆ ಒಂದು ಬಾರಿಗೆ ಅನ್ವಯವಾಗುವಂತೆ ಅನುಮತಿ ನೀಡುವ ಸಾಧ್ಯತೆ ಬಗ್ಗೆ ಪರಿಶೀಲನೆ ಮಾಡಲಾಗುತ್ತಿದೆ.

17 ಡಿ. 2024ರ ಸರ್ವೋಚ್ಚ ನ್ಯಾಯಾಲಯದ ಆದೇಶದ ನಂತರ ಗ್ರೇಟರ್ ಬೆಂಗಳೂರು ಸೇರಿದಂತೆ ರಾಜ್ಯ ವ್ಯಾಪ್ತಿಯಲ್ಲಿ ಸಿಸಿ , ಓಸಿ ಇಲ್ಲದೇ ನಿರ್ಮಿಸಿರುವ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ನೀಡಲು ಸಮಸ್ಯೆ ಆಗುತ್ತಿದೆ. ಸುಪ್ರೀಂ ಕೋರ್ಟ್‌ನ ಆದೇಶ ಭಾರತದ ಎಲ್ಲಾ ರಾಜ್ಯಗಳಿಗೂ ಅನ್ವಯವಾಗುತ್ತಿದ್ದು, ಎಲ್ಲಾ ರಾಜ್ಯಗಳೂ ಆದೇಶವನ್ನು ಅನುಷ್ಠಾನಗೊಳಿಸುತ್ತಿವೆಯೇ ಎಂಬುದನ್ನು ಪರಿಶೀಲಿಸಿ, ನಂತರ ಸೂಕ್ತ ನಿರ್ಣಯ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ನಿಯಮ ಉಲ್ಲಂಘಿಸಿ ನಿರ್ಮಾಣಗೊಂಡಿರುವ ಕಟ್ಟಡಗಳಿಗೆ ಒಂದು ಬಾರಿಗೆ ಅನ್ವಯವಾಗುವಂತೆ ಅನುಮತಿ ನೀಡುವ ಸಾಧ್ಯತೆ ಬಗ್ಗೆ ಪರಿಶೀಲನೆ ಮಾಡಲಾಗುವುದು. ನಿರ್ಮಾಣಗೊಂಡಿರುವ ಕಟ್ಟಡಗಳನ್ನು ನೆಲಸಮಗೊಳಿಸಲು ಸಾಧ್ಯವಿಲ್ಲ. ಒಟ್ಟಿನಲ್ಲಿ ಸರ್ಕಾರದ ನಿರ್ಧಾರದಿಂದ ಜನರಿಗೆ ಅನುಕೂಲವಾಗಬೇಕು ಎಂದರು.

ಸುಪ್ರೀಂ ಕೋರ್ಟ್ ಆದೇಶ ಅನುಷ್ಠಾನಗೊಳ್ಳುವ ಮುಂಚೆ ಸಲ್ಲಿಕೆಯಾಗಿರುವ ಅಂದರೆ ಮಾರ್ಚ್ 2025ರವರೆಗಿನ ಅರ್ಜಿಗಳನ್ನು ಪರಿಗಣಿಸಿ ಒಸಿ ಮತ್ತು ಸಿಸಿಯಿಂದ ವಿನಾಯ್ತಿಗೊಳಿಸಿ ವಿದ್ಯುತ್ ಮತ್ತು ನೀರಿನ ಸಂಪರ್ಕ ನೀಡುವ ಬಗ್ಗೆ ಕಾನೂನಿನ ಸಾಧ್ಯತೆಗಳ ಬಗ್ಗೆ ಕೂಲಂಕುಷವಾಗಿ ಚರ್ಚಿಸಲು ಅಕ್ಟೋಬರ್ 8 ರಂದು ಸರ್ಕಾರದ ಮುಖ್ಯಕಾರ್ಯದರ್ಶಿಗಳು, ಸಂಬಂಧಪಟ್ಟ ಇಲಾಖಾ ಸಚಿವರು, ಸರ್ಕಾರದ ಅಡ್ವೋಕೇಟ್ ಜನರಲ್, ಮುಖ್ಯಮಂತ್ರಿಗಳ ಕಾನೂನು ಸಲಹೆಗಾರರು ಹಾಗೂ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.



## ಮೂವರಿಗೂ ತನಿಖಾಧಿಕಾರಿಗಳು ಕ್ಲೀನ್ ಚಿಟ್

• ಉದಯವಾಹಿನಿ, ಬೆಂಗಳೂರು

ಕೊಡಗು ಜಿಲ್ಲೆಯ ಬಿಜೆಪಿ ಕಾರ್ಯಕರ್ತ ವಿನಯ್ ಸೋಮಯ್ಯ ಆತ್ಮಹತ್ಯೆ ಪ್ರಕರಣದ ತನಿಖೆ ನಡೆಸಿದ್ದ ಹೆಣ್ಣೂರು ಠಾಣೆಯ ಪೊಲೀಸರು, ನ್ಯಾಯಾಲಯಕ್ಕೆ ಬಿ ವರದಿ ಸಲ್ಲಿಸಿದ್ದಾರೆ.

ಕೊಡಗು ಜಿಲ್ಲೆಯ ಕಾಂಗ್ರೆಸ್ ಶಾಸಕರಾದ ಎ.ಎಸ್.ಪೊನ್ನಣ್ಣ (ವಿರಾಜಪೇಟೆ ಕ್ಷೇತ್ರ), ಮಂಥರ್‌ಗೌಡ (ಮಡಿಕೇರಿ ಕ್ಷೇತ್ರ) ಹಾಗೂ ರಾಜೀವ್ ಗಾಂಧಿ ಪಂಚಾಯತ್ ರಾಜ್ ಸಂಘಟನೆಯ ಕೊಡಗು ಜಿಲ್ಲಾ ಅಧ್ಯಕ್ಷ ತೆನ್ನೀರಾ ಮೈನಾ ಅವರು ವಿನಯ್ ಅವರಿಗೆ ಕಿರುಕುಳ ನೀಡಿ, ಬೆದರಿಕೆ ಹಾಕಿದ್ದರು ಎಂಬುದಕ್ಕೆ ಯಾವುದೇ ಸಾಕ್ಷ್ಯಾಧಾರಗಳು ಸಿಕ್ಕಿಲ್ಲ ಎಂಬುದಾಗಿ ನ್ಯಾಯಾಲಯಕ್ಕೆ ಸಲ್ಲಿಸಿರುವ ವರದಿಯಲ್ಲಿ ಉಲ್ಲೇಖಿಸಲಾಗಿದೆ. ಮೂವರಿಗೂ ತನಿಖಾಧಿಕಾರಿಗಳು ಕ್ಲೀನ್ ಚಿಟ್ ನೀಡಿದ್ದಾರೆ.

ಕಿರುಕುಳ ಹಾಗೂ ಬೆದರಿಕೆಯಿಂದ ವಿನಯ್ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂಬುದಾಗಿ ವಿನಯ್ ಅವರ ಸಹೋದರ ಕೆ.ಎಸ್.ಜೀವನ್ ದೂರು ನೀಡಿದ್ದರು. ಆರೋಪಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಲಾಗಿದೆ. ಯಾವುದೇ ಪುರಾವೆಗಳು ಸಿಕ್ಕಿಲ್ಲ. ದೂರಿನಲ್ಲಿ



ಉದಯವಾಹಿನಿ ಚಿತ್ರ

ಉಲ್ಲೇಖಿಸಿದ್ದ ವ್ಯಕ್ತಿಗಳ ಮೊಬೈಲ್ ಕರೆಗಳ ವಿವರ ಪಡೆಯಲಾಗಿತ್ತು. ತಜ್ಞರ ಮೂಲಕವೂ ಕರೆಗಳ ವಿವರವನ್ನು ವಿಶ್ಲೇಷಣೆಗೆ ಒಳಪಡಿಸಲಾಗಿತ್ತು. ಆತ್ಮಹತ್ಯೆ ಮಾಡಿಕೊಂಡಿದ್ದ ವ್ಯಕ್ತಿಯ ಮೊಬೈಲ್ ಸಂಖ್ಯೆಗೆ ಯಾವುದೇ ಬೆದರಿಕೆ ಕರೆಗಳು ಹೋಗಿಲ್ಲ ಎಂಬುದು ತನಿಖೆಯಿಂದ ಗೊತ್ತಾಗಿದೆ ಎಂದು ಮೂಲಗಳು ತಿಳಿಸಿವೆ.

## ಪ್ಲಾಸ್ಟಿಕ್ ತ್ಯಾಜ್ಯ ಕುರಿತು ಬೆಂಗಳೂರು ಮೂಲದ ಇಂಜಿನಿಯರ್ ಕಿರುಚಿತ್ರ

• ಉದಯವಾಹಿನಿ, ಬೆಂಗಳೂರು

ಪ್ಲಾಸ್ಟಿಕ್ ತ್ಯಾಜ್ಯದ ವಿವೇಚನಾರಹಿತ ಬಳಕೆ ವಿಲೇವಾರಿಯ ಕುರಿತು ಬೆಂಗಳೂರು ಮೂಲದ ಇಂಜಿನಿಯರ್ ಮಾಡಿದ ಕಿರುಚಿತ್ರವು ಪ್ರಶಸ್ತಿಗಳನ್ನು ಗೆಲ್ಲುವುದರ ಜೊತೆಗೆ ಚಲನಚಿತ್ರೋತ್ಸವಗಳಲ್ಲಿಯೂ ಅಲೆಯನ್ನು ಸೃಷ್ಟಿಸುತ್ತಿದೆ. ಈ ಚಿತ್ರ ಶೀಘ್ರದಲ್ಲೇ ಬಾರ್ಸಿಲೋನಾ, ವ್ಯಾಂಕೋವರ್‌ನಲ್ಲಿ 2 ಅಂತಾರಾಷ್ಟ್ರೀಯ ಚಲನಚಿತ್ರೋತ್ಸವಗಳಲ್ಲಿ ಪ್ರದರ್ಶನಗೊಳ್ಳಲಿದೆ.

ಮೈ ರೆಸ್ಪಾನ್ಸಿಬಿಲಿಟಿ ಎಂಬ ಶೀರ್ಷಿಕೆಯ ಈ ಚಿತ್ರವನ್ನು ನಗರದಲ್ಲಿ ವಾಸ್ತುಶಿಲ್ಪ ಸಂಸ್ಥೆಯನ್ನು ನಡೆಸುತ್ತಿರುವ ಸ್ಟ್ರಕ್ಚರಲ್ ಎಂಜಿನಿಯರ್ ದೇವೇಗೌಡ ನಿರ್ದೇಶಿಸಿದ್ದಾರೆ.

ಪ್ಲಾಸ್ಟಿಕ್ ಬಾಟಲಿಗಳು, ಕವರ್‌ಗಳು ಮತ್ತು ಜನರು ಎಸೆಯುವ ಇತರ ತ್ಯಾಜ್ಯಗಳನ್ನು ಸಂಗ್ರಹಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸುವ ಚಿಂದಿ ಆಯುವವರಿಂದ ತಾನು ಸ್ಫೂರ್ತಿ ಪಡೆದಿದ್ದೇನೆ ಎನ್ನುತ್ತಾರೆ ಚೊಚ್ಚಲ ನಿರ್ದೇಶಕ ದೇವೇಗೌಡ.

ವಿಶ್ವ ಪರಿಸರ ದಿನಾಚರಣೆಗಾಗಿ ಸ್ಪರ್ಧೆಗಳು ಮತ್ತು ಚರ್ಚೆಗಳು ನಡೆಯುತ್ತಿರುವ ಸರ್ಕಾರಿ ಶಾಲೆಯಲ್ಲಿ ಈ ಚಿತ್ರವು ಪ್ರದರ್ಶನಗೊಳ್ಳುತ್ತದೆ. ಶಾಲಾ ಮಕ್ಕಳು ಎಸೆಯುವ ಪ್ಲಾಸ್ಟಿಕ್ ತ್ಯಾಜ್ಯವನ್ನು ಸಂಗ್ರಹಿಸುವ ಚಿಂದಿ ಆಯುವ ಮಗು ಶಾಲೆಗೆ ನಡೆದು ಬರುತ್ತದೆ. ವಿದ್ಯಾರ್ಥಿಗಳು ಪರಿಸರದ ಬಗ್ಗೆ ಮಾತನಾಡುವುದಕ್ಕೆ ಮತ್ತು ವಾಸ್ತವದಲ್ಲಿ ಏನಾಗುತ್ತದೆ ಎಂಬುದಕ್ಕೆ ಇಲ್ಲಿ ಬಾಲಕನ ಹೋಲಿಕೆ ನಿಖರವಾಗಿ ವಿರುದ್ಧವಾಗಿದೆ ಎನ್ನುತ್ತಾರೆ ನಿರ್ದೇಶಕರು.

ಚಿಂದಿ ಆಯುವವರು ಇಲ್ಲದಿದ್ದರೆ, ನಮ್ಮ ಜಲಮೂಲಗಳು ಮತ್ತು ಮಣ್ಣು ದುರಸ್ತಿ ಮಾಡಲಾಗದಷ್ಟು ಕಲುಷಿತವಾಗುತ್ತಿತ್ತು. ಚಿಂದಿ ಆಯುವವರು ತ್ಯಾಜ್ಯವನ್ನು ಸಂಗ್ರಹಿಸಿದರೂ, ಅದರಲ್ಲಿ ಟನ್‌ಗಳಷ್ಟು ತ್ಯಾಜ್ಯ ಯಾರಿಗೂ ತಲುಪಲು ಸಾಧ್ಯವಿಲ್ಲ. ಅದು ಪರಿಸರವನ್ನು ಕಲುಷಿತಗೊಳಿಸುತ್ತಲೇ ಇರುತ್ತದೆ. ನನ್ನ ಸಿನಿಮಾ ಜಾಗೃತಿ ಮೂಡಿಸಲು, ಪ್ಲಾಸ್ಟಿಕ್ ಮತ್ತು ಇತರ ತ್ಯಾಜ್ಯಗಳನ್ನು ಎಚ್ಚರಿಕೆಯಿಂದ ವಿಲೇವಾರಿ ಮಾಡುವುದು ನಮ್ಮ ಜವಾಬ್ದಾರಿ ಎಂಬ ಸಂದೇಶ ನೀಡುತ್ತದೆ ಎಂದರು. ಚಿತ್ರವನ್ನು ಒಂದು ದಿನದಲ್ಲಿ ಚಿತ್ರೀಕರಿಸಲಾಗಿದೆ. ಅದಕ್ಕೆ



ಉದಯವಾಹಿನಿ ಚಿತ್ರ

> ದೇವೇಗೌಡರಿಗೆ ತೆಲಂಗಾಣದ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ 'ಅತ್ಯುತ್ತಮ ನಿರ್ದೇಶಕ' ಪ್ರಶಸ್ತಿಯನ್ನು ನೀಡಲಾಯಿತು. ಅವರು ಬಂಗಾಳ ಕೊಲ್ಲಿಯಲ್ಲಿ ನಡೆದ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ 'ಅತ್ಯುತ್ತಮ ಪರಿಕಲ್ಪನೆ' ವಿಭಾಗದಲ್ಲಿ ಪ್ರಶಸ್ತಿಯನ್ನು ಗೆದ್ದರು. ವ್ಯಾಂಕೋವರ್‌ನಲ್ಲಿ ನಡೆಯಲಿರುವ ಬ್ರಿಟಿಷ್ ಕೊಲಂಬಿಯಾ ಪರಿಸರ ಚಲನಚಿತ್ರೋತ್ಸವ ಮತ್ತು ಬಾರ್ಸಿಲೋನಾದಲ್ಲಿ ನಡೆಯಲಿರುವ ಅಂತಾರಾಷ್ಟ್ರೀಯ ಪರಿಸರ ಚಲನಚಿತ್ರೋತ್ಸವದಲ್ಲಿ ಪ್ರದರ್ಶನಕ್ಕೆ ಈ ಚಿತ್ರ ಆಯ್ಕೆಯಾಗಿದೆ ಎಂದು ಅವರು ಹೇಳಿದರು.

1.2 ಲಕ್ಷ ರೂಪಾಯಿಗೂ ಹೆಚ್ಚು ವೆಚ್ಚವಾಗಿದೆ. ಸಿನಿಮಾ ಕ್ಷೇತ್ರದಲ್ಲಿ ಕೆಲಸ ಮಾಡುವ ತಮ್ಮ ಸ್ನೇಹಿತ ಮನೋಹರ್ ಅವರಿಂದ ಚಲನಚಿತ್ರ ನಿರ್ಮಾಣವನ್ನು ಕಲಿತರು.

ಮೈಸೂರು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು 6 ನಿಮಿಷಗಳ ಚಲನಚಿತ್ರವನ್ನು ಒಡೆಯರ್ ವೀಕ್ಷಿಸಿದರು, ತಕ್ಷಣ ಒಪ್ಪಿಕೊಂಡರು ಮತ್ತು ಸಂದೇಶವನ್ನು ನೀಡಿದ್ದಾರೆ ಎಂದು ಅವರು ಹೇಳಿದರು. ಚಿತ್ರದ ಕೊನೆಯಲ್ಲಿ ಕಾಣಿಸಿಕೊಳ್ಳುವ ಒಡೆಯರ್, ಪ್ಲಾಸ್ಟಿಕ್ ತ್ಯಾಜ್ಯ ವಿಲೇವಾರಿ ಮಾಡುವಾಗ ಜನರು ಜಾಗರೂಕರಾಗಿರಬೇಕು ಎಂದು ಒತ್ತಾಯಿಸುತ್ತಾರೆ.

## ಜಾತಿವಾರು ಸಮೀಕ್ಷೆ ಬಹಿಷ್ಕಾರ ಕೋರ್ಟ್ ಆದೇಶಕ್ಕೆ ವಿರುದ್ಧ: ಹಿಂದುಳಿದ ವರ್ಗಗಳ ಆಯೋಗ

• ಉದಯವಾಹಿನಿ, ಬೆಂಗಳೂರು

ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ಭಾಗವಹಿಸಬಾರದು ಎಂದು ಜನಪ್ರತಿನಿಧಿಗಳು ಕರೆ ನೀಡುತ್ತಿರುವುದು ಹೈಕೋರ್ಟ್ ಆದೇಶದ ಆಶಯಕ್ಕೆ ವಿರುದ್ಧ ಎಂದು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಮಧು ಸೂದನ್ ಆರ್.ನಾಯ್ಕ್ ಅವರು ಹೇಳಿದ್ದಾರೆ.

ಈ ಸಂಬಂಧ ಪ್ರಕಟಣೆ ಹೊರಡಿಸಿರುವ ಅವರು, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ರಾಜ್ಯದ ಕುಟುಂಬಗಳ ಹಾಗೂ ಜನರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಸೆ.22ರಿಂದ ಪ್ರಾರಂಭಿಸಿದ್ದು, ಪ್ರಗತಿಯಲ್ಲಿದೆ. ರಾಜ್ಯದ ಸಂಪೂರ್ಣ ಜನಸಂಖ್ಯೆಯನ್ನು ಸಮೀಕ್ಷೆಗೆ ಒಳಪಡಿಸಲು ಉದ್ದೇಶಿಸಲಾಗಿದ್ದರೂ, ಸಮೀಕ್ಷೆಯಲ್ಲಿ ಭಾಗವಹಿಸುವುದು ಜನರ ಸ್ವ-ಇಚ್ಛೆಗೆ ಬಿಡಲಾಗಿದೆ. ಮಾಹಿತಿಯನ್ನು ನೀಡಬೇಕು ಎಂದು ಒತ್ತಾಯ ಮಾಡುತ್ತಿಲ್ಲ. ಆದರೆ, ಸೆ.28ರಂದು ಕೆಲವು ಜನಪ್ರತಿನಿಧಿಗಳು, ಕೋರ್ಟ್ ಆದೇಶವನ್ನು ಉಲ್ಲೇಖಿಸಿ, ತಾವು ಈ ಸಮೀಕ್ಷೆಯಲ್ಲಿ ಭಾಗವಹಿಸುವುದಿಲ್ಲ,



ಉದಯವಾಹಿನಿ ಚಿತ್ರ

ಸಾರ್ವಜನಿಕರೂ ಭಾಗವಹಿಸ ಬಾರದೆಂದು ಹೇಳಿಕೆಗಳನ್ನು ನೀಡಿರುವುದು ಪತ್ರಿಕೆಗಳು ಹಾಗೂ ಇತರೆ ಮಾಧ್ಯಮಗಳಲ್ಲಿ ವರದಿಯಾಗಿದೆ. ಜನಪ್ರತಿನಿಧಿಗಳು ಹೇಳಿಕೆಗಳ ಮೂಲಕ ಸಾರ್ವಜನಿಕರು ಸಮೀಕ್ಷೆಯಲ್ಲಿ ಭಾಗವಹಿಸದಂತೆ ಪ್ರೇರೇಪಿಸುತ್ತಿದ್ದಾರೆ. ಆದರೆ, ವಾಸ್ತವವಾಗಿ ಈ ರೀತಿಯ ಹೇಳಿಕೆಗಳು ಕೋರ್ಟ್ ಆದೇಶದ ಆಶಯಗಳಿಗೆ ವಿರುದ್ಧವಾಗಿವೆ. ರಾಜ್ಯದ ಎಲ್ಲಾ

> ಆದರೂ ಸಾರ್ವಜನಿಕ ಹೇಳಿಕೆಗಳು ಸಮೀಕ್ಷೆಯಲ್ಲಿ ಜನರು ಭಾಗವಹಿಸದಂತೆ ಪ್ರಚೋದಿಸುತ್ತಿದ್ದು, ಸಾರ್ವಜನಿಕ ಹಿತಕ್ಕಾಗಿ ಕೈಗೊಳ್ಳಲಾದ ಸಮೀಕ್ಷೆಯ ಉದ್ದೇಶಕ್ಕೆ ವಿರುದ್ಧವಾಗಿವೆ. ನಾಗರಿಕರು ಯಾವುದೇ ಬಲವಂತವಿಲ್ಲದೆ ಸ್ವ-ಇಚ್ಛೆಯಿಂದ ಸಮೀಕ್ಷೆಯಲ್ಲಿ ಭಾಗವಹಿಸುತ್ತಿರುವ ಸಂದರ್ಭದಲ್ಲಿ, ಅವರ ಭಾಗವಹಿಸುವಿಕೆಯನ್ನು ತಡೆಯುವ ಇಂತಹ ಹೇಳಿಕೆಗಳು ಸಾರ್ವಜನಿಕ ಹಿತಾಸಕ್ತಿಗೆ ವಿರುದ್ಧವಾಗಿವೆ. ಹೀಗಾಗಿ ಈ ರೀತಿಯ ಹೇಳಿಕೆಗಳನ್ನು ನೀಡಬಾರದು ಎಂದು ಹೇಳಿದ್ದಾರೆ.

ಕುಟುಂಬಗಳ ಸಾಮಾಜಿಕ, ಶೈಕ್ಷಣಿಕ ಸ್ಥಿತಿಗತಿಗಳ ಕುರಿತು ಮಾಹಿತಿಯನ್ನು ಸಂಗ್ರಹಿಸುವ ಉದ್ದೇಶದಿಂದ ಮತ್ತು ಕಲ್ಯಾಣ ಹಾಗೂ ಏಳಿಗೆಗಾಗಿ ಯೋಜನೆಗಳನ್ನು ರೂಪಿಸಲು ಸಮೀಕ್ಷೆಯನ್ನು ಕೈಗೊಳ್ಳಲಾಗುತ್ತಿದೆ.

# ಜೀವಾವಧಿ ಶಿಕ್ಷೆ ಪ್ರಶ್ನಿಸಿ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ ಪ್ರಜ್ವಲ್ ರೇವಣ್ಣ

### ಮೇಲ್ಮನವಿ ಸಲ್ಲಿಕೆ ಮಾಡಿ ಶಿಕ್ಷೆ ರದ್ದು ಮಾಡುವಂತೆ ಪ್ರಜ್ವಲ್ ರೇವಣ್ಣ ಕೋರಿದ್ದಾರೆ

• ಉದಯವಾಹಿನಿ, ಬೆಂಗಳೂರು

ಹಾಸನದ ಜೆಡಿಎಸ್ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧದ ಅತ್ಯಾಚಾರ ಪ್ರಕರಣದಲ್ಲಿ ಸ್ಪೆಷಲ್ ಕೋರ್ಟ್ ಆಗಸ್ಟ್ 2ರಂದು ದೋಷಿ ಎಂದು ತೀರ್ಪು ಪ್ರಕಟ ಮಾಡಿತ್ತು. ಪ್ರಜ್ವಲ್ ರೇವಣ್ಣಗೆ ಜೀವಾವಧಿ ಶಿಕ್ಷೆ ಮತ್ತು 11.50 ಲಕ್ಷ ದಂಡ ವಿಧಿಸಿತ್ತು. ಇದಾದ ನಂತರ ಜೈಲುಪಾಲಾಗಿರುವ ಪ್ರಜ್ವಲ್ ರೇವಣ್ಣ ಇದೀಗ ನ್ಯಾಯಾಲಯದ ತೀರ್ಪು ಪ್ರಶ್ನಿಸಿ ಕರ್ನಾಟಕ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದಾರೆ.

ಪ್ರಕರಣ ರಾಜಕೀಯ ದುರುದ್ದೇಶಪೂರಿತ ಎಂದು ಪ್ರಜ್ವಲ್ ರೇವಣ್ಣ ಆರೋಪಿಸಿದ್ದು, ಮೇಲ್ಮನವಿ ಸಲ್ಲಿಕೆ ಮಾಡಿ ಶಿಕ್ಷೆ ರದ್ದು ಮಾಡುವಂತೆ ಕೋರಿದ್ದಾರೆ. ರಾಜಕೀಯ ದುರುದ್ದೇಶದಿಂದ ಮಹಿಳೆಯನ್ನು ಅಸ್ತ್ರವಾಗಿ ಬಳಸಿ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಪ್ರಜ್ವಲ್ ರೇವಣ್ಣ ಆರೋಪಿಸಿದ್ದಾರೆ. ಇದು 2024ರ ಲೋಕಸಭೆ ಚುನಾವಣೆ ವೈರಲ್ ಆದ ಅಶ್ಲೀಲ ವಿಡಿಯೋಗಳಿಂದ ಉಂಟಾದ ನಾಲ್ಕು ಪ್ರಕರಣಗಳಲ್ಲಿ ಮೊದಲನೆಯದ್ದಾಗಿದೆ. ಇನ್ನೂ ಮೂರು ಪ್ರಕರಣಗಳು ಬಾಕಿ ಇವೆ.



ಉದಯವಾಹಿನಿ ಚಿತ್ರ

> ಪ್ರಜ್ವಲ್ ರೇವಣ್ಣ ಹೈಕೋರ್ಟ್‌ಗೆ ಸಲ್ಲಿಸಿದ ಮೇಲ್ಮನವಿಯಲ್ಲಿ, ರಾಜಕೀಯ ಷಡ್ಯಂತ್ರದಿಂದ ಪ್ರಕರಣವನ್ನು ರೂಪಿಸಲಾಗಿದೆ. 2023ರಲ್ಲಿ ಹಾಸನದ ಫಾರ್ಮ್ ಹೌಸ್‌ಗೆ ಗೃಹಪ್ರವೇಶ ನಡೆದಾಗ ಮಹಿಳೆಯು ಪಾಲ್ಗೊಂಡಿರುವುದು ದಾಖಲೆಯಲ್ಲಿದೆ. ಅತ್ಯಾಚಾರವಾಗಿದ್ದರೆ ಅವರು ಹೇಗೆ ಗೃಹಪ್ರವೇಶಕ್ಕೆ ಬರುತ್ತಿದ್ದರು ಎಂದು ಪ್ರಶ್ನಿಸಲಾಗಿದೆ. ಮಹಿಳೆಯು ಘಟನೆಯಾಗಿ 3 ವರ್ಷಗಳ ನಂತರ ದೂರು ನೀಡಿರುವುದು ಸಂದೇಹಾಸ್ಪದ ಎಂದು ಹೇಳಿದ್ದಾರೆ. ಸ್ಟೋರ್ ರೂಮ್‌ನಲ್ಲಿ ಸಿಕ್ಕಿದ ಬಟ್ಟೆ ಮತ್ತು ಕೂದಲಿದ್ದ ಬ್ಯಾಗ್ ಅನ್ನು ಮಹಿಳೆ ಗುರುತಿಸಿಲ್ಲ ಎಂದು ಆರೋಪಿಸಲಾಗಿದೆ. ಬ್ಯಾಟರಿ ಮತ್ತು ಪೇಂಟ್ ಇರುವ ರೂಮ್‌ನಲ್ಲಿ ಮಹಿಳೆಯ ಉಡುಪು ಸಿಕ್ಕಿತೆಂದು ಹೇಳಿದ್ದಾರೆ, ಆದರೆ ಲಾಕ್ ಆಗಿದ್ದ ರೂಮ್‌ನಲ್ಲಿ ವೀರ್ಯಾಣುವಿರುವ ಬಟ್ಟೆ ಸಿಗುವುದು ಹೇಗೆ ಎಂದು ಪ್ರಶ್ನೆ ಮಂಡಿಸಲಾಗಿದೆ. ಕೂದಲನ್ನು ಸುತ್ತಿ ಬ್ಯಾಗ್‌ನಲ್ಲಿ ಇಟ್ಟಿರುವ ರಹಸ್ಯ ತಿಳಿಯುತ್ತಿಲ್ಲ ಎಂದು ಹೇಳಿದ್ದಾರೆ.

ಪ್ರಕರಣದ ಹಿನ್ನೆಲೆಯಲ್ಲಿ, 2024ರ ಲೋಕಸಭೆ ಚುನಾವಣೆ ಸಂದರ್ಭದಲ್ಲಿ ಹಾಸನದಲ್ಲಿ ವೈರಲ್ ಆದ ಅಶ್ಲೀಲ ವಿಡಿಯೋಗಳು ಉಂಟಾದ ನಾಲ್ಕು ಪ್ರಕರಣಗಳಲ್ಲಿ ಇದು ಮೊದಲನೆಯದ್ದಾಗಿದೆ. ಫಾರ್ಮ್ ಹೌಸ್‌ನಲ್ಲಿ 47 ವರ್ಷದ ಮಹಿಳೆಯನ್ನು ಪ್ರಜ್ವಲ್ ಬಲವಂತವಾಗಿ ಅತ್ಯಾಚಾರ ಮಾಡಿದ ಪ್ರಕರಣದಲ್ಲಿ ಸ್ಪೆಷಲ್ ಕೋರ್ಟ್ ನ್ಯಾಯಾಧೀಶರಾದ ಸಂತೋಷ್ ಗಜಾನನ್ ಭಟ್ ಅವರು, ಪ್ರಜ್ವಲ್ ಅವರನ್ನು ದೋಷಿಯೆಂದು ಘೋಷಿಸಿ, ಜೀವಿತಾವಧಿ ಜೈಲು ಮತ್ತು 11.50 ಲಕ್ಷ ದಂಡ ವಿಧಿಸಿದ್ದರು.

ಈ ಪ್ರಕರಣದಲ್ಲಿ ಡಿಎನ್‌ಎ ಪರೀಕ್ಷೆಯಲ್ಲಿ ಪ್ರಜ್ವಲ್ ಕೂದಲು ಶರೀರ ದ್ರವಗಳು ಸಂತ್ರಸ್ತೆಯ ಉಡುಪಿನೊಂದಿಗೆ ಹೊಂದಿಕೊಂಡಿವೆ ಎಂದು ವರದಿ ಬಂದಿತ್ತು. ಆದರೆ, ಮೇಲ್ಮನವಿಯಲ್ಲಿ ಇದನ್ನು ರಾಜಕೀಯ ಷಡ್ಯಂತ್ರ ಎಂದು ಹೇಳಲಾಗಿದೆ. ಹೈಕೋರ್ಟ್ ಈ ಮೇಲ್ಮನವಿಯನ್ನು ಚುರುಕುಗೊಳಿಸಿ ವಿಚಾರಣೆ ನಡೆಸಲಿದೆ ಎಂದು ನಿರೀಕ್ಷೆಯಿದೆ.

> ಮೇಲ್ಮನವಿಯಲ್ಲಿ, ಮಹಿಳೆಯ ಸಿಆರ್‌ಪಿಸಿ 164 ಹೇಳಿಕೆಯನ್ನು ಕೋರ್ಟ್‌ಗೆ ಹಾಜರುಪಡಿಸಿಲ್ಲ ಎಂದು ಆರೋಪಿಸಲಾಗಿದೆ. ಆರೋಪಿತ ವಿಡಿಯೋ ಇದೆ ಎಂದು ಹೇಳಿರುವ ಮೊಬೈಲ್ ಅನ್ನು ವಶಪಡಿಸಿಕೊಳ್ಳಲಾಗಿಲ್ಲ. ಎಫ್‌ಎಸ್‌ಎಲ್ (ಫಾರೆನ್ಸಿಕ್ ಸೈನ್ಸ್ ಲ್ಯಾಬ್) ವರದಿಯಲ್ಲೂ ವಿರೋಧಾಭಾಸಗಳಿವೆ ಎಂದು ಹೇಳಿ, ಶಿಕ್ಷೆ ರದ್ದುಪಡಿಸುವಂತೆ ಕೋರಲಾಗಿದೆ. ಪ್ರಜ್ವಲ್ ರೇವಣ್ಣ, ಇದು ರಾಜಕೀಯ ದುರುದ್ದೇಶದಿಂದ ರೂಪಿತ ಪ್ರಕರಣ. ಜೊತೆಗೆ ನ್ಯಾಯಾಂಗ ತಪ್ಪುಗಳಿವೆ ಎಂದು ಹೇಳಿದ್ದಾರೆ.



## ಮಿನಿ ನ್ಯೂಸ್

# ಗಜಪಡೆಗೆ ಜವಾಬ್ದಾರಿ ಹಂಚಿಕೆ: ಅಭಿಮನ್ಯುಗೆ ಕಾವೇರಿ, ರೂಪಾ ಸಾಥ್

### ಅರಮನೆಯಲ್ಲಿ ಆಯೋಜಿಸಿದ್ದ ಮಾವುತರು, ಕಾವಾಡಿಗರು, ಚಿರತೆ ಕಾರ್ಯಪಡೆ ಸಿಬ್ಬಂದಿಗೆ ಕಿಟ್ ವಿತರಣೆ ಕಾರ್ಯಕ್ರಮ

• ಉದಯವಾಹಿನಿ, ಮೈಸೂರು

ವಿಶ್ವವಿಖ್ಯಾತ ದಸರಾ ಮಹೋತ್ಸವದ ಜಂಬೂಸವಾರಿಯ ದಿನದಂದು (ಅ.2) ಅಂಬಾರಿಯನ್ನು ಗಜಪಡೆಯ ಕ್ಯಾಪ್ಟನ್ 'ಅಭಿಮನ್ಯು' ಸತತ 6ನೇ ಬಾರಿಗೆ ಹೊರಲಿದ್ದು, ಅವನಿಗೆ ಕುಮ್ಕಿ ಆನೆಗಳಾಗಿ 'ರೂಪಾ' ಹಾಗೂ 'ಕಾವೇರಿ' ಸಾಥ್ ನೀಡಲಿದ್ದಾರೆ. ಅರಮನೆಯಲ್ಲಿ ಆಯೋಜಿಸಿದ್ದ ಮಾವುತರು, ಕಾವಾಡಿಗರು, ಚಿರತೆ ಕಾರ್ಯಪಡೆ ಸಿಬ್ಬಂದಿಗೆ ಕಿಟ್ ವಿತರಣೆ ಕಾರ್ಯಕ್ರಮದಲ್ಲಿ ಅರಣ್ಯ ಸಚಿವ ಈಶ್ವರ ಖಂಡ್ರೆ ಅವರು ಆನೆಗಳ ಜವಾಬ್ದಾರಿ ಹಂಚಿಕೆಯನ್ನು ಮಾಡಿದರು.

ನಿಶಾನೆ ಆನೆಯಾಗಿ ಧನಂಜಯ, ನೌಪತ್ ಆನೆಯಾಗಿ 'ಗೋಪಿ ಆಯ್ಕೆಯಾಗಿದ್ದು, ಸಾಲಾನೆಗಳ ಮೂರು ತಂಡವನ್ನು ರಚಿಸಲಾಗಿದೆ. ಮೊದಲ ತಂಡವನ್ನು ಶ್ರೀರಂಗಪಟ್ಟಣ ದಸರೆಯಲ್ಲಿ ಅಂಬಾರಿ ಹೊತ್ತಿದ್ದ ಮಹೇಂದ್ರ ಮುನ್ನಡೆಸಲಿದ್ದು, ಅವನೊಂದಿಗೆ ಇದೇ ಮೊದಲ ಬಾರಿ ಬಂದಿರುವ ಪಟ್ಟದಾನೆಯಾಗಿ ಜವಾಬ್ದಾರಿಯನ್ನು ಯಶಸ್ವಿಯಾಗಿ ನಿರ್ವಹಿಸಿರುವ ದೈತ್ಯ ಶ್ರೀಕಂಠ, ಲಕ್ಷ್ಮಿ ಇರಲಿದ್ದಾರೆ. ಸಾಲಾನೆಗಳ 2 ನೇ ತಂಡದಲ್ಲಿ ಭೀಮ, ಕಂಜನ್ ಹಾಗೂ ಏಕಲವ್ಯ' ಇರಲಿದ್ದು, 3ನೇ ತಂಡದಲ್ಲಿ ಪ್ರಶಾಂತ', 'ಸುಗ್ರೀವ' ಹಾಗೂ 'ಹೇಮಾವತಿ' ಹೆಜ್ಜೆ ಹಾಕಲಿದ್ದಾರೆ.

ಇದೇ ಮೊದಲ ಬಾರಿ ಎಲ್ಲಾ 14 ಆನೆಗಳು ಜಂಬೂಸವಾರಿ ಮೆರವಣಿಗೆಯಲ್ಲಿ ಪಾಲ್ಗೊಳ್ಳುತ್ತಿರುವುದು ವಿಶೇಷ. ಈ ಹಿಂದೆ ಒಂದೆರಡು ಆನೆಗಳಿಗೆ ವಿಶ್ರಾಂತಿ ನೀಡುವುದು ವಾಡಿಕೆಯಾಗಿತ್ತು.

**ಪರಿಶೀಲನೆ:** 'ಮಾವುತರು ಹಾಗೂ ಕಾವಾಡಿಗಳಿಗೆ ಅರಣ್ಯ ಇಲಾಖೆಯ ಡಿಆರ್‌ಎಫ್‌ಒ ಅವರಿಗೆ ಸಮನಾದ ವೇತನ ನೀಡಬೇಕೆಂಬ ಬೇಡಿಕೆಯನ್ನು ಪರಿಶೀಲಿಸಿ ಕ್ರಮವಹಿಸಲಾಗುವುದು' ಎಂದು ಈಶ್ವರ ಖಂಡ್ರೆ ಹೇಳಿದರು. ವಿಶ್ವವಿಖ್ಯಾತ ದಸರಾ ಜಂಬೂಸವಾರಿ ಯಶಸ್ವಿಯಾಗಿ ನೆರವೇರಲು ಮಾವುತರು ಹಾಗೂ ಕಾವಾಡಿಗರ ಪಾತ್ರ ದೊಡ್ಡದು. ಆನೆಗಳ ನಿರ್ವಹಣೆ, ಪಾಲನೆ, ಪೋಷಣೆಯಲ್ಲಿ ಸದಾ ನಿರತರಾಗಿರುವ ಅವರ ಬೇಡಿಕೆ ಈಡೇರಿಸಲು ಶ್ರಮಿಸುವೆ. ಅವರಿಗೆ ರೂ. 8 ಸಾವಿರ ಮೌಲ್ಯದ ಕಿಟ್ ಅನ್ನು ವಿತರಿಸಲು ಬಂದಿರುವೆ' ಎಂದರು.

ಬಳ್ಳಿಯಲ್ಲಿ ಅರ್ಜುನ ಆನೆಯ ಸ್ಮಾರಕ ಉದ್ಘಾಟಿಸಲಾಗಿದ್ದು, ಅವನು ಹುತಾತ್ಮನಾದ ಹಾಸನದ ಎಸಳೂರಿನಲ್ಲೂ ಸ್ಮಾರಕದ ಉದ್ಘಾಟನೆಯನ್ನು ತಿಂಗಳಲ್ಲೇ ನೆರವೇರಿಸಲಾಗುವುದು' ಎಂದು ತಿಳಿಸಿದರು.

ಮಾನವ- ವನ್ಯಜೀವಿ ಸಂಘರ್ಷ ತಡೆಯಲ್ಲಿ ರಾಜ್ಯದ ಅರಣ್ಯ ಇಲಾಖೆಯು ದೇಶದಲ್ಲೇ ಹೆಸರಾಗಿದೆ. ಇಲ್ಲಿನ 218 ಮಾವುತರು-ಕಾವಾಡಿಗರು ನುರಿತವರು. ಕಾಡಾನೆ ಹಾಗೂ ನರಭಕ್ಷಕ ಹುಲಿ ಸೆರೆ ಕಾರ್ಯಾಚರಣೆಯಲ್ಲಿ ನಮ್ಮ ಗಜಪಡೆ ಶ್ರಮ ದೊಡ್ಡದು. ಆಂಧ್ರ ಪ್ರದೇಶ ಹಾಗೂ ಗೋವಾ ರಾಜ್ಯದ ಸಚಿವರೂ ಆನೆಗಳ ನೆರವು ಬಯಸಿ ಬರುತ್ತಿದ್ದಾರೆ' ಎಂದು ಹೇಳಿದರು. ಇದೇ ವೇಳೆ ಚಿರತೆ ಕಾರ್ಯಪಡೆಯ ಹೊಸ ವಾಹನಗಳಿಗೆ ಹಸಿರು ನಿಶಾನೆ ತೋರಿದರು. ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮನೋಜ್ ರಾಜನ್, ಮೈಸೂರು ವೃತ್ತದ ಅರಣ್ಯ ಸಂರಕ್ಷಣಾಧಿಕಾರಿ ಎಸ್. ರವಿಶಂಕರ್, ಡಿಸಿಎಫ್‌ಗಳಾದ ಪರಮೇಶ್, ಐ.ಬಿ.ಪ್ರಭುಗೌಡ, ಚಾಮರಾಜೇಂದ್ರ ಮೃಗಾಲಯದ ಕಾರ್ಯನಿರ್ವಾಹಕ ನಿರ್ದೇಶಕಿ ಅನುಷಾ, ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಜೆ. ವಿಜಯಕುಮಾರ್, ಶಂಕರೇಗೌಡ ಪಾಲ್ಗೊಂಡಿದ್ದರು.'



ಉದಯವಾಹಿನಿ ಚಿತ್ರ

**ನಿಯಮ ಉಲ್ಲಂಘನೆ: ಕಠಿಣ ಕ್ರಮ**

'ಆನೆಗಳ ಜೊತೆ ಸೆಲ್ಫಿ ತೆಗೆದುಕೊಂಡ ಯುವತಿ ವಿರುದ್ಧ ಕ್ರಮ ವಹಿಸಲಾಗಿದೆ. ಮಾರ್ಗಸೂಚಿಯನ್ನು ಅಧಿಕಾರಿಗಳು ಹಾಗೂ ಸಿಬ್ಬಂದಿ ಕಟ್ಟುನಿಟ್ಟಾಗಿ ಪಾಲಿಸಬೇಕು. ಇಲ್ಲದಿದ್ದರೆ ಕಠಿಣ ಕ್ರಮ ತೆಗೆದುಕೊಳ್ಳಬೇಕಾಗುತ್ತದೆ' ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ಎಚ್ಚರಿಸಿದರು. ಪೊಲೀಸರಿದ್ದರೂ ವಿಶೇಷ ಕಮಾಂಡೊ ಪಡೆಯನ್ನೂ ಬಳಕೆ ಮಾಡಿಕೊಳ್ಳಲು ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಯಾವುದೇ ಪ್ರಭಾವ ಬಳಸಿ ಆನೆಗಳ ಬಳಿ ಬರುವಂತಿಲ್ಲ. ಆನೆಗಳ ಹಿತ ರಕ್ಷಣೆ ಇಲಾಖೆಗೆ ಮುಖ್ಯ. ನಿಯಮಗಳು ಎಲ್ಲಾರಿಗೂ ಅನ್ವಯ' ಎಂದರು.

**ಮೆರವಣಿಗೆ ತಾಲೀಮು; ಗಜಪಡೆ ಸಿದ್ಧ**

ಅರಮನೆಯಲ್ಲಿ ಜಂಬೂಸವಾರಿ ಸಾಗುವ ಮಾರ್ಗದಲ್ಲಿ ಸೋಮವಾರ ಬೆಳಿಗ್ಗೆ 8ಕ್ಕೆ ಅಭಿಮನ್ಯು ರೂಪಾ ಕಾವೇರಿ ಸೇರಿದಂತೆ ಗಜಪಡೆಯ ಎಲ್ಲಾ ಆನೆಗಳು ಅಶ್ವಪಡೆ ಹಾಗೂ ಪೊಲೀಸ್ ಬ್ಯಾಂಡ್ ತುಕಡಿಗಳು ಪಥ ಸಂಚಲನದ ತಾಲೀಮು ನಡೆಸಿದವು. ರಾಷ್ಟ್ರಗೀತೆ ಮೊಳಗಿದಾಗ ಫಿರಂಗಿದಳವು ಕುಶಾಲತೋಪು ಸಿಡಿಸಿತು. ಸಿಸಿಎಫ್ ಮನೋಜ್ ರಾಜನ್ ನಗರ ಪೊಲೀಸ್ ಆಯುಕ್ತ ಸೀಮಾ ಲಾಟ್ಕರ್ ಡಿಸಿಪಿಗಳಾದ ಕೆ.ಎಸ್.ಸುಂದರ್ ರಾಜ್ ಬಿಂದುಮಣಿ ಡಿಸಿಎಫ್ ಐ.ಬಿ.ಪ್ರಭುಗೌಡ ಗೌರವ ವಂದನೆ ಸ್ವೀಕರಿಸಿದರು.

## ಅಸ್ತಿತ್ವ ಕಳೆದುಕೊಳ್ಳುತ್ತಿರುವ ಪೌರಾಣಿಕ ನಾಟಕ

• ಉದಯವಾಹಿನಿ, ಚನ್ನಪಟ್ಟಣ

ಸಂಸ್ಕೃತಿಯ ಪ್ರತೀಕವಾಗಿರುವ ಪೌರಾಣಿಕ ನಾಟಕ ಕಲೆ ಇಂದು ಅಸ್ತಿತ್ವ ಕಳೆದುಕೊಳ್ಳುತ್ತಿದ್ದು ಈ ಕಲೆಯನ್ನು ನಮ್ಮ ಮುಂದಿನ ಪೀಳಿಗೆಗೆ ಉಳಿಸಿ ಬೆಳೆಸುವ ಕೆಲಸವಾಗಬೇಕಿದೆ ಎಂದು ಶಾಸಕ ಸಿ.ಪಿ.ಯೋಗೇಶ್ವರ್ ಅಭಿಪ್ರಾಯಪಟ್ಟರು. ನಗರದ ಶತಮಾನೋತ್ಸವ ಭವನದಲ್ಲಿ ತಾ.ಪಂ. ಮಾಜಿ ಸದಸ್ಯ ದಿವಗಂತ ಶಿವಲಿಂಗಯ್ಯ ಸ್ಮರಣಾರ್ಥ ಮಹದೇಶ್ವರ ಕೃಪಾ ಪೋಷಿತ ನಾಟಕ ಮಂಡಳಿ ಆಯೋಜಿಸಿದ್ದ ಕುರುಕ್ಷೇತ್ರ ಪೌರಾಣಿಕ ನಾಟಕ ಪ್ರದರ್ಶನಕ್ಕೆ ಚಾಲನೆ ನೀಡಿ ಮಾತನಾಡಿದರು.

ರಾತ್ರಿಯಿಂದ ಬೆಳಗಿನ ಜಾವದ ತನಕ ಮನೆ ಮಂದಿಯೆಲ್ಲಾ ಕುಳಿತು ನಾಟಕ ನೋಡುತ್ತಿದ್ದ ದಿನಗಳು ದೂರಾಗಿ ಬೆರಳೆಣಿಕೆಯಷ್ಟು ಮಂದಿ ಮಾತ್ರ ನಾಟಕ ನೋಡುವಂತಹ ಸ್ಥಿತಿ ಬಂದಿದೆ. ಈ ಬಗ್ಗೆ ಎಲ್ಲಾರೂ ಎಚ್ಚೆತ್ತು ನಾಟಕ ಕಲೆ ಉಳಿಸುವತ್ತ ಗಮನಹರಿಸಬೇಕು ಎಂದರು. ಬಮೂಲ್ ನಿರ್ದೇಶಕ ಎಸ್.ಲಿಂಗೇಶ್ ಕುಮಾರ್ ಮಾತನಾಡಿದರು. ನಾಟಕ ಪ್ರದರ್ಶನಕ್ಕೆ ಸಹಕಾರ ನೀಡಿದ ಸಮಾಜ ಸೇವಕ ನುಣ್ಣೂರು ಬಲರಾಮ್, ಒಕ್ಕಲಿಗರ ಸಂಘದ ನಿರ್ದೇಶಕ ಚಕ್ಕೆರೆ ವೆಂಕಟರಾಮೇಗೌಡ, ನಗರಸಭೆ ಅಧ್ಯಕ್ಷ ವಾಸಿಲ್ ಅಲಿಖಾನ್, ಯಶಸ್ ಗೌಡ, ಬೋರ್ ವೆಲ್ ರಂಗನಾಥ್, ಸುನೀಲ್, ಮಾಕಳಿ ಬೋರೇಗೌಡ, ಚಂದ್ರು ಅವರನ್ನು ಸನ್ಮಾನಿಸಲಾಯಿತು.

## ಶಿಕ್ಷಕರ ಶ್ರಮಕ್ಕೆ ಬೆಲೆ ಕಟ್ಟಲಾಗದು: ಡಾ.ವೈ.ಡಿ.ರಾಜಣ್ಣ

• ಉದಯವಾಹಿನಿ, ಸರಗೂರು

ಶಾಲೆಗಳಲ್ಲಿ ಶಿಕ್ಷಕರ ಶ್ರಮ ಅವಿರತವಾಗಿದ್ದು, ಅವರ ಶ್ರಮಕ್ಕೆ ಬೆಲೆ ಕಟ್ಟಲಾಗದು ಎಂದು ಪಶುಸಂಗೋಪನಾ ಇಲಾಖೆ ಸಹಾಯಕ ನಿರ್ದೇಶಕ ಡಾ.ವೈ.ಡಿ.ರಾಜಣ್ಣ ತಿಳಿಸಿದರು.ಪಟ್ಟಣದ ಲಯನ್ಸ್ ಅಕಾಡೆಮಿ ಶಾಲೆಯಲ್ಲಿ ನಡೆದ ಗುರುವಂದನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಶಿಕ್ಷಕರು ಮಕ್ಕಳ ಪ್ರತಿಭೆ ಗುರುತಿಸುವ ಕೆಲಸ ಮಾಡಬೇಕು. ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗಿಯಾಗುವಂತೆ ನೋಡಿಕೊಳ್ಳಬೇಕು. ಮಕ್ಕಳಿಗೆ ಭಕ್ತಿ ಗೀತೆ, ಸಾಹಿತ್ಯ, ಕ್ರೀಡೆ, ಸಂಗೀತ ಹೀಗೆ ನಾನಾ ಕ್ಷೇತ್ರಗಳಲ್ಲಿ ಭಾಗಿಯಾಗುವಂತೆ ಪ್ರೇರಣೆ ನೀಡಬೇಕು. ಇಂಥ ಕೆಲಸವನ್ನು ನಮ್ಮ ಶಿಕ್ಷಕರು ಮಾಡಿದ್ದಾರೆ. ಹೀಗಾಗಿಯೇ ಸಾಹಿತ್ಯದಲ್ಲಿ ಹೆಚ್ಚಿನ ಆಸಕ್ತಿ ಬೆಳೆಯಲು ಸಹಕಾರಿಯಾಯಿತು. ಶಿಕ್ಷಕರಿಂದಲೇ ಇಷ್ಟೊಂದು ದೊಡ್ಡ ಮಟ್ಟಕ್ಕೆ ಬೆಳೆಯಲು ಅನುಕೂಲವಾಯಿತು. ಮಕ್ಕಳ ಬೌದ್ಧಿಕ, ಮಾನಸಿಕ ವಿಕಸನಕ್ಕೆ ಶಿಕ್ಷಕರು ಶ್ರಮಿಸುತ್ತಾರೆ ಎಂದು ಅವರು ಹೇಳಿದರು.



ಉದಯವಾಹಿನಿ ಚಿತ್ರ

ಇತ್ತೀಚಿಗೆ ಶಿಕ್ಷಕರು ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರನ್ನು ಅನ್ಯ ಕಾರ್ಯಗಳಿಗೆ ಬಳಸಿಕೊಳ್ಳಲಾಗುತ್ತಿದೆ. ಇದರಿಂದಾಗಿ ಹಿಂದಿಗಿಂತ ಅವರು ಜವಾಬ್ದಾರಿ ಹೆಚ್ಚಾಗಿದೆ ಎಂದು ಅವರು ಹೇಳಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎನ್.ರಾಜು ಮಾತನಾಡಿ, ಶಿಕ್ಷಣ ಕ್ಷೇತ್ರದಲ್ಲಿ ಲಯನ್ಸ್ ಸಂಸ್ಥೆ ಉತ್ತಮ ಕೆಲಸ ಮಾಡುತ್ತಿದ್ದು, ಶಾಲಾ ಶಿಕ್ಷಕರಿಗೆ ಕನಿಷ್ಠ ವೇತನ ನೀಡಬೇಕು. ಇದಲ್ಲದೆ ಎಸ್‌ಎಸ್‌ಎಲ್‌ಸಿಯಲ್ಲಿ ಉತ್ತಮ ಫಲಿತಾಂಶ ನೀಡುತ್ತಿದೆ ಎಂದು ಹೇಳಿದರು.

ಲಯನ್ಸ್ ಕ್ಲಬ್ ಅಧ್ಯಕ್ಷ ಎಸ್.ಬಿ.ನಾಗರಾಜು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಲಯನ್ಸ್ ಜಿಲ್ಲೆ ಪ್ರಾಂತೀಯ ಅಧ್ಯಕ್ಷ ಎಸ್. ವಾಸುಕಿ, ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷ ಎಂ.ಕೆಂಡಗಣ್ಣಸ್ವಾಮಿ, ಎಸ್.ಡಿ.ಎಂ.ಸಿ ಅಧ್ಯಕ್ಷ ಹಾಗೂ ಪಟ್ಟಣ ಪಂಚಾಯಿತಿ ಸದಸ್ಯ ಶ್ರೀನಿವಾಸ್, ಕಾರ್ಯದರ್ಶಿ ಎಸ್.ಎಸ್ .ಪ್ರಭುಸ್ವಾಮಿ, ಖಜಾಂಚಿ ಬ್ರಹ್ಮದೇವಯ್ಯ, ಎಸ್.ವಿ.ಯೋಗೀಶ್, ಎಸ್. ನಾರಾಯಣ್, ಮೋಹನ್ ಕುಮಾರ್, ಶಾಂಭವಮೂರ್ತಿ, ಪ್ರಾಂಶುಪಾಲ್ ದಾಸಚಾರ್, ಮುಖ್ಯ ಶಿಕ್ಷಕಿ ಪದ್ಮಶ್ರೀ ಸೇರಿದಂತೆ ಶಾಲಾ ಶಿಕ್ಷಕರು ಹಾಜರಿದ್ದರು. ಇದೇ ಸಂದರ್ಭದಲ್ಲಿ ನಿವೃತ್ತ ದೈಹಿಕ ಶಿಕ್ಷಕ ವಾಸುದೇವ ಅವರನ್ನು ಸನ್ಮಾನಿಸಲಾಯಿತು.

## ರಸ್ತೆ ಡಾಂಬರೀಕರಣಕ್ಕೆ ಸಂಸದ ಸುನಿಲ್ ಬೋಸ್ ಚಾಲನೆ

• ಉದಯವಾಹಿನಿ, ತಿ.ನರಸೀಪುರ

ತಾಲ್ಲೂಕಿನ ಯಾಚೇನಹಳ್ಳಿ ಗ್ರಾಮದಲ್ಲಿ ರೂ.4.82 ಕೋಟಿ ರೂಪಾಯಿ ವೆಚ್ಚದ ರಸ್ತೆ ಡಾಂಬರೀಕರಣ ಕಾಮಗಾರಿಗೆ ಸಂಸದ ಸುನಿಲ್ ಬೋಸ್ ಅವರು ಭೂಮಿ ಪೂಜೆ ನೆರವೇರಿಸಿದರು.ಬಳಿಕ ಮಾತನಾಡಿದ ಅವರು, ಯಾಚೇನಹಳ್ಳಿಯ ರಸ್ತೆ ಹಾಳಾಗಿದ್ದರಿಂದ ಬನ್ನೂರು ಮುಖ್ಯ ರಸ್ತೆಯಿಂದ ನವೀಕರಣಗೊಳಿಸಲು ರೂ.6 ಕೋಟಿ ಮೊತ್ತದ ಯೋಜನೆ ರೂಪಿಸಲಾಗಿತ್ತು, ಆದರೆ ರೂ.4.82 ಕೋಟಿ ರೂಪಾಯಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಮುಖ್ಯ ರಸ್ತೆಗಳನ್ನು ಸಂಪರ್ಕಿಸುವ ಹಳ್ಳಿಗಾಡಿನ ರಸ್ತೆಗಳ ಅಭಿವೃದ್ಧಿಗೆ ಸರ್ಕಾರ ಅನುದಾನ ನೀಡಿದೆ ಎಂದು ತಿಳಿಸಿದರು.

ದಸರಾ ಮುಗಿದ ಬಳಿಕ ಬನ್ನೂರು ಭಾಗದಲ್ಲಿ ಮತ್ತಷ್ಟು ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗುವುದು. ಹಂತ ಹಂತವಾಗಿ ಶಾಶ್ವತ ಯೋಜನೆಗಳಿಗೆ ಅನುದಾನವನ್ನು ಮಂಜೂರು ಮಾಡುವುದಾಗಿ ಹೇಳಿದರು.

ವಿವಿಧ ಗ್ರಾಮಗಳ ಬಳಿ ಕಾರ್ಯಕರ್ತರು ಹಾಗೂ ಮುಖಂಡರು ಗ್ರಾಮಗಳ ಸಮಸ್ಯೆಗಳ ಬಗ್ಗೆ ಗಮನಕ್ಕೆ ತಂದು ಅಭಿವೃದ್ಧಿಗೆ ಅನುದಾನ ಬಿಡುಗಡೆ ಮಾಡಿಸಲು ಕೋರಿದರು.



ಶ್ರೀ ರಾಮಕೃಷ್ಣ ಸೇವಾ ಆಶ್ರಮದ ನಾದನಂದನಾಥ ಸ್ವಾಮೀಜಿ, ಮಾಜಿ ಶಾಸಕಿ ಜೆ.ಸುನೀತಾ ವೀರಪ್ಪಗೌಡ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ವೈ.ಎನ್. ಶಂಕರೇಗೌಡ, ಉಪಾಧ್ಯಕ್ಷ ವೈ.ಎಂ.ಚಂದ್ರು, ನಾಡಗೌಡರಾದ ವೈ.ಎಚ್. ಹನುಮಂತೇಗೌಡ, ಗ್ರಾಮ ಪಂಚಾಯಿತಿ ಅಧ್ಯಕ್ಷ ವೈ.ಸಿ.ಶಿವಕುಮಾರ, ಉಪಾಧ್ಯಕ್ಷೆ ಪಿ.ಶ್ವೇತ, ರಾಷ್ಟ್ರೀಯ ಹೆದ್ದಾರಿ ಕಿರಿಯ ಎಂಜಿನಿಯರ್ ಬಿ.ಎ.ಮಹೇಶ್, ಜಿ.ಪಂ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಕೆ.ಶಿವರಾಜು, ಲೋಕೋಪಯೋಗಿ ಎಇಇ ಸತೀಶ್ ಚಂದ್ರನ್, ಪೊಲಿಸ್ ಇನ್ಸ್‌ಪೆಕ್ಟರ್ ಮನೋಜ್ ಕುಮಾರ್, ಗ್ರಾ.ಪಂ ಸದಸ್ಯರು, ಮುಖಂಡರು ಹಾಜರಿದ್ದರು.

## ಬೆಟ್ಟದಪುರ ನಾಡಕಚೇರಿಯಲ್ಲಿ ಎರಡು ಕಂಪ್ಯೂಟರ್ ಕಳವು

• ಉದಯವಾಹಿನಿ, ಬೆಟ್ಟದಪುರ

ಗ್ರಾಮದ ನಾಡಕಚೇರಿಯಲ್ಲಿ ರೂ.60 ಸಾವಿರ ಬೆಲೆ ಬಾಳುವ ಎರಡು ಕಂಪ್ಯೂಟರ್‌ಗಳನ್ನು ಕಳವು ಮಾಡಲಾಗಿದೆ ಎಂದು ಉಪ ತಹಶೀಲ್ದಾರ್ ಶಶಿಧರ್ ಬೆಟ್ಟದಪುರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಸೆ.26 ಶನಿವಾರದಂದು ಎಂದಿನಂತೆ ಕಚೇರಿ ಕೆಲಸ ಮುಗಿಸಿ 5.30ರ ಸಮಯದಲ್ಲಿ ಬೀಗ ಹಾಕಿ ಸಿಬ್ಬಂದಿ ಮನೆಗೆ ತೆರಳಿದ್ದಾರೆ. ಬೆಳಗ್ಗೆ 8 ಗಂಟೆಗೆ ನಾಡಕಚೇರಿ ಸಿಬ್ಬಂದಿ ಸಂತೋಷ್ ಬಂದು ನೋಡಿದಾಗ ಮುಂದಿನ ಬಾಗಿಲಿನ ಬೀಗ ಒಡೆದಿರುವುದು ಗಮನಕ್ಕೆ ಬಂದಿದೆ. ತಕ್ಷಣವೇ ಪೊಲೀಸರಿಗೆ ಮಾಹಿತಿ ನೀಡಿ ಸ್ಥಳ ಪರಿಶೀಲನೆ ನಡೆಸಿದ ಸಂದರ್ಭದಲ್ಲಿ ಸಾರ್ವಜನಿಕರ ಅರ್ಜಿಗಳನ್ನು ಸ್ವೀಕರಿಸಿ ಬಳಕೆ ಮಾಡುತ್ತಿದ್ದ ಎರಡು ಕಂಪ್ಯೂಟರ್‌ಗಳು ಕಳ್ಳತನವಾಗಿರುವುದು ಗಮನಕ್ಕೆ ಬಂದಿದೆ.

ಅಪರಾಧ ವಿಭಾಗದ ಪಿಎಸ್‌ಐ ಸ್ವಾಮಿ ನಾಯಕ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬೆಟ್ಟದಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸಾರ್ವಜನಿಕರ ಕೆಲಸ ಕಾರ್ಯನಿರ್ವಹಿಸಲು 2 ಕಂಪ್ಯೂಟರ್‌ಗಳನ್ನು ನೀಡಬೇಕೆಂದು ತಹಶೀಲ್ದಾರ್ ಅವರಿಗೆ ಮನವಿ ಪತ್ರ ನೀಡಲಾಗಿದೆ.

## ಕಬ್ಬಿಗೆ ವೈಜ್ಞಾನಿಕ ಬೆಲೆ ನಿಗದಿಪಡಿಸಲು ಒತ್ತಾಯಿಸಿ ಪ್ರತಿಭಟನೆ

• ಉದಯವಾಹಿನಿ, ಮೈಸೂರು

ಪ್ರತಿ ಟನ್ ಕಬ್ಬಿಗೆ ರೂ.4 ಸಾವಿರ ವೈಜ್ಞಾನಿಕ ಬೆಲೆ ನಿಗದಿ ಮಾಡಬೇಕೆಂದು ಒತ್ತಾಯಿಸಿ ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ರೈತ ಸಂಘದ ಮುಖಂಡರು ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಿದರು.'ಪ್ರಸಕ್ತ ಸಾಲಿಗೆ ಕೇಂದ್ರ ಸರ್ಕಾರ ಬೆಲೆ ನಿಗದಿ ಮಾಡಿರುವ ಎಫ್‌ಆರ್‌ಪಿ ಪರಿಶೀಲಿಸಿ ರಾಜ್ಯ ಸರ್ಕಾರದ ಸಲಹಾ ಬೆಲೆ ಕಾಯ್ದೆಯಡಿ ಕಬ್ಬು ಬೆಳೆಗಾರರಿಗೆ ವೈಜ್ಞಾನಿಕ ಬೆಲೆ ಪ್ರತಿ ಟನ್ ಕಬ್ಬಿಗೆ ರೂ.4 ಸಾವಿರ ನಿಗದಿ ಮಾಡಬೇಕು. ಕಾರ್ಖಾನೆ ಮುಂಭಾಗ ತೂಕದ ಯಂತ್ರ ಅಳವಡಿಸಬೇಕು. 2023-24ನೇ ಸಾಲಿನ ಉಪ ಉತ್ಪನ್ನಗಳ ಲಾಭಾಂಶ ಹಂಚಿಕೆ ಮಾಡಬೇಕು. ಸಕ್ಕರೆ ಇಳುವರಿಯಲ್ಲಿ ಕಡಿಮೆ ತೋರುತಿದ್ದು ಜಿಲ್ಲಾಡಳಿತ ಅಧಿಕಾರಿಗಳ ತಂಡ ರಚನೆ ಮಾಡಿ ಇದರ ಬಗ್ಗೆ ಕ್ರಮವಹಿಸಬೇಕು' ಎಂದು ಒತ್ತಾಯಿಸಿದರು.



ಉದಯವಾಹಿನಿ ಚಿತ್ರ

ಜಿಲ್ಲೆಯ ಹುಣಸೂರು, ಪಿರಿಯಾಪಟ್ಟಣ, ಕೆ.ಆರ್.ನಗರ, ಎಚ್.ಡಿ.ಕೋಟೆ ಭಾಗದ ರೈತರು ತಂಬಾಕು ಬೆಳೆಗಳನ್ನೇ ನಂಬಿದ್ದಾರೆ. ತಂಬಾಕಿನ ಮಾರುಕಟ್ಟೆ ಬೆಲೆ ಕುಸಿತವಾದ್ದರಿಂದ ತಂಬಾಕು ಮಂಡಳಿ ಹಾಗೂ ಜಿಲ್ಲಾಡಳಿತ ಸ್ಥಳೀಯ ಸಂಸದರೊಂದಿಗೆ ಸಭೆ ನಡೆಸಿ ಸೂಕ್ತ ನ್ಯಾಯ ಒದಗಿಸಬೇಕು. ಮೈಸೂರು- ಚಾಮರಾಜ ನಗರ ಜಿಲ್ಲೆಯ ಕಾಡಂಚಿನ ಗ್ರಾಮಗಳಲ್ಲಿ ಮಾನವ ಪ್ರಾಣಿ ಸಂಘರ್ಷ ಹೆಚ್ಚಿದ್ದು, ಕೂಡಲೇ ಸಮಸ್ಯೆ ಬಗೆಹರಿಸಬೇಕು. ಅಸಹಜ ಕಾಡು ಪ್ರಾಣಿ ಸಾವನ್ನಪ್ಪಿದರೆ ಸಂಬಂಧಪಟ್ಟ ಸಚಿವರು ರಾಜೀನಾಮೆ ನೀಡಬೇಕು. ಪ್ರಾಣಿ ಸಂಘರ್ಷದಿಂದ ರೈತ ಸಾವನ್ನಪ್ಪಿದರೆ ಭಿಕ್ಷೆ ರೂಪದಲ್ಲಿ ಕೊಡುತ್ತಿರುವ ಪರಹಾರವನ್ನು ರಾಜ್ಯ ಸರ್ಕಾರ ಹೆಚ್ಚಳ ಮಾಡಬೇಕು' ಎಂದು ಆಗ್ರಹಿಸಿದರು. ಸಂಘಟನೆ ರಾಜ್ಯ ಘಟಕದ ಅಧ್ಯಕ್ಷ ಹಾಡ್ಯ ರವಿ, ಮಹೇಶ್, ಸ್ವಾಮಿರಾಜ್, ಕುಮಾರ್, ಚಿಕ್ಕಸ್ವಾಮಿ, ಮಹದೇವಸ್ವಾಮಿ ಭಾಗವಹಿಸಿದ್ದರು.

**'ನಂಜನಗೂಡು ತಾಲ್ಲೂಕು ಏತ ನೀರಾವರಿ ಯೋಜನೆ ವಿಳಂಬವಾಗಿದ್ದು, ತಕ್ಷಣ ಕಾಮಗಾರಿ ಪೂರ್ಣಗೊಳಿಸಿ ಕೆರೆ ಕಟ್ಟೆಗಳಿಗೆ ನೀರು ತುಂಬಿಸಬೇಕು. ಭತ್ತ ಕಟಾವಿಗೆ ಮುಂಚಿತವಾಗಿ ಖರೀದಿ ಕೇಂದ್ರ ತೆಗೆದು ಎಂಎಸ್‌ಪಿ ಬೆಲೆಗಿಂತ ಹೆಚ್ಚುವರಿವಾಗಿ ರೂ.500 ಸಹಾಯಧನ ನೀಡಬೇಕು. ಬನ್ನೂರು ಭಾಗದಲ್ಲಿ ಕೊಡಯ್ಸ್ ಬಿಲ್ವರಿ ಫ್ಯಾಕ್ಟರಿ ಅಕ್ರಮವಾಗಿ ಶುದ್ದೀಕರಣ ಇಲ್ಲದ ನೀರನ್ನು ಖಾಸಗಿ ಕೊಳವೆಬಾವಿ ಹಾಗೂ ನಾಲೆಗಳ ಮೂಲಕ ಕಾರ್ಖಾನೆಗೆ ತರುವುದನ್ನು ನಿಲ್ಲಿಸಬೇಕು' ಎಂದು ಒತ್ತಾಯಿಸಿದರು.**

## ಗೌರಿಬಿದನೂರಿನಲ್ಲಿ ಸ್ವಚ್ಛತೆ ಅಭಿಯಾನ

• ಉದಯವಾಹಿನಿ, ಗೌರಿಬಿದನೂರು

ಸ್ವಚ್ಛತೆಯೇ ಸೇವೆ ಅಭಿಯಾನದ ಅಡಿ ನಗರದಲ್ಲಿ ಹೆಚ್ಚು ಕಸ ಸಂಗ್ರಹವಾಗುವ ಬ್ಲಾಕ್ ಸ್ಪಾಟ್‌ಗಳನ್ನು ಅಂದಗೊಳಿಸುವ ಕಾರ್ಯಕ್ರಮವನ್ನು ನಗರಸಭೆ ವತಿಯಿಂದ ಹಮ್ಮಿಕೊಳ್ಳಲಾಯಿತು. ನಗರಸಭೆ ಪೌರಾಯುಕ್ತ ಕೆ.ಜಿ. ರಮೇಶ್ ಮಾತನಾಡಿ, ನಗರದಲ್ಲಿ 28 ಬ್ಲಾಕ್ ಸ್ಪಾಟ್‌ಗಳನ್ನು ಗುರುತಿಸಲಾಗಿದೆ. ಇಲ್ಲಿ ಹೆಚ್ಚು ಪ್ರಮಾಣದ ಕಸ ಸಂಗ್ರಹವಾಗುತ್ತಿದೆ. ಇಂತಹ ಸ್ಥಳಗಳಲ್ಲಿ ಸ್ವಚ್ಛತೆ ಮಾಡಿ ಅಲಂಕಾರ ಮಾಡಿ, ಹೂವಿನ ಗಿಡಗಳನ್ನು ನೆಟ್ಟು, ಕಸ ಹಾಕಬಾರದು ಎಂಬ ನಾಮಫಲಕವನ್ನು ಅಳವಡಿಸಲಾಗಿದೆ. ಈಗಾಗಲೇ ನಗರದ ಐದಾರು ಕಡೆ ಇದೆ ಕಸ ಹಾಕುವ ಸ್ಥಳಗಳನ್ನು ಅಂದಗೊಳಿಸಲಾಗಿದೆ, ಜನರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ ಎಂದು ಹೇಳಿದರು.

## ಬ್ಯಾಂಕ್ ಕ್ಷೇತ್ರದಲ್ಲೂ ಎಐ ತಂತ್ರಜ್ಞಾನ: ಎನ್.ಎಸ್.ಜಯಕುಮಾರ್

• ಉದಯವಾಹಿನಿ, ಗುಬ್ಬಿ

ಸಹಕಾರಿ ಬ್ಯಾಂಕ್ ಮೂಲಕ ಸುಲಭ ಸಾಲ ಸೌಲಭ್ಯ ಲಭ್ಯವಾಗುವುದರಿಂದ ಅನೇಕ ಮಂದಿ ವ್ಯವಸಾಯ, ವ್ಯಾಪಾರ ಮತ್ತು ಉದ್ಯಮ ಸ್ಥಾಪಿಸಿ ಉತ್ತಮ ಜೀವನ ನಿರ್ವಹಿಸಲು ಸಾಧ್ಯವಾಗಿದೆ ಎಂದು ವಾಸವಿ ಪೀಠದ ಪೀಠಾಧ್ಯಕ್ಷ ಸಚ್ಚಿದಾನಂದ ಸರಸ್ವತಿ ಸ್ವಾಮೀಜಿ ತಿಳಿಸಿದರು. ಗುಬ್ಬಿ ಪಟ್ಟಣದಲ್ಲಿ ತುಮಕೂರು ಮರ್ಚೆಂಟ್ಸ್ ಕ್ರೆಡಿಟ್ ಕೋ-ಆಪರೇಟಿವ್ ಬ್ಯಾಂಕ್ ನ 18ನೇ ಶಾಖೆ ಉದ್ಘಾಟಿಸಿದ ಮಾತನಾಡಿದರು.

ಬ್ಯಾಂಕ್‌ನ ಎಲ್ಲಾ ಸದಸ್ಯರ ಸಹಕಾರದಿಂದಾಗಿ ಇತರ ರಾಜ್ಯಗಳಲ್ಲೂ ಶಾಖೆಗಳನ್ನು ತೆರೆಯಲು ಸಾಧ್ಯವಾಗಿದೆ ಎಂದರು.

ಗುಬ್ಬಿಯಂತಹ ಪಟ್ಟಣದಲ್ಲಿ ಬ್ಯಾಂಕ್ ಶಾಖೆ ತೆರೆಯುವ ಮೂಲಕ ವ್ಯಾಪಾರಿಗಳು ಮತ್ತು ಉದ್ಯಮಿಗಳಿಗೆ ಅನುಕೂಲ ಒದಗಿಸಲು ಮುಂದಾಗಿರುವುದು ಸ್ತುತ್ಯರ್ಹ ಬೆಳವಣಿಗೆ ಎಂದು ಸ್ವಾಮೀಜಿ ಅಭಿಪ್ರಾಯಪಟ್ಟರು.

ಬ್ಯಾಂಕ್ ಅಧ್ಯಕ್ಷ ಎನ್.ಎಸ್.ಜಯಕುಮಾರ್, ದೇಶದಲ್ಲೇ ಮೊದಲ ಬಾರಿಗೆ ಬ್ಯಾಂಕಿಂಗ್ ಕ್ಷೇತ್ರದಲ್ಲಿ ಕೃತಕ ಬುದ್ಧಿಮತ್ತೆ ತಂತ್ರಜ್ಞಾನವನ್ನು ಅಳವಡಿಸಲಾಗಿದೆ. ಬ್ಯಾಂಕಿನ ವೆಬ್‌ಸೈಟ್‌ನಲ್ಲಿ ಅಗತ್ಯವಿರುವ ಎಲ್ಲಾ ಮಾಹಿತಿಗಳು ಲಭ್ಯವಿವೆ. ಗ್ರಾಹಕರು ವೆಬ್‌ಸೈಟ್ ಮೂಲಕವೇ ಮಾಹಿತಿ ಪಡೆದು ವ್ಯವಹಾರ ನಡೆಸಲು ಸಾಧ್ಯವಾಗುವಂತೆ ತಂತ್ರಜ್ಞಾನ ರೂಪಿಸಲಾಗಿದ ಎಂದರು. ಶಾಸಕ ಎಸ್.ಆರ್.ಶ್ರೀನಿವಾಸ್ ಮತ್ತು ಜ್ಯೋತಿ ಗಣೇಶ್ ಮಾತನಾಡಿದರು.

ಕಾರ್ಯಕ್ರಮದಲ್ಲಿ ಬ್ಯಾಂಕ್ ನಿರ್ದೇಶಕ ಡಿ.ಎ.ಮೋಹನ್, ಎಂ.ಎಸ್. ನಾಗರಾಜಗುಪ್ತ, ಸಿ.ವಿ.ಸುರೇಶ್, ಉಮಾಶಂಕರ್, ಎಮ್.ಎಸ್. ಶಿವಶಂಕರ್ ಇತರರು ಇದ್ದರು.



ಉದಯವಾಹಿನಿ ಚಿತ್ರ

**ಎಲ್ಲಾರನ್ನೂ ಒಟ್ಟುಗೂಡಿಸಿ ಸಹಕಾರಿ ಬ್ಯಾಂಕ್ ಕಟ್ಟಿ ಬೆಳೆಸುವುದು ಸಾಧಾರಣ ಕಾರ್ಯವಲ್ಲ. ಬ್ಯಾಂಕ್ ಹಣಕಾಸು ವ್ಯವಹಾರ ವೃದ್ಧಿಯಾಗುತ್ತಿರುವಂತೆ ಟಿಎಂಸಿಸಿ ಬ್ಯಾಂಕ್ ವಿವಿಧ ಸಾಮಾಜಿಕ ಕಾರ್ಯಗಳಿಗೆ ಲಾಭಾಂಶ ವಿನಿಯೋಗಿಸುತ್ತಿರುವುದು ಪ್ರಶಂಸನೀಯ ಎಂದರು.**

**-ಮಾಜಿ ಸಚಿವ ಜೆ.ಸಿ.ಮಾಧುಸ್ವಾಮಿ**

## ರೂ. 20,649 ಕೋಟಿ ವೆಚ್ಚ; ಉಸ್ತುವಾರಿ ಸಚಿವ ಜಿ.ಪರಮೇಶ್ವರ

• ಉದಯವಾಹಿನಿ, ತುಮಕೂರು

ಬೆಂಗಳೂರಿನ ಮಾದವರದಿಂದ ತುಮಕೂರುವರೆಗೆ ಮೆಟ್ರೊ ವಿಸ್ತರಿಸಲು ಅಂದಾಜು ರೂ.20,649 ಕೋಟಿ ವೆಚ್ಚ ಆಗಬಹುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಜಿ.ಪರಮೇಶ್ವರ ಇಲ್ಲಿ ಹೇಳಿದರು.ಮೆಟ್ರೊ ವಿಸ್ತರಣೆಗೆ ಸಂಬಂಧಿಸಿದಂತೆ ವಿಸ್ತೃತ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸಲು ಸೆ. 25ರಂದು ಸರ್ಕಾರ ಆದೇಶ ಹೊರಡಿಸಿದೆ. ಬಿಎಂಆರ್‌ಸಿಎಲ್‌ಗೆ ಡಿಪಿಆರ್ ಹೊಣೆ ವಹಿಸಲಾಗಿದೆ. ಇದಕ್ಕಾಗಿ ರೂ.3 ಕೋಟಿ ಖರ್ಚು ಮಾಡಲಾಗುತ್ತಿದೆ. ಆದಷ್ಟು ಶೀಘ್ರ ವರದಿ ಸಲ್ಲಿಕೆಗೆ ಸೂಚಿಸಲಾಗಿದೆ ಎಂದು ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು.

ಬಿಎಂಆರ್‌ಸಿಎಲ್ ವತಿಯಿಂದ ಈಗಾಗಲೇ ಕಾರ್ಯ ಸಾಧ್ಯತಾ ವರದಿ ಸಲ್ಲಿಕೆಯಾಗಿದೆ. ನಗರದ ವರೆಗೆ ಮೆಟ್ರೊ ವಿಸ್ತರಿಸುವ ಯೋಜನೆ ಒಂದೊಂದು ಹಂತ ದಾಟಿಕೊಂಡು ಮುಂದೆ ಸಾಗುತ್ತಿದೆ. ಮೆಟ್ರೊ ನಗರಕ್ಕೆ ಮಾತ್ರ ಸೀಮಿತವಾಗಿದೆ. ಗ್ರಾಮೀಣ ಭಾಗಕ್ಕೆ ವಿಸ್ತರಿಸಲು ಹೊಸ ಕಾನೂನು ರೂಪಿಸಬೇಕು. ಅನೇಕ ನಿಯಮ ಪಾಲಿಸಬೇಕಿದೆ ಎಂದು ಹೇಳಿದರು.

ಸಾರ್ವಜನಿಕ-ಖಾಸಗಿ ಸಹಭಾಗಿತ್ವ (ಪಿಪಿಪಿ) ಮಾದರಿಯಲ್ಲಿ ಮೆಟ್ರೊ ಕಾಮಗಾರಿ ನಡೆಸಲಾಗುತ್ತದೆ. ಡಿಪಿಆರ್ ಸಲ್ಲಿಕೆಯಾದ ನಂತರ ಅನುಮತಿ ಕೋರಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಲಾಗುವುದು ಎಂದು ಹೇಳಿದರು.

**1085 ಕಂದಾಯ ಗ್ರಾಮ:** ಜಿಲ್ಲೆಯಲ್ಲಿ ಹೊಸದಾಗಿ 1085 ಕಂದಾಯ ಗ್ರಾಮ ಗುರುತಿಸಲಾಗಿದೆ. ಈ ವರ್ಷದ ಅಂತ್ಯಕ್ಕೆ 28759 ಕುಟುಂಬಗಳಿಗೆ ಹಕ್ಕುಪತ್ರ ವಿತರಿಸಲಾಗುವುದು ಸಚಿವ ಪರಮೇಶ್ವರ ಹೇಳಿದರು.

ಅ. 15ರಿಂದ ಜಿಲ್ಲೆಯಾದ್ಯಂತ ಇ-ಸ್ವತ್ತು ಅಭಿಯಾನ ಕೈಗೊಳ್ಳಲಾಗುವುದು. ಗ್ರಾಮ ಪಂಚಾಯಿತಿಯಿಂದ ಇ-ಸ್ವತ್ತು ವಿತರಿಸಲಾಗುತ್ತದೆ. ಪ್ರತಿ ತಾಲ್ಲೂಕಿಗೆ 25 ಸಾವಿರದಂತೆ ಜಿಲ್ಲೆಯಲ್ಲಿ 2.50 ಲಕ್ಷ ಇ-ಸ್ವತ್ತು ಸೃಜನೆಯ ಗುರಿ ನಿಗದಿ ಪಡಿಸಲಾಗಿದೆ. ಈಗಾಗಲೇ 3.25 ಲಕ್ಷ ಇ-ಸ್ವತ್ತು ಸೃಜನೆ ಮಾಡಲಾಗಿದೆ ಎಂದರು.



ಉದಯವಾಹಿನಿ ಚಿತ್ರ

**ನಗರದಲ್ಲಿ ಹೊಸದಾಗಿ 13 ಸರ್ಕಾರಿ ಹಾಸ್ಟೆಲ್ ನಿರ್ಮಿಸಲಾಗುತ್ತಿದೆ. ಈಗಿರುವ 58 ಹಾಸ್ಟೆಲ್‌ಗಳಲ್ಲಿ 1150 ವಿದ್ಯಾರ್ಥಿಗಳು ಪ್ರವೇಶ ಪಡೆದಿದ್ದಾರೆ**

**ಜಿ.ಪರಮೇಶ್ವರ ಜಿಲ್ಲಾ ಉಸ್ತುವಾರಿ ಸಚಿವ**

## ಆಯುಧ ಪೂಜೆ: ದುಬಾರಿಯಾಗದ ಹೂ

• ಉದಯವಾಹಿನಿ, ತುಮಕೂರು

ದಸರಾ ಹಬ್ಬ, ಆಯುಧ ಪೂಜೆ ಆಚರಣೆಗೆ ಜನ ಸಿದ್ಧತೆ ಮಾಡಿಕೊಳ್ಳುತ್ತಿದ್ದು, ಮಾರುಕಟ್ಟೆಯಲ್ಲಿ ಹೂವಿನ ಬೆಲೆಯಲ್ಲಿ ಹೆಚ್ಚಿನ ವ್ಯತ್ಯಾಸ ಕಾಣುತ್ತಿಲ್ಲ.ದಸರಾ ಹಬ್ಬದ ಸಮಯದಲ್ಲಿ ಹೂವಿನ ಧಾರಣೆ ಗಗನ ಮುಟ್ಟುತ್ತಿತ್ತು. ಆದರೆ ಈ ಬಾರಿ ಅಂತಹ ವಾತಾವರಣ ಕಂಡು ಬರುತ್ತಿಲ್ಲ.

ಅಂತರಸನಹಳ್ಳಿ ಮಾರುಕಟ್ಟೆಯಲ್ಲಿ ಎಂದಿನ ದರದಲ್ಲಿಯೇ ಹೂವು ಮಾರಾಟ ನಡೆಯಿತು. ಗುಲಾಬಿ ಕೆ.ಜಿ ರೂ. 350ರಿಂದ ರೂ. 400 ಇತ್ತು. ಬಿಡಿ ಸೇವಂತಿಗೆ ಕೆ.ಜಿ ರೂ. 100-ರೂ. 120, ಚೆಂಡು ಹೂವು ಕೆ.ಜಿ ರೂ. 400, ಮಲ್ಲಿಗೆ ಕೆ.ಜಿ ರೂ. 1 ಸಾವಿರ, ಕನಕಾಂಬರ ಕೆ.ಜಿ ರೂ. 800ರಿಂದ ರೂ. 900ಕ್ಕೆ ಮಾರಾಟವಾಯಿತು.



ಕೆ.ಜಿ ಬೂದು ಕುಂಬಳಕಾಯಿ ರೂ. 20-ರೂ. 30, ಜೋಡಿ ಬಾಳೆ ಕಂದು ರೂ. 30-40ಕ್ಕೆ ಸಿಗುತಿತ್ತು. ಸೋಮವಾರ ಸಂಜೆ ವೇಳೆಗೆ ಮಾರುಕಟ್ಟೆಯಲ್ಲಿ ಜನ ಸಂದಣಿ ಹೆಚ್ಚಿತ್ತು. ಮಂಗಳವಾರ ಮತ್ತಷ್ಟು ದಟ್ಟಣೆಯಾಗಲಿದೆ. ಹಬ್ಬ ಹತ್ತಿರವಾಗುತ್ತಿದ್ದಂತೆ ಬೆಲೆ ಹೆಚ್ಚಾಗಬಹುದು ಎಂಬುದನ್ನು ಅರಿತವರು ಮುಂಚೆಯೇ ಅಗತ್ಯ ಸಾಮಗ್ರಿ ಖರೀದಿಸಿದರು.

## ಆಹಾರಕ್ಕೆ ಕೃತಕ ಬಣ್ಣ; ಅಧಿಕಾರಿಗಳ

• ಉದಯವಾಹಿನಿ, ಚೇಳೂರು

ತಾಲ್ಲೂಕಿನಾದ್ಯಂತ ಚೇಳೂರು ಪಟ್ಟಣ ಸೇರಿದಂತೆ, ಚಾಕವೇಲು, ಚಿಲಕಲನೇರ್ಪು, ನಲ್ಲಗುಟ್ಲಪಲ್ಲಿ, ಏನಿಗದಲೆ, ಬುರುಡಗುಂಟೆ ಸೋಮನಾಥಪುರಗಳಲ್ಲಿರುವ ಬೇಕರಿಗಳು, ಹೋಟೆಲ್‌ಗಳು, ಕಬಾಬ್ ಅಂಗಡಿಗಳು ಬಣ್ಣ ಬಣ್ಣದ ಆಹಾರ ಪದಾರ್ಥಗಳ ಮೂಲಕ ಸಾರ್ವಜನಿಕರ ಆರೋಗ್ಯದೊಂದಿಗೆ ಅಪಾಯಕಾರಿ ಆಟವಾಡುತ್ತಿರುವ ಗಂಭೀರ ಆರೋಪಗಳು ಕೇಳಿಬಂದಿವೆ.

ಆಹಾರ ಸುರಕ್ಷತಾ ನಿಯಮಗಳನ್ನು ಗಾಳಿಗೆ ತೂರಿ ನಿಷಿದ್ಧ ಕೃತಕ ಬಣ್ಣ ಯಥೇಚ್ಛವಾಗಿ ಬಳಸಲಾಗುತ್ತಿದ್ದರೂ, ಆಹಾರ ಸುರಕ್ಷತಾ ಅಧಿಕಾರಿಗಳು ಯಾವುದೇ ಕ್ರಮಕ್ಕೆ ಮುಂದಾಗದಿರುವುದು ವ್ಯಾಪಕ ಆಕ್ರೋಶಕ್ಕೆ ಕಾರಣವಾಗಿದೆ.

ಸರ್ಕಾರವು ಸ್ಪಷ್ಟವಾಗಿ ಆಹಾರ ಪದಾರ್ಥಗಳಿಗೆ ಬಣ್ಣ ಬೆರಕೆ ಮಾಡುವುದನ್ನು ನಿಷೇಧಿಸಿದೆ. ಆದಾಗ್ಯೂ, ತಾಲ್ಲೂಕಿನಾದ್ಯಂತ ವ್ಯಾಪಾರಿಗಳು, ಮುಖ್ಯ ರಸ್ತೆಗಳ ಪಕ್ಕದಲ್ಲೇ ತಮ್ಮ ಆಹಾರ ಪದಾರ್ಥಗಳನ್ನು ಸಾರ್ವಜನಿಕರಿಗೆ ಆಕರ್ಷಕವಾಗಿ ಕಾಣುವಂತೆ ಮಾಡಲು ಹೆಚ್ಚುವರಿ ಬಣ್ಣಗಳನ್ನು ಬಳಸುತ್ತಿದ್ದಾರೆ.

# ಟೌನ್ ಶಿಪ್ ಹೆಸರಿನಲ್ಲಿ ಭೂ ದಂಧೆ: ಡಿಕೆಶಿ ವಿರುದ್ಧ ವಾಗ್ದಾಳಿ ನಡೆಸಿದ ಹೆಚ್‌ಡಿಕೆ

### ಕರ್ನಾಟಕದ ಸಂಪತ್ತು ಲೂಟಿ ಹೊಡೆಯುವುದನ್ನು ತಡೆಯಲು 5 ವರ್ಷ ಜನ ಅಧಿಕಾರ ಕೊಡಬೇಕು, ಆಗ ನನ್ನ ಶಕ್ತಿ ಏನೆಂದು ತೋರಿಸುತ್ತೇನೆ

• ಉದಯವಾಹಿನಿ, ಬಿಡದಿ

ಟೌನ್ ಶಿಪ್ ಹೆಸರಿನಲ್ಲಿ ಏನೆಲ್ಲಾ ದಂಧೆ ನಡೆಯುತ್ತಿದೆ ಎನ್ನುವುದು ಗೊತ್ತಿದೆ. ಬಡರೈತರಿಂದ ಭೂಮಿ ಕಿತ್ತುಕೊಂಡು ಬೇಕು ಬೇಕಾದವರಿಗೆ ಹಂಚಿಕೊಳ್ಳಲು ಹೊರಟಿದ್ದಾರೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ನೇರ ಆರೋಪ ಮಾಡಿದರು.

ನವದೆಹಲಿಯಲ್ಲಿ ತಮ್ಮ ಗೃಹ ಕಚೇರಿಯಲ್ಲಿ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಸಚಿವರು; ಈಗಾಗಲೇ 2-3 ಸಾವಿರ ಎಕರೆ ಭೂಮಿ ಏನೇನ್ ಆಗಿದೆ ಅಂಥ ಗೊತ್ತು. ಕರ್ನಾಟಕದ ಸಂಪತ್ತು ಲೂಟಿ ಹೊಡೆಯುವುದನ್ನು ತಡೆಯಲು ಐದು ವರ್ಷ ಜನ ಅಧಿಕಾರ ಕೊಡಬೇಕು. ಆಗ ನನ್ನ ಶಕ್ತಿ ಏನೆಂದು ತೋರಿಸುತ್ತೇನೆ. ಇಲ್ಲವಾದರೆ ಈಗಿರುವ ವ್ಯವಸ್ಥೆಯಲ್ಲಿ ನಿಮ್ಮ ಕರ್ಮಗಳನ್ನು ತೊಳೆಯಲು ಸಾಧ್ಯವಿಲ್ಲ ಎಂದು ಹೇಳಿದರು.

2006ರಲ್ಲಿ ನಾನು ಐದು ಟೌನ್ ಶಿಪ್ ಮಾಡುವ ನಿರ್ಧಾರ ಮಾಡಿದ್ದು ನಿಜ. ಬಿಡದಿಯ ಬಳಿ ಟೌನ್ ಶಿಫ್ ಮಾಡುವುದು ನನ್ನ ಕಾರ್ಯಕ್ರಮವೇ ಆಗಿತ್ತು. ಡಿಕೆಶಿ ಅವರನ್ನೇ ಕೇಳಬಯಿಸುತ್ತೇನೆ. ಆ ಯೋಜನೆ ವಿರುದ್ಧ ಕಾಂಗ್ರೆಸ್ ನಾಯಕರೇ ಆಗಿದ್ದ ಹೆಚ್.ಡಿ. ಪಾಟೀಲ್, ಉಗ್ರಪ್ಪ ಅವರ ನೇತೃತ್ವದಲ್ಲಿ ರಚನೆ ಮಾಡಿದ್ದ ಸತ್ಯಶೋಧನಾ ಸಮಿತಿಯ ವರದಿಯನ್ನು ತೆರೆದು ನೋಡಿ ನೀವು. ಆ ವರದಿಯಲ್ಲಿ ಏನೇನು ಇದೆ ಎಂಬದನ್ನು ಜನರ ಮುಂದೆ ಇಡಿ. ನನ್ನ ಮೇಲೆ ಆರೋಪ ಮಾಡಿದ್ರಲ್ಲಾ, ಈಗ ಏನು ಮಾಡುತ್ತಿದ್ದೀರಿ ಎಂದು ಪ್ರಶ್ನಿಸಿದರು.

ಕುಮಾರಸ್ವಾಮಿ ಕನಸಿನ ಯೋಜನೆಯನ್ನು ಜಾರಿಗೆ ತರುತ್ತಿದ್ದಾರಂತೆ! ಯಾರಿಗೋ ಒಬ್ಬರಿಗೆ ಐನೂರು ಎಕರೆ, ಇನ್ನೊಬ್ಬನಿಗೆ ಇನ್ನೂರು ಎಕರೆ, ಮತ್ತೊಬ್ಬನಿಗೆ ಮುನ್ನೂರು ಎಕರೆ.. ಹೀಗೆ ತಮಗೆ ಬೇಕಿದ್ದವರಿಗೆ ಹಂಚಿಕೊಂಡು ಹೋಗುತ್ತಿದ್ದಾರೆ. ಇದು ಜನರ ಜಮೀನು, ನಿಮ್ಮ ಸಂಪಾದನೆಯದ್ದಲ್ಲ ಎಂಬುದನ್ನು ಮರೆಯಬೇಡಿ. ನಿಮ್ಮ ಸರಕಾರ ಇನ್ನು ಎರಡು ವರ್ಷ ಇರುತ್ತೆ. ಆ ಎರಡು ವರ್ಷದಲ್ಲಿ ಈ ಯೋಜನೆಯನ್ನು ಮಾಡುತ್ತೀರಾ? ಎಂದು ಕೇಂದ್ರ ಸಚಿವರು ಡಿಕೆಶಿಯನ್ನು ಕೇಳಿದರು.

ಯೋಜನೆ ಮಾಡುವ ಮುನ್ನ ನಾನು ರೈತರ ಜತೆ ನಾಲ್ಕು ಸಭೆಗಳನ್ನು ಮಾಡಿದೆ. ಕೃಷ್ಣಾ ಕಚೇರಿಗೆ ಕರೆಸಿ ಸಭೆ ಮಾಡಿದೆ. ಮಹಿಳೆಯರೇ ಹೆಚ್ಚಿನ ಸಂಖ್ಯೆಯಲ್ಲಿ ಸಭೆಗಳಿಗೆ ಬಂದಿದ್ದರು. ನಾನು ಒಂದು ಇಂಚು ಭೂಮಿಯನ್ನು ಸ್ವಾಧೀನ ಮಾಡಿರಲಿಲ್ಲ. ದಾಖಲೆಗಳು ಇವೆ, ತೆಗೆದು ನೋಡಲಿ ಎಂದು ತಿರುಗೇಟು ಕೊಟ್ಟರು.

ಬೆಂಗಳೂರಿನ 59 ರಸ್ತೆಗಳನ್ನು ಅಭಿವೃದ್ಧಿ ಮಾಡಿದ್ದು ನಾನು. ನಾನು ಪ್ರಚಾರ ತೆಗೆದುಕೊಳ್ಳಲಿಲ್ಲ.

ಈಗ ಕುಣಿಗಲ್ ಅನ್ನು ಬೆಂಗಳೂರಿಗೆ ಸೇರಿಸುವ ಪ್ರಯತ್ನ ಮಾಡುತ್ತಿದ್ದಾರೆ. ಇವರಿಗೆ ಬಿಟ್ಟರೇ ಮಂಗಳೂರನ್ನು ಬೆಂಗಳೂರಿಗೆ ಸೇರಿಸುತ್ತಾರೆ! ಕುಣಿಗಲ್ ನಲ್ಲಿ ಈತನ ಭಾವಮೈದನಿಗೆ ಅನುಕೂಲ ಮಾಡಲು ಅದನ್ನೂ ಮಾಡುತ್ತಿದ್ದಾರೆ ಎಂದು ಸಚಿವರು ಕುಟುಕಿದರು. ಕೆಂಪೇಗೌಡರು ಕಟ್ಟಿದ ಬೆಂಗಳೂರು ನಗರ ಈಗ ಸಮಾಜಘಾತುಕ ಶಕ್ತಿಗಳು, ಕಳ್ಳಕಾಕರು, ಭೂಗಳ್ಳರ ಕೈಗೆ ಸಿಕ್ಕಿ ನರಳುತ್ತಿದೆ. ಸಂಪದ್ಭರಿತ ನಗರವನ್ನು ಬರ್ಬಾದ್ ಮಾಡುವ ಕೆಲಸ ಆಗುತ್ತಿದೆ ಎಂದು ಅವರು ದೂರಿದರು.



ಉದಯವಾಹಿನಿ ಚಿತ್ರ

**ನಾನು 60,000 ಕೋಟಿ ವೆಚ್ಚದಲ್ಲಿ ಈ ಯೋಜನೆಯನ್ನು ಜಾರಿ ಮಾಡಲು ಹೊರಟಿದ್ದೆ. ಕೇಂದ್ರದ ಆರ್ಥಿಕ ವ್ಯವಹಾರಗಳ ಸಮಿತಿಯಿಂದಲೂ ಅನುಮೋದನೆ ಪಡೆದಿದ್ದೆ. ನನ್ನ ಸರಕಾರ ಹೋದ ಮೇಲೆ ಅದು ಅಲ್ಲಿಗೇ ನಿಂತು ಹೋಯಿತು. ಒಂದು ಇಂಚು ಭೂಮಿಯನ್ನು ನಾನು ಸ್ವಾಧೀನ ಮಾಡಿ ಕೊಳ್ಳಲಿಲ್ಲ ಎಂದು ಅವರು ಹೇಳಿದರು.**

**ಈ ವ್ಯಕ್ತಿ ಎದೆ ಮುಟ್ಟಿಕೊಂಡು ಹೇಳಲಿ, ಎಷ್ಟು ಜನರ ಮನೆ ಹಾಳು ಮಾಡಿದ್ದಾರೆ ಎಂದು. ಶಾಂತಿ ನಗರ ಹೌಸಿಂಗ್ ಸೊಸೈಟಿ ಪ್ರಕರಣವನ್ನೇ ನೋಡಿ, ದಲಿತರಿಗೆ ಮನೆ ಮಾಡಿಕೊಡಲು ಮಾಡಿದ್ದ ಸೊಸೈಟಿ ಅದು. ರಾಮಕೃಷ್ಣ ಹೆಗಡೆ ಅವರ ಕಾಲದಲ್ಲು 70-80 ಎಕರೆ ಜಮೀನು ಕೊಟ್ಟು ದಲಿತರಿಗೆ ಸೈಟು ಕೊಡಿ ಎಂದು ಹೇಳಿದ್ದರು. ಕೊನೆಗೆ ಅದನ್ನು ಏನು ಮಾಡಿದರು ಎನ್ನುವುದು ಗೊತ್ತಿದೆ. ನೈಜ ಸೊಸೈಟಿಗೆ ಘೋರಿ ತೋಡಿ ವಿಜಯಪುರದಿಂದ ಯಾವುದೋ ತರಕಾರಿ ಸೊಸೈಟಿ ತಂದು ನಕಲಿಯನ್ನು ಅಸಲಿ ಮಾಡಿಕೊಂಡಿದ್ದು ಗೊತ್ತಿದೆ. ಹಾಗೆಯೇ ಇನ್ನೊಂದು ಸೊಸೈಟಿಗೆ ನಕಲಿ ವ್ಯಕ್ತಿಗಳನ್ನು ಸೃಷ್ಟಿಸಿ ಭೂಮಿ ಹೊಡೆದರು. ಎಲ್ಲಾದರ ಬಗ್ಗೆ ನನ್ನ ಬಳಿ ಎಲ್ಲಾ ದಾಖಲೆಗಳೂ ಇವೆ ಎಂದು ನೇರ ವಾಗ್ದಾಳಿ ನಡೆಸಿದರು.**

ಅಂತರಾಳದಿಂದ.. EDITORIAL

# ಗೆಲುವನ್ನು ಮಂಕಾಗಿಸಿದ ನಡವಳಿಕೆ: ಕ್ರಿಕೆಟನ್ನು ಸೋಲಿಸಿದ ರಾಜಕಾರಣ

ಏಷ್ಯಾ ಕಪ್ ಕ್ರಿಕೆಟ್ ಪಂದ್ಯಾವಳಿಯ ಅಂತಿಮ ಪಂದ್ಯದಲ್ಲಿ ಪಾಕಿಸ್ತಾನದ ವಿರುದ್ಧ ಗೆಲುವು ಸಾಧಿಸಿದ ಭಾರತದ ಆಟಗಾರರ ಸಾಧನೆ ಕ್ರೀಡಾಪ್ರಿಯರ ಸಹಜ ಸಂಭ್ರಮಕ್ಕೆ ಕಾರಣವಾಗಬೇಕಿತ್ತು. ಆದರೆ, ಉಭಯ ದೇಶಗಳ ನಡುವಣ ಸಂಘರ್ಷವನ್ನು ಆಟಗಾರರು ಕ್ರೀಡಾಂಗಣಕ್ಕೆ ತರುವ ಮೂಲಕ 'ಸಜ್ಜನರ ಆಟ' ಎಂದು ಹೆಸರಾದ ಕ್ರಿಕೆಟ್‌ನ ಘನತೆಗೆ ಹಾಗೂ ಕ್ರೀಡಾಸ್ಫೂರ್ತಿಗೆ ಮಸಿ ಬಳಿದಿದ್ದಾರೆ. ಆಟದಲ್ಲಿ ಗೆಲುವು ಸಾಧಿಸಿದರೂ, ಕ್ರೀಡಾಸ್ಫೂರ್ತಿ ನೇಪಥ್ಯಕ್ಕೆ ಸರಿದಿರುವುದು, 'ಶಸ್ತ್ರಚಿಕಿತ್ಸೆ ಯಶಸ್ವಿ, ರೋಗಿಯ ಸಾವು' ಎನ್ನುವ ಮಾತನ್ನು ನೆನಪಿಸುವಂತಿದೆ. ಪಂದ್ಯಾವಳಿಯ ಆರಂಭದಿಂದಲೂ ಕ್ರೀಡಾಸ್ಫೂರ್ತಿಗೆ ವಿರುದ್ಧವಾದ ನಡವಳಿಕೆಯನ್ನು ಎರಡೂ ತಂಡಗಳ ಆಟಗಾರರು ಪೈಪೋಟಿಗೆ ಬಿದ್ದವರಂತೆ ಪ್ರದರ್ಶಿಸಿದ್ದಾರೆ. ಪಾಕಿಸ್ತಾನದ ಬ್ಯಾಟ್ಸ್‌ಮನ್ ಸಾಹಿಬ್‌ಜಾದಾ ಫರ್ಹಾನ್ ಸೂಪರ್ ಫೋರ್ ಹಂತದ ಪಂದ್ಯದಲ್ಲಿ ಬ್ಯಾಟನ್ನು ಎಕೆ-47 ರೀತಿಯಲ್ಲಿ ಹಿಡಿದು ಗುಂಡಿನ ಮೊರೆತಗೈಯುವಂತಹ ಸಂಜ್ಞೆ ಮಾಡಿದರು. ಮತ್ತೊಬ್ಬ ಆಟಗಾರ ಹ್ಯಾರಿಸ್ ರವೂಫ್, ಆರು, ಸೊನ್ನೆ' ಎಂದು ಬೆರಳುಗಳಿಂದ ಇಶಾರೆ ಮಾಡಿದರು.



ಅವರ ಇಶಾರೆ, ಆಪರೇಷನ್ ಸಿಂಧೂರ ಸಂಘರ್ಷದಲ್ಲಿ ಭಾರತದ ಆರು ವಿಮಾನಗಳನ್ನು ನಾಶಗೊಳಿಸಿದ್ದೇವೆ ಎನ್ನುವ ಪಾಕಿಸ್ತಾನದ ಹೇಳಿಕೆಯನ್ನು ಸೂಚಿಸುವಂತಿತ್ತು. ಇದೇ ರವೂಫ್ ಫೈನಲ್‌ನಲ್ಲಿ ಔಟಾದಾಗ ಭಾರತದ ಜಸ್‌ಪ್ರೀತ್ ಬೂಮ್ರಾ ವಿಮಾನ ಪತನದ ಚಿಹ್ನೆಯನ್ನು ಬೆರಳುಗಳಿಂದ ಪ್ರದರ್ಶಿಸಿದರು. ಆಟದ ಮೂಲಕ ಗಮನಸೆಳೆಯಬೇಕಾದ ಆಟಗಾರರು ಚೇಷ್ಟೆಗಳ ಮೂಲಕ ಸುದ್ದಿಯಾಗುವುದು ದುರದೃಷ್ಟಕರ.

> **ಆಟದ ಹೊರತಾದ ಕಾರಣ ಗಳಿಂದಾಗಿ ಕ್ರಿಕೆಟಿಗರು ಸುದ್ದಿಯಲ್ಲಿ ಇರುವುದು ಆಯಾ ದೇಶಗಳ ಸರ್ಕಾರ ಗಳಿಗೆ ಕಳವಳ ಹುಟ್ಟಿಸಬೇಕಾಗಿತ್ತು. ಆದರೆ, ಆಟಗಾರರ ಮುಖವಾಡ ತೊಟ್ಟು ರಾಜಕೀಯ ಮುಖಂಡರೇ ಕ್ರೀಡಾಂಗಣದಲ್ಲಿ ಕಾಣಿಸಿಕೊಂಡಿರುವಂತಿದೆ. ವಿಷಾದದ ಸಂಗತಿಯೆಂದರೆ, ಆಟಗಾರರ ವರ್ತನೆಯನ್ನು ಪ್ರಧಾನಿ ನರೇಂದ್ರ ಮೋದಿ ಅವರೂ ಸಮರ್ಥಿಸಿ ಕೊಂಡಿದ್ದಾರೆ. ಆಟಗಾರರನ್ನು ಅಭಿನಂದಿಸಿರುವ ಅವರು, 'ಅಪರೇಷನ್ ಸಿಂಧೂರ' ಮೈದಾನದಲ್ಲೂ ಮುಂದು ವರಿದಿದೆ; ಭಾರತದ ಗೆಲುವಿನ ಮೂಲಕ ಫಲಿತಾಂಶ ಪುನರಾವರ್ತನೆಗೊಂಡಿದೆ ಎಂದು ಹೇಳಿದ್ದಾರೆ.**

ಜಸ್‌ಪ್ರೀತ್ ಬೂಮ್ರಾ ಅವರ ಅನುಚಿತ ವರ್ತನೆ ಕೇಂದ್ರ ಸಚಿವ ಕಿರಣ್ ರಿಜಿಜು ಅವರಿಗೆ ಪಾಕಿಸ್ತಾನಕ್ಕಾದ ಶಿಕ್ಷೆಯ ರೂಪದಲ್ಲಿ ಕಾಣಿಸಿದೆ. ಪ್ರಧಾನಿ, ಸಚಿವರ ಅಭಿಪ್ರಾಯಗಳು, ಆಟದ ಜೊತೆಗೆ ರಾಜಕಾರಣವನ್ನು ಬೆರೆಸುವ ಪ್ರಯತ್ನದಂತಿವೆ. ಸಂಘರ್ಷದ ಸಂದರ್ಭದಲ್ಲಿ ಪಾಕಿಸ್ತಾನದೊಂದಿಗೆ ಯಾವ ರೀತಿಯ ಸಂಬಂಧವೂ ಬೇಡ ಎನ್ನುವುದು ಕೇಂದ್ರ ಸರ್ಕಾರದ ಅಭಿಪ್ರಾಯವಾಗಿದ್ದಲ್ಲಿ, ಏಷ್ಯಾ ಕಪ್ ಪಂದ್ಯಾವಳಿಯಲ್ಲಿ ಭಾಗವಹಿಸದಿರುವಂತೆ ಬಿಸಿಸಿಐಗೆ ಸೂಚಿಸಬಹುದಿತ್ತು. ಆಡಲು ಅವಕಾಶ ಕಲ್ಪಿಸಿಕೊಟ್ಟ ಮೇಲೆ ಆಟದ ಚೌಕಟ್ಟಿಗೆ ಬದ್ಧವಾಗಿರುವುದು ಹಾಗೂ ಕ್ರೀಡಾ ಸ್ಫೂರ್ತಿಯಿಂದ ವರ್ತಿಸು ವುದು ಅಗತ್ಯ. ಪಾಕಿಸ್ತಾನದ ಸಚಿವರಾದ ಮೊಹಿನ್ ನಕ್ವಿ ಅವರು ಅಧ್ಯಕ್ಷರಾಗಿರುವ ಏಷ್ಯಾ ಕ್ರಿಕೆಟ್ ಕೌನ್ಸಿಲ್ ಆಯೋಜಿಸಿರುವ ಟೂರ್ನಿಯಲ್ಲಿ ಭಾಗವಹಿಸಲು ಒಪ್ಪಿದ ಕ್ಷಣವೇ, ಅವರೊಂದಿಗೆ ತಾಂತ್ರಿಕವಾಗಿ ಹಸ್ತಲಾಘವ ಮಾಡಿದಂತಾಗಿದೆ. ನಂತರದ ನಡವಳಿಕೆಗಳು ಅಪ್ರಬುದ್ಧವಾಗಿವೆ. ಮೊಹಿನ್ ನಕ್ವಿ ಅವರಿಂದ ಟ್ರೋಫಿ ಪಡೆಯಲು ನಿರಾಕರಿಸಿರುವ ಭಾರತ ತಂಡದ ನಿರ್ಧಾರವೂ ಆಟದ ಅಂಗಳದಲ್ಲಿ ರಾಜಕೀಯದ ಜಿದ್ದನ್ನು ಪ್ರದರ್ಶಿಸುವ ಹಾಗೂ ಕ್ರೀಡೆಯ ಉತ್ಸಾಹವನ್ನು ಕುಗ್ಗಿಸುವ ನಡವಳಿಕೆಯಾಗಿದೆ. ಕ್ರಿಕೆಟ್ ಪಂದ್ಯದ ಗೆಲುವನ್ನು ಆಪರೇಷನ್ ಸಿಂಧೂರದ ಜೊತೆಗೆ ಸಮೀಕರಿಸಿರುವ ಮೋದಿ ಅವರ ಮಾತಿಗೆ, ಕ್ರೀಡೆಯಲ್ಲಿ ಯುದ್ಧವನ್ನು ಎಳೆದುತರುವುದು ನಿಮ್ಮ ಹತಾಶೆಯನ್ನು ಬಹಿರಂಗಪಡಿಸುತ್ತದೆ ಎಂದು ಮೊಹಿನ್ ಪ್ರತಿಕ್ರಿಯಿಸಿದ್ದಾರೆ. ಯುದ್ಧವು ನಿಮ್ಮ ಹೆಮ್ಮೆಯ ಸಂಕೇತವಾಗಿದ್ದರೆ, ಪಾಕಿಸ್ತಾನದಿಂದ ನೀವು ಅನುಭವಿಸಿದ ಅವಮಾನಕರ ಸೋಲುಗಳನ್ನು ಇತಿಹಾಸವು ಈಗಾಗಲೇ ದಾಖಲಿಸಿದೆ ಎಂದೂ ಹೇಳಿದ್ದಾರೆ. ಮೊಕ್ಸಿನ್ ಅವರ ಪ್ರತಿಕ್ರಿಯೆಯಲ್ಲೂ ಹತಾಶೆಯಿದೆ. ಕ್ರೀಡೆಯೊಂದಿಗೆ ರಾಜಕಾರಣವನ್ನು ತಳಕು ಹಾಕುವ ಪ್ರಯತ್ನವಿದೆ. ತಮ್ಮ ತಂಡದ ಆಟಗಾರರ ಅನುಚಿತ ವರ್ತನೆಯನ್ನು ಖಂಡಿಸದೆ, ಎದುರಾಳಿ ತಂಡದ ತಪ್ಪುಗಳ ಬಗ್ಗೆ ಮಾತನಾಡುವುದೂ ಕೆಟ್ಟ ಮಾದರಿಯ ರಾಜಕಾರಣವೇ ಆಗಿದೆ. ಭಾರತದ ಆಟಗಾರರು ಆಟದ ಘನತೆಗೆ ಧಕ್ಕೆಯಾಗದ ರೀತಿಯಲ್ಲಿ ತಮ್ಮ ಪ್ರತಿಭಟನೆಯನ್ನು ಪರಿಣಾಮಕಾರಿಯಾಗಿ ವ್ಯಕ್ತಪಡಿಸಬಹುದಿತ್ತು. ಟ್ರೋಫಿ ನಿರಾಕರಣೆಗಿಂತಲೂ, ಟ್ರೋಫಿಯನ್ನು ಪಡೆದ ನಂತರದ ಸಂದರ್ಶನಗಳಲ್ಲಿ ತಮ್ಮ ಪ್ರತಿಭಟನೆಯನ್ನು ದಾಖಲಿಸ ಬಹುದಾಗಿತ್ತು. ಕಪ್ಪು ಪಟ್ಟಿ ಧರಿಸಿ ಆಡುವ ಮೂಲಕ ವಿಶ್ವಕ್ಕೆ ತಮ್ಮ ಭಾವನೆಗಳನ್ನು ವ್ಯಕ್ತಪಡಿಸಬಹುದಿತ್ತು. ಈ ಮೂಲಕ ಆಟದ ಗೆಲುವಿನೊಂದಿಗೆ ಕ್ರೀಡಾ ಸ್ಫೂರ್ತಿಯೂ ಉಳಿದಂತಾಗಿ, ಭಾರತದ ಆಟಗಾರರ ಪ್ರತಿಭಟನೆ ವಿಶ್ವದ ಗಮನಸೆಳೆಯುತ್ತಿತ್ತು. ಘನತೆಯಿಂದ ಪ್ರತಿಭಟಿಸುವ ಅವಕಾಶಗಳನ್ನು ಕೈಬಿಟ್ಟು, ಭಾರತದ ಕ್ರಿಕೆಟಿಗರು ಬಾಲಿಶವಾಗಿ ವರ್ತಿಸಿದ್ದಾರೆ: ಆಟಗಾರರೆನ್ನುವುದನ್ನು ಮರೆತು ಅಣಕು ಕಲಾವಿದರಂತೆ ವರ್ತಿಸಿದ್ದಾರೆ. ಈ ಹುಚ್ಚಾಟ ಕ್ರೀಡಾ ಇತಿಹಾಸದಲ್ಲಿ ಕೆಟ್ಟ ಮಾದರಿಯಾಗಿ ಉಳಿಯಲಿದೆ. ಆಟ ಮುಗಿದ ನಂತರ ಚಾಂಪಿಯನ್‌ಗಳು ಮಾತ್ರ ನೆನಪಿನಲ್ಲಿ ಉಳಿಯುತ್ತಾರೆ, ಟ್ರೋಫಿಯ ಚಿತ್ರವಲ್ಲ ಎಂಬ ಭಾರತ ತಂಡವನ್ನು ಮುನ್ನಡೆಸಿದ ಸೂರ್ಯ ಕುಮಾರ್ ಯಾದವ್ ಹೇಳಿಕೆಯೂ ಅಸಂಬದ್ಧವಾದುದು. ಜನರ ಮನಸ್ಸಿನಲ್ಲಿ ಉಳಿಯಲಿಕ್ಕೆ ಗೆಲುವಿನ ಜೊತೆಗೆ ನೈತಿಕ ನಡವಳಿಕೆಯೂ ಮುಖ್ಯ.

# ಸಮಾಜ ಸುಧಾರಕರಲ್ಲಿ ಒಬ್ಬರಾದ ಡಾ: ಅನಿಬೆಸೆಂಟ್ ರವರ 178ನೇ ವರ್ಷದ ಜನ್ಮದಿನಾಚರಣೆ



ಕಲಾ ಸಾಹಿತ್ಯ
ಕೃಷ್ಣಪ್ಪ ಲೇಖಕರು
ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು

■ ಉದಯವಾಹಿನಿ, ವಿಶೇಷ

ಡಾಟಟ ಆನಿಬೆಸೆಂಟ್ ರವರು 1847 ಅ. 01 ರಂದು ಲಂಡನ್‌ನಲ್ಲಿ ಜನಿಸಿದರು. ತಂದೆ ವಿಲಿಯಂವುಡ್ ಅವರು ಕ್ರೈಸ್ತ ಪಾದ್ರಿ ಆಗಿದ್ದರು. ಮಗಳಾದ ಅನಿಬೆಸೆಂಟ್ ರವರು ವಿವಾಹವಾದರೂ ಸಹ ಕೆಲವೇ ವರ್ಷಗಳಲ್ಲಿ ವಿವಾಹ ವಿಚ್ಛೇದನದಲ್ಲಿ ಅಂತ್ಯಗೊಂಡಿತು.

ಡಾ: ಆನಿಬೆಸೆಂಟ್ ರವರು ಭಾರತಕ್ಕೆ ಬರುವುದಕ್ಕೆ ಮೊದಲು ಇಂಗ್ಲೆಂಡ್‌ನಲ್ಲಿ ಸಮಾಜ ಸುಧಾರಕರೆಂದು,ಉತ್ತಮ ವಾಗ್ಮಿಯೆಂದು,ಲೇಖಕಿ ಎಂದು ಪ್ರಸಿದ್ಧರಾಗಿದ್ದರು. ಆನಿಬೆಸೆಂಟ್ 1893ರಲ್ಲಿ ಭಾರತಕ್ಕೆ ಬಂದರು. ಅವರು 1895 ರಿಂದ 1907 ರವರೆಗೆ ಕಾಶಿಯಲ್ಲಿ ವಾಸವಾಗಿದ್ದರು. ಅಲ್ಲಿ ಅವರು ಕೇಂದ್ರೀಯ ಹಿಂದೂ ಶಾಲೆಯನ್ನು ಸ್ಥಾಪಿಸಿದರು.ಮುಂದೆ ಪಂಡಿತ ಮದನ ಮೋಹನ ಮಾಳವೀಯರ ಪ್ರಯತ್ನದ ಫಲವಾಗಿ ವಿಖ್ಯಾತಿ ಕಾಶಿ ಹಿಂದೂ ವಿಶ್ವವಿದ್ಯಾಲಯವಾಗಿ ರೂಪಗೊಂಡಿತು.

ಅನಿಬೆಸೆಂಟ್ ರವರು ಥಿಯಾಸಫಿಕಲ್ ಸೊಸೈಟಿಯ ಚಟುವಟಿಕೆಗಳನ್ನು ವಿಸ್ತಾರಗೊಳಿಸಿದರು. ಹಿಂದೂ ಧರ್ಮ,ಸಂಸ್ಕೃತಿ ಪರಂಪರೆಗಳ ಬಗ್ಗೆ ಭಾರತೀಯರಲ್ಲಿ ಆದರ ಅಭಿಮಾನಗಳು ಮೂಡುವಂತೆ ಮಾಡಿ ಅವುಗಳ ಪುನರುಜ್ಜೀವನಕ್ಕಾಗಿ ನಿರಂತರವಾಗಿ ಶ್ರಮಿಸಿದರು.

ಈ ಉದ್ದೇಶ ಸಾಧನೆಗೆ ಅನಿಬೆಸೆಂಟ್ ಅನೇಕ ವಿದ್ಯಾ ಶಾಲೆಗಳನ್ನು, ಯುವಜನರ ಸಂಘಗಳನ್ನು ಸ್ಥಾಪಿಸಿದರು. ಕಾಶಿಯಲ್ಲಿ ಹಿಂದೂ ಕಾಲೇಜು, ಶಾಲೆ,ಹೆಣ್ಣು ಮಕ್ಕಳ ಶಾಲೆ, ಮದನಪಲ್ಲಿಯಲ್ಲಿ ಕಾಲೇಜು ಇವರ ಸಾಧನೆಯ ಫಲಗಳಾಗಿವೆ. ಅನಿಬೆಸೆಂಟ್ ಅವರು ಭಾರತದಲ್ಲಿನ ದೀನದಲಿತರ ಸಾಮಾಜಿಕ, ಆರ್ಥಿಕ ಏಳಿಗೆಗಾಗಿ ಹತ್ತಾರು ವಿಧಾಯಕ ಕಾರ್ಯಕ್ರಮಗಳನ್ನು ರೂಪಿಸಿ ಆ ನಿಟ್ಟಿನಲ್ಲಿ ಶ್ರಮಿಸಿದರು.

ಅವರು ಭಾರತದಲ್ಲಿ ಬ್ರಿಟಿಷ್ ಚಕ್ರಾಧಿಪತ್ಯದ ಆಡಳಿತವನ್ನು ಹೃದಯಾಂತರಾಳದಿಂದ ಪ್ರಬಲವಾಗಿ ವಿರೋಧಿಸಿ ಭಾರತದ ಸ್ವಾತಂತ್ರ್ಯಕ್ಕಾಗಿ ಹೋರಾಟ ನಡೆಸಿದರು. ಸ್ವಾತಂತ್ರ್ಯ ಹೋರಾಟಕ್ಕೆ ಸಂಪೂರ್ಣ ಬೆಂಬಲ ಸೂಚಿಸಿದಕ್ಕೆ ಸೆರೆಮನೆ ಸೇರಬೇಕಾಯಿತು. ದೇಶದುದ್ದಗಲಕ್ಕೂ ಸಂಚರಿಸಿ ತಮ್ಮ ಉಜ್ವಲ ಭಾಷಣಗಳಿಂದ ಜನರಲ್ಲಿ ದೇಶಭಕ್ತಿ ಹುಟ್ಟಿಸಿ ಸ್ವಾತಂತ್ರ್ಯ ಸಮರದಲ್ಲಿ ಭಾಗವಹಿಸುವಂತೆ ಸ್ಫೂರ್ತಿ ನೀಡಿದರು. ಅವರು ಭಾರತೀಯರನ್ನು ಸಂಘಟಿಸುವಲ್ಲಿ ಯಶಸ್ವಿಯಾದರು. ಬಾಲಗಂಗಾಧರ ತಿಲಕ್, ಮಹಾತ್ಮ ಗಾಂಧೀಜಿರವರ ಸಂಪೂರ್ಣ ಸಹಕಾರ ದೊರೆಯಿತು. 1917ರಲ್ಲಿ ನಡೆದ ಕಾಂಗ್ರೆಸ್ ಅಧಿವೇಶನಕ್ಕೆ ಆನಿಬೆಸೆಂಟ್ ಅಧ್ಯಕ್ಷರಾಗಿ ಆಯ್ಕೆಯಾದರು.

ಅನಿಬೆಸೆಂಟ್ ನಿರ್ಭೀತಿಯಿಂದ ತಮ್ಮ ಜೀವನಪರ್ಯಂತ ಭಾರತಕ್ಕೆ ಸೇವೆ ಸಲ್ಲಿಸಿದರು. ಭಾರತದಲ್ಲಿ ಪರಸ್ಪರ ಸಹೋದರತ್ವ ಭಾವನೆ ಬೆಳೆಸಿಕೊಳ್ಳುವುದು ಅಂದಿನ ಪರಿಸ್ಥಿತಿಯಲ್ಲಿ ಅತ್ಯಂತ ಅಗತ್ಯವೆಂದು ಜನತೆಗೆ ಮನವರಿಕೆ ಮಾಡಿದರು.

ಭಾರತೀಯರಲ್ಲಿ ಪರಸ್ಪರ ಸ್ನೇಹ ಸಹೋದರ ಭಾವ, ಸಹಕಾರ ಸಂಘಟನೆಗಳು ಉಂಟಾದರೆ ಸ್ವಾತಂತ್ರ್ಯವನ್ನು ನಿರೀಕ್ಷಿತ ವೇಳೆಗೂ ಮುಂಚಿತವಾಗಿ ಪಡೆಯಬಹುದು ಎಂಬುದು ಅವರ ಸ್ಪಷ್ಟ ಅಭಿಪ್ರಾಯವಾಗಿತ್ತು. ರಾಷ್ಟ್ರ ವಿರೋಧಿ ನಿಲುವುಗಳನ್ನು ನಿರ್ದಾಕ್ಷಿಣ್ಯವಾಗಿ ಖಂಡಿಸಿದರು. ಆನಿಬೆಸೆಂಟ್ ಉತ್ತಮ ಲೇಖಕಿಯೂ ಆಗಿದ್ದು, ಹಲವಾರು ಕೃತಿಗಳನ್ನು ರಚಿಸಿದ್ದಾರೆ.ಅವರ ಅದಮ್ಯ ಉತ್ಸಾಹ ಹಾಗೂ ಅವರ ಭಾರತದ ಮೇಲಿನ ಅಗಾಧ ಪ್ರೀತಿ ಸದಾ ಸ್ಮರಣೀಯ. ಅನಿಬೆಸೆಂಟ್ ರವರು ಲಂಡನ್ ನಲ್ಲಿ ಜನಿಸಿ ಭಾರತ ದೇಶದ ಅಭಿಮಾನದಿಂದ ಈ ದೇಶದಲ್ಲಿ ನೆಲೆಯೂರಿ ಬ್ರಿಟಿಷರ ವಿರುದ್ಧ ಧ್ವನಿಯೆತ್ತಿದ ವೀರ ಮಹಿಳೆ. ಗಾಂಧೀಜಿರವರು ಅನಿಬೆಸೆಂಟ್ ಅವರ ಬಗ್ಗೆ ಹೇಳಿರುವ ಮಾತೇನೆಂದರೆ, ಭಾರತ ಇರುವವರೆಗೂ ಅವರು ಸಲ್ಲಿಸಿದ ಮಹತ್ತರ ಸೇವೆಯ ನೆನಪು ಉಳಿಯುತ್ತದೆ. ಹಾಗೂ ಭಾರತೀಯರೆಲ್ಲರಿಗೂ ಸ್ಫೂರ್ತಿದಾಯಕರಾಗಿದ್ದರು. ಭಾರತವನ್ನು ತಮ್ಮ ನಾಡಾಗಿ ಸ್ವೀಕರಿಸಿ ತಮ್ಮದೆಲ್ಲವನ್ನೂ ಅದಕ್ಕೆ ಅರ್ಪಿಸಿದ ಅವರು ಭಾರತಕ್ಕೆ ಪ್ರಿಯರಾಗಿದ್ದಾರೆ.

> **ಭಾರತಕ್ಕೆ ಸ್ವಾತಂತ್ರ್ಯ ಅತ್ಯಗತ್ಯವೆಂದು ತಿಳಿದು ರಾಜಕೀಯ ಕ್ಷೇತ್ರವನ್ನು ಪ್ರವೇಶಿಸಿದರು. 1916 ರಲ್ಲಿ ಅನಿಬೆಸೆಂಟ್ ರವರು ಹೋಂ ರೂಲ್ ಲೀಗ್ ಸ್ಥಾಪಿಸಿದರು. ಅವರು ದಿ ಕಾಮನ್ ವೆಲ್ತ್ ಎಂಬ ವಾರಪತ್ರಿಕೆ ಮತ್ತು ನ್ಯೂ ಇಂಡಿಯಾ ಎಂಬ ದಿನ ಪತ್ರಿಕೆಯನ್ನು ಪ್ರಾರಂಭಿಸಿ ಭಾರತಕ್ಕೆ ಸ್ವಾತಂತ್ರ್ಯದ ಅವಶ್ಯಕತೆ ಇದೆಯೆಂದು ಬ್ರಿಟಿಷ್ ಸರ್ಕಾರಕ್ಕೆ ತಿಳಿಸಿದರು.**

ಅವರು ಭಾರತದಲ್ಲಿ ಜನಿಸಲಿಲ್ಲ ಆದರೆ ಭಾರತವನ್ನು ತಮ್ಮ ನಾಡಾಗಿ ಸ್ವೀಕರಿಸಿದರು. ಅನಿಬೆಸೆಂಟ್ ರವರು 1933 ಸೆಪ್ಟೆಂಬರ್ 23 ರಂದು ಮದ್ರಾಸಿನ ಸಮೀಪದಲ್ಲಿರುವ ಅಡ್ಯಾರ್‌ನಲ್ಲಿ ತಮ್ಮ 86ನೇ ವಯಸ್ಸಿನಲ್ಲಿ ನಿಧನರಾದರು. ಇಂದು ಅವರ 178ನೇ ವರ್ಷದ ಜನ್ಮದಿನಾಚರಣೆಯ ದಿನವಾದ ಇಂದು ಅವರನ್ನು ಸ್ಮರಿಸಿ, ನೆನೆಯುತ್ತಾ ಅವರ ಆತ್ಮಕ್ಕೆ ಶಾಂತಿ ಮತ್ತು ಸದ್ಗತಿ ದೊರಕಲೆಂದು ಭಾರತೀಯರಾದ ನಾವೆಲ್ಲರೂ ಆ ಭಗವಂತನಲ್ಲಿ ಪ್ರಾರ್ಥಿಸೋಣ.



• ಉದಯವಾಹಿನಿ, ವಿಶೇಷ

# 318 ಮಂದಿಗೆ ಪದವಿ ಪ್ರದಾನ

• ಉದಯವಾಹಿನಿ, ಬೆಂಗಳೂರು

ಇಂಟರ್ನ್ಯಾಷನಲ್ ಸ್ಕೂಲ್ ಆಫ್ ಮ್ಯಾನೇಜ್ಮೆಂಟ್ ಎಕ್ಸಲೆನ್ಸ್ (ಐಎಸ್‌ಎಂಇ) ಪದವಿ ಮತ್ತು ಸ್ನಾತಕೋತ್ತರ ಪದವಿ ಬ್ಯಾಚ್‌ಗಳ ಘಟಿಕೋತ್ಸವ ಸಮಾರಂಭ ಇಂದು ನೆರವೇರಿತು. 189 ಸ್ನಾತಕೋತ್ತರ ಮತ್ತು 129 ಪದವಿಪೂರ್ವ ವಿದ್ಯಾರ್ಥಿಗಳು ಸೇರಿದಂತೆ 318 ವಿದ್ಯಾರ್ಥಿಗಳು ತಮ್ಮ ಪದವಿಗಳನ್ನು ಪಡೆದರು.

ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಇವೈ ಜಿಡಿಎಸ್ ಹಣಕಾಸು ಸೇವೆಗಳ ಸಲಹೆಗಾರ ಶ್ರೀ ಮಹಬೂಬ್ ಶರೀಫ್, ಸಿಎಂಆರ್ ವಿಶ್ವವಿದ್ಯಾಲಯದ ಮಾಜಿ ಸ್ಥಾಪಕ ಉಪಕುಲಪತಿ, ಐಎಸ್‌ಎಂಇಯ ಸಲಹೆಗಾರ ಮಂಡಳಿ ಸದಸ್ಯ ಡಾ. ಆನಂದ್ ಕೆ ಜೋಶಿ ಭಾಗವಹಿಸಿದ್ದರು. ಅಧ್ಯಾಪಕರು, ವಿದ್ಯಾರ್ಥಿಗಳ ಕುಟುಂಬಗಳು, ಉದ್ಯಮ ಪ್ರತಿನಿಧಿಗಳು ಈ ಸಂದರ್ಭದಲ್ಲಿ ಹಾಜರಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ಐಎಸ್‌ಎಂಇ ಅಧ್ಯಕ್ಷ ಕೆ.ಜಿ. ಗಾರ್ಗ್,



ಉದಯವಾಹಿನಿ ಚಿತ್ರ

ಘಟಿಕೋತ್ಸವವು ಕೇವಲ ಶೈಕ್ಷಣಿಕ ಮೈಲಿಗಲ್ಲಲ್ಲ, ವಿದ್ಯಾರ್ಥಿಗಳ ಪರಿಶ್ರಮದ ಸಂಭ್ರಮಾಚರಣೆ. 2025ರ ಪದವಿ ಪಡೆಯುವ ಬ್ಯಾಚ್‌ಗಳು ಅವಕಾಶಗಳಿಂದ ತುಂಬಿರುವ ಜಗತ್ತಿಗೆ ಕಾಲಿಡುತ್ತಿವೆ ವಿದ್ಯಾರ್ಥಿಗಳೆಲ್ಲ ಜವಾಬ್ದಾರಿಯುತ ನಾಯಕರಾಗಿ ಛಾಪು ಮೂಡಿಸುತ್ತಾರೆ ಎಂಬ ವಿಶ್ವಾಸ ನಮಗಿದೆ.

ನಮ್ಮಲ್ಲಿಂದ ಹೊರ ಹೋಗುತ್ತಿರುವ ಶೇ.99ರಷ್ಟು ಮಂದಿ ಈಗಾಗಲೇ ಹಲವೆಡೆ ಅವಕಾಶ ಪಡೆದಿದ್ದಾರ ಎಂದರು. ಐಎಸ್‌ಎಂಇಯ ಕುಲಪತಿ ಡಾ.ರೋನಿ ಕುರಿಯನ್ ಕೂಡ ಈ ಸಂದರ್ಭದಲ್ಲಿ ಮಾತನಾಡಿದರು.


# ದಸರಾ

## ಕವನ

ನವ ರಾತ್ರಿಗಳು
ಮೈಸೂರ ದಸರಾಗಳು
ನವರಾತ್ರಿ ಉತ್ಸವಗಳು
ಎಷ್ಟೊಂದು ಸುಂದರವು
ಹಬ್ಬದ ಸಡಗರವು
ನವ ಅವಾತರಗಳು
ನವ ಬಣ್ಣಗಳು ಹಳದಿ ಬಣ್ಣಗಳು
ಶೈಲಪುತ್ರಿ ದುರ್ಗೆ
ಹಸಿರು ಬಣ್ಣಗಳು
ಬ್ರಹ್ಮಚಾರಿಣಿ ದುರ್ಗೆ ಬೂದು ಬಣ್ಣಗಳು
ಚಂದ್ರಘಂಟಾ ದುರ್ಗೆ
ಕೇಸರಿ ಬಣ್ಣಗಳು
ಕೂಷ್ಮಾಂಡದೇವಿ ದುರ್ಗೆ
ಬಿಳಿ ಬಣ್ಣಗಳು ಸ್ಕಂದಾ ಮಾತಾ ದುರ್ಗೆ
ಕೆಂಪು ಬಣ್ಣಗಳು
ಕಾತ್ಯಾಯಿನಿ ದುರ್ಗೆ
ನೀಲಿ ಬಣ್ಣಗಳು
ಕಾಳರಾತ್ರಿ ಮಹಾಮಾಯೇ
ಗುಲಾಬಿ ಬಣ್ಣಗಳು
ಮಹಾ ಗೌರಿ ತಾಯಿ
ನೇರಳೆ ಬಣ್ಣಗಳು ಸಿದ್ಧಿಧಾತ್ರಿ ತಾಯಿ
ದೇವಿಯ ಅವತಾರಗಳು
ನವರಾತ್ರಿಯ ದಿನಗಳು
ಆಯುಧ ಪೂಜೆಗಳು
ವಿಜಯದಶಮಿ ಹಬ್ಬಗಳು
ದಸಾರ ಹಬ್ಬದ ಸಂಭ್ರಮಗಳು.



- ವಿ.ಎಂ.ಎಸ್.ಗೋಪಿ



• ಉದಯವಾಹಿನಿ, ವಿಶೇಷ

# ಸಕಲೇಶಪುರದಲ್ಲಿ ಕಾಫಿ ದಿನಾಚರಣೆ



ವಿಶ್ವಾಸ್.ಡಿ.ಗೌಡ

ಹಸಿರು ಬೆಟ್ಟಗಳ ನಾಡಾದ ಸಕಲೇಶಪುರದಲ್ಲಿ ಕಾಫಿ ದಿನವನ್ನು ಭಾವಪೂರ್ಣವಾಗಿ ಆಚರಿಸಲಾಗುತ್ತಿದೆ. ಈ ನಾಡಿನ ಮಣ್ಣು, ಹವಾಮಾನ ಹಾಗೂ ನೈಸರ್ಗಿಕ ಸಂಪತ್ತಿಗೆ ಬೆರೆತು ಬೆಳೆದಿರುವ ಕಾಫಿ ಇಂದು ಕೇವಲ ಬೆಳೆ ಮಾತ್ರವಲ್ಲದೆ ಸಾವಿರಾರು ಕುಟುಂಬಗಳ ಆರ್ಥಿಕ ಆಧಾರವಾಗಿಯೂ ಪರಿಣಮಿಸಿದೆ. ಸಕಲೇಶಪುರದ ಹೆಸರನ್ನು ಜಗತ್ತಿನ ಕಾಫಿ ನಕ್ಷೆಯಲ್ಲಿ ಹೊಳೆಯುವಂತೆ ಮಾಡಿರುವ ಈ ಬೆಳೆ, ಜನರ ಬದುಕಿಗೆ ಹೊಸ ಉಸಿರು ತುಂಬುತ್ತಿದೆ.

ಕಾಫಿ ದಿನಾಚರಣೆ ಎಂದರೆ ಕೇವಲ ಸಂಭ್ರಮವಲ್ಲ, ತೋಟದಲ್ಲಿ ಬೆಳಗ್ಗಿನಿಂದ ಸಂಜೆವರೆಗೂ ಶ್ರಮಿಸುವ ರೈತರ ಮತ್ತು ಕಾರ್ಮಿಕರ ಪರಿಶ್ರಮಕ್ಕೆ ಸಲ್ಲಿಸುವ ಗೌರವ. ತೋಟಗಾರರು, ಕಾರ್ಮಿಕರು, ತಜ್ಞರು . ಯುವಜನರು ಒಟ್ಟುಗೂಡಿ ಕಾಫಿಯ ಇತಿಹಾಸ, ತೋಟದ ಅನುಭವ ಮತ್ತು ಮುಂದಿನ ಸವಾಲುಗಳ ಕುರಿತು ಚರ್ಚಿಸಲಿದ್ದಾರೆ. ಈ ದಿನವು ಕೃಷಿಕರಿಗೆ ಹೊಸ ತಂತ್ರಜ್ಞಾನ ತಿಳಿದುಕೊಳ್ಳುವ, ತಮ್ಮ ಅನುಭವ ಹಂಚಿ ಕೊಳ್ಳುವ ಹಾಗೂ ಮುಂದಿನ ಪೀಳಿಗೆಗೆ ಪ್ರೇರಣೆ ನೀಡುವ ವೇದಿಕೆಯಾಗುತ್ತದೆ. ಇಂದಿನ ಹವಾಮಾನ ಬದಲಾವಣೆಯ ಪರಿಣಾಮವಾಗಿ ಕಾಫಿ ತೋಟಗಳು ಹಲವು ಸವಾಲುಗಳನ್ನು ಎದುರಿಸುತ್ತಿವೆ. ಅನಿಯಮಿತ ಮಳೆಯಾಗಲಿ, ದೀರ್ಘಕಾಲದ ಬರವಾಗಲಿ, ಕಾಫಿ ಬೆಳೆಯ ಮೇಲೆ ಪರಿಣಾಮ ಬೀರುತ್ತಿದೆ. ಇಂತಹ ಸಂದರ್ಭದಲ್ಲಿ ಮಣ್ಣಿನ ಸಂರಕ್ಷಣೆ, ನೀರಿನ ಸಮರ್ಪಕ ಬಳಕೆ, ನೆರಳು ಮರಗಳ ನಿರ್ವಹಣೆ ಹಾಗೂ ಜೈವಿಕ ಗೊಬ್ಬರದ ಬಳಕೆ ಅತ್ಯಂತ ಅವಶ್ಯಕವೆಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ಈ ಕುರಿತು ಕಾರ್ಯಾಗಾರಗಳು ತಾಂತ್ರಿಕ ಚರ್ಚೆಗಳು ಕಾರ್ಯಕ್ರಮದ ಭಾಗವಾಗಲಿವೆ. ಕಾಫಿ ದಿನದಲ್ಲಿ ಕಾಫಿಯ ವಿವಿಧ ತಳಿಗಳ ರುಚಿ ಪರಿಚಯ, ಕಾಫಿ ಆಧಾರಿತ ಪಾನೀಯಗಳ ಪ್ರದರ್ಶನ ಹಾಗೂ ಸ್ಥಳೀಯ ತೋಟಗಳ ಉತ್ಪನ್ನಗಳ ಪ್ರದರ್ಶನ ಕೂಡ ನಡೆಯಲಿದೆ. ಸ್ಥಳೀಯ ಕಾರ್ಮಿಕರು ಹಾಗೂ ಮಹಿಳಾ ಸ್ವಸಹಾಯ ಸಂಘಗಳಿಗೆ ಸನ್ಮಾನ ಮಾಡುವ ಮೂಲಕ ಅವರ ಪರಿಶ್ರಮವನ್ನು ಸ್ಮರಿಸಲಾಗುವುದು. ಯುವ ಉದ್ಯಮಿಗಳಿಗೆ ಕಾಫಿ ಆಧಾರಿತ ಉದ್ಯಮಗಳ ಬಗ್ಗೆ ಮಾರ್ಗದರ್ಶನ ನೀಡಲಾಗುವುದು.

ಜಾಗತಿಕ ಮಾರುಕಟ್ಟೆಯಲ್ಲಿ ಭಾರತೀಯ ಕಾಫಿಗೆ ವಿಶೇಷ ಸ್ಥಾನವಿದೆ. ಅದರಲ್ಲೂ ಸಕಲೇಶಪುರದ ಕಾಫಿ ತನ್ನ ವಿಶಿಷ್ಟ ಸುವಾಸನೆ, ಗುಣಮಟ್ಟ ಮತ್ತು ನೈಸರ್ಗಿಕ ಬೆಳೆಗಾರಿಕೆಯ ಮೂಲಕ ಹೆಚ್ಚು ಬೇಡಿಕೆ ಪಡೆದಿದೆ. ಸಿಂಗಲ್ ಎಸ್ಟೇಟ್ ಕಾಫಿ, ಆರ್ಗಾನಿಕ್ ಕಾಫಿ ಎಂಬ ಹೆಸರಿನಲ್ಲಿ ಸಕಲೇಶಪುರದ ಕಾಫಿ ದೇಶ-ವಿದೇಶದ ಮಾರುಕಟ್ಟೆಯಲ್ಲಿ ಉತ್ತಮ ಬ್ರ್ಯಾಂಡ್ ಮೌಲ್ಯ ಹೊಂದಿದೆ. ಇಂತಹ ದಿನಾಚರಣೆಗಳ ಮೂಲಕ ಕಾಫಿ ಬೆಳೆಗೆ ಹೊಸ ತಂತ್ರಜ್ಞಾನ ಪರಿಚಯಿಸುವುದರ ಜೊತೆಗೆ ರೈತರಲ್ಲಿ ಹೊಸ ಭರವಸೆ ಮೂಡುತ್ತದೆ. ತೋಟಗಾರಿಕೆ ಕ್ಷೇತ್ರದಲ್ಲಿ ಯುವಜನರ ಆಸಕ್ತಿ ಹೆಚ್ಚುವುದರೊಂದಿಗೆ ಉದ್ಯಮಶೀಲತೆಗೆ ಹೊಸ ಬಾಗಿಲು ತೆರೆದಿಡುತ್ತದೆ.

ಸಾರಾಂಶವಾಗಿ, ಕಾಫಿ ದಿನಾಚರಣೆ ಸಕಲೇಶಪುರದ ಕಾಫಿ ಬೆಳೆಗಾರರ ಹಬ್ಬ, ಕಾರ್ಮಿಕರ ಸಂಭ್ರಮ ಹಾಗೂ ನಮ್ಮ ನಾಡಿನ ಸಾಂಸ್ಕೃತಿಕ ಗುರುತಿನ ಸಂಕೇತ. ಕಾಫಿಯ ಪ್ರತಿಯೊಂದು ಕಣದಲ್ಲೂ ರೈತರ ಪರಿಶ್ರಮ, ನಿಸರ್ಗದ ಕೊಡುಗೆ ಮತ್ತು ಭವಿಷ್ಯದ ಕನಸು ಅಡಗಿದೆ. ಸಕಲೇಶಪುರದ ಕಾಫಿ ನಮ್ಮ ಹೆಮ್ಮೆ, ನಮ್ಮ ಬದುಕು, ನಮ್ಮ ಭವಿಷ್ಯ.



• ಉದಯವಾಹಿನಿ, ವಿಶೇಷ

# ರಾಮಾಯಣ



## ಶ್ರೀರಾಮನಿಗೂ ಖರನಿಗೂ ಯುದ್ಧವಾದದ್ದು

• ಹಿಂದಿನ ಸಂಚಿಕೆಯಿಂದ

### 120 ನೆಯ ಅಧ್ಯಾಯ

ಘೋರವಾದ ಪಾಪಕರ್ಮವನ್ನು ಮಾಡಿದವನಿಗೆ ಮರಗಳಿಗೆ ಋತುಕಾಲದಲ್ಲಿ ಅವಶ್ಯವಾಗಿ ಪುಷ್ಪೋದಯವಾಗುವಂತೆ ಆ ಪಾಪಕರ್ಮಕ್ಕೆ ತಕ್ಕ ಫಲವು ಅವಶ್ಯವಾಗಿ ಬರುವುದು. ವಿಷದೊಡನೆ ಕೂಡಿದ ಅನ್ನವನ್ನು ಭುಜಿಸಿದವರಿಗೆ ಶೀಘ್ರದಲ್ಲಿಯೇ ದೇಹಪತನವಾಗುವಂತೆ ಪಾಪಕರ್ಮಿಗಳಿಗೆ ಅವರು ಮಾಡಿದ ಪಾಪಕ್ಕೆ ತಕ್ಕ ಫಲವು ಶೀಘ್ರದಲ್ಲಿಯೇ ಆಗುವುದು. ನೀನು ಸಮಸ್ತ ಪ್ರಾಣಿಗಳಿಗೂ ಅಹಿತನಾಗಿ ಘೋರವಾದ ಪಾಪಕರ್ಮವನ್ನು ಮಾಡಿ ನಿನ್ನ ಪ್ರಾಣಗಳನ್ನು ನೀಗಿಕೊಳ್ಳಬೇಕೆಂಬ ಬುದ್ಧಿಯಿಂದ ನನ್ನ ಸಮೀಪಕ್ಕೆ ಬಂದೆ. ಸರ್ಪಗಳು ಹುತ್ತದ ಬಿಲಗಳನ್ನು ಬಗೆದು ಹೊಗುವಂತೆ ನನ್ನಿಂದ ಸಂಧಾನ ಮಾಡಲ್ಪಡುವ ಸುವರ್ಣಮಯವಾದ ಬಾಣಗಳು ನಿನ್ನ ಶರೀರವನ್ನು ಬಗೆದು ಹೊಕ್ಕು ಉಚ್ಚಳಿಸುವುವು. ದಂಡಕಾರಣ್ಯವಾಸಿಗಳಾಗಿ ಧರ್ಮಾತ್ಮರಾದ ಋಷಿಗಳನ್ನು ಕೊಂದಂಥ ನೀನು ಈ ಸಮರದಲ್ಲಿ ನನ್ನ ಬಾಣಗಳಿಂದ ಗಾಯಪಡೆದು ಯಮಮಂದಿರವನ್ನು ಸೇರುತ್ತೀಯೆ. ನನ್ನ ಬಾಣಗಳಿಂದ ನಿನ್ನ ತಿರಶ್ಛೇದವಾಗುವುದನ್ನು ನಿನ್ನಿಂದ ಬಾಧೆಪಟ್ಟಿರುವ ಋಷಿಗಳು ನೋಡುವರು. ಮೊದಲು ನಿನ್ನ ಭುಜಬಲಪರಾಕ್ರಮಗಳಿಂದ ಮುರಿದೋಡಿದ ದೇವತೆಗಳು ವಿಮಾನಾರೂಢರಾಗಿ ಸಮರದಲ್ಲಿ ಬೀಳುವ ನಿನ್ನನ್ನು ನೋಡಿ ಹರ್ಷಪಡುವರು. ಇನ್ನು ನಿನ್ನ ಮನಸ್ಸು ಬಂದಂತೆ ಯುದ್ಧ ಸನ್ನಾಹಮಾಡಿಕೊಂಡು ನನ್ನೊಡನೆ ಯುದ್ಧವನ್ನು ಮಾಡು. ಇಂದೇ ನನ್ನ ಶರಗಳಿಂದ ತಾಳೆಹಣ್ಣನ್ನು ಕೆಡಹುವಂತೆ ನಿನ್ನ ಶಿರಸ್ಸನ್ನು ಕತ್ತರಿಸಿ ಕೆಡಹುವೆನು ಎಂದು ನುಡಿದನು. ಆ ಮಾತನ್ನು ಕೇಳಿ ಖರನು ಕೋಪಯುಕ್ತನಾಗಿ ಕಣ್ಣುಗಳನ್ನು ಕೆಂಪುಮಾಡಿ ಕೊಂಡು ಶ್ರೀರಾಮನನ್ನು ಕುರಿತು ಈ ರೀತಿಯಲ್ಲಿ ಹೇಳಿದನು: ಎಲೈ ರಾಮ, ಹೇಡಿಯಾದ ನೀನು ಸಮರದಲ್ಲಿ ಕೆಲವು ಹುಲುರಾಕ್ಷಸರನ್ನು ಕೊಂದ ಗರ್ವದಿಂದ ಬಹು ಪರಾಕ್ರಮಿಯೆಂದು ಹೇಳಿಕೊಳ್ಳುತ್ತ ನಿನ್ನನ್ನು ನೀನೇ ಕೊಂಡಾಡಿಕೊಳ್ಳುತ್ತಿದ್ದೀಯೆ. ಪರಾಕ್ರಮಿಗಳಾದ ಉತ್ತಮ ಪುರುಷರು ಗರ್ವಿಸಿ ತಮ್ಮನ್ನು ತಾವೇ ಹೊಗಳಿಕೊಳ್ಳುವರೆ ? ಹುಲುಮನುಷ್ಯರಾಗಿ ಹೇಡಿಗಳಾದ ಕ್ಷತ್ರಿಯಾಧಮರು ನಿನ್ನಂತೆ ತಮ್ಮ ಪರಾಕ್ರಮವಾರ್ತೆಗಳನ್ನು ನುಡಿದುಕೊಳ್ಳುವರಲ್ಲದೆ ಸತ್ಕುಲ ಪ್ರಸೂತನಾಗಿ ಪರಾಕ್ರಮಿಯಾದವನು ಸಮರದಲ್ಲಿ ಹೆಚ್ಚಾಗಿ ನುಡಿಯನು. ನಿನಗೆ ಮೃತ್ಯುಕಾಲವು ಸಂಭವಿಸಿದ್ದರಿಂದ ನಿನ್ನನ್ನು ನೀನೇ ಸ್ತೋತ್ರಮಾಡಿಕೊಳ್ಳುತ್ತಿದ್ದೀಯೆ. ಇದು ನಿನಗೆ ಸರ್ವಥಾ ಲಘುತ್ವವನ್ನುಂಟುಮಾಡುತ್ತದೆ. ಸಮಸ್ತ ಗೈರಿಕಾದಿಧಾತುಗಳಿಂದ ಪರಿಪೂರ್ಣವಾಗಿ ಚಲನ ವಿಲ್ಲದಿರುವ ಪರ್ವತದಂತೆ ದೃಢವಾಗಿ ಗದಾಪಾಣಿಯಾಗಿ ಮುಂದುಗಡೆಯಲ್ಲಿರುವ ನನ್ನನ್ನು ನೋಡಿದೆಯಾ ? ಇನ್ನು ಗದಾಪಾಣಿಯಾದ ನಾನು ರಣರಂಗದಲ್ಲಿ ನಿನ್ನ ಪ್ರಾಣ ಅಪಹಾರಣವನ್ನು ಮಾಡುವುದಕ್ಕೆ ಲೋಕಸಂಹಾರಕನಾದ ಯಮನಂತೆ ನಿಂತಿದ್ದೇನೆ. **ಮುಂದುವರಿಯುವುದು...**

# ಮೈಸೂರು ದಸರಾ: ಗಜಪಡೆ ಪರಂಪರೆ

■ ಅನಿಲ್ ಕುಮಾರ್ ಮ.ತೇಲಂಗಿ

ಮೈಸೂರು ದಸರಾ ಕೇವಲ ಒಂದು ಹಬ್ಬವಲ್ಲ, ಅದು 400 ವರ್ಷಗಳಿಗೂ ಹೆಚ್ಚು ಇತಿಹಾಸ ಮತ್ತು ವೀರ ಪರಂಪರೆಯ ಪ್ರತೀಕ. ಅದರಲ್ಲೂ ಗಜಪಡೆ, ಅಥವಾ ದಸರಾ ಆನೆಗಳ ಮೆರವಣಿಗೆಯು ಈ ವೈಭವಕ್ಕೆ ಜೀವ ತುಂಬುವ ಪ್ರಮುಖ ಆಕರ್ಷಣೆಯಾಗಿದೆ. ದಸರಾ ಪರಂಪರೆ ಮತ್ತು ಗಜಪಡೆ ನಡೆದು ಬಂದ ದಾರಿ ದಸರಾ ಹಬ್ಬದ ಮೂಲವು ವಿಜಯನಗರ ಸಾಮ್ರಾಜ್ಯದ ಕಾಲಕ್ಕೆ (14ನೇ ಶತಮಾನ) ಹೋಗುತ್ತದೆ. ಅಲ್ಲಿ ಇದನ್ನು 'ಮಹಾನವಮಿ' ಎಂದು ಆಚರಿಸಲಾಗುತ್ತಿತ್ತು. ವಿಜಯನಗರದ ಪತನದ ನಂತರ, ಮೈಸೂರಿನ ಒಡೆಯರ್ ರಾಜವಂಶದ ಮೊದಲ ರಾಜ ಒಡೆಯರ್ ಅವರು 1610ರಲ್ಲಿ ಶ್ರೀರಂಗಪಟ್ಟಣದಲ್ಲಿ ಈ ಉತ್ಸವವನ್ನು ಪ್ರಾರಂಭಿಸಿದರು. ನಂತರ ರಾಜಧಾನಿಯನ್ನು ಮೈಸೂರಿಗೆ ವರ್ಗಾಯಿಸಿದ ಬಳಿಕ, ಇದು ಇಲ್ಲಿಯೂ ವೈಭವಯುತವಾಗಿ ಮುಂದುವರೆಯಿತು. ದಸರಾ ಹಬ್ಬವು ದುಷ್ಟ ಶಕ್ತಿಯ ಮೇಲೆ ಸತ್ಯದ ವಿಜಯವನ್ನು ಸಂಕೇತಿಸುತ್ತದೆ. ಮಹಿಷಾಸುರನನ್ನು ಕೊಂದ ನಾಡದೇವಿ ಚಾಮುಂಡೇಶ್ವರಿಯನ್ನು ವಿಜಯದಶಮಿಯಂದು ಮೆರವಣಿಗೆ ಮಾಡಲಾಗುತ್ತದೆ.

ರಾಜರ ಆಳ್ವಿಕೆಯ ಕಾಲದಲ್ಲಿ, ವಿಜಯದಶಮಿಯಂದು ಮಹಾರಾಜರೇ ಅಂಬಾರಿಯಲ್ಲಿ ಕುಳಿತು ಮೆರವಣಿಗೆಯಲ್ಲಿ ಸಾಗುತ್ತಿದ್ದರು. ಪ್ರಜಾಪ್ರಭುತ್ವದ ಆರಂಭದ ನಂತರ, 1969ರಿಂದ ಚಿನ್ನದ ಅಂಬಾರಿಯಲ್ಲಿ ಚಾಮುಂಡೇಶ್ವರಿ ದೇವಿಯ ವಿಗ್ರಹವನ್ನು ಪ್ರತಿಷ್ಠಾಪಿಸಿ ಮೆರವಣಿಗೆ ಮಾಡುವ ಸಂಪ್ರದಾಯ ಮುಂದುವರೆಯಿತು. ಗಜಪಡೆಯು ದಸರಾಕ್ಕೆ ಒಂದು ತಿಂಗಳ ಮೊದಲು ನಾಗರಹೊಳೆ ರಾಷ್ಟ್ರೀಯ ಉದ್ಯಾನವನದಂತಹ ತಮ್ಮ ಕ್ಯಾಂಪ್‌ಗಳಿಂದ ಮೈಸೂರಿಗೆ ಆಗಮಿಸಿ, ರಾಜಮಾರ್ಗದಲ್ಲಿ ಮೆರವಣಿಗೆಯ ಅಭ್ಯಾಸ ಮಾಡುತ್ತದೆ. ಈ ಆನೆಗಳನ್ನು ಶಕ್ತಿ, ಶಾಂತ ಸ್ವಭಾವ ಮತ್ತು ರಾಜಗಾಂಭೀರ್ಯದ ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತದೆ. ಅಂಬಾರಿಯನ್ನು ಹೊತ್ತ ಪ್ರಮುಖ ಆನೆಗಳು ದಸರಾ ಮೆರವಣಿಗೆಯ ಕೇಂದ್ರಬಿಂದುವಾದ 750 ಕೆಜಿ ತೂಕದ ಚಿನ್ನದ ಅಂಬಾರಿಯನ್ನು ಹೊರುವ ಗೌರವವು ಅತ್ಯಂತ ಪ್ರಬಲ ಗಾಂಭೀರ್ಯದ ಆನೆಗೆ ಸಲ್ಲುತ್ತದೆ. ಇತಿಹಾಸದಲ್ಲಿ ಈ ಜವಾಬ್ದಾರಿಯನ್ನು **ಹೊತ್ತ ಕೆಲವು ಪ್ರಮುಖ ಆನೆಗಳ ಮಾಹಿತಿ ಇಲ್ಲಿದೆ:**

**ಜಯಮಾರ್ತಾಂಡ:** ಇವರು ಒಡೆಯರ್ ಅರಸರ ಆಳ್ವಿಕೆಯ ಸಮಯದಲ್ಲಿ 45ಕ್ಕೂ ಹೆಚ್ಚು ಬಾರಿ ಅಂಬಾರಿಯನ್ನು ಹೊತ್ತಿದ್ದರು.

**ಬಿಳಿಗಿರಿ:** ಮಹಾರಾಜರು ಅಂಬಾರಿಯಲ್ಲಿ ಕುಳಿತು ಸಾಗಿದ ಕೊನೆಯ ಆನೆ ಬಿಳಿಗಿರಿ. (ರಾಜಪ್ರಭುತ್ವ ಕೊನೆಗೊಂಡ ನಂತರ)



• ಉದಯವಾಹಿನಿ, ವಿಶೇಷ

**ರಾಜೇಂದ್ರ:** ಅಂಬಾರಿ ಹೊತ್ತ ಮತ್ತೊಬ್ಬ ಖ್ಯಾತ ಆನೆ. ಇವರು ಗಂಧದ ಗುಡಿ' ಚಲನಚಿತ್ರದಲ್ಲೂ ಕಾಣಿಸಿಕೊಂಡಿದ್ದರು.

**ದ್ರೋಣ:** ಇವರು 18 ಬಾರಿ ಅಂಬಾರಿಯನ್ನು ಹೊತ್ತಿದ್ದರು. 1998 ರಲ್ಲಿ ವಿದ್ಯುತ್ ಆಘಾತದಿಂದ ಸಾವನ್ನಪ್ಪಿದರು.

**ಬಲರಾಮ:** ಇವರು 1999 ರಿಂದ 2011ರವರೆಗೆ ಸತತ 13 ಬಾರಿ ಅಂಬಾರಿಯನ್ನು ಹೊತ್ತರು. ಇವರು ಶಾಂತ ಸ್ವಭಾವಕ್ಕೆ ಹೆಸರುವಾಸಿಯಾಗಿದ್ದರು.

**ಅರ್ಜುನ:** 2012 ರಿಂದ 2019ರವರೆಗೆ 8 ಬಾರಿ ಅಂಬಾರಿಯನ್ನು ಹೊತ್ತರು. ಇವರು ಬಲರಾಮನ ನಂತರ ಜವಾಬ್ದಾರಿ ವಹಿಸಿಕೊಂಡರು. (ಅರಣ್ಯ ಇಲಾಖೆಯ ಕಾರ್ಯಾಚರಣೆಯೊಂದರಲ್ಲಿ ನಿಧನರಾದರು)

**ಅಭಿಮನ್ಯು:** 2020 ರಿಂದ ಇಂದಿನವರೆಗೂ (ಪ್ರಸ್ತುತ) ಅಂಬಾರಿ ಹೊರುವ ಪ್ರಮುಖ ಆನೆಯಾಗಿ ಮುಂದುವರೆದಿದ್ದಾರೆ. ಇವರು ಗಂಭೀರ ಮತ್ತು ಸಮರ್ಥ ಸ್ವಭಾವದವರು. (ಗಮನಿಸಿ: ಕೆಲವು ಆನೆಗಳು ದಶಕಗಳ ಕಾಲ ಅಂಬಾರಿ ಹೊತ್ತು ಪರಂಪರೆಯ ಭಾಗವಾಗಿದ್ದು, ಅವರ ಬಗ್ಗೆ ಮೈಸೂರು ಜನರಿಗೆ ಅಪಾರ ಗೌರವವಿದೆ.) ಮೆರವಣಿಗೆಯ ಮಾರ್ಗ, ಸಂಭ್ರಮ ಮತ್ತು ವೈಭವ ವಿಜಯದಶಮಿಯಂದು ನಡೆಯುವ ಜಂಬೂ ಸವಾರಿಯು ದಸರಾ ಹಬ್ಬದ ಅತ್ಯಂತ ವೈಭವದ ಕಾರ್ಯಕ್ರಮ. ಮೆರವಣಿಗೆಯ ಆರಂಭ ಮತ್ತು ಮುಕ್ತಾಯ ಮೆರವಣಿಗೆಯು ಮೈಸೂರು ಅರಮನೆಯ ಆವರಣದಲ್ಲಿ, ರತ್ನಖಚಿತ ಸಿಂಹಾಸನದ ಎದುರು ನಿಗದಿತ ಶುಭ ಲಗ್ನದಲ್ಲಿ, ಚಿನ್ನದ ಅಂಬಾರಿಗೆ ಚಾಮುಂಡೇಶ್ವರಿ ದೇವಿಯ ವಿಗ್ರಹವನ್ನು ಪ್ರತಿಷ್ಠಾಪಿಸಿ, ಹೂವಿನ ಪೂಜೆ ಪುಷ್ಪಾರ್ಚನೆ ಸಲ್ಲಿಸುವುದರೊಂದಿಗೆ ಆರಂಭವಾಗುತ್ತದೆ. ಪ್ರತಿವರ್ಷವೂ ಗಜಪಡೆಯ ಮುಖ್ಯ ಆನೆಯು ಅಂಬಾರಿ ಹೊತ್ತು ಸಾಗುವ ಈ ಮೆರವಣಿಗೆಯು ಅರಮನೆಯ ಬಲರಾಮ ದ್ವಾರದ ಮೂಲಕ ಹೊರಟು ಸುಮಾರು 4.8 ಕಿ.ಮೀ ದೂರದ ಪಥವನ್ನು ಕ್ರಮಿಸುತ್ತದೆ. ಈ ರಾಜಮಾರ್ಗವು

**ಈ ಕೆಳಗಿನ ಪ್ರಮುಖ ಸ್ಥಳಗಳ ಮೂಲಕ ಸಾಗುತ್ತದೆ:** ಮೈಸೂರು ಅರಮನೆಯ ಉತ್ತರದ್ವಾರ rightarrow ಆಲ್ಬರ್ಟ್ ವಿಕ್ಟರ್ ರಸ್ತೆ rightarrow ಕೆ. ಆರ್. ವೃತ್ತ rightarrow ಸಯ್ಯಾಜಿ ರಾವ್ ರಸ್ತೆ rightarrow ಆಯುರ್ವೇದ ಆಸ್ಪತ್ರೆ ವೃತ್ತ rightarrow ಹೈವೇ ವೃತ್ತ rightar-row ನೆಲ್ಸನ್ ಮಂಡೇಲಾ ರಸ್ತೆ rightarrow ಬನ್ನಿಮಂಟಪದ ಪೆರೇಡ್ ಮೈದಾನದಲ್ಲಿ ಮುಕ್ತಾಯವಾಗುತ್ತದೆ.

**ಸಂಭ್ರಮ, ವೈಭವ:** ಮೆರವಣಿಗೆ ಸಾಗುವ ರಾಜಮಾರ್ಗದುದ್ದಕ್ಕೂ ಸಾವಿರಾರು ಜನರು ನಿಂತು ಜಂಬೂ ಸವಾರಿಯನ್ನು ವೀಕ್ಷಿಸುತ್ತಾರೆ. ಇಡೀ ನಗರವು ದೀಪಾಲಂಕಾರದಿಂದ ಕಂಗೊಳಿಸುತ್ತದೆ.

**ವೈಭವದ ಮೆರವಣಿಗೆ:** ಚಿನ್ನದ ಅಂಬಾರಿಯನ್ನು ಹೊತ್ತ ಆನೆಯ ಹಿಂದೆ ಅಲಂಕೃತ ಆನೆಗಳು, ಕುದುರೆಗಳು, ಒಂಟೆಗಳು ಸಾಗುತ್ತವೆ.

**ಕಲಾತಂಡಗಳ ಅನಾವರಣ:** ವಿವಿಧ ಜಾನಪದ ಕಲಾತಂಡಗಳು, ನೃತ್ಯ ತಂಡಗಳು, ಸ್ತಬ್ಧಚಿತ್ರಗಳು, ಪೊಲೀಸ್, ಅಶ್ವದಳಗಳ ತಂಡಗಳು ಈ ಮೆರವಣಿಗೆಯಲ್ಲಿ ಭಾಗವಹಿಸಿ ಕರ್ನಾಟಕದ ಶ್ರೀಮಂತ ಸಂಸ್ಕೃತಿಯನ್ನು ಪ್ರದರ್ಶಿಸುತ್ತವೆ.

**ಪಂಜಿನ ಕವಾಯತು :** ಜಂಬೂ ಸವಾರಿಯ ನಂತರ ಸಂಜೆ ಬನ್ನಿಮಂಟಪದಲ್ಲಿ ನಡೆಯುವ ಪಂಜಿನ ಕವಾಯತು ಟಾರ್ಚ್‌ಲೈಟ್ ಪೆರೇಡ್ ಮತ್ತೊಂದು ಆಕರ್ಷಣೆ. ಇದರಲ್ಲಿ ಅಶ್ವದಳದ ಸಾಹಸಗಳು, ಪಟಾಕಿಗಳ ಪ್ರದರ್ಶನ ಇರುತ್ತದೆ. ಒಟ್ಟಾರೆಯಾಗಿ, ಮೈಸೂರು ದಸರಾ ಗಜಪಡೆ ಪರಂಪರೆಯು ರಾಜಮನೆತನದ ಆಚರಣೆ, ಧಾರ್ಮಿಕ ನಂಬಿಕೆ, ಜನಪದ ಸಂಸ್ಕೃತಿಯ ಸುಂದರ ಸಮ್ಮಿಲನವಾಗಿದ್ದು, ಇದು ಕರ್ನಾಟಕದ ನಾಡಹಬ್ಬವಾಗಿ ವಿಶ್ವವಿಖ್ಯಾತವಾಗಿದೆ.



# ವಕೀಲರ ಸಂಘದ ಪದಾಧಿಕಾರಿಗಳ ಪದಗ್ರಹಣ

## ನ್ಯಾಯಾಧೀಶರು ಮತ್ತು ವಕೀಲರು ಎರಡು ಕಣ್ಣುಗಳಿದಂತೆ: ನ್ಯಾಯಾಧೀಶರು ದತ್ತುಕುಮಾರ ಜವಳಕರ್

• **ಉದಯವಾಹಿನಿ, ಚಿಂಚೋಳಿ**

ನ್ಯಾಯಾಲಯದ ಕಾರ್ಯಕಲಾಪಗಳು ಸುಗಮವಾಗಿ ಸಾಗಲು ನ್ಯಾಯಾಧೀಶರ, ವಕೀಲರ ಪಾತ್ರ ಮಹತ್ವದ್ದಾಗಿದೆ, ನ್ಯಾಯಾಧೀಶರು ಮತ್ತು ವಕೀಲರು ಎರಡು ಕಣ್ಣುಗಳಿದಂತೆ ಎಂದು ಪ್ರಧಾನ ಸಿವಿಲ್ ನ್ಯಾಯಾಧೀಶರಾದ ದತ್ತುಕುಮಾರ ಜವಳಕರ್ ಹೇಳಿದರು. ಪಟ್ಟಣದಲ್ಲಿ ತಾಲ್ಲೂಕಾ ವಕೀಲರ ಸಂಘದಿಂದ ಹಮ್ಮಿಕೊಂಡ ವಕೀಲರ ಸಂಘಕ್ಕೆ 2025-27ರ ನೂತನವಾಗಿ ಆಯ್ಕೆಯಾದ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮದಲ್ಲಿ ಜ್ಯೋತಿ ಬೆಳಗಿಸುವುದರ ಮೂಲಕ ಚಾಲನೆ ನೀಡಿ ಮಾತನಾಡಿದರು. ವಕೀಲರು ಯಾವುದೇ ಮನಸ್ತಾಪ ಇಟ್ಟುಕೊಳ್ಳದೆ ಹೊಂದಾಣಿಕೆಯಿಂದ ಇರಬೇಕು,ನ್ಯಾಯಾಲಯವು ಕಟ್ಟಡವು ಅತ್ಯಂತ ಹಳೆಯದಿದ್ದು ಕಾರ್ಯಕಲಾಪ ನಡೆಸಲು ಮಳೆಗಾಲದಲ್ಲಿ ತೊಂದರೆ ಆಗುತ್ತಿದ್ದು ನೂತನ ಪದಾಧಿಕಾರಿಗಳ ಅವಧಿಯಲ್ಲಿ ನೂತನ ನ್ಯಾಯಾಲಯ ಕಟ್ಟಡ ಪೂರ್ಣಗೊಳ್ಳಲ್ಲಿ ಎಂದರು.

ನೂತನ ಅಧ್ಯಕ್ಷ ಶಶಿಕಾಂತ ಅಡಕಿ ಅಧಿಕಾರ ಸ್ವೀಕರಿಸಿ ಮಾತನಾಡಿದ ಅವರು, ವಕೀಲರ ಸಂಘದ ಸದಸ್ಯರ ಅಭಿಪ್ರಾಯದಂತೆ ಕೆಲಸ ಮಾಡುತ್ತೇನೆ, ಸಂಘಕ್ಕೆ ಮೂಲಭೂತ ಸೌಕರ್ಯಗಳನ್ನು ಪ್ರಮಾಣಿಕವಾಗಿ ದೊರಕಿಸಿಕೊಡುತ್ತೇನೆ, ನನ್ನ ಚುನಾವಣಾ ಪ್ರಣಾಳಿಕೆಯಲ್ಲಿ ಪ್ರಕಟಣೆ



ಉದಯವಾಹಿನಿ ಚಿತ್ರ

ಮಾಡಿದ ಕೆಲಸಗಳು ಅತ್ಯಂತ ಪ್ರಮಾಣಿಕತೆಯಿಂದ ಮಾಡುತ್ತೇನೆ, ಯುವ ವಕೀಲರಿಗಾಗಿ ಕಂಪ್ಯೂಟರ್ ತರಬೇತಿ ನೀಡುವ ಕೆಲಸ ಮಾಡುತ್ತೇನೆ ಹಿರಿಯ ಮತ್ತು ಯುವ ವಕೀಲರ ಸಲಹೆ ಸೂಚನೆ ಮೇರೆಗೆ ವಕೀಲ ಸದಸ್ಯರ ಸಮಸ್ಯೆಗಳಿಗೆ ಪರಿಹಾರ ಮಾಡುವ ನಿಟ್ಟಿನಲ್ಲಿ ಕೆಲಸ ಮಾಡುತ್ತೇನೆ ಎಂದರು. ಮಾಜಿ ಅಧ್ಯಕ್ಷ ಶ್ರೀಮಂತ ಕಟ್ಟಿಮನಿ ಮಾತನಾಡಿ ವಕೀಲರು ಸಹನೆಭಾವನೆಯಿಂದ ಇರಬೇಕು,

**ಸಮಾಜ ಸೇವೆ ದೊಡ್ಡ ಕಾರ್ಯ**

ವಕೀಲರ ಸಂಘದ ಜವಾಬ್ದಾರಿ ಅತ್ಯಂತ ದೊಡ್ಡದು, ನ್ಯಾಯಾಲಯದ ಕೆಲಸದ ಜೊತೆ ಸಮಾಜ ಸೇವೆ ಮಾಡುವುದು ಅತ್ಯಂತ ದೊಡ್ಡ ಕಾರ್ಯವಾಗಿದೆ. ಹಿರಿಯ ವಕೀಲರಾದ ಶಿವಶರಣಪ್ಪ ಜಾಪಟ್ಟಿ,ಜಗನ್ನಾಥ ಅಗ್ನಿಹೋತ್ರಿ, ಮಾಣಿಕರಾವ ಗುಲಗುಂಜಿ, ಮಾತನಾಡಿದರು. ವಕೀಲರು ಶಾಮರಾವ ಹೊಸಮನಿ ಸ್ವಾಗತಿಸಿದರು,ವಕೀಲರು ಚಂದ್ರಶೇಖರ ಮಾಲಸಾ ನಿರೂಪಿಸಿದರು,ವಕೀಲರು ಹಣಮಂತ ಹಿರೇಮನಿ ವಂದಿಸಿದರು.

ಸರ್ಕಾರಿ ಸಹಾಯಕ ಆಯೋಜಕ ಶಾಂತಕುಮಾರ ಪಾಟೀಲ, ಮಲ್ಲಿಕಾರ್ಜುನ ಸುಕಂದ, ದೇವಿಂದ್ರಪ್ಪ ಜಾಬೀನ್, ಸೂರ್ಯಾಕಾಂತ ಕರಣಿಕರ್, ಮಲ್ಲಿಕಾರ್ಜುನ ರಾಮತೀರ್ಥ, ಸುನೀಲಕುಮಾರ ಸೋಲಾಪೂರ, ಶರಣುಪಾಟೀಲ ಮೋತಕಪಳ್ಳಿ, ಚಂದ್ರಶೇಟ್ಟಿ ಜಾಧವ, ವಿಜಯಕುಮಾರ ರಾಠೋಡ್, ಅರುಣ ಹೇಗ್ಡೆ, ಜಗನ್ನಾಥ ಗಂಜಗಿರಿ, ಶ್ರೀನಿವಾಸ್ ಬಂಡಿ, ಗುಂಡಪ್ಪ ಗೋಖಲೆ, ರಾಜಶೇಖರ ರೆಡ್ಡಿ, ಡಿಕೆ ಚವ್ಹಾಣ, ನೀಲಕಂಠ ರಾಠೋಡ್, ನಂದಿಕುಮಾರ ಪಾಟೀಲ, ಇರ್ಫಾನ್ ಪಟೇಲ, ರವೀಂದ್ರ ಹೂವಿನಭಾವಿ, ಮಲ್ಲಿಕಾರ್ಜುನ ಕೋಟಪಲ್ಲಿ, ಅನೇಕರಿದ್ದರು.

> **ನನ್ನ ಅವಧಿಯಲ್ಲಿ ಮಾಡಿದ ಕೆಲಸ ತೃಪ್ತಿ ತಂದಿದೆ, ನನ್ನ ಕೆಲಸಗಳೆ ಸಾಕ್ಷಿಯಾಗಿದ್ದು, ಹುಮನಾಬಾದ್ ಎಂಎಲ್ಸಿ ಸಂಘಕ್ಕೆ 01ಲಕ್ಷ ಕೊಟ್ಟಿದ್ದಾರೆ, ಬೀದರ ಮಾಜಿ ಎಂಪಿ 02ಲಕ್ಷ ಕೊಟ್ಟಿದ್ದಾರೆ ಸಂಘವು ಸದ್ಬಳಕೆ ಮಾಡಿಕೊಳ್ಳಬೇಕು, ನ್ಯಾಯಾಲಯ ಕಟ್ಟಡಕ್ಕಾಗಿ ಸರ್ಕಾರದಿಂದ 1.33ಕೋಟಿ ಅನುದಾನ ಟೆಂಡರ್ ಪ್ರಕ್ರಿಯೆ ಆಗಿದೆ ಮುಂದೆ ಸಂಘದ ಜವಾಬ್ದಾರಿ ಚನ್ನಾಗಿ ನಿಭಾಯಿಸಿಕೊಂಡು ಹೋಗಬೇಕು ಎಂದರು.**

# ಸ್ವಸ್ಥ ಸಮಾಜಕ್ಕಾಗಿ ಮಹಿಳೆಯರ ಸ್ವಾಸ್ಥ್ಯ ಅಗತ್ಯ: ಡಾ.ವಿಜಯಲಕ್ಷ್ಮೀ ಪಿ.

• **ಉದಯವಾಹಿನಿ, ದೊಡ್ಡಸಿದ್ದವ್ವನಹಳ್ಳಿ**

ಮಹಿಳೆಯರು ತಮ್ಮ ಆರೋಗ್ಯವನ್ನು ಬಲಪಡಿಸಿಕೊಂಡಾಗ ಮಾತ್ರ ಕುಟುಂಬ ಮತ್ತು ಸಮಾಜ ಅಭಿವೃದ್ಧಿ ಸಾಧ್ಯ, ಎಂದು ಡಾ. ವಿಜಯಲಕ್ಷ್ಮೀ ಪಿ. ಅಭಿಪ್ರಾಯ ಪಟ್ಟಿದ್ದಾರೆ

ಕೇಂದ್ರ ಸರ್ಕಾರದ ಮಹಾತ್ವಕಾಂಕ್ಷೆಯ ಸ್ವಸ್ಥ ನಾರಿ ಸಶಕ್ತ ಪರಿವಾರ್ ಯೋಜನೆಯ ಅಡಿಯಲ್ಲಿ ಜಿಲ್ಲಾ ಪಂಚಾಯತಿ ಚಿತ್ರದುರ್ಗ, ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರ ದೊಡ್ಡಸಿದ್ದವ್ವನಹಳ್ಳಿ, ಮತ್ತು ಸರ್ಕಾರಿ ಆಯುಷ್ಮಾನ್ ಆರೋಗ್ಯ ( ಆಯುಷ್) ಮಂದಿರ ಜೆ ಎನ್ ಕೋಟೆ ಸಹಯೋಗದಲ್ಲಿ ದಿನಾಂಕ 30/9/2025ರ ಮಂಗಳವಾರ ಡಿ.ಎಸ್.ಹಳ್ಳಿ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಅಂಗನವಾಡಿ ಕೇಂದ್ರದ ಆವರಣದಲ್ಲಿ ಆಯೋಜಿಸಲಾಗಿದ್ದ ಮಹಿಳಾ ಆರೋಗ್ಯ ಜಾಗೃತಿ ಕಾರ್ಯಕ್ರಮ ಉದ್ದೇಶಿಸಿ ಅವರು ಮಾತನಾಡುತ್ತಾ ಸ್ವಸ್ಥ ನಾರಿ ಸಶಕ್ತ ಪರಿವಾರ್ ಯೋಜನೆ ಕೇಂದ್ರ ಸರ್ಕಾರದ ಹೊಸ ಮಹತ್ವಾಕಾಂಕ್ಷಿ ಆರೋಗ್ಯ ಮತ್ತು ಪೋಷಣಾ


ಉದಯವಾಹಿನಿ ಚಿತ್ರ

ಅಭಿಯಾನವಾಗಿದ್ದು. ಈ ಅಭಿಯಾನವನ್ನು 2025ರ ಸೆಪ್ಟೆಂಬರ್ 17ರಿಂದ ಅಕ್ಟೋಬರ್ 2ರ ವರೆಗೆ ದೇಶದೆಲ್ಲೆಡೆ ನಡೆಸಲಾಗುತ್ತಿದೆ ಮಹಿಳೆಯರು ಈ ಯೋಜನೆಯನ್ನು ಸದುಪಯೋಗ ಪಡಿಸಿಕೊಂಡು ಯಶಸ್ಸುಗೊಳಿಸಬೇಕಾಗಿದೆ ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಶ್ರೀಧರ್ ಮಹಿಳೆಯರು ತಮ್ಮ ಆರೋಗ್ಯ ಕಾಪಾಡಿಕೊಳ್ಳಲು ಕಾಲಕ್ಕೆ ತಕ್ಕಂತೆ ದೇಹದ ರಕ್ತದೊತ್ತಡ, ದೇಹದ ತೂಕ, ಹಿಮೋಗ್ಲೋಬಿನ್, ಪೋಷಣಾ ಸ್ಥಿತಿ, ಮಾನಸಿಕ ಆರೋಗ್ಯ ಇತ್ಯಾದಿಗಳನ್ನು ಆಗಾಗ ತಪಾಸಣೆ ಮಾಡಿಸಿಕೊಳ್ಳಬೇಕು ಕೇಂದ್ರ ಸರ್ಕಾರದ ಮಹಾತ್ವಕಾಂಕ್ಷೆಯ ಸ್ವಸ್ಥ ನಾರಿ ಸಶಕ್ತ ಪರಿವಾರ ಯೋಜನೆಯಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ನೀಡಲಾಗುತ್ತದೆ ಮಹಿಳೆಯರು ಇದರ ಸೂಕ್ತ ಲಾಭವನ್ನು ಪಡೆಯಬೇಕು ಎಂದು ತಿಳಿಸಿದರು.

ದೊಡ್ಡಸಿದ್ದವ್ವನಹಳ್ಳಿ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ|| ಸೈಯದ್ ನಾಜಿಯಾ ಸಮ್ರೈಲ್ ಅಧ್ಯಕ್ಷತೆ ವಹಿಸಿದ್ದ ಈ ಕಾರ್ಯಕ್ರಮದಲ್ಲಿ ಡಿ.ಎಸ್ ಹಳ್ಳಿ ಆರೋಗ್ಯ ನಿರೀಕ್ಷಣಾಧಿಕಾರಿ , ಯೋಗ ತರಬೇತುದಾರ ರವಿ ಕೆ.ಅಂಬೇಕರ್, ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿ ಕುಮಾರಿ ಅನಿತಾ, ಗ್ರಾಮದ ಮುಖಂಡ ರುದ್ರಮುನಿ, ಅಂಗನವಾಡಿ ಕಾರ್ಯಕರ್ತೆ ರಾಜೇಶ್ವರಿ ಇನ್ನಿತರರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಆಯುಷ್ ಇಲಾಖೆಯ ಜೆ ಎನ್ ಕೋಟೆ ಆಯುರ್ವೇದ ಕೇಂದ್ರದ ವತಿಯಿಂದ ಗ್ರಾಮಸ್ಥರಿಗೆ ಆರೋಗ್ಯ ಅಭಿವೃದ್ಧಿಗೊಳಿಸುವ ಚ್ಯವನಪ್ರಾಶ್ ಸೇರಿದಂತೆ ಇನ್ನಿತರ ಔಷಧಿಗಳನ್ನು ಉಚಿತವಾಗಿ ವಿತರಿಸಲಾಯಿತು.

# ತಾಯಿ, ಶಿಶು ಸಾವು: ವೈದ್ಯರ ಅಮಾನತಿಗೆ ಆಗ್ರಹ

• **ಉದಯವಾಹಿನಿ, ಕಂಪ್ಲಿ**

ಇಲ್ಲಿಯ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಹೆರಿಗೆ ಬಳಿಕ ತಾಯಿ ಮತ್ತು ಶಿಶು ಸಾವಿಗೆ ಕಾರಣರಾದ ವೈದ್ಯ ಮತ್ತು ಶುಶ್ರೂಷಕಿಯನ್ನು ಅಮಾನತು ಮಾಡುವಂತೆ ಒತ್ತಾಯಿಸಿ ಅನೇಕ ದಲಿತಪರ ಸಂಘಟನೆಗಳು ಡಾ.ಅಂಬೇಡ್ಕರ್ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು. ಬಾಣಂತಿ ಸಿ. ಚಂದ್ರಮ್ಮ, ನವಜಾತ ಶಿಶು ಸಾವಿಗೆ ಕಾರಣರಾದ ಸ್ತ್ರೀರೋಗ ತಜ್ಞ ಡಾ.ರವೀಂದ್ರ ಕನಕೇರಿ, ಶುಶ್ರೂಷಕಿ ರಜನಿ ಅವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ ಅಮಾನತುಗೊಳಿಸಬೇಕು. ಮೃತರ ಕುಟುಂಬಕ್ಕೆ 20 ಲಕ್ಷ ಪರಿಹಾರ ನೀಡಬೇಕು. 15 ದಿನದಲ್ಲಿ ಬೇಡಿಕೆ ಈಡೇರದಿದ್ದಲ್ಲಿ ಕಂಪ್ಲಿ ಬಂದ್ ಮಾಡಿ ತೀವ್ರ ಪ್ರತಿಭಟನೆ ನಡೆಸಲಾಗುವುದು ಎಂದು ಪ್ರತಿಭಟನಕಾರರು ಎಚ್ಚರಿಸಿದರು.

ದಲಿತಪರ ಸಂಘಟನೆಗಳ ಪದಾಧಿಕಾರಿಗಳಾದ ಜಿ.ರಾಮಣ್ಣ, ಕೆ.ಶಂಕರ ನಂದಿಹಾಳ್, ಮೃತ ಬಾಣಂತಿಯ ಪತಿ ರಾಮಸಾಗರ ಸಿ.ವೀರೇಶ್, ಸಿ.ಎ.ಚನ್ನಪ್ಪ, ಎ.ಎಸ್. ಯಲ್ಲಪ್ಪ, ವಕೀಲ ಸೋಮಪ್ಪ ಚಲವಾದಿ, ದೊಡ್ಡ ಬಸವರಾಜ ಬಡಗಿ, ವಕೀಲ ರುದ್ರಪ್ಪ, ಸಿ.ಶಿವಕುಮಾರ್,


ಉದಯವಾಹಿನಿ ಚಿತ್ರ

ಹೊಳ್ಳೆಪ್ಪ, ಸಿ.ವಿರುಪಾಕ್ಷಿ, ರಾಘವೇಂದ್ರ, ಶಂಕರ್, ಎಸ್. ಚಂದ್ರಶೇಖರಗೌಡ, ಎಂ.ರತ್ನಮ್ಮ, ವಿ.ಉಷಾ ಸೇರಿ ಅನೇಕರು ಘಟನೆ ಖಂಡಿಸಿ ಮಾತನಾಡಿದರು. ಎಫ್ಐಆರ್ ದಾಖಲಿಸುವ ಕುರಿತಂತೆ ಕಾನೂನಡಿ ತೆಗೆದುಕೊಳ್ಳಬೇಕಾದ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಪಿಐ ಕೆ.ಬಿ.ವಾಸುಕುಮಾರ್ ತಿಳಿಸಿದರು. ಜಿಲ್ಲಾ ಆರ್.ಸಿ.ಎಚ್ ಅಧಿಕಾರಿ ಡಾ.ಹನುಮಂತಪ್ಪ ಮನವಿ ಸ್ವೀಕರಿಸಿ, ಈಗಾಗಲೇ ಇಬ್ಬರನ್ನು ವರ್ಗಾಯಿಸಲಾಗಿದೆ. ವಿಚಾರಣಾ ವರದಿಯನ್ನು ಇಲಾಖೆ ಆಯುಕ್ತರಿಗೆ ಸಲ್ಲಿಸಿದ್ದು, ಮುಂದಿನ ಕ್ರಮ ಜರುಗಿಸಲಿದ್ದಾರೆ ಎಂದು ತಿಳಿಸಿದರು. ಗ್ರೇಡ್-2 ತಹಶೀಲ್ದಾರ್ ಎಂ.ಆರ್.ಷಣ್ಮುಖ ಅವರಿಗೂ ಮನವಿ ಸಲ್ಲಿಸಿದರು.

# ಸೇತುವೆ ಸಮಸ್ಯೆಗಿಲ್ಲ ಶಾಶ್ವತ ಪರಿಹಾರ

• **ಉದಯವಾಹಿನಿ, ಮಾನ್ವಿ**

ತಾಲ್ಲೂಕಿನಲ್ಲಿ ರಾತ್ರಿ ಸುರಿದ ಧಾರಾಕಾರ ಮಳೆಯಿಂದಾಗಿ ಗ್ರಾಮೀಣ ಭಾಗದ ಹಳ್ಳ ಕೊಳ್ಳಗಳು ತುಂಬಿ ಹರಿಯುತ್ತಿವೆ. ನೀರಿನ ರಭಸಕ್ಕೆ ಮುನ್ನೂರು ಗ್ರಾಮದ ಹಳ್ಳಕ್ಕೆ ನಿರ್ಮಿಸಿದ ತಾತ್ಕಾಲಿಕ ಸೇತುವೆ ಸಂಪೂರ್ಣವಾಗಿ ಕೊಚ್ಚಿ ಹೋಗಿದೆ. ಕಳೆದು ತಿಂಗಳು ಮಳೆಯಾದಾಗ ಈ ಸೇತುವೆ ಕೊಚ್ಚಿ ಹೋಗಿತ್ತು. ಸಣ್ಣ ನೀರಾವರಿ ಸಚಿವ ಎನ್.ಎಸ್.ಬೋಸರಾಜು ಹಾಗೂ ಶಾಸಕ ಜಿ.ಹಂಪಯ್ಯ ನಾಯಕ ಸ್ಥಳಕ್ಕೆ ಭೇಟಿ ನೀಡಿ ತಾತ್ಕಾಲಿಕ ಸೇತುವೆ ನಿರ್ಮಾಣಕ್ಕೆ ಅಧಿಕಾರಿಗಳಿಗೆ ಸೂಚಿಸಿದ್ದರು. ಇದೀಗ ಎರಡನೇ ಬಾರಿಗೆ ಹಳ್ಳದ ತಾತ್ಕಾಲಿಕ ಸೇತುವೆ ಕೊಚ್ಚಿಹೋಗಿದ್ದು ಮುಷ್ಟೂರು ಗ್ರಾಮಸ್ಥರಿಗೆ ರಸ್ತೆ ಸಂಪರ್ಕ ಕಡಿತಗೊಂಡಿದೆ.

**ಶಾಶ್ವತ ಸೇತುವೆ ನಿರ್ಮಾಣಕ್ಕೆ ಮನವಿ:** 2009ರಲ್ಲಿ ಸಂಭವಿಸಿದ್ದ ನೆರೆ ಹಾವಳಿಯಿಂದ ಮುನ್ನೂರು ಹಳ್ಳದ ಸೇತುವೆ ಕೊಚ್ಚಿ ಹೋದ ಕಾರಣ ಸೇತುವೆ ಮೇಲ್ದರ್ಜೆಗೇರಿಸಿ ನಿರ್ಮಾಣ ಕಾಮಗಾರಿ ಆರಂಭಿಸಲಾಗಿತ್ತು.

ತಾಂತ್ರಿಕ ಕಾರಣಗಳಿಂದಾಗಿ ಆ ಸೇತುವೆ ಕಾಮಗಾರಿ ಪೂರ್ಣಗೊಳ್ಳದೆ ನನೆಗುದಿಗೆ ಬಿದ್ದಿತ್ತು. ಕೆಲ ವರ್ಷಗಳ


ಉದಯವಾಹಿನಿ ಚಿತ್ರ

ಹಿಂದೆ ಆ ಅಪೂರ್ಣಗೊಂಡ ಸೇತುವೆಯೂ ನೀರಿನ ರಭಸಕ್ಕೆ ಕೊಚ್ಚಿ ಹೋಗಿತ್ತು. ಕಾರಣ ತಾತ್ಕಾಲಿಕ ಸೇತುವೆ ನಿರ್ಮಿಸಲಾಗಿತ್ತು. ಈ ತಾತ್ಕಾಲಿಕ ಸೇತುವೆ ಹಲವು ಬಾರಿ ಕೊಚ್ಚಿ ಹೋಗಿ ದುರಸ್ತಿಗೊಳ್ಳುವುದು ಸಾಮಾನ್ಯವಾಗಿದೆ. ಕಾರಣ ಶಾಶ್ವತವಾಗಿ ಎತ್ತರದ ಸೇತುವೆ ನಿರ್ಮಾಣಕ್ಕೆ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ತುರ್ತು ಕ್ರಮ ಕೈಗೊಳ್ಳಲು ಗ್ರಾಮಸ್ಥರು ಮನವಿ ಮಾಡಿದ್ದಾರೆ.

# ಸರ್ಕಾರದ ಗಮನ ಸೆಳೆಯಲು ಯತ್ನ: ಎಂ.ಬಿ.ಪಾಟೀಲ ಭರವಸೆ

• **ಉದಯವಾಹಿನಿ, ವಿಜಯಪುರ**

ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪಿಸುವುದಾಗಿ ಸರ್ಕಾರ ಅಧಿಕೃತವಾಗಿ ಘೋಷಣೆ ಮಾಡುವವರೆಗೂ ಹೋರಾಟ ನಿಲ್ಲಿಸುವುದಿಲ್ಲ, ಧರಣಿ ಕೈಬಿಡುವುದಿಲ್ಲ ಎಂದು ಧರಣಿನಿರತರು ಸಚಿವ ಎಂ.ಬಿ.ಪಾಟೀಲ ಅವರಿಗೆ ತಿಳಿಸಿದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿ 12 ದಿನಗಳಿಂದ ನಡೆಯುತ್ತಿರುವ ಅನಿರ್ದಿಷ್ಟಾವಧಿ ಧರಣಿ ಸ್ಥಳಕ್ಕೆ ಸೋಮವಾರ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಭೇಟಿ ನೀಡಿ, ಮನವಿ ಸ್ವೀಕರಿಸಿದರು. ವಿಜಯಪುರದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆಗೆ ನನ್ನ ವಿರೋಧವಿಲ್ಲ. ಇದಕ್ಕೆ ಸಹಮತ ಇದೆ. ಪಿಪಿಪಿ ಮಾದರಿ ಕೈಬಿಟ್ಟು, ಜಿಲ್ಲೆಯ ಜನರ ಬೇಡಿಕೆಯಂತೆ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪಿಸಲು ಕ್ರಮಕೈಗೊಳ್ಳುವಂತೆ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ, ವೈದ್ಯಕೀಯ ಶಿಕ್ಷಣ ಸಚಿವರ ಗಮನಕ್ಕೆ ತರುತ್ತೇನೆ. ಹೋರಾಟ ಕೈಬಿಡಿ ಎಂದು ಸಚಿವ ಎಂ.ಬಿ.ಪಾಟೀಲ ಮನವಿ ಮಾಡಿದರು.

ಸಚಿವರ ಮನವಿಯನ್ನು ಹೋರಾಟಗಾರರ



ಉದಯವಾಹಿನಿ ಚಿತ್ರ

ತಿರಸ್ಕರಿಸಿದರು.

**ತಪ್ಪು ತಿಳಿವಳಿಕೆ ಬೇಡ:** ಖಾಸಗಿ ಸಹಭಾಗಿತ್ವದಲ್ಲಿ ವೈದ್ಯಕೀಯ ಕಾಲೇಜು ಸ್ಥಾಪಿಸಿದರೆ ಬಡ, ಮಧ್ಯಮ ವರ್ಗದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅನುಕೂಲ ಆಗುವುದಿಲ್ಲ ಎಂಬುದು ತಪ್ಪು ತಿಳಿವಳಿಕೆ.

ಖಾಸಗಿಯಾಗಿರಲಿ ಅಥವಾ ಸರ್ಕಾರಿ ವೈದ್ಯಕೀಯ ಕಾಲೇಜು ಆಗಿಲಿ, ಎಲ್ಲರೂ ನೀಟ್ ಬರೆದು ಆಯ್ಕೆ ಆಗಬೇಕಾಗುತ್ತದೆ. ಸರ್ಕಾರ ನಿಗದಿ ಪಡಿಸಿದ ಶುಲ್ಕವನ್ನು ಪಾವತಿಸಬೇಕಾಗುತ್ತದೆ. ಇದರಲ್ಲಿ ಯಾವುದೇ ರಿಯಾಯಿತಿ ಇರುವುದಿಲ್ಲ' ಎಂದು ಸಚಿವರು ಹೇಳಿದರು.

'ನನ್ನದೇ ಸ್ವಂತ ಡೀಮ್ಸ್ ವೈದ್ಯಕೀಯ ಕಾಲೇಜು ಇದ್ದರೂ, ಅದರಲ್ಲಿ ನನ್ನ ಮಕ್ಕಳಿಗೆ ಒಂದು ಸೀಟು ಕೊಡಲು ಸಾಧ್ಯವಾಗುವುದಿಲ್ಲ ಎಂಬುದನ್ನು ಹೋರಾಟಗಾರರು ತಿಳಿದುಕೊಳ್ಳಬೇಕು ಎಂದರು.

### ಕುಮ್ಮಕ್ಕಿನಿಂದ ಕೆಲವರ ಹೋರಾಟ

**ಇನ್ನೂ 10 ವೈದ್ಯಕೀಯ ಕಾಲೇಜು ಸ್ಥಾಪಿಸುವ ಶಕ್ತಿ ನನಗಿದೆ. ಪಿಪಿಪಿಗೂ ನನಗೂ ಯಾವುದೇ ಸಂಬಂಧವಿಲ್ಲ. ಹೋರಾಟದಲ್ಲಿ ತೊಡಗಿರುವವರಲ್ಲಿ ಶೇ90ರಷ್ಟು ಜನ ನೈಜ ಹೋರಾಟಗಾರರು. ಇನ್ನು ಕೆಲವರು ಕುಮ್ಮಕ್ಕಿನಿಂದ ಹೋರಾಟದಲ್ಲಿ ತೊಡಗಿದ್ದಾರೆ ಎಂದು ಸಚಿವ ಎಂ.ಬಿ.ಪಾಟೀಲ ಆರೋಪಿಸಿದರು. ವಿಜಯಪುರದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಪ್ರಾರಂಭಿಸಲು ಸುಸಜ್ಜಿತ ಜಾಗ ಮೂಲಸೌಕರ್ಯಗಳಿವೆ. ಹಾಗಂತ ಕೇವಲ 100 ಕೋಟಿಯಲ್ಲಿ ಕಾಲೇಜು ಸ್ಥಾಪಿಸಲು ಆಗುವುದಿಲ್ಲ ಕನಿಷ್ಠ 500 ಕೋಟಿ ಬೇಕಾಗುತ್ತದೆ ಎಂದರು.**

# ಪ್ರತಿ ಹೆಕ್ಟೇರ್ ಬೆಳೆ ಹಾನಿಗೆ ಹೆಚ್ಚುವರಿ 8500 ಪರಿಹಾರ

• **ಉದಯವಾಹಿನಿ, ಬೀದರ್**

ಭಾರಿ ಮಳೆಯಿಂದ ಬೀದರ್ ಸೇರಿದಂತೆ ಕಲ್ಯಾಣ ಕರ್ನಾಟಕದ 4 ಜಿಲ್ಲೆಗಳ ಲಕ್ಷಾಂತರ ಎಕರೆ ಭೂಮಿಯಲ್ಲಿ ಸಂಭವಿಸಿರುವ ಬೆಳೆ ಹಾನಿಗೆ ಎನ್‌ಡಿಆರ್‌ಎಫ್‌ಎಸ್‌ಡಿಆರ್‌ಎಫ್ ಪರಿಹಾರದ ಜೊತೆಗೆ ಪ್ರತಿ ಹೆಕ್ಟೇರ್‌ಗೆ ಹೆಚ್ಚುವರಿಯಾಗಿ 8500 ಘೋಷಿಸಿರುವ ಮುಖ್ಯಮಂತ್ರಿಗಳ ನಿರ್ಧಾರವನ್ನು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಸ್ವಾಗತಿಸಿದ್ದಾರೆ. ನಮ್ಮ ಭಾಗದ ಸಚಿವರ, ಜನಪ್ರತಿನಿಧಿಗಳ ಮನವಿಗೆ ಸ್ಪಂದಿಸಿ ಮಂಗಳವಾರ ಬೀದರ್ ಜಿಲ್ಲೆಯಲ್ಲಿ ಮಳೆ ಹಾನಿ ಪ್ರದೇಶದ ವೈಮಾನಿಕ ಸಮೀಕ್ಷೆ ನಡೆಸಿದ ರೈತ ಪರ ಕಾಳಜಿಯ ಮುಖ್ಯಮಂತ್ರಿಗಳು, ಸಂಕಷ್ಟದಲ್ಲಿರುವ ರೈತರಿಗೆ ಹೆಚ್ಚುವರಿಯಾಗಿ 8500 ರೂ.



ಘೋಷಿಸಿದ್ದಾರೆ ಎಂದು ಮಂಗಳವಾರ ರಾತ್ರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಎನ್‌ಡಿಆರ್ ಎಫ್ ನಿಯಮಗಳಂತೆ ಖುಷ್ಕಿ, ನೀರಾವರಿ ಜಮೀನು, ಬಹು ಬೆಳೆ ಹಾನಿಗೆ ಕ್ರಮವಾಗಿ ಪ್ರತಿ ಹೆಕ್ಟೇರ್ ಗೆ 8,500, 17,000 ಹಾಗೂ 25, 500 ಪರಿಹಾರ ಇದೆ. ಇದರ ಜೊತೆಗೆ ಮುಖ್ಯಮಂತ್ರಿಯವರು ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ಪ್ರತಿ ಹೆಕ್ಟೇರ್‌ಗೆ 8,500 ಘೋಷಿಸಿ ರೈತರ ನೆರವಿಗೆ ನಿಂತಿದ್ದಾರೆ. ಇದಕ್ಕಾಗಿ ಧನ್ಯವಾದ ಅರ್ಪಿಸುತ್ತೇನೆ ಎಂದು ತಿಳಿಸಿದ್ದಾರೆ. ಬೆಳೆ ಹಾನಿಯ ಜೊತೆಗೆ ಹಾನಿಗೊಳಗಾಗಿರುವ ಮನೆಗಳಿಗೆ ಪರಿಹಾರ ನೀಡಲಾಗುತ್ತಿದ್ದು, ಮೂಲಸೌಕರ್ಯ ಮರು ನಿರ್ಮಾಣ, ದುರಸ್ತಿಗೂ ರಾಜ್ಯ ಸರ್ಕಾರ ಕ್ರಮ ವಹಿಸಲಿದೆ, ಮಹಾ ಮಳೆಯಿಂದ ತೀವ್ರ ಬಾಧಿತವಾಗಿರುವ ಕಲ್ಯಾಣ ಕರ್ನಾಟಕದ ಜಿಲ್ಲೆಗಳಿಗೆ ಕೇಂದ್ರ ಸರ್ಕಾರ ಕೂಡ ಹೆಚ್ಚಿನ ಪರಿಹಾರ ನೀಡಬೇಕು ಎಂದು ಆಗ್ರಹಿಸುವುದಾಗಿ ಹೇಳಿದ್ದಾರೆ. ಮಹಾರಾಷ್ಟ್ರದಿಂದ ಮಾಂಜ್ರಾ ನದಿಗೆ ನೀರು ಬಿಟ್ಟಿರುವ ಕಾರಣ ಬೀದರ್ ಜಿಲ್ಲೆಯ ಹಲವು ಪ್ರದೇಶಗಳಲ್ಲಿ ಜಮೀನುಗಳು ಜಲಾವೃತವಾಗಿದ್ದು, ಮಣ್ಣು ಕೊಚ್ಚಿಹೋಗಿದೆ. ಇದರಿಂದ ಭೂಮಿ ಸತ್ವವೇ ಕಳೆದುಕೊಂಡಿದ್ದು, ರೈತರು ಕಂಗಾಲಾಗಿದ್ದಾರೆ.

ಹೀಗಾಗಿ ಹೆಚ್ಚಿನ ಪರಿಹಾರ ಘೋಷಿಸಬೇಕು ಎಂದು ತಾವು ಮುಖ್ಯಮಂತ್ರಿಗಳಿಗೆ ಮನವಿ ಮಾಡಿದ್ದೆ. ಇದಕ್ಕೆ ಮುಖ್ಯಮಂತ್ರಿಗಳು ಸ್ಪಂದಿಸಿ ಹೆಚ್ಚಿನ ಪರಿಹಾರ ಘೋಷಿಸಿದ್ದಾರೆ ಎಂದಿದ್ದಾರೆ.

ಕಾಂಗ್ರೆಸ್ ಸರ್ಕಾರ ರೈತರಪರ ಸರ್ಕಾರ ಆಗಿದ್ದು, ಯಾರೂ ಆತಂಕ ಪಡುವ ಅಗತ್ಯವಿಲ್ಲ. ಸಂಕಷ್ಟದಲ್ಲಿರುವ ರೈತರೊಂದಿಗೆ ಸರ್ಕಾರ, ತಾವು ನಿಲ್ಲುವುದಾಗಿಯೂ ಈಶ್ವರ ಖಂಡ್ರೆ ಆಶ್ವಾಸನೆ ನೀಡಿದ್ದಾರೆ.

# ಅಧಿಕಾರಿಗಳ ಹೆಗಲಿಗೆ ಜನರನ್ನು ಕರೆತರುವ ಹೊಣೆ

• **ಉದಯವಾಹಿನಿ, ಕೊಪ್ಪಳ**

ಜಿಲ್ಲೆಯ ವಿವಿಧ ಕಾರ್ಯಕ್ರಮಗಳ ಉದ್ಘಾಟನೆ, ಶಂಕುಸ್ಥಾಪನೆ ಮತ್ತು ಫಲಾನುಭವಿಗಳಿಗೆ ಸೌಲಭ್ಯಗಳನ್ನು ವಿತರಿಸುವ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅ. 6ರಂದು ಜಿಲ್ಲಾಕೇಂದ್ರಕ್ಕೆ ಬರಲಿದ್ದು, ಜನ ಮತ್ತು ಸರ್ಕಾರದ ಯೋಜನೆಗಳ ಫಲಾನುಭವಿಗಳನ್ನು ಕರೆ ತರುವ ಹೊಣೆಯನ್ನು ಅಧಿಕಾರಿಗಳಿಗೆ ವಹಿಸಲಾಗಿದೆ. ಈ ಕುರಿತು ಜಿಲ್ಲಾಡಳಿತ ಭವನದಲ್ಲಿ ಪೂರ್ವಭಾವಿ ಸಭೆ ನಡೆಸಿದ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ಜನರ ಅಭಿವೃದ್ಧಿಗಾಗಿ ನಮ್ಮ ಸರ್ಕಾರ ಎರಡೂವರೆ ವರ್ಷಗಳ ಅವಧಿಯಲ್ಲಿ ಕಾರ್ಯಕ್ರಮಗಳನ್ನು ರೂಪಿಸಿದೆ. ಮುಖ್ಯಮಂತ್ರಿ ಪಾಲ್ಗೊಳ್ಳುವ ಕಾರ್ಯಕ್ರಮ ಅಚ್ಚುಕಟ್ಟಾಗಿ ನೆರವೇರಿಸಲು ಸಮಿತಿಗಳನ್ನು ರಚಿಸಿ ನಿಮಗೆ ನೀಡಲಾಗಿರುವ ಜವಾಬ್ದಾರಿಯನ್ನು ಸಮರ್ಪಕವಾಗಿ ನಿರ್ವಹಣೆ ಮಾಡಬೇಕು' ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪ್ರಸ್ತುತ ಜಿಲ್ಲೆಯಲ್ಲಿ ನಿರಂತರವಾಗಿ ಮಳೆಯಾಗುತ್ತಿದ್ದು, ಹಾನಿಯಾದ ಬೆಳೆಗಳಿಗೆ ತಕ್ಷಣ ಪರಿಹಾರ ನೀಡಲು ಆಯಾ ತಾಲ್ಲೂಕುಗಳ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಸಮೀಕ್ಷೆಯನ್ನು ಜಿಲ್ಲೆಯಲ್ಲಿ


ಉದಯವಾಹಿನಿ ಚಿತ್ರ

ಅ. 5ರ ಒಳಗೆ ಮುಗಿಸಬೇಕು ಎಂದು ಸೂಚಿಸಿದರು.

ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರೂ ಆದ ಶಾಸಕ ಬಸವರಾಜ ರಾಯರಡ್ಡಿ ಅವರು ಮಾತನಾಡಿ 'ಸರ್ಕಾರದ ಕಾರ್ಯಕ್ರಮ ಆಗಿರುವುದರಿಂದ ಸಾರಿಗೆ, ಪೆಂಡಾಲ್, ಆಹಾರದ ವ್ಯವಸ್ಥೆಯನ್ನು ಅಚ್ಚುಕಟ್ಟಾಗಿ ಮಾಡಬೇಕು. ಕಾರ್ಯಕ್ರಮಕ್ಕೆ ಜನರನ್ನು ಕರೆತರಲು ಅಧಿಕಾರಿಗಳಿಗೆ ಜವಾಬ್ದಾರಿ ನೀಡಿ ಗ್ರಾಮವಾರು ಕಮಿಟಿ ಮಾಡಬೇಕು ಎಂದು ನಿರ್ದೇಶನ ನೀಡಬೇಕು. ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಮಾತನಾಡಿ 2.5 ಸಾವಿರ ಕೋಟಿ ಕಾಮಗಾರಿಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನಡೆಯಲಿವೆ. ಪ್ರತಿ ತಾಲ್ಲೂಕುವಾರು ತಹಶೀಲ್ದಾರ್ ಹಾಗೂ ಇಒಗಳ ಸಮಿತಿ ಮಾಡಲಾಗಿದ್ದು, ಪ್ರತಿ ಭೂತ್‌ಗೂ ಒಂದು ಬಸ್ ವ್ಯವಸ್ಥೆ ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

## ಮಾಜಿ ಸೈನಿಕ, ಪದವಿ ವಿದ್ಯಾರ್ಥಿ ಮೇಲೆ ಪೊಲೀಸರಿಂದಲೇ ಮಾರಣಾಂತಿಕ ಹಲ್ಲೆ, ಭಾರೀ ಆಕ್ರೋಶ

# ಮೆಸ್ ಮುಚ್ಚುವ ವಿಚಾರದಲ್ಲಿ ಕ್ಷುಲ್ಲಕ ಕಾರಣಕ್ಕೆ ಮಾತಿನ ಚಕಮಕಿ

• **ಉದಯವಾಹಿನಿ, ಧಾರವಾಡ**

ನಗರದ ಸಪ್ತಾಪುರದ ಸ್ವಾಮಿ ವಿವೇಕಾನಂದ ವೃತ್ತದಲ್ಲಿ ಸೈನಿಕ್ ಎಂಬ ಹೆಸರಿನಲ್ಲಿ ಮೆಸ್ ನಡೆಸುತ್ತಿದ್ದ ಮಾಜಿ ಸೈನಿಕ ಹಾಗೂ ಕಾನೂನು ಪದವಿ ವಿದ್ಯಾರ್ಥಿಯ ಮೇಲೆ ಪೊಲೀಸರು ಕ್ಷುಲ್ಲಕ ಕಾರಣಕ್ಕೆ ಮಾರಣಾಂತಿಕ ಹಲ್ಲೆ ನಡೆಸಿದ ಘಟನೆ ನಡೆದಿದೆ.

ಬೆಳಗಾವಿ ಜಿಲ್ಲೆ ಚಿಕ್ಕೋಡಿ ತಾಲ್ಲೂಕಿನ ಜಾಗನೂರ ಗ್ರಾಮದ ರಾಮಪ್ಪ ನಿಪ್ಪಾಣಿ ಎಂಬುವರೇ ಹಲ್ಲೆಗೆ ಒಳಗಾದ ಮಾಜಿ ಸೈನಿಕ. ಧಾರವಾಡ ಉಪನಗರ ಠಾಣೆ ಪೊಲೀಸರು ತೀವ್ರ ಹಲ್ಲೆ ನಡೆಸಿ ಈಗ ನನ್ನ ಪತಿಯ ಮೇಲೆಯೇ ಸುಳ್ಳು ಆರೋಪ ಹೊರಿಸುತ್ತಿದ್ದಾರೆ ಎಂದು ಮಾಜಿ ಸೈನಿಕನ ಪತ್ನಿ ಗೀತಾ ಆರೋಪಿಸಿದ್ದಾರೆ. ಪೊಲೀಸರೇ ಭಕ್ಷರಾದರೇ ಎಂಬ ಮಾತುಗಳು ಸಾಮಾಜಿಕ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿವೆ. ಮೆಸ್ ಮಾಲೀಕರಾದ ಮಾಜಿ ಸೈನಿಕ ರಾಮಪ್ಪ ಎಂದಿನಂತೆ ಮೆಸ್ ಕದ ಅರ್ಧ ಮುಚ್ಚಿ ರಾತ್ರಿ 11ಕ್ಕೆ ಸ್ನೇಹಿತರೊಂದಿಗೆ ಊಟಕ್ಕೆ ಕುಳಿತಿದ್ದರು. ಈ ವೇಳೆ ಅಲ್ಲಿಗೆ ಬಂದ ನಾಲ್ಕು ಜನ ಪೊಲೀಸರು ಮೆಸ್ ಇನ್ನು ಏಕೆ ಬಂದ್ ಮಾಡಿಲ್ಲ ಎಂದು ಪ್ರಶ್ನಿಸಿದ್ದರು. ಏಕಾಏಕಿ ರಾಮಪ್ಪನ ಕೊರಳುಪಟ್ಟಿ



**ಮದ್ಯ ಸೇವಿಸಿಯೇ ಅಲ್ಲಿಗೆ ಬಂದಿದ್ದರು**

ಹಿಡಿದು ಅವಾಚ್ಯವಾಗಿ ನಿಂದಿಸಿದ್ದರು. ಆಗ ಮಾತಿಗೆ ಮಾತು ಬೆಳೆದಿದ್ದು, ಇದರಿಂದ ಸಿಟ್ಟಾದ ಪೊಲೀಸರು ಮತ್ತಷ್ಟು ಸಿಬ್ಬಂದಿಯನ್ನು ಸ್ಥಳಕ್ಕೆ ಕರೆಯಿಸಿ ಮಾಜಿ ಸೈನಿಕನಿಗೆ ಹಾಗೂ ಅಪ್ರಾಪ್ತ ವಯಸ್ಸಿನ ಇಬ್ಬರು ಬಾಲಕರನ್ನು ಹೊಡೆದಿದ್ದಾರೆ. ಅವರು ಮದ್ಯ ಸೇವಿಸಿಯೇ ಅಲ್ಲಿಗೆ ಬಂದಿದ್ದರು ಎಂದು ಪ್ರತ್ಯಕ್ಷದರ್ಶಿಗಳು ಮಾಧ್ಯಮಗಳಿಗೆ ತಿಳಿಸಿದ್ದಾರೆ.

ಘಟನೆಯಲ್ಲಿ ರಾಮಪ್ಪನ ಕಾಲು, ತಲೆಗೆ ತೀವ್ರ ಗಾಯಗಳಾಗಿವೆ. ರಾಮಪ್ಪನ ಮೈಮೇಲೆ ಪೊಲೀಸ್ ಬೆಲ್ಟ್, ಲಾಠಿ, ಬೂಟಿನ ಗುರುತುಗಳಿವೆ. ಪೊಲೀಸರು ನಡೆಸಿದ ಹಲ್ಲೆ ವಿಡಿಯೋ ಇದೀಗ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.

### ಪೊಲೀಸರ ವಿರುದ್ಧವೇ ಆರೋಪ

**ಧಾರವಾಡದ ಸಪ್ತಾಪುರದಲ್ಲಿ ಸೈನಿಕ್ ಮೆಸ್ ನಡೆಸುತ್ತಿದ್ದ ಮಾಜಿ ಸೈನಿಕ ರಾಮಪ್ಪ ನಿಪ್ಪಾಣಿ ಮೇಲೆ ಪೊಲೀಸರು ರಾತ್ರಿ ತೀವ್ರ ಹಲ್ಲೆ ನಡೆಸಿದ್ದಾರೆ. ಮೆಸ್ ಮುಚ್ಚುವ ವಿಚಾರದಲ್ಲಿ ಕ್ಷುಲ್ಲಕ ಕಾರಣಕ್ಕೆ ನಡೆದ ಮಾತಿನ ಚಕಮಕಿ ಸಂಬಂಧ ಮಾರಣಾಂತಿಕ ಹಲ್ಲೆ ನಡೆಸಲಾಗಿದೆ. ರಾಮಪ್ಪನ ಕಾಲು, ತಲೆಗೆ ತೀವ್ರ ಗಾಯಗಳಾಗಿದ್ದು, ಪತ್ನಿ ಗೀತಾ ಪೊಲೀಸರ ವಿರುದ್ಧವೇ ಆರೋಪ ಮಾಡಿದ್ದಾರೆ. ಹಲ್ಲೆಯ ವಿಡಿಯೋ ವೈರಲ್ ಆಗಿದ್ದು, ಪೊಲೀಸರು ಸಿಸಿಟಿವಿ ಕ್ಯಾಮೆರಾ ಒಡೆದು ಡಿವಿಆರ್ ಕಿತ್ತುಕೊಂಡು ಹೋಗಿರುವುದು ಅನುಮಾನ ಮೂಡಿಸಿದೆ.**

ಈ ಮಧ್ಯೆ, ಪೊಲೀಸರು ಮೆಸ್‌ನಲ್ಲಿ ಅಳವಡಿಸಿದ ಸಿಸಿಟಿವಿ ಕ್ಯಾಮೆರಾ ಒಡೆದುಹಾಕಿ, ಡಿವಿಆರ್ ಕಿತ್ತುಕೊಂಡು ಹೋಗಿರುವುದು ನಾನಾ ಅನುಮಾನಗಳನ್ನು ಹುಟ್ಟುಹಾಕಿದೆ.

ರಾತ್ರಿಯೇ ಇನ್ಸ್‌ಪೆಕ್ಟರ್ ಘಟನಾ ಸ್ಥಳಕ್ಕೆ ಭೇಟಿ ನೀಡಿದ್ದರು. ಆದರೆ ರಾಮಪ್ಪನಿಗೆ ರಕ್ತಸ್ರಾವ ಆಗುತ್ತಿದ್ದರೂ ಅವರನ್ನು ಆಸ್ಪತ್ರೆಗೆ ದಾಖಲಿಸಿರಲಿಲ್ಲ. ನಂತರ ವಕೀಲರ ಸಹಾಯದಿಂದ ರಾಮಪ್ಪನನ್ನು ಕಿಮ್ಸ್‌ಗೆ ದಾಖಲಿಸಲಾಗಿದೆ. ಈ ಸಂಬಂಧ ಉಪನಗರ ಠಾಣೆಗೆ ದೂರು ನೀಡಿದರೂ ಅವರು ಎಫ್‌ಐಆರ್ ದಾಖಲಿಸಲು ಹಿಂದೇಟು ಹಾಕಿದ್ದಾರೆ ಎಂದು ಗೀತಾ ಆರೋಪಿಸಿದ್ದಾರೆ.

ಆದರೆ, ಪೊಲೀಸರ ಮೇಲೆಯೇ ಮಾಜಿ ಸೈನಿಕ ಹಲ್ಲೆ ನಡೆಸಿದ್ದಾನೆ ಎಂದು ಪೊಲೀಸ್ ಇಲಾಖೆ ಪ್ರಕರಣವನ್ನು ಸಮರ್ಥಿಸಿಕೊಳ್ಳಲು ಯತ್ನಿಸುತ್ತಿದೆ. ಘಟನೆ ಕುರಿತ ವಿಡಿಯೋದಲ್ಲಿ ಪೊಲೀಸರು ರೌಡಿಗಳಂತೆ ವರ್ತಿಸಿದ್ದು, ಈ ಬಗ್ಗೆ ಸರಕಾರ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಪ್ರತ್ಯಕ್ಷದರ್ಶಿ ಜಾಧವ ತಿಳಿಸಿದ್ದಾರೆ. ಈ ಬಗ್ಗೆ ಉಪನಗರ ಠಾಣೆಯಲ್ಲಿ ದೂರು- ಪ್ರತಿದೂರು ದಾಖಲಾಗಿವೆ. ನನ್ನ ಪತಿ ಸ್ನೇಹಿತರೊಂದಿಗೆ ಊಟ ಮಾಡುತ್ತಿದ್ದರು. ಈ ವೇಳೆ ಅವಾಚ್ಯವಾಗಿ ನಿಂದಿಸುತ್ತ ಬಂದ ಪೊಲೀಸರು ಹಲ್ಲೆ ನಡೆಸಿದ್ದಾರೆ. ಬಿಡಿಸಲು ಹೋದ ನನ್ನ ಮೇಲೂ ಹಲ್ಲೆಗೆ ಮುಂದಾದಾಗ ನಾನು ಓಡಿ ಹೋದೆ. ರಕ್ತಸ್ರಾವ ಆಗುತ್ತಿದ್ದರೂ ನನ್ನ ಗಂಡನನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಲೂ ಬಿಡಲಿಲ್ಲ. ಮೆಸ್‌ನಲ್ಲಿದ್ದ ಸಿಸಿಟಿವಿ ಕ್ಯಾಮೆರಾ ಒಡೆದು ಹಾಕಿದರು. ನಮಗೆ ನ್ಯಾಯ ಕೊಡಿಸಿ ಎಂದು ಹಲ್ಲೆಗೊಳಗಾದ ವ್ಯಕ್ತಿಯ ಪತ್ನಿ ಗೀತಾ ರಾಮಪ್ಪ ನಿಪ್ಪಾಣಿ ಆಗ್ರಹಿಸಿದ್ದಾರೆ.



## ಮಿನಿ ನ್ಯೂಸ್

# ರೈತರ ಲಾಭಾಂಶ ಮಧ್ಯವರ್ತಿಗಳ ಪಾಲು

• **ಉದಯವಾಹಿನಿ, ಮುಂಡರಗಿ**

ರೈತರು ಕಷ್ಟಪಟ್ಟು ಬೆಳೆದ ಬೆಳೆಗಳ ಲಾಭಾಂಶವನ್ನು ಮಧ್ಯವರ್ತಿಗಳು ಪಡೆದುಕೊಳ್ಳುತ್ತಿದ್ದು, ಇದರಿಂದ ರೈತರ ಬೆಳೆಗಳಿಗೆ ಸೂಕ್ತ ಬೆಲೆ ದೊರೆಯದಂತಾಗಿದೆ ಎಂದು ಜಿಲ್ಲಾ ಕೃಷಿ ಉಪ ನಿರ್ದೇಶಕಿ ಸ್ಫೂರ್ತಿ ಜಿ.ಎಸ್. ಅಭಿಪ್ರಾಯಪಟ್ಟರು. ತಾಲ್ಲೂಕಿನ ಡಂಬಳ ಗ್ರಾಮದಲ್ಲಿ ಚಂದನವನ ರೈತ ಉತ್ಪಾದಕ ಕಂಪನಿಯಿಂದ ಗ್ರಾಮದ ತೋಂಟದಾರ್ಯ ಕಲ್ಯಾಣ ಕೇಂದ್ರದಲ್ಲಿ ಹಮ್ಮಿಕೊಂಡಿದ್ದ ಕಂಪನಿಯ ವಾರ್ಷಿಕೋತ್ಸವ ಹಾಗೂ ಸಾಧಕ ರೈತರಿಗೆ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು. ರೈತ ಮಹಿಳೆಯರ ಆರ್ಥಿಕ ಸ್ವಾವಲಂಬನೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಹಲವು ಯೋಜನೆ ಜಾರಿಗೆ ತಂದಿವೆ. ಚಂದನವನ ರೈತ ಉತ್ಪಾದಕ ಕಂಪನಿ ಅಗತ್ಯ ನೆರವು ನೀಡುತ್ತಲಿದ್ದು, ರೈತ ಮಹಿಳೆಯರು ಸ್ವಾವಲಂಬಿಯಾಗಬೇಕು ಎಂದು ಸಲಹೆ ನೀಡಿದರು. ಪ್ರಗತಿಪರ ರೈತ ರವಿ ಸಜ್ಜನರ ಮಾತನಾಡಿ, ರೈತರು ರೈತ ಉತ್ಪಾದಕ ಕಂಪನಿಗಳ ಮೇಲೆ ವಿಶ್ವಾಸದಿಂದ ಕಾರ್ಯ ನಿರ್ವಹಿಸಬೇಕು ಆಗ ಮಾತ್ರ ಅಭಿವೃದ್ಧಿ ಹೊಂದಲು ಸಾಧ್ಯ ಎಂದರು. ಬಸವರಾಜ ಬೇವಿನಮರದ ಅಧ್ಯಕ್ಷತೆ ವಹಿಸಿ ಮಾತನಾಡಿ, ಕೃಷಿ ಚಟುವಟಿಕೆಗಳನ್ನು ಆಧರಿಸಿ ಒಂದು ಕಂಪನಿ ನಡೆಸುವುದು ಕಷ್ಟಸಾಧ್ಯ. ಕಂಪನಿ ಅಭಿವೃದ್ಧಿಗೆ ನೆರವು ನೀಡಿದ ವಿವಿಧ ರೈತಪರ ಸಂಘ ಹಾಗೂ ರೈತರಿಗೆ ಸದಾ ಸ್ಮರಣೀಯ ಎಂದರು.

# ಮೊಬೈಲ್ ಟವರ್ ಸ್ಥಳಾಂತರಕ್ಕೆ ಆಗ್ರಹ

• **ಉದಯವಾಹಿನಿ, ಮುಂಡರಗಿ**

ಪಟ್ಟಣದ ಜನಭರಿತ ಸ್ಥಳದಲ್ಲಿ ಖಾಸಗಿ ಕಂಪನಿಯವರು ಸ್ಥಾಪಿಸಿರುವ ಮೊಬೈಲ್ ಟವರ್ ಹಾಗೂ ಕಟ್ಟಿಗೆ ಅಡ್ಡೆಯನ್ನು ಸ್ಥಳಾಂತರಿಸಬೇಕು ಎಂದು ಒತ್ತಾಯಿಸಿ ಸೋಮವಾರ ಸಾರ್ವಜನಿಕರು ಪುರಸಭೆ ಮುಖ್ಯಾಧಿಕಾರಿ ಶಂಕರ ಹುಲ್ಲಮ್ಮನವರ ಅವರಿಗೆ ಮನವಿ ಸಲ್ಲಿಸಿದರು. ಪಟ್ಟಣದ 17ನೇ ವಾರ್ಡ್‌ನಲ್ಲಿ ಮೊಬೈಲ್ ಟವರ್ ಸ್ಥಾಪಿಸಲಾಗಿದ್ದು, ಅದರಿಂದ ಹೊರಹೊಮ್ಮುವ ವಿದ್ಯುತ್ ತರಂಗಗಳಿಂದ ಜನ, ಜಾನುವಾರುಗಳ ಮೇಲೆ ವ್ಯತಿರಿಕ್ತ ಪರಿಣಾಮ ಬಿರುತ್ತಲಿದೆ. ಇದರಿಂದ ಜನರಿಗೆ ನರ ದೌರ್ಬಲ್ಯ ಸೇರಿದಂತೆ ಪಶು, ಪಕ್ಷಿಗಳು ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿವೆ. ಆದ್ದರಿಂದ ಅದನ್ನು ತಕ್ಷಣ ಸ್ಥಳಾಂತರಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದರು. ವಾರ್ಡ್‌ನ ಮಧ್ಯದಲ್ಲಿ ಕಟ್ಟಿಗೆ ಅಡ್ಡೆ ಕಾರ್ಯನಿರ್ವಹಿಸುತ್ತಿದ್ದು, ಅದರಿಂದ ಹೊರಹೊಮ್ಮುವ ಶಬ್ದದಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ ಎಂದು ದೂರಿದರು. ಮನವಿ ಸ್ವೀಕರಿಸಿ ಮಾತನಾಡಿದ ಮುಖ್ಯಾಧಿಕಾರಿ ಶಂಕರ ಹುಲ್ಲಮ್ಮನವರ ಈ ಕುರಿತು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

# ಸರ್ಕಾರಿ ಹಣ ದುರುಪಯೋಗ: ಅಧಿಕಾರಿಗೆ 7 ವರ್ಷ ಜೈಲು

• **ಉದಯವಾಹಿನಿ, ಕೊಪ್ಪಳ**

ಸರ್ಕಾರಿ ಹಣ ದುರುಪಯೋಗ ಪ್ರಕರಣದಲ್ಲಿ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಭಾಗ್ಯನಗರ ಶಾಖೆಯ ಕಿರಿಯ ಸಹಾಯಕ ಅಧಿಕಾರಿ ಜಿ.ಮಂಜುನಾಥ ಅವರಿಗೆ ಇಲ್ಲಿನ ಸಿಜೆಎಂ ನ್ಯಾಯಾಲಯ ಏಳು ವರ್ಷ ಸಾಧಾರಣ ಜೈಲು ಶಿಕ್ಷೆ ಹಾಗೂ 10 ಸಾವಿರ ದಂಡ ವಿಧಿಸಿದೆ. ಹಾಸನ ಜಿಲ್ಲೆಯ ಗೋರೂರಿನ ಮಂಜುನಾಥ 2002-03ನೇ ಸಾಲಿನಲ್ಲಿ ಇಲ್ಲಿ ಕೆಲಸ ಮಾಡುತ್ತಿದ್ದಾಗ ಮಗ್ಗಕ್ಕೆ ಸಂಬಂಧಿಸಿದ ಪರಿಕರಗಳನ್ನು ಮಾರಾಟ ಮಾಡಿದ್ದ 2.12 ಲಕ್ಷವನ್ನು ಸ್ವಂತಕ್ಕೆ ಬಳಸಿದ್ದರು. ಈ ಕುರಿತು ನಗರ ಪೊಲೀಸ್ ಠಾಣೆಯಲ್ಲಿ 2005ರಲ್ಲಿ ಪ್ರಕರಣ ದಾಖಲಾಗಿತ್ತು.

ತನಿಖಾಧಿಕಾರಿ, ಇನ್ಸ್‌ಪೆಕ್ಟರ್ ಶಿವಲಿಂಗರಾಧ್ಯ ದೋಷಾರೋಪ ಪಟ್ಟಿ ಸಲ್ಲಿಸಿದ್ದರು. ವಿಚಾರಣೆ ನಡೆಸಿದ ಸಿಜೆಎಂ ಕೋರ್ಟ್‌ನ ಮುಖ್ಯ ನ್ಯಾಯಾಧೀಶ ಮಲ್ಕಾರಿ ರಾಮಪ್ಪ ಒಡೆಯರ್ ಆದೇಶಿಸಿದರು. ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕ ವಸಂತ ವಾದ ಮಂಡಿಸಿದ್ದರು.

# ವಸ್ತಾರೆ-ಶೃಂಗೇರಿ ರಸ್ತೆ ಅಭಿವೃದ್ಧಿಗೆ 90 ಕೋಟಿ ಬಿಡುಗಡೆ: ಶಾಸಕ

• **ಉದಯವಾಹಿನಿ, ಜಯಪುರ**

ಮೂಡಿಗೆರೆ ಶಾಸಕಿ ನಯನಾ ಮೋಟಮ್ಮ ಅವರ ಸಹಕಾರದಲ್ಲಿ ವಸ್ತಾರೆ-ಶೃಂಗೇರಿ ರಸ್ತೆ ಅಭಿವೃದ್ಧಿಗೆ 90 ಕೋಟಿ ಬಿಡುಗಡೆಯಾಗಿದ್ದು ಮಳೆಗಾಲ ಮುಗಿದ ಮೇಲೆ ಕಾಮಗಾರಿ ಆರಂಭಗೊಳ್ಳಲಿದೆ ಎಂದು ಶಾಸಕ ಟಿ.ಡಿ.ರಾಜೇಗೌಡ ತಿಳಿಸಿದರು. ಜಯಪುರದಲ್ಲಿ ನೂತನವಾಗಿ ನಿರ್ಮಾಣಗೊಂಡ ಸಮುದಾಯ ಆರೋಗ್ಯ ಕೇಂದ್ರ ಉದ್ಘಾಟನಾ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಹೋಬಳಿ ಕೇಂದ್ರದಲ್ಲಿ ಸುಸಜ್ಜಿತ ಆಸ್ಪತ್ರೆ ನಿರ್ಮಾಣಗೊಂಡಿದ್ದು, ಅ.6ರಂದು ಉದ್ಘಾಟನೆಗೊಳ್ಳಲಿದೆ. ಅಂದೇ ಶೃಂಗೇರಿಯಲ್ಲಿ 100 ಹಾಸಿಗೆಗಳ ಆಸ್ಪತ್ರೆಗೆ ಶಂಕುಸ್ಥಾಪನೆ, ಕೊಪ್ಪದಲ್ಲಿ ನಿರ್ಮಾಣಗೊಂಡ ಆಸ್ಪತ್ರೆ ಉದ್ಘಾಟನೆ ಕೂಡ ನಡೆಯಲಿದೆ. ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಉಸ್ತುವಾರಿ ಸಚಿವ ಕೆ.ಜೆ.ಜಾರ್ಜ್ ಭಾಗವಹಿಸಲಿದ್ದಾರೆ. ಚುನಾವಣೆ ಸಂದರ್ಭದಲ್ಲಿ ರಾಜಕಾರಣ ಮಾಡೋಣ, ಆದರೆ ಅಭಿವೃದ್ಧಿ ವಿಷಯದಲ್ಲಿ ಬೇಡ. ಹೊಸ ಆಸ್ಪತ್ರೆಗೆ ಸಿಬ್ಬಂದಿಯನ್ನು ತಕ್ಷಣ ನೇಮಕ ಮಾಡಿಕೊಳ್ಳಲು ಸೂಚಿಸಲಾಗಿದೆ ಎಂದರು. ಜಯಪುರದ ಶೃಂಗೇರಿ ವೃತ್ತದಿಂದ ಗಣಪತಿ ದೇವಸ್ಥಾನದವರೆಗಿನ ರಸ್ತೆ ವಿಸ್ತರಣೆಗೆ 5 ಕೋಟಿ, ಕೊಪ್ಪ ಸರ್ಕಾರಿ ಆಸ್ಪತ್ರೆ ಚಾವಣಿ ನಿರ್ಮಾಣಕ್ಕೆ 1.36 ಕೋಟಿ ಮಂಜೂರಾಗಿದೆ. ಉದ್ಘಾಟನಾ ಕಾರ್ಯಕ್ರಮಕ್ಕೆ ಸರ್ವಪಕ್ಷ ಮುಖಂಡರ ನೇತೃತ್ವದಲ್ಲಿ ಸ್ವಾಗತಿ ಸಮಿತಿ ರಚಿಸಲಾಗುವುದು ಎಂದರು.

ಉದಯವಾಹಿನಿ ಚಿತ್ರ


# ಜಿಂಕೆ ಬೇಟೆ; ಪ್ರಕರಣ ದಾಖಲು

• **ಉದಯವಾಹಿನಿ, ನರಸಿಂಹರಾಜಪುರ**

ಜಿಂಕೆಯನ್ನು ಭೇಟೆಯಾಡಿ ಅದನ್ನು ಕಾರಿನಲ್ಲಿ ಸಾಗಿಸುತ್ತಿದ್ದವರ ಮೇಲೆ ಅರಣ್ಯ ಇಲಾಖೆ ಅಧಿಕಾರಿಗಳು ದಾಳಿ ನಡೆಸಿದ್ದು, ಜಿಂಕೆ ಕಳೇಬರ, ಕಾರನ್ನು ವಶಪಡಿಸಿಕೊಂಡಿದ್ದಾರೆ. ಬಾಳೆಹೊನ್ನೂರು ಭಾಗದಿಂದ ನರಸಿಂಹರಾಜಪುರದ ಕಡೆಗೆ ಬರುತ್ತಿದ್ದಾಗ ಚಿಕ್ಕ ಅಗ್ರಹಾರದ ಸಮೀಪ ಅರಣ್ಯ ಇಲಾಖೆ ಸಿಬ್ಬಂದಿ ಕಾರನ್ನು ತಡೆದಿದ್ದಾರೆ. ಈ ವೇಳೆ ಆರೋಪಿಗಳು ಪರಾರಿಯಾಗಿದ್ದು, ಆರೋಪಿಗಳ ಶೋಧ ಕಾರ್ಯ ಮುಂದುವರಿದಿದೆ. ಗುಬ್ಬಿಗಾ ಗ್ರಾಮದ ಜಿ.ಎನ್. ಭರತ್ ಹಾಗೂ ಇತರರ ಮೇಲೆ ಪ್ರಕರಣ ದಾಖಲಾಗಿದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕ ಕಾಲ | ಬೆಳಿಗ್ಗೆ | 10:30 ರಿಂದ 12:00 |
| ಯಮಗಂಡ ಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ** ಕೆಲಸದಲ್ಲಿ ಹಿರಿಯರಿಂದ ಒತ್ತಡ, ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ವ್ಯಾಪಾರ ಸಾಲಕ್ಕಾಗಿ ನಿಮ್ಮ ಬಳಿ ಬರುವವರನ್ನು ನಿರ್ಲಕ್ಷಿಸಿ. ಕುಟುಂಬದ ಸದಸ್ಯರು ನಿಮ್ಮ ಜೀವನದಲ್ಲಿ ಒಂದು ವಿಶೇಷ ಸ್ಥಾನವನ್ನು ಹೊಂದಿರುತ್ತಾರೆ. ಪ್ರೀತಿಯಲ್ಲಿ ನಿಮ್ಮ ಅಸಭ್ಯ ವರ್ತನೆಗೆ ಕ್ಷಮೆ ಕೋರಿ.

**ವೃಷಭ** ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ಕೆಲಸದ ನಡುವೆ ಸಾಧ್ಯವಾದಷ್ಟೂ ವಿಶ್ರಾಂತಿ ಪಡೆಯಲು ಪ್ರಯತ್ನಿಸಿ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ಕೆಲವರಿಗೆ ಕುಟುಂಬದಲ್ಲಿ ಒಂದು ಹೊಸ ಆಗಮನ ಸಂಭ್ರಮಾಚರಣೆ ಮತ್ತು ಆನಂದದ ಕ್ಷಣಗಳನ್ನು ತೆರೆದಿಡುತ್ತದೆ.

**ಮಿಥುನ** ಸಾಮಾಜಿಕ ಜೀವನಕ್ಕಿಂತ ಆರೋಗ್ಯಕ್ಕೆ ಆದ್ಯತೆ ನೀಡಬೇಕು. ಇಂದು ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ಥ್ಯರಾಗಿರುತ್ತೀರಿ. ಕೋಪ ಅಲ್ಪಾವಧಿ ಹಾಗೂ ಅದು ನಿಮ್ಮನ್ನು ತೊಂದರೆಯಲ್ಲಿ ಸಿಲುಕಿಸಬಹುದೆಂದು ಅರ್ಥ ಮಾಡಿಕೊಳ್ಳುವ ಸಮಯ.

**ಕರ್ಕಾಟಕ** ಕ್ರೀಡೆಗಳು ಮತ್ತು ಇತರ ಹೊರಾಂಗಣ ಚಟುವಟಿಕೆಗಳಲ್ಲಿ ಭಾಗವಹಿಸುವುದು ನಿಮ್ಮ ಕಳೆದುಕೊಂಡ ಚೈತನ್ಯವನ್ನು ಸಂಗ್ರಹಿಸಲು ಸಹಾಯ ಮಾಡುತ್ತದೆ. ನಿಮ್ಮ ಹಿಂದಿನ ಸಾಲವನ್ನು ಇಂದಿನ ವರೆಗೂ ಮರುಪಾವತಿ ಮಾಡದೇ ಇರುವ ನಿಮ್ಮ ಸಂಬಂಧಿಕರಿಗೆ ಇಂದು ಸಾಲ ಕೊಡಬಾರದು.

**ಸಿಂಹ** ನೀವು ಇತರರೊಡನೆ ನಿಮ್ಮ ಖುಷಿಯ ಕ್ಷಣಗಳನ್ನು ಹಂಚಿಕೊಳ್ಳುತ್ತಿದ್ದಂತೆ ನಿಮ್ಮ ಆರೋಗ್ಯ ಅರಳುತ್ತದೆ. ಆದರೆ ಇದನ್ನು ನಿರ್ಲಕ್ಷಿಸುವುದು ನಿಮಗೆ ತೊಂದರೆ ತರುತ್ತದೆ. ರಾತ್ರಿಯ ವೇಳೆಯಲ್ಲಿ ಇಂದು ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ ಏಕೆಂದರೆ ನಿಮ್ಮ ಮೂಲಕ ಕೊಟ್ಟಿರುವ ಹಣ ಇಂದು ನಿಮಗೆ ಮರಳಿ ಸಿಗಬಹುದು.

**ಕನ್ಯಾ** ಕುಡಿಯುವ ಮತ್ತು ತಿನ್ನುವಾಗ ಎಚ್ಚರದಿಂದಿರಿ. ಅಸಡ್ಡೆ ನಿಮಗೆ ಅನಾರೋಗ್ಯ ತರಬಹುದು. ಇಂದು ನೀವು ನಿಮ್ಮ ಮಕ್ಕಳ ಕಾರಣದಿಂದ ಆರ್ಥಿಕ ಲಬಹವನ್ನು ಪಡೆಯುವ ಸಾಧ್ಯತೆ ಕಂಡುಬರುತ್ತಿದೆ. ಇದರಿಂದ ನೀವು ತುಂಬಾ ಸಂತೋಷಪಡುತ್ತೀರಿ. ನಿಮ್ಮ ಕುಟುಂಬದ ಜೊತೆ ಕಟ್ಟುನಿಟ್ಟಾಗಿ ವರ್ತಿಸಬೇಡಿ .

**ತುಲಾ** ನಿಮ್ಮ ಜಗಳಗಂಟ ನಡವಳಿಕೆ ನಿಮ್ಮ ಸಂಬಂಧವನ್ನು ಶಾಶ್ವತವಾಗಿ ಹಾಳು ಮಾಡಬಹುದಾದ್ದರಿಂದ ಅದನ್ನು ನಿಯಂತ್ರಣದಲ್ಲಿಡಿ. ನೀವು ತೆರೆದ ಮನಸ್ಸನ್ನು ಹೊಂದುವ ಮೂಲಕ ಮತ್ತು ಯಾರಾದರ ವಿರುದ್ಧ ಪೂರ್ವಾಗ್ರಹವನ್ನು ಕೈಬಿಡುವ ಮೂಲಕ ಇದರಿಂದ ಹೊರಬರಬಹುದು.

**ವೃಶ್ಚಿಕ** ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ಹಣದ ಪ್ರಾಮುಖ್ಯತೆ ನಿಮಗೆ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು, ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು.

**ಧನಸ್ಸು** ನಿಮ್ಮ ಆರೋಗ್ಯ ಸುಧಾರಿಸಲು ಸಹಕಾರಿಯಾಗುವ ಕೆಲಸಗಳನ್ನು ಮಾಡಬಹುದಾದ ಒಂದು ದಿನ. ನಿಮ್ಮ ಸೃಜನಶೀಲ ಪ್ರತಿಭೆಯನ್ನು ಸರಿಯಾಗಿ ಬಳಸಿದಲ್ಲಿ ಅದು ಅತ್ಯಂತ ಲಾಭದಾಯಕವೆಂದು ಸಾಬೀತಾಗಬಹುದು. ನೀವು ಕುಟುಂಬದಲ್ಲಿ ಒಂದು ಸಂಧಿಗಾರನಂತೆ ವರ್ತಿಸುತ್ತೀರಿ.

**ಮಕರ** ಧ್ಯಾನ, ಆತ್ಮ ಸಾಕ್ಷಾತ್ಕಾರ ಪ್ರಯೋಜನಕಾರಿಯಾಗಬಹುದು. ಸಹೋದರ-ಸಹೋದರಿಯರ ಸಹಾಯದಿಂದ ಇಂದು ನೀವು ಅರ್ಹ್ತಕವಾಗಿ ಲಾಭವನ್ನು ಪಡೆಯಬಹುದು. ನಿಮ್ಮ ಸಹೋದರ ಸಹೋದರಿಯರ ಸಲಹೆ ತೆಗೆದುಕೊಳ್ಳಿ ಕುಟುಂಬದ ಪರಿಸ್ಥಿತಿ ಇಂದು ನೀವು ಯೋಚಿಸುವ ಹಾಗೆ ಇರುವುದಿಲ್ಲ.

**ಕುಂಭ** ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ಇಂದು ಹೂಡಿಕೆಗಳನ್ನು ಮಾಡಬಾರದು. ನೀವು ಕಛೇರಿಯಲ್ಲಿ ಹೆಚ್ಚು ಸಮಯ ಕಳೆದರೆ ನಿಮ್ಮ ಮನೆಯ ಜೀವನಕ್ಕೆ ಹಾನಿಯಾಗಬಹುದು. ನಿಮ್ಮ ನಗು ಯಾವುದೇ ಅರ್ಥ ಹೊಂದಿಲ್ಲ ನಗುವಿಗೆ ಧ್ವನಿಯಿಲ್ಲ ನಿಮ್ಮ ಸಂಗವಿಲ್ಲದಿದ್ದಾಗ ಹೃದಯ ಬಡಿಯುವುದನ್ನು ಮರೆಯುತ್ತದೆ.

**ಮೀನ** ಇಂದು ನೀವು ಒತ್ತಡಗಳು, ಭಿನ್ನಾಭಿಪ್ರಾಯಗಳನ್ನು ಎದುರಿಸಬೇಕಾಗಬಹುದು ಹಾಗೂ ಇದು ನಿಮಗೆ ಕಿರಿಕಿರಿ, ಆತಂಕದ ಭಾವನೆಗಳನ್ನು ಉಂಟುಮಾಡಬಹುದು. ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ. ಮಕ್ಕಳಿಂದ ಅನಿರೀಕ್ಷಿತ ಸುದ್ದಿ ಸಂತೋಷದ ಕ್ಷಣಗಳನ್ನು ತರುತ್ತದೆ.

# ದುರ್ಗದ ಇತಿಹಾಸ ಸಾರುವಲ್ಲಿ ಮಾರ್ಗದರ್ಶಿಗಳ ಪಾತ್ರ ಮುಖ್ಯ: ತಹಶೀಲ್ದಾರ್ ನಾಗವೇಣಿ

• **ಉದಯವಾಹಿನಿ, ಚಿತ್ರದುರ್ಗ**

ಚಿತ್ರದುರ್ಗ ಕೋಟೆಯ ಇತಿಹಾಸವನ್ನು ಸಾರುವಲ್ಲಿ ಪ್ರವಾಸಿ ಮಾರ್ಗದರ್ಶಿಗಳ ಪಾತ್ರ ಮುಖ್ಯವಾಗಿದುದ್ದು ಎಂದು ರಾಷ್ಟ್ರೀಯ ಹೆದ್ದಾರಿ-48ರ ತಹಶೀಲ್ದಾರ್ ನಾಗವೇಣಿ ಹೇಳಿದರು. ನಗರದ ಕೆಎಸ್‌ಟಿಡಿಸಿ, ಮಯೂರ ದುರ್ಗ ಹೋಟೆಲ್‌ನಲ್ಲಿ ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಹಾಗೂ ಪ್ರವಾಸೋದ್ಯಮ ಇಲಾಖೆಯಿಂದ ಆಯೋಜಿಸಲಾದ ವಿಶ್ವ ಪ್ರವಾಸೋದ್ಯಮ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಾರ್ಗದರ್ಶಿಗಳು ಪ್ರವಾಸಿಗರಿಗೆ ಸೂಕ್ತ, ಸರಿಯಾದ ಮಾಹಿತಿಯನ್ನು ನೀಡುವ ಮೂಲಕ ಚಿತ್ರದುರ್ಗ ಗತಿ ಇತಿಹಾಸವನ್ನು ಕಣ್ಣೆದುರು ತೆರೆದಿಡುವ ಕೆಲಸ ಮಾಡಬೇಕು. ಕೋಟೆ ಸೇರಿದಂತೆ ಜಿಲ್ಲೆಯ ಎಲ್ಲಾ ಪ್ರವಾಸಿ ತಾಣಗಳಲ್ಲಿ ಶುಚಿತ್ವವನ್ನು ಕಾಪಾಡಿಕೊಳ್ಳಬೇಕು. ಪ್ರವಾಸಿಗರಿಗೆ ಮೂಲಭೂತ ಸೌಲಭ್ಯಗಳನ್ನು ನೀಡಬೇಕು. ಹೆಚ್ಚು ಹೆಚ್ಚು ಪ್ರವಾಸಿಗರು ಜಿಲ್ಲೆ ಆಗಮಿಸಿದಷ್ಟು ಜಿಲ್ಲೆ ಪ್ರಗತಿ ಕಾಣಲಿದೆ. ಹೆಚ್ಚು ಪ್ರಚಲಿತವಿಲ್ಲದ ಜಿಲ್ಲೆಯ ಪ್ರವಾಸಿ ತಾಣಗಳನ್ನು ಸಹ ಹೊರಜಗತ್ತಿಗೆ ಪರಿಚಯಿಸುವ ಕೆಲಸವಾಗಬೇಕು ಎಂದು ನಾಗವೇಣಿ ತಿಳಿಸಿದರು.



ಉದಯವಾಹಿನಿ ಚಿತ್ರ

ಮಯೂರ ದುರ್ಗ ಹೋಟೆಲ್ ವ್ಯವಸ್ಥಾಪಕ ಚೇತನ್ ಮಾತನಾಡಿ, ಪ್ರವಾಸೋದ್ಯಮವು ಜನರಿಗಾಗಿ ಮಾಡಿದ ಉದ್ಯಮ ಎಂದು ಪರಿಗಣಿಸಲ್ಪಟ್ಟಿದೆ. ಇದು ಜನರ ನಡುವಿನ ಉತ್ತಮ ಬಾಂಧ್ಯವನ್ನು ಬೆಳೆಸುತ್ತದೆ ಎಂದು ತಿಳಿಸಿದರು.

> **ಜಿಲ್ಲೆಯ ಶ್ರೀಮಂತ ಇತಿಹಾಸ, ವಾಸ್ತುಶಿಲ್ಪ, ಸಾಂಸ್ಕೃತಿಕ ಪರಂಪರೆ, ಮತ್ತು ಪ್ರಕೃತಿ ಸೌಂದರ್ಯವನ್ನು ಪ್ರದರ್ಶಿಸುವ ಮೂಲಕ ಆರ್ಥಿಕ ಮತ್ತು ಸಾಮಾಜಿಕ ಬೆಳಣಿಗೆಗೆ ಪ್ರಮುಖ ಕೊಡುಗೆ ನೀಡುತ್ತದೆ. ಚಿತ್ರದುರ್ಗ ಜಿಲ್ಲೆಯಲ್ಲಿ 2024-29 ರ ಪ್ರವಾಸೋದ್ಯಮ ನೀತಿಯಲ್ಲಿ 39 ಪ್ರವಾಸಿ ತಾಣಗಳನ್ನು ಗುರುತಿಸಲಾಗಿದೆ.**
> **-ಬಿ.ಹೆಚ್. ಶಶಿಕುಮಾರ್, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ**

ಪ್ರವಾಸೋದ್ಯಮ ಮತ್ತು ಸುಸ್ಥಿರ ಪರಿವರ್ತನೆ ಎಂಬ ಧ್ಯೇಯ ವಾಕ್ಯದೊಂದಿಗೆ ದಿನಾಚರಣೆ ಆಚರಿಸಲಾಯಿತು. ಈ ಸಂದರ್ಭದಲ್ಲಿ ಕೋಟೆಗೆ ಭೇಟಿ ನೀಡಿದ ದೇಶಿಯ ಹಾಗೂ ವಿದೇಶಿಯ ಪ್ರವಾಸಿಗರಿಗೆ ಹೂ ಮತ್ತು ಸಿಹಿಯನ್ನು ನೀಡಿ ಅಭಿನಂದಿಸಲಾಯಿತು. ಜ್ಯೋತಿ ರಾಜ್ ಅಲಿಯಾಸ್ ಕೋತಿರಾಜ್ ರವರಿಗೆ ಸನ್ಮಾನಿಸಲಾಯಿತು. ವಿವಿಧ ಕ್ರೀಡಾಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತರಾದ ಪ್ರವಾಸಿ ಮಿತ್ರರಿಗೆ, ಭಾರತೀಯ ಪುರಾತತ್ವ ಇಲಾಖೆಯ ಸಿಬ್ಬಂದಿಗಳಿಗೆ, ಪ್ರವಾಸಿ ಮಾರ್ಗದರ್ಶಿಗಳಿಗೆ ಪದಕಗಳನ್ನು ವಿತರಿಸಲಾಯಿತು. ಜಿಲ್ಲಾ ಪ್ರವಾಸೋದ್ಯಮ ಸಮಾಲೋಚಕ ಮನು.ಕೆ.ಆರ್ ಸ್ವಾಗತಿಸಿದರು. ಬಿ.ಮೊಹಿದ್ದೀನ್ ಖಾನ್ ನಿರೂಪಿಸಿದರು. ಬಸವರಾಜ್.ಟಿ ವಂದಿಸಿದರು.

# ಧಾರವಾಡ ದಸರಾ ಜಂಬೂ ಸವಾರಿ ಉತ್ಸವ


## ಈಶ್ವರ ದೇವಸ್ಥಾನದಿಂದ ಆರಂಭ, ಸಂಸದ ಜಗದೀಶ ಶೆಟ್ಟರ್ ಉದ್ಘಾಟನೆ

• **ಉದಯವಾಹಿನಿ, ಧಾರವಾಡ**

ಧಾರವಾಡದಲ್ಲಿ ಕಳೆದ 21 ವರ್ಷಗಳಿಂದ ಧಾರವಾಡ ಜಂಬೂ ಸವಾರಿ ಉತ್ಸವ ಸಮಿತಿಯಿಂದ ನಡೆಯುತ್ತಿರುವ ಧಾರವಾಡ ದಸರಾ ಜಂಬೂ ಸವಾರಿ ಉತ್ಸವ ಅಕ್ಟೋಬರ್ 1 ರಂದು ಅದ್ದೂರಿಯಾಗಿ ನಡೆಯಲಿದೆ ಎಂದು ಸಮಿತಿ ಅಧ್ಯಕ್ಷ ಗುರುರಾಜ ಹುಣಸಿಮರದ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಅಕ್ಟೋಬರ್ 1 ರಂದು ಮಧ್ಯಾಹ್ನ 12.45ಕ್ಕೆ ಗಾಂಧಿನಗರದ ಈಶ್ವರ ದೇವಸ್ಥಾನದಲ್ಲಿ ಅಂಬಾರಿಗೆ ಪೂಜೆ ನಡೆಯಲಿದ್ದು, ನಂತರ ಸಾರ್ವಜನಿಕ ಸಭೆ ನಡೆಯಲಿದೆ. ಮಧ್ಯಾಹ್ನ 2.30ಕ್ಕೆ ಜಂಬೂಸವಾರಿ ಮೆರವಣಿಗೆ ಚಾಲನೆ ನೀಡಲಾಗುವುದು ಎಂದರು. ಮಾಜಿ ಸಿಎಂ ಹಾಗೂ ಸಂಸದ ಜಗದೀಶ ಶೆಟ್ಟರ್ ಕಾರ್ಯಕ್ರಮ ಉದ್ಘಾಟಿಸುವರು. ಜಂಬೂ ಸವಾರಿಗೆ ಸಚಿವ ಸಂತೋಷ ಲಾಡ್ ಚಾಲನೆ ನೀಡುವರು. ಮುಖ್ಯ ಅತಿಥಿಗಳಾಗಿ ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಭಾಗಹಿಸಲಿದ್ದಾರೆ. ಮೇಯರ್ ಜ್ಯೋತಿ ಪಾಟೀಲ ಹಾಗೂ ಸ್ಥಳೀಯ ಶಾಸಕರು ಭಾಗವಹಿಸುವರು ಎಂದು ಹೇಳಿದರು. ಹುಬ್ಬಳ್ಳಿ ಮೂರುಸಾವಿರ ಮಠದ ಗುರುಸಿದ್ಧ ರಾಜಯೋಗೀಂದ್ರ ಸ್ವಾಮೀಜಿ ಹಾಗೂ ಹಾರನಹಳ್ಳಿಯ ಕೋಡಿಮಠದ ರಾಜಯೋಗೀಂದ್ರ ಸ್ವಾಮೀಜಿಗಳ ಸಾನ್ನಿಧ್ಯದಲ್ಲಿ ಚಾಲನೆ ಸಿಗಲಿದೆ. ಶಿರಹಟ್ಟಿಯ ದಿಂಗಾಲೇಶ್ವರ ಸ್ವಾಮೀಜಿ, ಕೂಡಲಸಂಗಮದ ಜಯ ಮೃತ್ಯುಂಜಯ ಸ್ವಾಮೀಜಿ, ಕೊಪ್ಪಳದ ಗವಿಸಿದ್ದೇಶ್ವರ ಸ್ವಾಮೀಜಿ, ಉಪ್ಪಿನ ಬೆಟಗೇರಿಯ ವಿರುಪಾಕ್ಷ ಸ್ವಾಮೀಜಿ ಹಾಗೂ ಹುನಗುಂದ ಮಠದ ವೀರೇಶ್ವರ ಶಿವಾಚಾರ್ಯರು ಸಾನಿಧ್ಯ ವಹಿಸಲಿದ್ದಾರೆ ಎಂದು ವಿವರಿಸಿದರು.

- ಹುಬ್ಬಳ್ಳಿ ಮೂರುಸಾವಿರ ಮಠದ ಗುರುಸಿದ್ಧ ರಾಜಯೋಗೀಂದ್ರ ಸ್ವಾಮೀಜಿ ಹಾಗೂ ಹಾರನಹಳ್ಳಿಯ ಕೋಡಿಮಠದ ರಾಜಯೋಗೀಂದ್ರ ಸ್ವಾಮೀಜಿಗಳ ಸಾನ್ನಿಧ್ಯದಲ್ಲಿ ಚಾಲನೆ ಸಿಗಲಿದೆ
- ಮುಖ್ಯ ಅತಿಥಿಗಳಾಗಿ ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಭಾಗಹಿಸಲಿದ್ದಾರೆ.



**ಮೆರವಣಿಗೆಗೆ ಆನೆ, ಕುದುರೆ:** ಜಂಬೂ ಸವಾರಿಯು ಈಶ್ವರ ದೇವಸ್ಥಾನದಿಂದ ಆರಂಭಗೊಳ್ಳಲಿದೆ. ಬಾಗಲಕೋಟೆ ಪೆಟ್ರೋಲ್ ಬಂಕ್, ಹೊಸಯಲ್ಲಾಪುರ, ಗಾಂಧಿಚೌಕ್, ಕೆ.ಸಿಸಿ. ಬ್ಯಾಂಕ್, ಸುಭಾಷ ರಸ್ತೆ, ಹಳೇಬಸ್ ನಿಲ್ದಾಣ ಮಾರ್ಗವಾಗಿ ಮೆರವಣಿಗೆ ಕಡಪಾ ಮೈದಾನಕ್ಕೆ ಬಂದು ತಲುಪಲಿದೆ. ಐರಾಣಿ ಹಾಗೂ ಶ್ರೀ ಶೈಲ ಮಠದ ಎರಡು ಆನೆಗಳು, 2 ಕುದುರೆ, 2 ಎತ್ತುಗಳು ಹಾಗೂ 50ಕ್ಕೂ ಹೆಚ್ಚು ಕಲಾ ತಂಡಗಳಿಂದ ಮೆರವಣಿಗೆ ನಡೆಯಲಿದೆ. ಜಂಬೂ ಸವಾರಿಗೆ ಧಾರವಾಡದ ಜನತೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಹುಣಸಿಮರದ ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿಸಮಿತಿ ನಾರಾಯಣ ಕೋಪರ್ಡೆ, ಪಾಂಡುರಂಗ ಕಿರೇಸೂರ, ವಿಲಾಸ ತಿಬೇಲಿ, ಹನುಮೇಶ ಸರಾಫ್ ಇದ್ದರು.

> **ಇಂದು ಸಾರ್ವಜನಿಕ ಸಭೆ**
> ಧಾರವಾಡ ದಸರಾ ಜಂಬೂ ಸವಾರಿ ಉತ್ಸವ ಇಂದು ನಡೆಯಲಿದೆ. ಮಧ್ಯಾಹ್ನ 12.45ಕ್ಕೆ ಈಶ್ವರ ದೇವಸ್ಥಾನದಲ್ಲಿ ಅಂಬಾರಿಗೆ ಪೂಜೆ ಇರುತ್ತದೆ. ನಂತರ ಸಾರ್ವಜನಿಕ ಸಭೆ ನಡೆಯಲಿದೆ. ಮಧ್ಯಾಹ್ನ 2.30ಕ್ಕೆ ಮೆರವಣಿಗೆ ಚಾಲನೆಗೊಳ್ಳಲಿದೆ. ಮಾಜಿ ಸಿಎಂ ಜಗದೀಶ ಶೆಟ್ಟರ್ ಉದ್ಘಾಟಿಸುವರು. ಸಚಿವ ಸಂತೋಷ ಲಾಡ್ ಚಾಲನೆ ನೀಡುವರು. ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಭಾಗವಹಿಸುವರು. ಆನೆ, ಕುದುರೆ, ಎತ್ತುಗಳು ಮೆರವಣಿಗೆಯಲ್ಲಿ ಇರುತ್ತವೆ.

# ಜಾತಿ ಕಲಾಂ 9ರಲ್ಲಿ ಛಲವಾದಿ ಧರ್ಮ ಕಲಾಂ 10ರಲ್ಲಿ ಬೌದ್ಧ ಧರ್ಮ ನಮೂದಿಸಿ: ರಾಮಣ್ಣ ಗೊನವಾರ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಸಿಂಧನೂರು**

ಕರ್ನಾಟಕ ರಾಜ್ಯ ಬಲಗೈ ಜಾತಿಗಳ ಮಹಾ ಒಕ್ಕೂಟ (ಛಲವಾದಿ, ಹೊಲೆಯ ಮಾಲಾ, ಚನ್ನದಾಸರು) ರಾಜ್ಯದಲ್ಲಿ ನಡೆದಿರುವ ಜಾತಿ ಗಣತಿಯಲ್ಲಿ .ಕಾಲಂ 9ರಲ್ಲಿ ಪರಿಶಿಷ್ಟ ಜಾತಿ ಎಂದು, ಉಪ ಜಾತಿ ಕಾಲಂ 10ರಲ್ಲಿ ಛಲವಾದಿ, ಹೊಲೆಯ ಮಾಲಾ, ಚನ್ನದಾಸರು ಎಂದು ನಮೂದಿಸಿ. ಧರ್ಮದ ಕಾಲಂ 10ರಲ್ಲಿ ಬೌದ್ಧ ಧರ್ಮ ಎಂದು ನಮೂದಿಸಬೇಕು ಎಂದು ಛಲವಾದಿ ಮಹಾಸಭಾ ಸಮಿತಿ ಸಿಂಧನೂರು ತಾಲ್ಲೂಕಾಧ್ಯಕ್ಷ ರಾಮಣ್ಣ ಗೊನವಾರ ಕೋರಿದರು.

ನಗರದ ಪತ್ರಿಕಾ ಭವನದಲ್ಲಿ ಬೆಳಗ್ಗೆ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು 1954ರಲ್ಲಿ ಡಾ, ಬಿಆರ್ ಅಂಬೇಡ್ಕರ ತಮ್ಮ 5ಲಕ್ಷ ಅನುಯಾಯಿಗಳೊಂದಿಗೆ ಬೌದ್ಧ ಧರ್ಮದ ದಿಕ್ಷೆ ಪಡೆದಿದದ್ದರು. ನನ್ನ ಜನ ನನ್ನನ್ನು ಅನುಸರಿಸುತ್ತಾರೆ ಹಾಗೂ ಬೌದ್ಧ ಧರ್ಮಕ್ಕಾಗಿ ತಮ್ಮಸರ್ವ ಸ್ವವನ್ನು ತ್ಯಾಗ ಮಾಡಲು ಸಿದ್ದರಾಗುತ್ತಾರೆ ಎಂಬ ಕನಸ್ಸು ಕಂಡಿದ್ದರು. ಆ ಕನಸ್ಸು ನನಸ್ಸು ಮಾಡುವ ಕಾಲ ಬಂದಿದ್ದು.. ಹಾಗಾಗಿ ಧರ್ಮದಕಾಲಂ ಎಲ್ಲರು ಬೌದ್ಧ ಧರ್ಮ ಎಂದು ನಮೂದಿಸಬೇಕು ಎಂದು ತಿಳಿಸಿದರು... ಜಾತಿ ಕಾಲಂ 9ರಲ್ಲಿ ಪರಿಶಿಷ್ಟ ಎಂದು, ಉಪ ಜಾತಿ ಕಾಲಂ 10ರಲ್ಲಿ ಛಲವಾದಿ ಎಂದು ನಮೂದಿಸಿ, ಕಾಲಂ 11 ಧರ್ಮದ ಕಾಲಂ ಬೌದ್ಧ ಧರ್ಮ ಎಂದು ನಮೂದಿಸಿದರೆ. ನಮ್ಮ ಪರಿಶಿಷ್ಟ ಜಾತಿ ಪ್ರಮಾಣ ಪತ್ರ ಹೊಗುವುದು ಎಂಬ ಭಯ ಬೇಡ.. ರಾಜ್ಯದಲ್ಲಿ ಬಿಜೆಪಿ ನೇತೃತ್ವದ ಸರ್ಕಾರ ಇದ್ದಾಗ. ಸಮಾಜ ಕಲ್ಯಾಣ ಸಚಿವರಾಗಿದ್ದ ಗೋವಿಂದ ಕಾರಜೋಳ ತಿದ್ದುಪಡಿ ಮಾಡಿದ್ದಾರೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ. ಜಿಲ್ಲಾ ಮಹಾಸಭಾದ ಉಪಾಧ್ಯಕ್ಷ ಹನುಮಂತಪ್ಪ ಗೊಮರ್ಶಿ ನರಸಪ್ಪ ಕಟ್ಟಿ ಮನೆ. ಸುಕಾಲಪೇಟೆ. ಲಿಂಗಪ್ಪ ಹಂಚಿನಾಳ. ವಿರುಪಣ್ಣ ಬೂದಿಹಾಳ. ಮಹಾಸಭಾದ ತಾಲ್ಲೂಕು ಕಾರ್ಯದರ್ಶಿ. ಶರಣಬಸವ ಮಲ್ಲಾಪುರ ಹನುಮಂತಪ್ಪ. ಸೇರಿದಂತೆ ಇತರರು ಸುದ್ದಿ ಗೋಷ್ಠಿಯಲ್ಲಿ ಇದ್ದರು.

# ಕಿತ್ತೂರು ಕರ್ನಾಟಕಕ್ಕೆ ಪ್ರತ್ಯೇಕ ಸಚಿವಾಲಯಕ್ಕಾಗಿ ಪತ್ರ ಅಭಿಯಾನ

• **ಉದಯವಾಹಿನಿ, ಬೆಳಗಾವಿ**

ಕಲ್ಯಾಣ ಕರ್ನಾಟಕ ಮಾದರಿಯಲ್ಲಿ ಕಿತ್ತೂರು ಕರ್ನಾಟಕಕ್ಕೆ ಪ್ರತ್ಯೇಕ ಸಚಿವಾಲಯ ಸ್ಥಾಪನೆಗಾಗಿ ಸರ್ಕಾರದ ಮಟ್ಟದಲ್ಲಿ ಧ್ವನಿ ಎತ್ತಬೇಕು ಎಂದು ಒತ್ತಾಯಿಸಿ, ಈ ಭಾಗದ ಸಚಿವರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ಸಂಸದರು ಮತ್ತು ರಾಜ್ಯಸಭಾ ಸದಸ್ಯರಿಗೆ ಪತ್ರ ಕಳುಹಿಸುವ ಅಭಿಯಾನ ಹಮ್ಮಿಕೊಂಡಿದ್ದೇವೆ ಎಂದು ಉತ್ತರ ಕರ್ನಾಟಕ ವಿಕಾಸ ವೇದಿಕೆ ಅಧ್ಯಕ್ಷ ಅಶೋಕ ಪೂಜಾರಿ ಹೇಳಿದರು. ನಗರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪತ್ರ ಕಳುಹಿಸುವುದಷ್ಟೇ ಅಲ್ಲ; ಪ್ರತ್ಯೇಕ ತಂಡಗಳ ಮೂಲಕ ಜನಪ್ರತಿನಿಧಿಗಳನ್ನು ಭೇಟಿಯಾಗಿ ಚರ್ಚಿಸಲಾಗುವುದು. ಸರ್ಕಾರದ ಮೇಲೆ ಒತ್ತಡ ತರುವಂತೆ ಒತ್ತಾಯಿಸಲಾಗುವುದು ಎಂದರು.

ಕಲ್ಯಾಣ ಕರ್ನಾಟಕದ ಜತೆಗೆ ನಾವೂ ಹೋರಾಟ ನಡೆಸಿ, ರಾಜ್ಯ ಸರ್ಕಾರಕ್ಕೆ ಬೇಡಿಕೆ ಸಲ್ಲಿಸಿದ್ದೇವೆ. ಆದರೆ, ಸರ್ಕಾರಕ್ಕೆ ಕಲ್ಯಾಣ ಕರ್ನಾಟಕ ಮಾತ್ರ ಕಾಣಿಸುತ್ತಿದೆಯೇ ಹೊರತು, ಕಿತ್ತೂರು ಕರ್ನಾಟಕವಲ್ಲ' ಎಂದು ದೂರಿದರು. ಕಿತ್ತೂರು ಕರ್ನಾಟಕದ ಅಭಿವೃದ್ಧಿ ವಿಚಾರದಲ್ಲಿ ರಾಜ್ಯ ಸರ್ಕಾರ ಇಬ್ಬಗೆ ನೀತಿ ಅನುಸರಿಸುತ್ತಿದೆ. ಕಲ್ಯಾಣ ಕರ್ನಾಟಕಕ್ಕೆ ನೀಡಿದಷ್ಟು ಪ್ರಾಮುಖ್ಯತೆ ಮತ್ತು ಅನುದಾನ ಕಿತ್ತೂರು ಕರ್ನಾಟಕಕ್ಕೆ ಸಿಕ್ಕಿಲ್ಲ ಎಂದು ಆರೋಪಿಸಿದರು. ಕಿತ್ತೂರು ಕರ್ನಾಟಕದಲ್ಲಿ 55 ಶಾಸಕರಿದ್ದಾರೆ. ಈ ಭಾಗಕ್ಕೂ ಪ್ರತ್ಯೇಕ ಸಚಿವಾಲಯದ ಅಗತ್ಯವಿದೆ. ವಿವಿಧ ಪ್ರಮುಖ ಇಲಾಖೆಗಳ ಕಾರ್ಯದರ್ಶಿಮಟ್ಟದ ಕಚೇರಿಗಳನ್ನು ಸ್ಥಳಾಂತರಿಸಿ, ಸುವರ್ಣ ವಿಧಾನಸೌಧವನ್ನು ಆಡಳಿತ ಶಕ್ತಿಕೇಂದ್ರವನ್ನಾಗಿ ಮಾಡಬೇಕು ಎಂಬ ಬೇಡಿಕೆ ನನೆಗುದಿಗೆ ಬಿದ್ದಿದೆ. ಹಾಗಾಗಿ ಪತ್ರ ಕಳುಹಿಸುವ ಅಭಿಯಾನದ ಮೂಲಕ ವಿಭಿನ್ನ ಹೋರಾಟ ಕೈಗೆತ್ತಿಕೊಂಡಿದ್ದೇವೆ ಎಂದು ಹೇಳಿದರು.



# ಅಭಿವೃದ್ಧಿ ಕಾರ್ಯಕ್ಕೆ ಬದ್ಧ

• **ಉದಯವಾಹಿನಿ, ಗುಳೇದಗುಡ್ಡ**

ಪ್ರತಿಯೊಂದು ಅಭಿವೃದ್ಧಿ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಬೇಕು. ತಾವು ಪ್ರಾಮಾಣಿಕವಾಗಿ ಅಭಿವೃದ್ಧಿ ಕಾರ್ಯಕ್ಕೆ ತಾವು ಸದಾ ಬದ್ಧ ಎಂದು ಸಂಸದ ಪಿ.ಸಿ.ಗದ್ದಿಗೌಡರ ಹೇಳಿದರು. ಪಟ್ಟಣದಲ್ಲಿ ಶಿವದಾಸಮಾರ್ಯ ಶಿವಸಿಂಪಿ ಸಮಾಜ ಅಭಿವೃದ್ಧಿ ಸಂಸ್ಥೆ ಹಮ್ಮಿಕೊಂಡಿದ್ದ ಶಿವಶಂಪಿ ಸಮುದಾಯ ಭವನದ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ತಮ್ಮ ಅನುದಾನದಲ್ಲಿ ಸಂಸದರ ನೀತಿಯಿಂದ ಕೈಗೊಳ್ಳುವ ಪ್ರತಿಯೊಂದು ಅಭಿವೃದ್ಧಿ ಕಾರ್ಯಗಳು ಪ್ರಾಮಾಣಿಕವಾಗಿ ಮತ್ತು ಶ್ರದ್ದೆಯಿಂದ ನಡೆಯಬೇಕು. ಸಣ್ಣ ಸಮಾಜಗಳು ಸಂಘಟನೆ ಹೊಂದಬೇಕು ಎಂದರು.

ಆರಂಭಗೊಳ್ಳುವ ಸಮುದಾಯ ಭವನದ ಕಾಮಗಾರಿ ಅರ್ಧಕ್ಕೆ ನಿಲ್ಲದಂತೆ ಸಮಾಜದ ಮುಖಂಡರು ಜಾಗೃತಿ ವಹಿಸಬೇಕು. ಸಮಾಜದಲ್ಲಿನ ಪ್ರತಿಯೊಬ್ಬರೂ ಮುಂದಾಳತ್ವ ವಹಿಸಿ ಸಮುದಾಯ ಭವನ ಅಚ್ಚುಕಟ್ಟಾಗಿ ನಿರ್ಮಿಸಿ ಇತರೆ ಸಮಾಜಕ್ಕೆ ಶಿವಸಿಂಪಿ ಸಮಾಜ ಮಾದರಿಯಾಗಬೇಕು ಎಂದರು.

# ಬೆಳೆ ಹಾನಿ ಪ್ರದೇಶಗಳಿಗೆ ಶಾಸಕ, ಜಿಲ್ಲಾಧಿಕಾರಿ ಬೇಟಿ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬೀಳಗಿ**

ಅತಿಯಾದ ಮಳೆಯಾಗಿದ್ದರಿಂದ ತಾಲ್ಲೂಕಿನಲ್ಲಿ 203 ಮನೆಗಳಲ್ಲಿ ನೀರು ನುಗ್ಗಿದ್ದು ಮತ್ತು ಜಮೀನುಗಳಿಗೆ ನೀರು ನುಗ್ಗಿ ಹಾನಿ ಆಗಿರುವ ಕುರಿತು ತಹಶೀಲ್ದಾರ್ ಗ್ರಾಮಾಡಳಿತಾಧಿಕಾರಿಗಳ ಮೂಲಕ ಬೆಳೆಗಳ ಹಾನಿ ಮತ್ತು ಗ್ರಾಮ ಪಂಚಾಯಿತಿ ಪಿಡಿಒಗಳ ಮೂಲಕ ಮನೆಗಳು ಬಿದ್ದ ಬಗ್ಗೆ ಸಮಗ್ರ ಮಾಹಿತಿ ಪಡೆದು ಜಿಲ್ಲಾಧಿಕಾರಿಗೆ ಕೊಡಬೇಕು. ಸರ್ಕಾರದ ಗಮನಕ್ಕೆ ತಂದು ಸೂಕ್ತ ಪರಿಹಾರ ನೀಡುವಂತೆ ಒತ್ತಾಯಿಸಲಾಗುವುದು ಎಂದು ಶಾಸಕ ಜೆ.ಟಿ. ಪಾಟೀಲ ಹೇಳಿದರು.

ತಾಲ್ಲೂಕಿನ ಬಾಡಗಂಡಿ, ರೊಳ್ಳಿ ಗ್ರಾಮಗಲ್ಲಿ ಮಳೆಯಿಂದ ಹಾನಿಗೊಳಗಾದ ಪ್ರದೇಶಗಳಿಗೆ ಶಾಸಕ ಜೆ.ಟಿ.ಪಾಟೀಲ ಹಾಗೂ ಜಿಲ್ಲಾಧಿಕಾರಿ ಸಂಗಪ್ಪ ಎಂ. ಅವರು ಭೇಟಿ ನೀಡಿ ಪರಿಶೀಲಿಸಿದ ನಂತರ ನಡೆದ ಶಾಸಕ ಜೆ.ಟಿ. ಪಾಟೀಲ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ಮಳೆಯ ಅತಿವೃಷ್ಟಿಯಲ್ಲಿ 15 ಸಾವಿರ ಎಕರೆ ತೋಟಗಾರಿಕೆ ಬೆಳೆ ಹಾಗೂ 20 ಸಾವಿರ ಎಕರೆ ಕೃಷಿ ಉತ್ಪನ ವಿವಿಧ ಬೆಳೆ ಹಾನಿಯಾಗಿದೆ. ತೋಟಗಾರಿಕೆಯಲ್ಲಿ ಈರುಳ್ಳಿ, ತರಕಾರಿ ಕಾಯಿಪಲ್ಲೆ, ಚೆಂಡ ಹೂ ಹಾಗೂ ಅನೇಕ ಬೆಳೆಗಳು ಹಾನಿಯಾಗಿವೆ. ರೈತರ ಹೊಲದಲ್ಲಿದ್ದ ಈರುಳ್ಳಿ ಬೆಳೆ ಹೊಲದಲ್ಲಿಯೇ ಕೊಳೆತು ನಷ್ಟವಾಗಿದೆ. ಜಿಲ್ಲಾಧಿಕಾರಿ ಮುಖಾಂತರ ರೈತರಿಗೆ ತ್ವರಿತವಾಗಿ ಎನ್ ಡಿ ಆರ್ ಎಫ್ ಗೈಡ್‌ಲೈನ್ಸ್ ಪ್ರಕಾರ ಹಣ ಬಿಡುಗಡೆ ಮಾಡಬೇಕು ಎಂದರು. ಮನೆಗಳ ಸರ್ವೆ ಮಾಡಿ, ರೊಳ್ಳಿ ಗ್ರಾಮದಲ್ಲಿ ಅಲ್ಲಾಸಾಬ ಮನಸೂರಸಾಬ ಟಗರನ್ನವರ ಮನೆ ಪೂರ್ಣ ಬಿದ್ದು ಸಂಪೂರ್ಣ ಹಾನಿಯಾಗಿದೆ. ಕೇವಲ 6 ಸಾವಿರ ಪರಿಹಾರ ಹಣದ ವರದಿ ನೀಡಿದ್ದಾರೆ ಎಂದು ಶಾಸಕ ಮತ್ತು ಜಿಲ್ಲಾಧಿಕಾರಿ ಅವರಿಗೆ ಗ್ರಾಮಸ್ಥರು ಗಮನಕ್ಕೆ ತಂದರು, ಗ್ರಾಮಸ್ಥರು ಹೇಳುತ್ತಿದಂತೆ ಜಿಲ್ಲಾಧಿಕಾರಿ ಅವರು ತಹಶೀಲ್ದಾರ್‌ಗೆ ಪರಿಶೀಲನೆ ಮಾಡಲು ಸೂಚನೆ ನೀಡಿದರು.

# ಇಲಾಖಾವಾರು ಸಿಗಬೇಕಾದ ಸೌಲಭ್ಯ ಕಲ್ಪಿಸಿ

• **ಉದಯವಾಹಿನಿ, ಶಿಗ್ಗಾವಿ**

ಪ್ರತಿ ಇಲಾಖೆಗಳು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸಮುದಾಯದ ಜನರಿಗೆ ಶೇಕಡಾವಾರು ಸೌಲಭ್ಯಗಳನ್ನು ನೀಡಿವೆ. ಆಯಾ ಇಲಾಖೆಗಳ ಮುಖ್ಯಸ್ಥರು ಅವರಿಗೆ ಸಿಗಬೇಕಾದ ಸೌಲಭ್ಯಗಳನ್ನು ನೀಡಬೇಕು' ಎಂದು ತಹಶೀಲ್ದಾರ್ ಯಲ್ಲಪ್ಪ ಗೋಣೆಣ್ಣವರ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಸೂಚಿಸಿದರು.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ಕಚೇರಿಗಳ ಸಂಕೀರ್ಣದಲ್ಲಿ ಸೋಮವಾರ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಡೆದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕುಂದುಕೊರತೆ ಸಭೆಯಲ್ಲಿ ಅವರು ಮಾತನಾಡಿದರು. ತಾಲ್ಲೂಕಿನ ಮುತ್ತಳ್ಳಿ ಗ್ರಾಮದಲ್ಲಿ ಸುಮಾರು ವರ್ಷಗಳಿಂದ ಉಳಿಮೆ ಮಾಡಿಕೊಂಡು ಬಂದಿರುವ ಜಮೀನನ್ನು ರೈತರ ಹೆಸರಿನಲ್ಲಿ ನೋಂದಣಿ ಮಾಡಿಕೊಡಬೇಕೆಂದು ರೈತ ಫಕ್ಕೀರಪ್ಪ ಬಾರಕೇರ ಸಭೆಯಲ್ಲಿ ಮನವಿ ಮಾಡಿದರು. ಸರ್ಕಾರಿ ಪಡಾ ಜಮೀನು ಇದ್ದರೆ ನೀಡಬಹುದು. ಬಗರ್ ಹುಕುಂನಲ್ಲಿ ನೀಡಬಹುದು. ಆದರೆ ಇದು ಅರಣ್ಯ ಇಲಾಖೆಗೆ ಸಂಬಂಧಿಸಿದ ಕಾರಣ ನೀಡಲು ಬರುವುದಿಲ್ಲ ಎಂದು ಸ್ಪಷ್ಟನೆ ನೀಡಿದರು.

'ನಿವೃತ್ತ ಸೈನಿಕರಿಗೆ, ಸ್ವಾತಂತ್ರ್ಯ ಹೋರಾಟಗಾರರಿಗೆ ಸರ್ಕಾರಿ ಜಮೀನು ನೀಡಬಹುದು. ನಮ್ಮ ಕ್ಷೇತ್ರದಿಂದ 4 ಅರ್ಜಿಗಳು ಬಂದಿವೆ. ಆದರೆ ನಮ್ಮ ತಾಲ್ಲೂಕಿನಲ್ಲಿ ಯಾವುದೇ ಸರ್ಕಾರಿ ಜಮೀನು ಇಲ್ಲದಿರುವ ಕಾರಣ ನೀಡಿಲ್ಲ. ತಾಲ್ಲೂಕು, ಜಿಲ್ಲೆ ವ್ಯಾಪ್ತಿಯಲ್ಲಿ ಜಮೀನು ಸಿಕ್ಕರೆ ಜಮೀನು ನೀಡಲಾಗುವುದು. ಅಥವಾ ಸ್ಥಳೀಯವಾಗಿ ಮನೆ ಕಟ್ಟಿಕೊಳ್ಳಲು ಖಾಲಿ ನಿವೇಶನಗಳನ್ನು ನೀಡಬಹುದಾಗಿದೆ' ಎಂದರು. 'ತಿಮ್ಮಾಪುರ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಮತ್ತು ನಗರ ಪ್ರದೇಶದಲ್ಲಿ ಮದ್ಯ ಅಕ್ರಮ ಮಾರಾಟ ರಾಜಾರೋಷವಾಗಿ ನಡೆಯುತ್ತಿದೆ. ಎಸ್.ಸಿ, ಎಸ್.ಟಿ ಕಾಲೊನಿಯಲ್ಲಿ ಹೆಚ್ಚಿನ ಮಾರಾಟ ಕಂಡು ಬರುತ್ತಿದೆ. ಆದರೂ ಅಬಕಾರಿ ಇಲಾಖೆ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಈ ಜನಾಂಗದವರು ಕುಡಿತದ ಚಟಕ್ಕೆ ಅಂಟಿಕೊಂಡಿದ್ದಾರೆ. ಮದ್ಯ ಅಕ್ರಮ ಮಾರಾಟ ಮಾಡುವ ಅಂಗಡಿಗಳ ಮಾಲೀಕರ ಮೇಲೆ ಕ್ರಮ ಕೈಗೊಳ್ಳಬೇಕು' ಎಂದು ಒತ್ತಾಯಿಸಿದರು. 'ಮಟ್ಕಾ, ಒಸಿ ಅಡ್ಡಿಗಳ ಮೇಲೆ ದಾಳಿ ಮಾಡಿ ಸುಮಾರು 12 ಪ್ರಕರಣಗಳನ್ನು ದಾಖಲಿಸಿಕೊಂಡು ಅದರಲ್ಲಿ ಭಾಗಿಯಾದ ಸುಮಾರು 60 ಜನರ ಮೇಲೆ ಪ್ರಕರಣ ದಾಖಲಿಸಲಾಗಿದೆ ಎಂದು ಸಿಪಿಐ ವೀರಭದ್ರಯ್ಯ ಹಿರೇಮಠ ಸಭೆಗೆ ತಿಳಿಸಿದರು. ಎಸ್.ಸಿ, ಎಸ್.ಟಿ ಕಾಲೊನಿನಲ್ಲಿ ಸಿ.ಸಿ.ಟಿವಿ ಕ್ಯಾಮೆರಾ ಅಳವಡಿಸಿಬೇಕು. ಸ್ವಚ್ಚತೆಗೆ ಆದ್ಯತೆ ನೀಡಬೇಕು. ಶಿಗ್ಗಾವಿ, ಬಂಕಾಪುರ ಪಟ್ಟಣದಲ್ಲಿ ಪುರಸಭೆ ಕಸ ವಿಲೇವಾರಿ ವಾಹನಗಳು ನಿತ್ಯ ಓಡಾಡಬೇಕು' ಎಂದು ಚಲವಾದಿ ಸಮಾಜದ ತಾಲ್ಲೂಕು ಘಟಕದ ಅಧ್ಯಕ್ಷ ಪ್ರಮೋದ ಚಲವಾದಿ ಸಭೆಗೆ ತಿಳಿಸಿದರು. ಸಮುದಾಯದ ಜನರ ಒಪ್ಪಿಗೆ ಇದ್ದರೆ ಸಿ.ಸಿ.ಟಿ.ವಿ ಕ್ಯಾಮೆರಾ ಅಳವಡಿಸಲಾಗುವುದು ಎಂದು ತಹಶೀಲ್ದಾರ್ ಯಲ್ಲಪ್ಪ ತಿಳಿಸಿದರು.

ಮಡ್ಲಿ ಮತ್ತು ವನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿನ ಶೇ 15ರ ಹಣಕಾಸಿನ ಯೋಜನೆಯಲ್ಲಿ ಅಕ್ರಮವಾಗಿದೆ. ಆದರೆ ಅಧಿಕಾರಿಗಳು ಪರಿಶೀಲನೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮಕೈಗೊಳ್ಳಬೇಕೆಂದು ಮನವಿ ಸಲ್ಲಿಸಿದರು. ಈವರೆಗೆ ಯಾವುದೇ ಕ್ರಮಕೈಗೊಂಡಿಲ್ಲ ಎಂದು ಮುಖಂಡ ಮಹೇಶ ತಳವಾರ ಸಭೆಗೆ ತಿಳಿಸಿದರು. ತಕ್ಷಣ ಪರಿಶೀಲನೆ ನಡೆಸಿ ಕ್ರಮಕೈಗೊಳ್ಳತ್ತೇವೆ ಎಂದು ತಾಲ್ಲೂಕು ಪಂಚಾಯಿತಿ ಇಒ ಮಂಜುನಾಥ ಸಾಳೊಂಕಿ ಹೇಳಿದರು.



ಉದಯವಾಹಿನಿ ಚಿತ್ರ


# ಮತ್ತೆ ಬಂಗ್ಲೆಗುಡ್ಡೆಯತ್ತ ಎಸ್‌ಐಟಿ ಅಧಿಕಾರಿಗಳ ಎಂಟ್ರಿ

• **ಉದಯವಾಹಿನಿ, ಮಂಗಳೂರು**

ಎರಡನೇ ಹಂತದ ಬಂಗ್ಲೆಗುಡ್ಡೆ ಶೋಧಕಾರ್ಯ ಬಳಿಕ, ಬ್ರೇಕ್ ನೀಡಿದ್ದ ಎಸ್‌ಐಟಿ ಅಧಿಕಾರಿಗಳು ಮಂಗಳವಾರ ಮತ್ತೆ ಬಂಗ್ಲೆಗುಡ್ಡೆಗೆ ಮಧ್ಯಾಹ್ನದ ಬಳಿಕ ಎಂಟ್ರಿಯಾಗಿದ್ದಾರೆ. ಎಸ್‌ಐಟಿ ಅಧಿಕಾರಿಗಳು ಲೋಕೋಪಯೋಗಿ ಅಧಿಕಾರಿಗಳ ಜೊತೆಗೆ ಬಂದು ಸೌಜನ್ಯಾ ಮಾವ ವಿಠಲ ಗೌಡ ತೋರಿಸಿರುವ ಸ್ಥಳದ ಸ್ಕೆಚ್ ತಯಾರು ಮಾಡಲು ಭೇಟಿ ನೀಡಿದ್ದಾಗಿ ತಿಳಿದುಬಂದಿದೆ. ಅಳತೆ ಟೇಪ್, ಪುಸ್ತಕ ಪೆನ್ ಹಿಡಿದು ಮಾರ್ಕಿಂಗ್ ಮಾಡಿಕೊಂಡಿದ್ದಾರೆ.

ಇತ್ತೀಚೆಗಷ್ಟೆ ಸೌಜನ್ಯಾ ಮಾವ ವಿಠಲಗೌಡ ಎಸ್‌ಐಟಿ ವಿಚಾರಣೆ ಬಳಿಕ ವಿಡಿಯೋ ಹೇಳಿಕೆ ಬಿಡುಗಡೆ ಮಾಡಿದ್ದರು. ಬಂಗ್ಲೆಗುಡ್ಡೆಯಲ್ಲಿ ಮೂಳೆ, ತಲೆಬುರುಡೆಗಳ ರಾಶಿ ಬಿದ್ದಿವೆ ಎಂದು ಆರೋಪಿಸಿದ್ದರು. ಈ ಹಿನ್ನೆಲೆ ಬಂಗ್ಲೆಗುಡ್ಡೆಯಲ್ಲಿ 2 ದಿನ ಎಸ್‌ಐಟಿ ಕಾರ್ಯಾಚರಣೆ ನಡೆಸಿ, ಭೂಮಿ ಮೇಲ್ಮೈಯಲ್ಲಿದ್ದ ಅಸ್ಥಿಪಂಜರಗಳನ್ನು ಆರಿಸಿ ತಂದಿದ್ದರು. ಇದೀಗ ಕೆಲ ದಿನಗಳ ಬಿಡುವು ಕೊಟ್ಟ ಬಳಿಕ ಎಸ್‌ಐಟಿ ಅಧಿಕಾರಿಗಳು ಭೇಟಿ ನೀಡಿ ಮ್ಯಾಪಿಂಗ್ ಕೆಲಸ ಮಾಡಿದ್ದಾರೆ. ಆರಂಭದಲ್ಲಿ ಅಕ್ರಮ ಶವ ಹೂತ ಪ್ರಕರಣದ ಬಗ್ಗೆ ದೂರು ನೀಡಿದ್ದ ಚಿನ್ನಯ್ಯ ಬಂಗ್ಲೆಗುಡ್ಡೆ ಹಾಗೂ ಸುತ್ತಮುತ್ತ ತೋರಿಸಿದ 17 ಸ್ಥಳಗಳಲ್ಲಿ ಉತ್ಖನನ ಮಾಡಿ, ಅಸ್ಥಿಪಂಜರಗಳ ಶೋಧ ಮಾಡಿದ್ದರು. 2 ಜಾಗದಲ್ಲಿ ಮಾತ್ರ ಮೂಳೆಗಳು ಸಿಕ್ಕಿದ್ದವು. ನಂತರ ಚಿನ್ನಯ್ಯನ ಬಂಧಣ ಆಗಿ ಶಿವಮೊಗ್ಗ ಕಾರಾಗ್ರಹದಲ್ಲಿ ಇಡಲಾಗಿದೆ.


ಉದಯವಾಹಿನಿ ಚಿತ್ರ



> **ಇನ್ನೊಂದೆಡೆ ಎಸ್‌ಐಟಿಯು ಶೀಘ್ರವಾಗಿ ಧರ್ಮಸ್ಥಳ ಪ್ರಕರಣದ ತನಿಖೆ ಮುಕ್ತಾಯಗೊಳಿಸಬೇಕೆಂದು, ಎಲ್ಲರೂ ಬಂದು ದೂರು-ಪ್ರತಿದೂರು ಕೊಡುತ್ತಿದ್ದಾರೆ. ಇನ್ನೂ ವಿಳಂಬ ಆಗುವುದನ್ನು ಎಸ್‌ಐಟಿ ತಪ್ಪಿಸಬೇಕು. ಈಗಾಗಲೇ ಆರಿಸಿ ಪ್ರಯೋಗಾಲಯಕ್ಕೆ ಕಳಿಸಿರುವ ಮೂಳೆಗಳ ಎಫ್‌ಎಸ್‌ಎಲ್ ರಿಪೋರ್ಟ್‌ಗಳು ಇನ್ನಷ್ಟೆ ಬರಬೇಕಿದೆ.**
> **- ಪರಮೇಶ್ವರ್, ಗೃಹಸಚಿವ**

# 514 ಹೆಕ್ಟೇರ್‌ನಲ್ಲಿ ಹೆಸರು: ಖರೀದಿಗೆ ಕೇಂದ್ರ

• **ಉದಯವಾಹಿನಿ, ಹಾವೇರಿ**

ಜಿಲ್ಲೆಯಲ್ಲಿ ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ 514 ಹೆಕ್ಟೇರ್ ಕೃಷಿ ಪ್ರದೇಶದಲ್ಲಿ ಹೆಸರು ಬೆಳೆ ಬೆಳೆಯಲಾಗಿದ್ದು, ಈಗ ಎಲ್ಲಾ ಕಡೆಯೂ ಹೆಸರು ಕಾಳಿನ ಕಟಾವು ಶುರುವಾಗಿದೆ.

ರೈತರಿಗೆ ಅನುಕೂಲ ಕಲ್ಪಿಸುವುದಕ್ಕಾಗಿ ಬೆಂಬಲ ಬೆಲೆ ಯೋಜನೆಯಡಿ ಹೆಸರು ಖರೀದಿ ಮಾಡಲು ಜಿಲ್ಲಾಡಳಿತ ಸಜ್ಜಾಗಿದ್ದು, ಜಿಲ್ಲೆಯ ಎರಡು ಕಡೆಗಳಲ್ಲಿ ಕೇಂದ್ರ ತೆರೆಯಲು ಸಿದ್ಧತೆ ಮಾಡಿಕೊಳ್ಳುತ್ತಿದೆ. ಜಿಲ್ಲೆಯಾದ್ಯಂತ ರೈತರು ಬೆಳೆದಿರುವ ಹೆಸರು ಕಾಳು ಏಕಾಏಕಿ ಮಾರುಕಟ್ಟೆಗೆ ಲಗ್ಗೆ ಇಟ್ಟಿದೆ.



> **ಪ್ರಥಮ ಹಂತದಲ್ಲಿ ಹಾವೇರಿ, ಸವಣೂರು ತಾಲ್ಲೂಕಿನ ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರ ಸಂಘಗಳಲ್ಲಿ ಹೆಸರು ಖರೀದಿ ಕೇಂದ್ರ ತೆರೆಯಲು ಸಂಬಂಧಪಟ್ಟ ಅಧಿಕಾರಿಗಳು ಸಿದ್ಧತೆ ಮಾಡಿಕೊಳ್ಳಬೇಕು ಎಂದರು.**

ಪೂರೈಕೆ ಹೆಚ್ಚಾಗಿರುವ ಕಾರಣದಿಂದ ಬೇಡಿಕೆಯಲ್ಲಿ ವ್ಯತ್ಯಾಸವಾಗಿ ಬೆಲೆ ಇಳಿಕೆ ಆಗಲಿದೆ. ಈ ಕಾರಣದಿಂದ ಬೆಲೆ ಕುಸಿತ ಕಂಡುಬರುವ ವಾತಾವರಣ ನಿರ್ಮಾಣವಾಗಿದೆ. ರೈತರಿಗೆ ಆರ್ಥಿಕ ನಷ್ಟವಾಗಬಾರದೆಂದು ಸರ್ಕಾರವೇ, ಬೆಂಬಲ ಬೆಲೆ ಯೋಜನೆಯಡಿ ಹೆಸರು ಖರೀದಿಗೆ ಮುಂದಾಗಿದೆ. ಹಾವೇರಿ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಕಾರ್ಯಪಡೆ ಸಮಿತಿ ಸಭೆಯಲ್ಲಿ, ಹೆಸರು ಖರೀದಿ ಬಗ್ಗೆ ಚರ್ಚೆ ನಡೆಸಲಾಯಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ, 'ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಸರ್ಕಾರದ ಮಾರ್ಗಸೂಚಿಯಂತೆ ಹೆಸರು ಕಾಳು ಖರೀದಿಗೆ ಅಗತ್ಯ ಕ್ರಮ ಕೈಗೊಳ್ಳಬೇಕು. ಬೇಡಿಕೆಗೆ ಅನುಗುಣವಾಗಿ ಖರೀದಿ ಕೇಂದ್ರಗಳನ್ನು ಆರಂಭಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

# ಬೆಂಬಲ ಬೆಲೆಯಡಿ ಭತ್ತ ಖರೀದಿಗೆ ಸಿದ್ಧತೆ

## ಅಕ್ಟೋಬರ್ 31ರವರೆಗೆ ನೋಂದಣಿಗೆ ಅವಕಾಶ, ದರ ಎಷ್ಟು?

• **ಉದಯವಾಹಿನಿ, ಉಡುಪಿ**

ಜಿಲ್ಲೆಯಲ್ಲಿ ಭತ್ತ ಖರೀದಿಗೆ ಜಿಲ್ಲಾಡಳಿತ ಸಿದ್ಧತೆ ನಡೆಸಿದೆ. ಪ್ರಸಕ್ತ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಭತ್ತ ಖರೀದಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಡಿಸಿ ಸೂಚನೆ ನೀಡಿದ್ದಾರೆ. ಬೆಂಬಲ ಬೆಲೆ ಭತ್ತ ಖರೀದಿಗೆ ಈಗಾಗಲೆ ಟಾಸ್ಕ್‌ಫೋರ್ಸ್ ಸಭೆ ಕೂಡ ನಡೆದಿದೆ.

**ಬೆಂಬಲ ಬೆಲೆಯಡಿಯಲ್ಲಿ ಭತ್ತ ಖರೀದಿಗೆ ದರ ನಿಗದಿ:** ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಭತ್ತ ಖರೀದಿಗೆ ಸಾಮಾನ್ಯ ಭತ್ತಕ್ಕೆ ಕ್ವಿಂಟಾಲ್‌ಗೆ 2369 ರೂ., 'ಎ' ಗ್ರೇಡ್ ಭತ್ತಕ್ಕೆ ಕ್ವಿಂಟಾಲ್‌ಗೆ 2389 ರೂ. ನಿಗದಿಪಡಿಸಲಾಗಿದೆ. ಉಡುಪಿ ಮತ್ತು ಕಾರ್ಕಳದ ಎಪಿಎಂಸಿ ಯಾರ್ಡ್ ಹಾಗೂ ಕೋಟೇಶ್ವರದ ಕೆಎಫ್‌ಸಿಎಸಿ ಗೋದಾಮಿನಲ್ಲಿ ಖರೀದಿ ಕೇಂದ್ರ ತೆರೆಯಲಾಗುತ್ತದೆ.

ರೈತರು ಬೆಳೆದಿರುವ ಬೆಳೆಗೆ ಸಂಬಂಧಿಸಿದಂತೆ ಕೃಷಿ ಇಲಾಖೆಯಿಂದ ಜಾರಿಗೊಳಿಸಿರುವ ಕೃಷಿ ದತ್ತಾಂಶದಿಂದ ಬೆಳೆ ಮಾಹಿತಿ ನೇರವಾಗಿ ಪಡೆದು ಕೃಷಿ ಇಲಾಖೆ ಒದಗಿಸಿರುವ ಸರಾಸರಿ ಬೆಳೆ ಮಾಹಿತಿಯ ಅನ್ವಯ ಹಾಗೂ ಕೇಂದ್ರ ಸರಕಾರದ ಮಾರ್ಗಸೂಚಿಯ ಅನ್ವಯ ಕನಿಷ್ಠ ಬೆಂಬಲ ಯೋಜನೆಯಡಿ ಬೆಲೆ ನೊಂದಣಿ ಮಾಡಿದ ರೈತರಿಂದ ಭತ್ತ ಖರೀದಿಸಲಾಗುತ್ತದೆ. ಭತ್ತ ಸರಬರಾಜು ಮಾಡುವ ರೈತರ ಬ್ಯಾಂಕ್ ಖಾತೆಗೆ ಹಣವನ್ನು ಡಿಬಿಟಿ ನೇರ ನಗದು ವರ್ಗಾವಣೆ ಮಾಡುವಂತೆ ಸೂಚಿಸಲಾಗಿದೆ. ಪ್ರತಿ ರೈತರಿಂದ ಪ್ರತಿ ಎಕರೆಗೆ 25 ಕ್ವಿಂಟಾಲ್‌ನಂತೆ ಗರಿಷ್ಠ 50 ಕ್ವಿಂಟಾಲ್ ಭತ್ತವನ್ನು ಖರೀದಿಸಲಾಗುತ್ತದೆ. ಭತ್ತವನ್ನು ಗೋದಾಮುಗಳಲ್ಲಿ ಸುರಕ್ಷಿತವಾಗಿ ಸಂಗ್ರಹಿಸಿ ಭತ್ತ ಖರೀದಿ ನೊಂದಣಿ ಬಗ್ಗೆ ಪ್ರಚಾರ ನೀಡಲು ರೈತ ಸಂಪರ್ಕ ಕೇಂದ್ರಗಳ ಮೂಲಕ ರೈತರಿಗೆ ಮಾಹಿತಿ ನೀಡಬೇಕು ಎಂದು ಜಿಲ್ಲಾಡಳಿತ ಆದೇಶಿಸಿದೆ. ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಭತ್ತ ನೋಂದಣಿ ಕಾರ್ಯ ಈಗಾಗಲೆ ಆರಂಭಿಸಲಾಗಿದ್ದು ರೈತರು ಅಕ್ಟೋಬರ್ 31ರ ತನಕ ನೊಂದಣಿ ಮಾಡಿಸಿಕೊಳ್ಳಬಹುದು ಎಂದು ಜಿಲ್ಲಾಧಿಕಾರಿ ಈಗಾಗಲೇ ಸೂಚನೆ ನೀಡಿದ್ದಾರೆ ಎಂದು ಕುಂದಾಪುರ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕಿ ರೂಪಾ ಮಾಡ್ ಹೇಳಿದ್ದಾರೆ.


ಉದಯವಾಹಿನಿ ಚಿತ್ರ

> **ಖರೀದಿ ಪ್ರಕ್ರಿಯೆ ಮತ್ತು ಪಾವತಿ**
> - ಪ್ರತಿ ರೈತರಿಂದ ಪ್ರತಿ ಎಕರೆಗೆ 25 ಕ್ವಿಂಟಾಲ್‌ನಂತೆ, ಗರಿಷ್ಠ 50 ಕ್ವಿಂಟಾಲ್ ಭತ್ತವನ್ನು ಮಾತ್ರ ಖರೀದಿ
> - ಭತ್ತ ಪೂರೈಸಿದ ರೈತರ ಬ್ಯಾಂಕ್ ಖಾತೆಗೆ ನೇರ ನಗದು ವರ್ಗಾವಣೆ (ಡಿಬಿಟಿ) ಮೂಲಕ ಹಣ ಪಾವತಿ
> - ಖರೀದಿಸಿದ ಭತ್ತವನ್ನು ಸರಕಾರಿ ಗೋದಾಮುಗಳಲ್ಲಿ ಸುರಕ್ಷಿತವಾಗಿ ಸಂಗ್ರಹಿಸಿಡಲು ವ್ಯವಸ್ಥೆ

> **ಉಡುಪಿ ಜಿಲ್ಲೆಯಲ್ಲಿ ಭತ್ತ ಖರೀದಿಗೆ ಜಿಲ್ಲಾಡಳಿತವು ಭರದ ಸಿದ್ಧತೆ ನಡೆಸಿದೆ. ಪ್ರಸಕ್ತ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಭತ್ತವನ್ನು ಖರೀದಿಸಲಾಗುತ್ತದೆ. ಸಾಮಾನ್ಯ ಭತ್ತಕ್ಕೆ ಕ್ವಿಂಟಾಲ್‌ಗೆ 2369 ರೂಪಾಯಿ ಹಾಗೂ 'ಎ' ಗ್ರೇಡ್ ಭತ್ತಕ್ಕೆ 2389 ರೂಪಾಯಿ ದರ ನಿಗದಿಪಡಿಸಲಾಗಿದೆ. ಉಡುಪಿ, ಕಾರ್ಕಳ ಎಪಿಎಂಸಿ ಹಾಗೂ ಕೋಟೇಶ್ವರದಲ್ಲಿ ಖರೀದಿ ಕೇಂದ್ರ ತೆರೆಯಲಾಗುತ್ತಿದ್ದು, ರೈತರು ಅಕ್ಟೋಬರ್ 31ರ ತನಕ ನೊಂದಣಿ ಮಾಡಿಸಿಕೊಳ್ಳಬಹುದು.**



## ಮಿನಿ ನ್ಯೂಸ್

ಭಾರತಕ್ಕೆ ಕಾರ್ಯಾಚರಣೆ ವರ್ಗಾಯಿಸಲು ಮುಂದಾದ ಯುಎಸ್ ಕಂಪನಿಗಳು; ನಿರ್ಣಾಯಕ ಘಟ್ಟದಲ್ಲಿ H-1B ವೀಸಾ ಸಮರ

# ಕಾರ್ಯಾಚರಣೆಯ ಸ್ವರೂಪ ಬದಲಿಸಲು ಮುಂದಾದ ಕಂಪನಿಗಳು



**ವಾಷಿಂಗ್ಟನ್:** ಅಮೆರಿಕ ಡೊನಾಲ್ಡ್ ಟ್ರಂಪ್ ಅವರ H-1B ವೀಸಾ ಅರ್ಜಿ ಶುಲ್ಕ ಹೆಚ್ಚಳ ಕ್ರಮವು, ಅಮೆರಿಕದ ಕಂಪನಿಗಳು ಭಾರತಕ್ಕೆ ನಿರ್ಣಾಯಕ ಕೆಲಸಗಳನ್ನು ವರ್ಗಾಯಿಸುವಂತೆ ಒತ್ತಾಯಿಸಿದೆ. ಟ್ರಂಪ್ ಅವರ ಆತುರದ ನಿರ್ಧಾರ ಭಾರತಕ್ಕೆ ವರದಾನವಾಗಿ ಪರಿಣಮಿಸುವ ಸಾಧ್ಯತೆಯೇ ದಟ್ಟವಾಗತೊಡಗಿದೆ. ಈ ಕುರಿತು ಮಾತನಾಡಿರುವ ಅಮೆರಿಕ ಅರ್ಥಶಾಸ್ತ್ರಜ್ಞರು ಮತ್ತು ಉದ್ಯಮವನ್ನು ಚೆನ್ನಾಗಿ ಬಲ್ಲ ತಜ್ಞರು, ಈ ಬದಲಾವಣೆಗಳು ಭಾರತದ ಹಣಕಾಸು, ಸಂಶೋಧನೆ ಮತ್ತು ಅಭಿವೃದ್ಧಿ ಕಾರ್ಯಾಚರಣೆಗಳನ್ನು ನಿರ್ವಹಿಸುವ ಜಾಗತಿಕ ಸಾಮರ್ಥ್ಯ ಕೇಂದ್ರಗಳ ಬೆಳವಣಿಗೆಗೆ ವೇಗ ನೀಡುತ್ತದೆ. ವಿಶ್ವದ ಐದನೇ ಅತಿದೊಡ್ಡ ಆರ್ಥಿಕತೆಯಾದ ಭಾರತವು ಸುಮಾರು 1,700 GCCಗಳಿಗೆ ನೆಲೆಯಾಗಿದೆ. ಇದು ಜಾಗತಿಕ ಹಂಚಿಕೆಯ ಅರ್ಧಕ್ಕಿಂತ ಹೆಚ್ಚು ಎಂಬುದು ಉಲ್ಲೇಖನೀಯ. ಭಾರತವು ಐಷಾರಾಮಿ ಕಾರು ಡ್ಯಾಶ್‌ಬೋರ್ಡ್‌ಗಳ ವಿನ್ಯಾಸದಿಂದ ಹಿಡಿದು ಔಷಧ ಅನ್ವೇಷಣೆಯವರೆಗಿನ ಕ್ಷೇತ್ರಗಳಲ್ಲಿ, ತನ್ನ ತಾಂತ್ರಿಕ ಬೆಂಬಲ ಮೂಲಗಳನ್ನು ಮೀರಿ ಹೆಚ್ಚಿನ ಮೌಲ್ಯದ ನಾವೀನ್ಯತೆಯ ಕೇಂದ್ರವಾಗಿದೆ.

**ಏನೆಲ್ಲಾ ಬದಲಾವಣೆ?:** ಕೃತಕ ಬುದ್ಧಿಮತ್ತೆಯ ಅಳವಡಿಕೆ ಹೆಚ್ಚುತ್ತಿರುವುದು ಮತ್ತು ವೀಸಾಗಳ ಮೇಲಿನ ನಿರ್ಬಂಧಗಳನ್ನು ಹೆಚ್ಚಿಸುವಂತಹ ಪ್ರವೃತ್ತಿಗಳು, ಯುಎಸ್ ಕಂಪನಿಗಳನ್ನು ಕಾರ್ಮಿಕ ತಂತ್ರಗಳನ್ನು ಪುನಃ ರೂಪಿಸಲು ಒತ್ತಾಯಿಸುತ್ತಿವೆ. ಭಾರತದಲ್ಲಿನ GCCಗಳು ಬಲವಾದ ದೇಶೀಯ ನಾಯಕತ್ವದೊಂದಿಗೆ ಜಾಗತಿಕ ಕೌಶಲ್ಯಗಳನ್ನು ಸಂಯೋಜಿಸುವ ಸ್ಥಿತಿಸ್ಥಾಪಕ ಕೇಂದ್ರಗಳಾಗಿ ಹೊರಹೊಮ್ಮುತ್ತಿವೆ. ಈ ಕುರಿತು ಮಾತನಾಡಿರುವ ಡೆಲಾಯ್ಟ್ ಇಂಡಿಯಾದ ಪಾಲುದಾರ ಮತ್ತು ಜಿಸಿಸಿ ಉದ್ಯಮದ ನಾಯಕ ರೋಹನ್ ಲೋಬೊ, ಜಿಸಿಸಿಗಳು ಈ ಕ್ಷಣದಲ್ಲಿ ಬದಲಾವಣೆಯ ಪರ್ವವನ್ನು ಹಾದು ಹೋಗುತ್ತಿವೆ. ಅವು ಸಿದ್ಧ ಆಂತರಿಕ ಎಂಜಿನ್ ಆಗಿ ಕಾರ್ಯನಿರ್ವಹಿಸುತ್ತವೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಟ್ರಂಪ್ ಆಡಳಿತದ ವೀಸಾ ನಿಯಂತ್ರಣ ನೀತಿಯು, ಹಲವಾರು ಯುಎಸ್ ಸಂಸ್ಥೆಗಳು ತಮ್ಮ ಉದ್ಯೋಗಿಗಳ ಅಗತ್ಯಗಳನ್ನು ಮರುಮೌಲ್ಯಮಾಪನ ಮಾಡುವಂತೆಯೂ ಒತ್ತಾಯಿಸಿರುವುದು ಸ್ಪಷ್ಟ. ಹಣಕಾಸು ಸೇವೆಗಳು ಮತ್ತು ತಂತ್ರಜ್ಞಾನದಂತಹ ಕ್ಷೇತ್ರಗಳಲ್ಲಿ ಮತ್ತು ವಿಶೇಷವಾಗಿ ಯುಎಸ್ ಫೆಡರಲ್ ಒಪ್ಪಂದಗಳಿಗೆ ಒಡ್ಡಿಕೊಳ್ಳುವ ಸಂಸ್ಥೆಗಳಲ್ಲಿ ಹೆಚ್ಚಿನ ಚಟುವಟಿಕೆಗಳು ಕಂಡುಬರುತ್ತಿದ್ದು, ಜಿಸಿಸಿಗಳು ಸಮಯಕ್ಕೆ ಸರಿಯಾಗಿ ಹೆಚ್ಚು ಕಾರ್ಯತಂತ್ರದ, ನಾವೀನ್ಯತೆ-ನೇತೃತ್ವದ ಆದೇಶಗಳ ಪಾಲನೆಗೆ ಸಜ್ಜಾಗಿವೆ ಎಂದು ರೋಹನ್ ಲೋಬೊ ಹೇಳಿದ್ದಾರೆ.

**H-1B ವೀಸಾ ಗೊಂದಲ:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಈ ತಿಂಗಳ ಆರಂಭದಲ್ಲಿ H-1B ವೀಸಾ ಅರ್ಜಿಗಳ ಶುಲ್ಕ ಹೆಚ್ಚಳ ಮಾಡುವ ಕಾರ್ಯಕಾರಿ ಆದೇಶಕ್ಕೆ ಸಹಿ ಹಾಕಿದ್ದರು. ಈ ವೀಸಾ ಅರ್ಜಿಗಳ ಶುಲ್ಕವನ್ನು ಟ್ರಂಪ್ ಆಡಳಿತ 100,000 ಅಮೆರಿಕನ್ ಡಾಲರ್‌ಗೆ ಏರಿಕೆ ಮಾಡಿದೆ. ಇದು ಕೌಶಲ್ಯಪೂರ್ಣ ವಿದೇಶಿ ಕಾರ್ಮಿಕರನ್ನು ಅವಲಂಬಿಸಿರುವ ಯುಎಸ್ ಸಂಸ್ಥೆಗಳ ಮೇಲೆ ಭಾರೀ ಪರಿಣಾಮವನ್ನು ಉಂಟು ಮಾಡಿದೆ.

ಅಮೆರಿಕದ ಸೆನೆಟರ್‌ಗಳು H-1B, L-1 ಕಾರ್ಮಿಕರ ವೀಸಾ ಕಾರ್ಯಕ್ರಮಗಳ ಮೇಲಿನ ನಿಯಮಗಳನ್ನು ಬಿಗಿಗೊಳಿಸುವ ಮಸೂದೆಯನ್ನು ಪುನಃ ಮಂಡಿಸಿದ್ದಾರೆ. ಅಮೆರಿಕನ್ನರಿಗೆ ಉದ್ಯೋಗ ಸೃಷ್ಟಿಸುವ ಇರಾದೆಯೊಂದಿಗೆ ಇಷ್ಟೆಲ್ಲಾ ಬದಲಾವಣೆಗಳನ್ನು ಮಾಡಲಾಗುತ್ತಿದೆ ಎಂದು ಟ್ರಂಪ್ ಆಡಳಿತ ಸಮರ್ಥನೆ ನೀಡಿದೆ. H-1B ವೀಸಾ ಅರ್ಜಿ ಶುಲ್ಕ ಹೆಚ್ಚಳವು, ಭಾರತದ ಐಟಿ ಕಾರ್ಯತಂತ್ರ ಬದಲಾವಣೆ ಸಾಧ್ಯತೆಯನ್ನೂ ಹೆಚ್ಚಿಸಿದೆ. ಆದರೆ ಟ್ರಂಪ್ ಅವರ ವೀಸಾ ನಿರ್ಬಂಧಗಳಿಂದ ಅಮೆರಿಕದ ಸಂಸ್ಥೆಗಳು AI, ಉತ್ಪನ್ನ ಅಭಿವೃದ್ಧಿ, ಸೈಬರ್ ಭದ್ರತೆ ಮತ್ತು ವಿಶ್ಲೇಷಣೆಗೆ ಸಂಬಂಧಿಸಿದ ಉನ್ನತ ಮಟ್ಟದ ಕೆಲಸವನ್ನು ತಮ್ಮ ಭಾರತದ GCCಗಳಿಗೆ ಬದಲಾಯಿಸಲಿವೆ ಎಂದು ಉದ್ಯಮ ತಜ್ಞರು ಅಂದಾಜಿಸಿದ್ದಾರೆ. ಇದೇ ವೇಳೆ ಹೊರಗುತ್ತಿಗೆಗಿಂತ ಕಾರ್ಯಾಚರಣೆಗಳನ್ನು ಆಂತರಿಕ ಮಟ್ಟದಲ್ಲಿ ನಿರ್ವಹಿಸುವ ಆಯ್ಕೆಯ ಮೊರೆ ಹೋಗಿದ್ದಾರೆ.

ಡೊನಾಲ್ಡ್ ಟ್ರಂಪ್ ಹೊಸ H-1B ವೀಸಾ ಅರ್ಜಿಗಳ ಮೇಲೆ ಭಾರಿ ಶುಲ್ಕ ವಿಧಿಸುವ ಮತ್ತು ಉತ್ತಮ ಸಂಬಳ ಪಡೆಯುವವರಿಗೆ ಮಾತ್ರ ಅಮೆರಿಕಕ್ಕೆ ಪ್ರವೇಶ ನೀಡುವ ಯೋಜನೆಗೆ ಚಾಲನೆ ನೀಡುವ ಮೊದಲೇ, ಭಾರತವು 2030ರ ವೇಳೆಗೆ 2,200ಕ್ಕೂ ಹೆಚ್ಚು ಕಂಪನಿಗಳ GCCಗಳಿಗೆ ಆತಿಥ್ಯ ವಹಿಸುವ ಯೋಜನೆಗಳನ್ನು ಹಾಕಿಕೊಂಡಿದೆ. ಇದರ ಮಾರುಕಟ್ಟೆ ಗಾತ್ರ 100 ಬಿಲಿಯನ್ ಅಮೆರಿಕನ್ ಡಾಲರ್ ತಲುಪಲಿದೆ ಎಂದು ನಿರೀಕ್ಷಿಸಲಾಗಿದೆ.


**ಭಾರತದ ಮೇಲೆ ಪರಿಣಾಮಗಳು:** ಆದಾಗ್ಯೂ, GCCಗಳು ಭಾರತಕ್ಕೆ ಕಾರ್ಯಭಾರವನ್ನು ವರ್ಗಾಯಿಸುವ ನಿರ್ಧಾರವನ್ನು ಅವಸರದಲ್ಲಿ ತೆಗೆದುಕೊಳ್ಳಲಿವೆ ಎಂಬುದು ಅನುಮಾನ. GCCಗಳು ಕಾದು ನೋಡುವ ತಂತ್ರಕ್ಕೆ ಮೊರೆ ಹೋಗುವ ಸಾಧ್ಯತೆ ದಟ್ಟವಾಗಿದೆ. ವಿಶೇಷವಾಗಿ ಪ್ರಸ್ತಾವಿತ HIRE ಕಾಯ್ದೆ ಅಂಗೀಕಾರವಾದರೆ ಅಮೆರಿಕದ ಸಂಸ್ಥೆಗಳು ವಿದೇಶಗಳಲ್ಲಿ ಹೊರಗುತ್ತಿಗೆ ಕೆಲಸಕ್ಕಾಗಿ ಶೇ. 25ರಷ್ಟು ತೆರಿಗೆ ಕಟ್ಟಬೇಕಾಗುತ್ತದೆ. ಇದು ಭಾರತದ ಸೇವೆಗಳ ರಫ್ತಿನಲ್ಲಿ ಗಮನಾರ್ಹ ಅಡ್ಡಿ ಉಂಟುಮಾಡುತ್ತದೆ.

**ಭಾರತದ ಕಾರ್ಯತಂತ್ರಗಳ ಮರುಮೌಲ್ಯಮಾಪನ**

**ಡೊನಾಲ್ಡ್ ಟ್ರಂಪ್ ಅವರ ವೀಸಾ ನಿರ್ಬಂಧಗಳು ಅಮೆರಿಕದ ಕಂಪನಿಗಳ ಕಾರ್ಯಾಚರಣೆಯ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ. ಅಮೆಜಾನ್, ಮೈಕ್ರೋಸಾಫ್ಟ್, ಆ್ಯಪಲ್, ಗೂಗಲ್ ಪೋಷಕ ಆಲ್ಫಾಬೆಟ್ ಸೇರಿದಂತೆ ಬಿಗ್ ಟೆಕ್, ವಾಲ್ ಸ್ಟ್ರೀಟ್ ಬ್ಯಾಂಕ್ ಜೆಪಿ ಮೋರ್ಗಾನ್ ಚೇಸ್ ಮತ್ತು ಚಿಲ್ಲರೆ ವ್ಯಾಪಾರಿ ವಾಲ್ಮಾರ್ಟ್ ಹೀಗೆ ಹಲವು ಕಂಪನಿಗಳು ಭಾರತದಲ್ಲಿ ಪ್ರಮುಖ ಕಾರ್ಯಾಚರಣೆಗಳನ್ನು ಹೊಂದಿದ್ದಾರೆ. ಆದ ವೀಸಾ ನಿರ್ಬಂಧ ವಿಷಯವು ರಾಜಕೀಯವಾಗಿ ಸೂಕ್ಷ್ಮವಾಗಿರುವುದರಿಂದ, ಈ ಕಂಪನಿಗಳು ತಕ್ಷಣಕ್ಕೆ ಯಾವುದೇ ಪ್ರತಿಕ್ರಿಯೆ ನೀಡದಿರುವ ತೀರ್ಮಾನಕ್ಕೆ ಬಂದಿವೆ.**

---

## ಭೂತಾನ್‌ಗೆ ರೈಲು ಸಂಪರ್ಕ ಕಲ್ಪಿಸಲು 4 ಸಾವಿರ ಕೋಟಿ ವೆಚ್ಚದ ಯೋಜನೆ ಅನಾವರಣ




**ನವದೆಹಲಿ:** ಭಾರತವು 4,000 ಕೋಟಿ ರೂ.ಗಳಿಗೂ ಹೆಚ್ಚು ವೆಚ್ಚದಲ್ಲಿ ಭೂತಾನ್‌ನೊಂದಿಗೆ ಎರಡು ಗಡಿಯಾಚೆಗಿನ ರೈಲು ಸಂಪರ್ಕಗಳನ್ನು ನಿರ್ಮಿಸುವ ಯೋಜನೆಯನ್ನು ಅನಾವರಣಗೊಳಿಸಿದೆ, ಇದು ಹಿಮಾಲಯ ರಾಷ್ಟ್ರದೊಂದಿಗೆ ವ್ಯಾಪಾರ ಮತ್ತು ಆರ್ಥಿಕ ಸಂಬಂಧವನ್ನು ಹೆಚ್ಚಿಸಲು ಮೊದಲ ರೈಲ್ವೆ ಸಂಪರ್ಕ ಯೋಜನೆಗಳಲ್ಲಿ ಒಂದಾಗಿದೆ. ಭೂತಾನ್‌ನ ಗೆಲೆಪು ಮತ್ತು ಸಮತ್ಸೆ ನಗರಗಳನ್ನು ಕ್ರಮವಾಗಿ ಅಸ್ಸಾಂನ ಕೊಕ್ರಝಾರ್ ಮತ್ತು ಪಶ್ಚಿಮ ಬಂಗಾಳದ ಬನಾರ್ಹತ್‌ನೊಂದಿಗೆ ಸಂಪರ್ಕಿಸುವ ಹೊಸ ರೈಲು ಯೋಜನೆಗಳ ವಿವರಗಳನ್ನು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಮತ್ತು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಬಹಿರಂಗಪಡಿಸಿದರು. ಎರಡು ಯೋಜನೆಗಳ ಅಡಿಯಲ್ಲಿ, 89 ಕಿಮೀ ರೈಲು ಮಾರ್ಗಗಳನ್ನು ಹಾಕಲಾಗುವುದು ಮತ್ತು ಮುಂದಿನ ನಾಲ್ಕು ವರ್ಷಗಳಲ್ಲಿ ಕೆಲಸ ಪೂರ್ಣಗೊಳ್ಳುವ ನಿರೀಕ್ಷೆಯಿದೆ. ಭಾರತ ಮತ್ತು ಭೂತಾನ್ ಅಸಾಧಾರಣ ನಂಬಿಕೆ, ಪರಸ್ಪರ ಗೌರವ ಮತ್ತು ತಿಳುವಳಿಕೆಯ ಸಂಬಂಧವನ್ನು ಹಂಚಿಕೊಳ್ಳುತ್ತವೆ ಎಂದು ವೈಷ್ಣವ್ ಅವರ ಜಂಟಿ ಮಾಧ್ಯಮ ಸಭೆಯಲ್ಲಿ ಮಿಶ್ರಿ ಹೇಳಿದರು. ಇದು ಸಾಂಸ್ಕೃತಿಕ ಮತ್ತು ನಾಗರಿಕ ಸಂಬಂಧಗಳು, ವ್ಯಾಪಕವಾದ ಜನರಿಂದ ಜನರಿಗೆ ಸಂಬಂಧಗಳು ಮತ್ತು ನಮ್ಮ ಹಂಚಿಕೆಯ ಅಭಿವೃದ್ಧಿ ಮತ್ತು ಭದ್ರತಾ ಹಿತಾಸಕ್ತಿಗಳಲ್ಲಿ ಬೇರೂರಿರುವ ಸಂಬಂಧವಾಗಿದೆ ಎಂದು ಅವರು ಹೇಳಿದರು. ಭೂತಾನ್ ಮೇಲೆ ಚೀನಾ ತನ್ನ ಕಾರ್ಯತಂತ್ರದ ಪ್ರಭಾವವನ್ನು ಹೆಚ್ಚಿಸುವ ಪ್ರಯತ್ನಗಳ ನಡುವೆ ಭಾರತದ ಯೋಜನೆಗಳ ಘೋಷಣೆ ಬಂದಿದೆ. ಬನಾರ್ಹತ್ ಮತ್ತು ಸಮತ್ಸೆ ಹಾಗೂ ಕೊಕ್ರಝಾರ್ ಮತ್ತು ಗೆಲೆಪು ನಡುವೆ ಎರಡು ಗಡಿಯಾಚೆಗಿನ ರೈಲು ಸಂಪರ್ಕಗಳನ್ನು ಸ್ಥಾಪಿಸಲು ಎರಡೂ ಸರ್ಕಾರಗಳು ಒಪ್ಪಿಕೊಂಡಿವೆ ಎಂದು ಮಿಶ್ರಿ ಹೇಳಿದರು.

ಇದು ಭೂತಾನ್‌ನೊಂದಿಗೆ ರೈಲು ಸಂಪರ್ಕ ಯೋಜನೆಗಳ ಮೊದಲ ಸೆಟ್ ಆಗಿರುತ್ತದೆ ಎಂದು ಅವರು ಹೇಳಿದರು. ಕಳೆದ ವರ್ಷ ಪ್ರಧಾನಿ ನರೇಂದ್ರ ಮೋದಿ ಅವರ ಭೂತಾನ್ ಭೇಟಿಯ ಸಂದರ್ಭದಲ್ಲಿ ರೈಲು ಸಂಪರ್ಕಗಳನ್ನು ಸ್ಥಾಪಿಸುವ ಒಪ್ಪಂದಕ್ಕೆ ಸಹಿ ಹಾಕಿದ್ದರು. ಕೊಕ್ರಝಾರ್ ಮತ್ತು ಬನಾರ್ಹತ್‌ನಲ್ಲಿರುವ ಭಾರತೀಯ ರೈಲ್ವೆ ಜಾಲದಿಂದ ಯೋಜನೆಗಳು ಹೊರಹೊಮ್ಮುತ್ತವೆ ಮತ್ತು ಯೋಜಿಸಲಾದ ಹೂಡಿಕೆ ಸುಮಾರು 4,033 ಕೋಟಿ ರೂ.ಗಳಷ್ಟಿದೆ ಎಂದು ವೈಷ್ಣವ್ ಹೇಳಿದರು. ಭೂತಾನ್‌ನ ಹೆಚ್ಚಿನ ವ್ಯಾಪಾರವು ಭಾರತೀಯ ಬಂದರುಗಳ ಮೂಲಕ ನಡೆಯುವುದರಿಂದ, ಭೂತಾನ್‌ನ ಆರ್ಥಿಕತೆ ಬೆಳೆಯಲು ಮತ್ತು ಜನರು ಜಾಗತಿಕ ಜಾಲಕ್ಕೆ ಉತ್ತಮ ಪ್ರವೇಶ ಮಾರ್ಗಗಳನ್ನು ಹೊಂದಲು ಉತ್ತಮ ತಡೆರಹಿತ ರೈಲು ಸಂಪರ್ಕವನ್ನು ಹೊಂದಿರುವುದು ಬಹಳ ಮುಖ್ಯವಾಗುತ್ತದೆ ಎಂದು ಸಚಿವರು ಹೇಳಿದರು. ಆದ್ದರಿಂದ ಈ ಸಂಪೂರ್ಣ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗಿದೆ. ಮತ್ತು ಸಮತ್ಸೆ ಮತ್ತು ಗೆಲೆಪು, ಭೂತಾನ್‌ನ ಆರ್ಥಿಕ ಬೆಳವಣಿಗೆಯನ್ನು ಯೋಜಿಸುತ್ತಿರುವ ರೀತಿಯಲ್ಲಿ ಅವು ಬಹಳ ಮುಖ್ಯವಾದ ಮಹತ್ವವನ್ನು ಹೊಂದಿವೆ ಎಂದು ಅವರು ಹೇಳಿದರು.

---

## ಪಾಕ್ ರಾಜಕೀಯ ರ್‍ಯಾಲಿಯಲ್ಲಿ ಸೂಸೈಡ್ ಬಾಂಬ್ ದಾಳಿ

### 15 ಮಂದಿ ಬಲಿ, 30 ಕ್ಕೂ ಹೆಚ್ಚು ಜನರಿಗೆ ಗಾಯ

**ಪಾಕಿಸ್ತಾನ:** ಪಾಕಿಸ್ತಾನದ ಬಲೂಚಿಸ್ತಾನ್ ಪ್ರಾಂತ್ಯದ ಕ್ವೆಟ್ಟಾ ನಗರದಲ್ಲಿ ರಾಜಕೀಯ ರ್‍ಯಾಲಿ ಸಮೀಪ ನಡೆದ ಆತ್ಮಹತ್ಯಾ ಬಾಂಬ್ ದಾಳಿಯಲ್ಲಿ 15 ಜನರು ಸಾವನ್ನಪ್ಪಿದ್ದಾರೆ. 30ಕ್ಕೂ ಹೆಚ್ಚು ಜನ ಗಾಯಗೊಂಡಿದ್ದಾರೆ. ಸೋಮವಾರ ರಾತ್ರಿ ಈ ಘಟನೆ ನಡೆದಿದ್ದು, ಬಲೂಚಿಸ್ತಾನ್ ನ್ಯಾಷನಲ್ ಪಾರ್ಟಿ ರ್‍ಯಾಲಿ ನಡೆಯುತ್ತಿದ್ದ ಕ್ರೀಡಾಂಗಣದ ಪಾರ್ಕಿಂಗ್ ಪ್ರದೇಶದಲ್ಲಿ ಬಾಂಬ್ ಸ್ಫೋಟವಾಗಿದೆ. ಈ ದಾಳಿಯ ಹೊಣೆಯನ್ನು ಇಸ್ಲಾಮಿಕ್ ಸ್ಟೇಟ್ ಉಗ್ರಗಾಮಿ ಸಂಘಟನೆ ಹೊತ್ತುಕೊಂಡಿದೆ. ಬಿಗಿ ಭದ್ರತೆಯ ಕಾರಣದಿಂದ ಆತ್ಮಹತ್ಯಾ ಬಾಂಬರ್ ರ್‍ಯಾಲಿ ನಡೆಯುತ್ತಿದ್ದ ಸ್ಥಳವನ್ನು ತಲುಪಲು ಸಾಧ್ಯವಾಗಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕ್ವೆಟ್ಟಾದಲ್ಲಿರುವ ಕ್ರೀಡಾಂಗಣದಲ್ಲಿ ಬಿಎನ್‌ಪಿ ಪಕ್ಷದ ನೂರಾರು ಸದಸ್ಯರು ರ್‍ಯಾಲಿಗೆ ಸೇರಿದ್ದರು. ಈ ರ್‍ಯಾಲಿ ನಡೆಯುತ್ತಿದ್ದಾಗ ಪಾರ್ಕಿಂಗ್ ಪ್ರದೇಶದಲ್ಲಿ ಬಾಂಬ್ ಸ್ಫೋಟಗೊಂಡಿದೆ. ಈ ದಾಳಿಯ ಹೊಣೆಯನ್ನು ಇಸ್ಲಾಮಿಕ್ ಸ್ಟೇಟ್ ಉಗ್ರಗಾಮಿ ಸಂಘಟನೆ ಹೊತ್ತುಕೊಂಡಿದೆ. ಬಲೂಚಿಸ್ತಾನ್ ಪಾಕಿಸ್ತಾನದ ಅತಿ ದೊಡ್ಡ ಮತ್ತು ಅತಿ ಬಡ ಪ್ರದೇಶವಾಗಿದೆ.

ಇದು ಅಫ್ಘಾನಿಸ್ತಾನ ಮತ್ತು ಇರಾನ್ ದೇಶಗಳ ಗಡಿಗೆ ಹೊಂದಿಕೊಂಡಿದೆ. ಈ ಪ್ರದೇಶದ ನಿವಾಸಿಗಳು ಇಸ್ಲಾಮಿಕ್ ಸ್ಟೇಟ್ ಮತ್ತು ಪ್ರತ್ಯೇಕತಾವಾದಿ ಗುಂಪುಗಳಿಂದ ಆಗಾಗ್ಗೆ ಮಾರಣಾಂತಿಕ ದಾಳಿಗಳನ್ನು ಎದುರಿಸುತ್ತಿದ್ದಾರೆ. ಇದು ಅಲ್ಲಿನ ಜನರ ದೈನಂದಿನ ಬದುಕಿಗೆ ದೊಡ್ಡ ಸವಾಲಾಗಿದೆ.

ಬಲೂಚಿಸ್ತಾನ್ ಆರೋಗ್ಯ ಸಚಿವ ಬಖ್ತ್ ಮುಹಮ್ಮದ್ ಕಾಕರ್ ಅವರು ಪಾಕಿಸ್ತಾನಿ ಸುದ್ದಿ ಸಂಸ್ಥೆ ಜಿಯೋ ನ್ಯೂಸ್ ಗೆ ಮಾಹಿತಿ ನೀಡಿ, ಆತ್ಮಹತ್ಯಾ ಬಾಂಬರ್ ಬಿಗಿ ಭದ್ರತೆಯ ಕಾರಣದಿಂದ ರ್‍ಯಾಲಿ ನಡೆಯುತ್ತಿದ್ದ ಸ್ಥಳವನ್ನು ತಲುಪಲು ಸಾಧ್ಯವಾಗಲಿಲ್ಲ, ಸ್ಫೋಟವು ರ್‍ಯಾಲಿ ನಡೆಯುತ್ತಿದ್ದ ಸ್ಥಳದಲ್ಲಿ ಸಂಭವಿಸಿದ್ದರೆ, ಹಾನಿ ಇನ್ನೂ ಹೆಚ್ಚಾಗಿರುತ್ತಿತ್ತು ಎಂದು ಅವರು ತಿಳಿಸಿದ್ದಾರೆ. ರ್‍ಯಾಲಿಗೆ ಭದ್ರತೆ ಒದಗಿಸಲು 120 ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು ಎಂದು ಜಿಯೋ ನ್ಯೂಸ್ ವರದಿ ಮಾಡಿದೆ. ರ್‍ಯಾಲಿಯನ್ನು ಅಟಾವುಲ್ಲಾ ಮೆಂಗಲ್ ಅವರ ಸ್ಮರಣಾರ್ಥ ಆಯೋಜಿಸಲಾಗಿತ್ತು. ಅಟಾವುಲ್ಲಾ ಮೆಂಗಲ್ ಅವರು ಬಲೂಚಿಸ್ತಾನ್‌ನ ಮಾಜಿ ಮುಖ್ಯಮಂತ್ರಿಯಾಗಿದ್ದರು. ಅವರು 2021ರಲ್ಲಿ ನಿಧನರಾಗಿದ್ದರು. ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಈ ದಾಳಿಯನ್ನು ತೀವ್ರವಾಗಿ ಖಂಡಿಸಿದ್ದಾರೆ, ಇದು ಬಲೂಚಿಸ್ತಾನ್‌ನಲ್ಲಿ ಭಯೋತ್ಪಾದಕರು ಅಶಾಂತಿಯನ್ನು ಹರಡಲು ನಡೆಸಿದ ದುಷ್ಟ ಪಿತೂರಿಯ ಸ್ಪಷ್ಟ ಪುರಾವೆಯಾಗಿದೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ. ಸ್ಫೋಟದಿಂದ ಬದುಕುಳಿದವರಲ್ಲಿ ಜಮಾನ್ ಬಲೂಚ್ ಕೂಡ ಒಬ್ಬರು. ಅವರು ರ್‍ಯಾಲಿ ನಡೆಯುತ್ತಿದ್ದ ಸ್ಥಳದಿಂದ ಸ್ವಲ್ಪ ದೂರದಲ್ಲಿ ನಿಂತಿದ್ದರು. ಸ್ಫೋಟದ ನಂತರ, ನಾನು ಅನೇಕ ಜನರು ನೆಲದ ಮೇಲೆ ಬಿದ್ದಿರುವುದನ್ನು ನೋಡಿದೆ ಮತ್ತು ಎಲ್ಲೆಡೆ ಕಿರುಚಾಟ ಕೇಳಿಸುತ್ತಿತ್ತು ಎಂದು ಬಲೂಚ್ ಹೇಳಿದ್ದಾರೆ. ಮತ್ತೊಬ್ಬ ಬದುಕುಳಿದ ನೂರ್ ಅಹ್ಮದ್ ಕೂಡ ದೊಡ್ಡ ಸ್ಫೋಟದ ಶಬ್ದ ಕೇಳಿದೆ, ಸ್ಫೋಟವು ರ್‍ಯಾಲಿ ನಡೆಯುತ್ತಿದ್ದ ಸ್ಥಳದಿಂದ ಸುಮಾರು 200 ಅಡಿ ದೂರದಲ್ಲಿ ಸಂಭವಿಸಿದೆ ಎಂದು ಅವರು ಹೇಳಿದ್ದಾರೆ. ಬಲೂಚಿಸ್ತಾನ್‌ನಲ್ಲಿ ವಿವಿಧ ಉಗ್ರಗಾಮಿ ಗುಂಪುಗಳು ಸಕ್ರಿಯವಾಗಿವೆ. ಇವು ಅಲ್ಲಿನ ನಿವಾಸಿಗಳ ಭದ್ರತೆಗೆ ನಿರಂತರ ಬೆದರಿಕೆಯನ್ನು ಒಡ್ಡುತ್ತಿವೆ. 2024ರ ಫೆಬ್ರವರಿಯಲ್ಲಿ ಇಸ್ಲಾಮಿಕ್ ಸ್ಟೇಟ್ ಸಂಘಟನೆ ಒಂದು ದಾಳಿಯ ಹೊಣೆ ಹೊತ್ತುಕೊಂಡಿತ್ತು. ಸಂಸದೀಯ ಚುನಾವಣೆಗಳು ನಡೆಯುವ ಒಂದು ದಿನ ಮೊದಲು ಬಲೂಚಿಸ್ತಾನ್‌ನಲ್ಲಿ ಚುನಾವಣಾ ಕಚೇರಿಗಳ ಮೇಲೆ ಬಾಂಬ್ ದಾಳಿ ನಡೆದಿತ್ತು. ಆ ದಾಳಿಯಲ್ಲಿ 20ಕ್ಕೂ ಹೆಚ್ಚು ಜನರು ಮೃತಪಟ್ಟಿದ್ದರು. ಡಜನ್ ಗಟ್ಟಲೆ ಜನರು ಗಾಯಗೊಂಡಿದ್ದರು.

ಕಳೆದ ನವೆಂಬರ್‌ನಲ್ಲಿ ಕೂಡಾ ಕ್ವೆಟ್ಟಾದ ರೈಲು ನಿಲ್ದಾಣದಲ್ಲಿ ಆತ್ಮಹತ್ಯಾ ಬಾಂಬ್ ದಾಳಿ ನಡೆದಿತ್ತು. ಆ ದಾಳಿಯಲ್ಲಿ 20ಕ್ಕೂ ಹೆಚ್ಚು ಜನರು ಮೃತಪಟ್ಟಿದ್ದರು. ಡಜನ್ ಗಟ್ಟಲೆ ಜನರು ಗಾಯಗೊಂಡಿದ್ದರು. ಬಲೂಚ್ ಲಿಬರೇಷನ್ ಆರ್ಮಿ ಎಂಬ ಉಗ್ರಗಾಮಿ ಗುಂಪು ಆ ದಾಳಿಯ ಹೊಣೆಯನ್ನು ಹೊತ್ತುಕೊಂಡಿತ್ತು. ಈ ವರ್ಷದ ಮಾರ್ಚ್‌ನಲ್ಲಿ ಪ್ರತ್ಯೇಕತಾವಾದಿ ಬಲೂಚಿಸ್ತಾನ್ ಲಿಬರೇಷನ್ ಆರ್ಮಿಯ ಸಶಸ್ತ್ರ ಉಗ್ರರು ರೈಲನ್ನು ಅಪಹರಿಸಿದ್ದರು. ಆ ರೈಲಿನಲ್ಲಿ 400ಕ್ಕೂ ಹೆಚ್ಚು ಪ್ರಯಾಣಿಕರಿದ್ದರು. ಅಧಿಕಾರಿಗಳು ಬಲೂಚ್ ರಾಜಕೀಯ ಕೈದಿಗಳನ್ನು ಬಿಡುಗಡೆ ಮಾಡದಿದ್ದರೆ ಒತ್ತೆಯಾಳುಗಳನ್ನು ಕೊಲ್ಲುವುದಾಗಿ ಅವರು ಬೆದರಿಕೆ ಹಾಕಿದ್ದರು.




- ಈ ದಾಳಿಯ ಹೊಣೆಯನ್ನು ಇಸ್ಲಾಮಿಕ್ ಸ್ಟೇಟ್ ಉಗ್ರಗಾಮಿ ಸಂಘಟನೆ ಹೊತ್ತುಕೊಂಡಿದೆ
- ಬಲೂಚಿಸ್ತಾನ್ ಪಾಕಿಸ್ತಾನದ ಅತಿ ದೊಡ್ಡ ಮತ್ತು ಅತಿ ಬಡ ಪ್ರದೇಶವಾಗಿದೆ. ಇದು ಅಫ್ಘಾನಿಸ್ತಾನ ಮತ್ತು ಇರಾನ್ ದೇಶಗಳ ಗಡಿಗೆ ಹೊಂದಿಕೊಂಡಿದೆ.

**ಪಾಕಿಸ್ತಾನದ ಬಲೂಚಿಸ್ತಾನ್ ಪ್ರಾಂತ್ಯದ ಕ್ವೆಟ್ಟಾದಲ್ಲಿ ರಾಜಕೀಯ ರ್‍ಯಾಲಿ ಸಮೀಪ ಬಾಂಬ್ ಸ್ಫೋಟಗೊಂಡಿದೆ. ಸೋಮವಾರ ರಾತ್ರಿ ನಡೆದ ಈ ಘಟನೆಯ ಹೊಣೆಯನ್ನು ಇಸ್ಲಾಮಿಕ್ ಸ್ಟೇಟ್ ಉಗ್ರಗಾಮಿ ಸಂಘಟನೆ ಹೊತ್ತುಕೊಂಡಿದೆ. ಬಿಗಿ ಭದ್ರತೆಯಿಂದಾಗಿ ಬಾಂಬರ್ ರ್‍ಯಾಲಿ ಸ್ಥಳ ತಲುಪಲು ಸಾಧ್ಯವಾಗದ ಕಾರಣ ಹೆಚ್ಚಿನ ಹಾನಿ ತಪ್ಪಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಬಲೂಚಿಸ್ತಾನದಲ್ಲಿ ಇಂತಹ ಉಗ್ರರ ದಾಳಿಗಳು ನಿರಂತರವಾಗಿ ನಡೆಯುತ್ತಿದ್ದು, ಅಲ್ಲಿನ ಜನರ ಬದುಕಿಗೆ ಸವಾಲಾಗಿದೆ.**

---

## ಶಾಲಾ ಕಟ್ಟಡ ಕುಸಿದು ಮೂವರ ಸಾವು, 38 ಮಂದಿ ಕಣ್ಮರೆ



**ಸಿಡೋರ್ಜೊ:** ಇಂಡೋನೇಷ್ಯಾದಲ್ಲಿ ಶಾಲಾ ಕಟ್ಟಡ ಕುಸಿದು ಮೂವರು ವಿದ್ಯಾರ್ಥಿಗಳು ಜೀವಂತ ಸಮಾಧಿ ಆಗಿದ್ದು, 38ಕ್ಕೂ ಹೆಚ್ಚು ಮಂದಿ ಕಣ್ಮರೆಯಾಗಿದ್ದಾರೆ ಎಂದು ತಿಳಿದುಬಂದಿದೆ. ಮಂಗಳವಾರ ಬೆಳಿಗ್ಗೆ ಏಕಾಏಕಿ ಕಟ್ಟಡ ಕುಸಿದು ಈ ಘಟನೆಯಲ್ಲಿ ನೂರಕ್ಕೂ ಹೆಚ್ಚು ಜನರು ಅವಶೇಷಗಳಲ್ಲಿ ಹೂತುಹೋಗಿದ್ದರು.

ಪೂರ್ವ ಜಾವಾ ಪಟ್ಟಣದ ಸಿಡೋರ್ಜೊದಲ್ಲಿರುವ ಅಲ್ ಖೋಜಿನಿ ಇಸ್ಲಾಮಿಕ್ ಬೋರ್ಡಿಂಗ್ ಶಾಲೆಯಲ್ಲಿ ಕುಸಿದು ಎಂಟು ಗಂಟೆಗಳಿಗಿಂತ ಹೆಚ್ಚು ಕಾಲ ರಕ್ಷಣಾ ಕಾರ್ಯಕರ್ತರು, ಪೊಲೀಸರು, ಸೈನಿಕರು ರಾತ್ರಿಯಿಡೀ ಅಗೆದು ಗಾಯಗೊಂಡ ಬದುಕುಳಿದವರನ್ನು ಹೊರತೆಗೆದರು. ಘಟನೆಯಲ್ಲಿ ಮೂವರು ವಿದ್ಯಾರ್ಥಿಗಳು ಸಾವನ್ನಪ್ಪಿರುವುದು ದೃಢಪಟ್ಟಿದೆ. ವಿದ್ಯಾರ್ಥಿಗಳ ಕುಟುಂಬಗಳು ಆಸ್ಪತ್ರೆಗಳಲ್ಲಿ ಅಥವಾ ಕುಸಿದ ಕಟ್ಟಡದ ಬಳಿ ಜಮಾಯಿಸಿ, ತಮ್ಮ ಮಕ್ಕಳ ಸುದ್ದಿಗಾಗಿ ಆತಂಕದಿಂದ ಕಾಯುತ್ತಿದ್ದರು.

ಬೋರ್ಡಿಂಗ್ ಶಾಲಾ ಸಂಕೀರ್ಣ ದಲ್ಲಿ ಸ್ಥಾಪಿಸಲಾದ ಕಮಾಂಡ್ ಪೋಸ್ಟ್‌ನಲ್ಲಿರುವ ಸೂಚನಾ ಫಲಕವು ಇಂದು ಬೆಳಿಗ್ಗೆ 65 ವಿದ್ಯಾರ್ಥಿಗಳು ಕಾಣೆಯಾಗಿದ್ದು ಅವರಲ್ಲಿ 38 ಮಂದಿಯನ್ನು ಪತ್ತೆಹಚ್ಚಲು ಇನ್ನು ಸಾಧ್ಯವಾಗಿಲ್ಲ ಎಂದು ಪಟ್ಟಿ ಮಾಡಲಾಗಿದೆ. ಇವರಲ್ಲಿ ಹೆಚ್ಚಿನವರು ಏಳರಿಂದ ಹನ್ನೊಂದು ತರಗತಿಯವರೆಗಿನ, 12 ರಿಂದ 17 ವರ್ಷದೊಳಗಿನ ಹುಡುಗರು ಎಂಬುದು ವಿಶೇಷ. ಓ ದೇವರೇ ನನ್ನ ಮಗನನ್ನು ಇನ್ನೂ ಸಮಾಧಿ ಮಾಡಲಾಗಿದೆ, ಓ ದೇವರೇ ದಯವಿಟ್ಟು ಸಹಾಯ ಮಾಡಿ ಎಂದು ಫಲಕದಲ್ಲಿ ತನ್ನ ಮಗುವಿನ ಹೆಸರನ್ನು ನೋಡಿ ತಾಯಿಯೊಬ್ಬರು ಅಳುತ್ತಿದ್ದರು, ನಂತರ ಇದೇ ರೀತಿಯ ಕಷ್ಟವನ್ನು ಅನುಭವಿಸಿದ ಸಂಬಂಧಿಕರ ಇತರ ಪೋಷಕರ ಕೂಗುಗಳು ಕೇಳಿಬಂದವು.

ದಯವಿಟ್ಟು, ಸರ್ ದಯವಿಟ್ಟು ನನ್ನ ಮಗುವನ್ನು ತಕ್ಷಣ ಹುಡುಕಿಕೊಡಿ ಎಂದು ರಕ್ಷಣಾ ತಂಡದ ಸದಸ್ಯರೊಬ್ಬರ ಕೈ ಹಿಡಿದು ತಂದೆ ಕೂಗಿದರು. ಕಾಂಕ್ರೀಟ್ ಮತ್ತು ಇತರ ಅವಶೇಷಗಳ ಭಾರವಾದ ಚಪ್ಪಡಿಗಳು, ಕಟ್ಟಡದ ಅಸ್ಥಿರ ಭಾಗಗಳು ಹುಡುಕಾಟ ಮತ್ತು ರಕ್ಷಣಾ ಪ್ರಯತ್ನಗಳಿಗೆ ಅಡ್ಡಿಯುಂಟುಮಾಡಿದವು ಎಂದು ಪ್ರಯತ್ನವನ್ನು ಮುನ್ನಡೆಸುವ ಶೋಧ ಮತ್ತು ರಕ್ಷಣಾ ಅಧಿಕಾರಿ ನಾನಂಗ್ ಸಿಗಿಟ್ ಹೇಳಿದರು.

ಭಾರೀ ಉಪಕರಣಗಳು ಲಭ್ಯವಿದ್ದವು ಆದರೆ ಅದು ಮತ್ತಷ್ಟು ಕುಸಿತಕ್ಕೆ ಕಾರಣವಾಗಬಹುದು ಎಂಬ ಕಳವಳದಿಂದಾಗಿ ಅವುಗಳನ್ನು ಬಳಸಲಾಗುತ್ತಿರಲಿಲ್ಲ. ನಾವು ಇನ್ನೂ ಅವಶೇಷಗಳ ಅಡಿಯಲ್ಲಿ ಸಿಲುಕಿರುವವರಿಗೆ ಆಮ್ಲಜನಕ ಮತ್ತು ನೀರನ್ನು ಪೂರೈಸುತ್ತಿದ್ದೇವೆ ಮತ್ತು ಅವರನ್ನು ಹೊರತರಲು ನಾವು ಶ್ರಮಿಸುತ್ತಿದ್ದೇವೆ ಎಂದು ಸಿಗಿಟ್ ಹೇಳಿದರು.

ರಕ್ಷಣಾಕಾರರು ಅವಶೇಷಗಳ ಅಡಿಯಲ್ಲಿ ಹಲವಾರು ಶವಗಳನ್ನು ನೋಡಿದ್ದಾರೆ ಆದರೆ ಇನ್ನೂ ಜೀವಂತವಾಗಿರುವವರನ್ನು ಉಳಿಸುವತ್ತ ಗಮನಹರಿಸಿದ್ದಾರೆ ಎಂದು ಅವರು ಹೇಳಿದರು. ನೂರಾರು ರಕ್ಷಣಾ ಕಾರ್ಯಕರ್ತರು ಈ ಪ್ರಯತ್ನದಲ್ಲಿ ಭಾಗಿಯಾಗಿದ್ದರು ಮತ್ತು ಉಸಿರಾಟ, ಹೊರತೆಗೆಯುವಿಕೆ, ವೈದ್ಯಕೀಯ ಸ್ಥಳಾಂತರಿಸುವಿಕೆ ಮತ್ತು ಇತರ ಸಹಾಯಕ ಸಾಧನಗಳನ್ನು ಹೊಂದಿದ್ದರು. ಅನಧಿಕೃತ ವಿಸ್ತರಣೆಗೆ ಒಳಗಾಗುತ್ತಿದ್ದ ಕಟ್ಟಡದಲ್ಲಿ ವಿದ್ಯಾರ್ಥಿಗಳು ಮಧ್ಯಾಹ್ನ ಪ್ರಾರ್ಥನೆ ಸಲ್ಲಿಸುತ್ತಿದ್ದಾಗ, ಅದು ಇದ್ದಕ್ಕಿದ್ದಂತೆ ಅವರ ಮೇಲೆ ಕುಸಿದು ಬಿದ್ದಿತು ಎಂದು ಪ್ರಾಂತೀಯ ಪೊಲೀಸ್ ವಕ್ತಾರ ಜೂಲ್ಸ್ ಅಬ್ರಹಾಂ ಅಬಾಸ್ಟ್ ಹೇಳಿದರು.

---

## ಅಮೆರಿಕದ ಒತ್ತಡದಿಂದ ಮುಂಬೈ ದಾಳಿ ನಂತರ ಪಾಕ್ ವಿರುದ್ಧ ಯುದ್ಧ ಮಾಡಲಿಲ್ಲ : ಚಿದು



**ನವದೆಹಲಿ:** ಹಿಂದಿನ 26/11 ಮುಂಬೈ ದಾಳಿಯ ನಂತರ ಭಾರತ ಪಾಕಿಸ್ತಾನದ ವಿರುದ್ಧ ಮಿಲಿಟರಿ ಪ್ರತೀಕಾರದ ಬಗ್ಗೆ ಯೋಚಿಸಿತ್ತು. ಆದರೆ ಅಮೆರಿಕ ಸೇರಿದಂತೆ ಅಂತರರಾಷ್ಟ್ರೀಯ ಸಮುದಾಯದ ಒತ್ತಡ ಮತ್ತು ಹಿರಿಯ ರಾಜತಾಂತ್ರಿಕರ ಸಲಹೆಯ ಮೇರೆಗೆ ದಾಳಿ ನಡೆಸಿರಲಿಲ್ಲ ಎಂದು ಹಿರಿಯ ಕಾಂಗ್ರೆಸ್ ನಾಯಕ ಪಿ. ಚಿದಂಬರಂ ಹೇಳಿದ್ದಾರೆ.

ಪೆಹಲ್ಗಾಮ್ ದಾಳಿ ನಂತರ ಭಾರತ ಆರಂಭಿಸಿದ ಆಪರೇಷನ್ ಸಿಂಧೂರ ಕಾರ್ಯಾಚರಣೆಯನ್ನು ನಿಲ್ಲಿಸುವಂತೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ದೆಹಲಿ ಮತ್ತು ಇಸ್ಲಾಮಾಬಾದ್‌ಗೆ ಮನವಿ ಮಾಡಿಕೊಂಡ ನಂತರ ಯುದ್ಧ ನಿಲ್ಲಿಸಲಾಯಿತು ಎಂಬ ಹೇಳಿಕೆಯನ್ನು ಮೋದಿ ಸರ್ಕಾರ ನಿರಾಕರಿಸಿರುವ ಬೆನ್ನಲ್ಲೆ ಚಿದು ಅವರ ಈ ಹೇಳಿಕೆ ಬಂದಿದೆ. ಆಗಿನ ಆಡಳಿತಾರೂಢ ಕಾಂಗ್ರೆಸ್ ನೇತೃತ್ವದ ಯುಪಿಎ ಸರ್ಕಾರದಲ್ಲಿ ಗೃಹ ಸಚಿವರಾಗಿದ್ದ ಚಿದಂಬರಂ ಹಿಂದಿ ಸುದ್ದಿ ವಾಹಿನಿಗೆ ನೀಡಿದ ಸಂದರ್ಶನದಲ್ಲಿ ಮುಂಬೈ ದಾಳಿ ನಂತರ ಇಡೀ ಜಗತ್ತು ಯುದ್ಧ ಪ್ರಾರಂಭಿಸಬೇಡಿ ಎಂದು ಹೇಳಿತು.

ಇದರಲ್ಲಿ ಅಮೆರಿಕದ ಮಾಜಿ ವಿದೇಶಾಂಗ ಕಾರ್ಯದರ್ಶಿ ಕಾಂಡೋಲೀಜಾ ರೈಸ್ ಅವರೊಂದಿಗಿನ ಸಂಭಾಷಣೆಯೂ ಸೇರಿತ್ತು, ಸರ್ಕಾರವು ಸಶಸ್ತ್ರ ಪ್ರತಿಕ್ರಿಯೆಯನ್ನು ಮರುಪರಿಶೀಲಿಸುವಂತೆ ಮನವೊಲಿಸಿತು ಎಂದು ಕಾಂಗ್ರೆಸ್ ನಾಯಕ ಹೇಳಿಕೊಂಡಿದ್ದಾರೆ. ನಾನು ಅಧಿಕಾರ ವಹಿಸಿಕೊಂಡ ಎರಡು ಅಥವಾ ಮೂರು ದಿನಗಳ ನಂತರ ನನ್ನನ್ನು ಮತ್ತು ಪ್ರಧಾನಿಯನ್ನು (ಆಗ ಡಾ. ಮನಮೋಹನ್ ಸಿಂಗ್) ಭೇಟಿ ಮಾಡಿ. ದಯವಿಟ್ಟು ಪ್ರತಿಕ್ರಿಯಿಸಬೇಡಿ ಎಂದು ಹೇಳಿದರು. ಇದು ಸರ್ಕಾರ ತೆಗೆದುಕೊಳ್ಳುವ ನಿರ್ಧಾರ ಎಂದು ನಾನು ಹೇಳಿದೆ. (ಆದರೆ). ಅವರು ಪ್ರತೀಕಾರದ ಕ್ರಮ ಬೇಡ ಎಂದರು ಹೀಗಾಗಿ ಯುದ್ಧ ಕೈ ಬಿಡಲಾಯಿತು ಎಂದು ಹೇಳಿಕೊಂಡಿದ್ದಾರೆ.

---

# ಶತ್ರು ರಾಷ್ಟ್ರ ಕತಾರ್ ಪ್ರಧಾನಿಗೆ ಕರೆ ಮಾಡಿ Sorry ಹೇಳಿದ ನೆತನ್ಯಾಹು

### 2025ರ ಜುಲೈನಲ್ಲಿ ಇಸ್ರೇಲ್ ನಡೆಸಿದ್ದ ದೋಹಾ ನಗರದ ಮೇಲಿನ ದಾಳಿಗೆ ಕ್ಷಮೆ ಕೋರಿದ ಬೆಂಜಮಿನ್



**ಟ್ರಂಪ್ ಮಧ್ಯಸ್ಥಿಕೆಯಲ್ಲಿ ಸಂಧಾನ**

**ವಾಷಿಂಗ್ಟನ್:** ಮಹತ್ವದ ಬೆಳವಣಿಗೆಯೊಂದರಲ್ಲಿ, ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು, ತಮ್ಮ ಪರಮಶತ್ರು ರಾಷ್ಟ್ರವಾದ ಕತಾರ್ ನಾಯಕರಿಗೆ ಫೋನಾಯಿಸಿ, ಕ್ಷಮಿಸಿ ಎಂದು ಕೇಳಿದ್ದಾರೆ! ಅಚ್ಚರಿಯಾದರೂ ಇದು ನಂಬುವಂಥ ಸತ್ಯ! ಇದು ಆಗಿರುವುದು ಅಮೆರಿಕದ ಅಧ್ಯಕ್ಷರ ನಿವಾಸದಲ್ಲಿ. ಹೌದು. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಸಮ್ಮುಖದಲ್ಲಿ ಕತಾರ್ ಸರ್ಕಾರದ ಪ್ರಧಾನ ಹುದ್ದೆಯಲ್ಲಿರುವ ವ್ಯಕ್ತಿಯೊಬ್ಬರಿಗೆ ದೂರವಾಣಿ ಕರೆ ಮಾಡಿದ ನೆತನ್ಯಾಹು, ಇದೇ ವರ್ಷ ಸೆಪ್ಟಂಬರ್‌ನಲ್ಲಿ ತಾನು ಕತಾರ್ ರಾಜಧಾನಿ ದೋಹಾ ಮೇಲೆ ನಡೆಸಿದ ವೈಮಾನಿಕ ದಾಳಿಯ ಬಗ್ಗೆ ಕ್ಷಮೆ ಕೋರಿದ್ದಾರೆ. ನಾನು ಆ ದಾಳಿ ನಡೆಸಲು ಆದೇಶಿಸಬಾರದಿತ್ತು. ನಾನು ತಪ್ಪು ಮಾಡಿದ್ದೇನೆ. ಆ ದಾಳಿಯ ಮೂಲಕ ನಾನು ಕತಾರ್ ನ ಸಾರ್ವಭೌಮತ್ವಕ್ಕೆ ಧಕ್ಕೆ ತಂದಿದ್ದೇನೆ. ಅದಕ್ಕಾಗಿ ಈ ಮೂಲಕ ನಿಮ್ಮ ಕ್ಷಮೆ ಕೋರುತ್ತಿದ್ದೇನೆ ಎಂದು ನೆತನ್ಯಾಹು ಹೇಳಿದ್ದಾರೆ. ಕಾನ್ಫರೆನ್ಸ್ ಕಾಲ್ ಮಾದರಿಯ ಈ ಫೋನ್ ಕಾಲ್‌ನಲ್ಲಿ ಟ್ರಂಪ್ ಕೂಡ ಇವರಿಬ್ಬರ ಮಾತುಗಳನ್ನು ಆಲಿಸಿದರು. ನೆತನ್ಯಾಹು ಕ್ಷಮೆ ಕೋರಿದ ಮೇಲೆ ಕತಾರ್ ನಾಯಕರಿಗೆ ಕ್ಷಮಿಸಿ ಬಿಡಿ. ಇನ್ನಾದರೂ ಉತ್ತಮ ವಾತಾವರಣ ಸೃಷ್ಟಿಸೋಣ ಎಂದು ಹೇಳಿದರು. ಆನಂತರದ ಮಾತುಕತೆಯಲ್ಲಿ ಮೂವರೂ ನಾಯಕರು, ಇಸ್ರೇಲ್- ಪ್ಯಾಲೆಸ್ತೀನ್, ಕತಾರ್ ರಾಷ್ಟ್ರಗಳಲ್ಲಿ ಶಾಂತಿ ಸ್ಥಾಪನೆಗೆ ತುರ್ತಾಗಿ ಕೈಗೊಳ್ಳಬೇಕಿರುವ ಕೆಲವು ವಿಚಾರಗಳನ್ನು ಚರ್ಚಿಸಿದರು.

**ಕತಾರ್ ಪರವಾಗಿ ಮಾತನಾಡಿದ್ಯಾರು?:**
**ಬೆಂಜಮಿನ್ ಅವರು ಯಾರೊಟ್ಟಿಗೆ ಮಾತನಾಡಿದರು ಎಂಬುದರ ವಿವರಣೆ ಯಾವುದೇ ವರದಿಯಲ್ಲಿ ಪ್ರಸ್ತಾಪವಾಗಿಲ್ಲ. ಎಲ್ಲಾ ವರದಿಗಳಲ್ಲೂ ಕತಾರ್ ಲೀಡರ್ ಎಂದೇ ಉಲ್ಲೇಖಿಸಲಾಗಿದೆ. ಸಾಮಾನ್ಯವಾಗಿ, ಕತಾರ್‌ನಲ್ಲಿ ಅಲ್ಲಿನ ಪ್ರಧಾನಿಯನ್ನು ಲೀಡರ್ ಎಂದು ಕರೆಯುವುದು ರೂಢಿ. ಆ ಹಿನ್ನೆಲೆಯಲ್ಲಿ ಹೇಳುವುದಾದರೆ, ಕತಾರ್ ನ ಪ್ರಧಾನಿ ಶೇಖ್ ಮೊಹಮ್ಮದ್ ಬಿನ್ ಅಬ್ದುಲ್ ರಹಮಾನ್ ಬಿನ್ ಜಾಸಿಮ್ ಅಲ್‌ಥಾನಿ ಅವರ ಜೊತೆಗೆ ನೆತನ್ಯಾಹು, ಟ್ರಂಪ್ ಮಾತನಾಡಿರಬಹುದು ಎಂದು ಅಂದಾಜಿಸಲಾಗಿದೆ.**

**ಟ್ರಂಪ್ 21 ಸೂತ್ರ:** ಕತಾರ್ ನಾಯಕರು ಹಾಗೂ ಬೆಂಜಮಿನ್ ನಡುವಿನ ಮಾತುಕತೆಗೂ ಮುನ್ನ, ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಇಸ್ರೇಲ್-ಹಮಾಸ್ ನಡುವಿನ ಕದನ ಅಂತ್ಯಗೊಳಿಸಲು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಶಾಂತಿ ಸಂಧಾನದ ಪ್ರಸ್ತಾಪ ಮುಂದಿಟ್ಟಿದ್ದರು. ಜುಲೈ ತಿಂಗಳಲ್ಲೇ ಎರಡೂ ರಾಷ್ಟ್ರಗಳ ನಡುವೆ ಕದನ ವಿರಾಮ ಜಾರಿಯಾಗಿದೆ ಎಂದು ಟ್ರಂಪ್ ಅವರೇ ಘೋಷಿಸಿದ್ದರು. ಶಾಂತಿ ಮಾತುಕತೆ ಕುರಿತು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರೊಂದಿಗೆ ಸೋಮವಾರ ರಾತ್ರಿ ಮಾತುಕತೆ ನಡೆಸುವ ಮೊದಲು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದ ಟ್ರಂಪ್, ಮಧ್ಯಪ್ರಾಚ್ಯ ಜನರಿಗೆ ವಿಶೇಷ ಉಡುಗೊರೆ ಸಿದ್ಧವಾಗುತ್ತಿದೆ. ಎರಡು ವರ್ಷಗಳಿಂದ ಬಗೆಹರಿಯದ ಬಿಕ್ಕಟ್ಟಿಗೆ ಪರಿಹಾರ ಕಂಡುಕೊಳ್ಳುವ ಕಾಲ ಸನ್ನಿಹಿತವಾಗಿದೆ. ಮಧ್ಯಪ್ರಾಚ್ಯ ಜನರ ದೃಷ್ಟಿಯಲ್ಲಿ ಶ್ರೇಷ್ಠತೆ ಪಡೆಯಲು ನಮಗೆ ಉತ್ತಮ ಅವಕಾಶವಿದೆ, ಎಂದು ಬರೆದುಕೊಂಡಿದ್ದರು.

ಪ್ಯಾಲೆಸ್ತೀನ್ ಒತ್ತೆಯಾಳುಗಳ ಬಿಡುಗಡೆ, ಪ್ಯಾಲೆಸ್ತೀನ್‌ಗೆ ಪ್ರತ್ಯೇಕ ರಾಷ್ಟ್ರದ ಮಾನ್ಯತೆ, ಯುದ್ಧ ಪೀಡಿತ ಪ್ರದೇಶದಲ್ಲಿ ಶಾಶ್ವತ ಶಾಂತಿ ಸ್ಥಾಪನೆ, ಸಂತ್ರಸ್ತ ಜನರಿಗೆ ಪರಿಹಾರ ನೀಡುವುದು ಸೇರಿದಂತೆ ಶಾಂತಿ ಸ್ಥಾಪನೆಯ ಕದನ ವಿರಾಮಕ್ಕೆ 21 ಅಂಶಗಳ ಯೋಜನೆ ರೂಪಿಸಿದ್ದಾರೆ.

---

## ಗರ್ಭಪಾತಕ್ಕೆ ಒತ್ತಾಯಿಸಿದ ಸ್ನೇಹಿತನ ಕತ್ತು ಸೀಳಿ ಕೊಂದ ಅಪ್ರಾಪ್ತೆ

**ರಾಯ್ಪುರ:** ಮೂರು ತಿಂಗಳ ಗರ್ಭಿಣಿಯಾಗಿದ್ದ 16 ವರ್ಷದ ಅಪ್ರಾಪ್ತೆ ಬಾಲಕಿಗೆ ಗರ್ಭಪಾತ ಮಾಡಿಸುವಂತೆ ಚಾಕು ತೋರಿಸಿ ಬೆದರಿಕೆ ಹಾಕಿದ್ದ ಗೆಳೆಯನನ್ನು ಅದೇ ಆಯುಧದಿಂದ ಕತ್ತು ಸೀಳಿ ಕೊಲೆ ಮಾಡಿರುವ ಘಟನೆ ತಡವಾಗಿ ಬೆಳಕಿಗೆ ಬಂದಿದೆ.

ನಗರದ ಗಂಜ್ ಪೊಲೀಸ್ ಠಾಣೆ ವ್ಯಾಪ್ತಿಯ ಲಾಡ್ಜ್‌ವೊಂದರಲ್ಲಿ ನಡೆದಿದ್ದು, ಮೂಲತಃ ಬಿಹಾರದ ಮೊಹಮದ್ ಸದ್ದಾಂ ಕೊಲೆ ಆಗಿರುವ ಸ್ನೇಹಿತ. ಈತ ಅಭನ್‌ಪುರದಲ್ಲಿ ಎಂಎಸ್ ಎಂಜಿನಿಯರಿಂಗ್ ಅಧಿಕಾರಿಯಾಗಿ ಕೆಲಸ ಮಾಡುತ್ತಿದ್ದ. ಅಪ್ರಾಪ್ತೆ ವಯಸ್ಕಳು ಮೂರು ತಿಂಗಳ ಗರ್ಭಿಣಿಯಾಗಿದ್ದು, ಗರ್ಭಪಾತ ಮಾಡಲು ನಿರಾಕರಿಸಿದ್ದಳು. ಸದ್ದಾಂ ಆಕೆಯನ್ನು ಮದುವೆಯಾಗಲು ಇಷ್ಟವಿಲ್ಲ ಎಂದು ಹೇಳಿ ಗರ್ಭಪಾತ ಮಾಡುವಂತೆ ಒತ್ತಾಯಿಸಿದ್ದಾನೆ. ಇದು ಇಬ್ಬರ ನಡುವೆ ಪದೇ ಪದೇ ಜಗಳಕ್ಕೆ ಕಾರಣವಾಗಿ, ಮಾರಕ ಕೃತ್ಯಕ್ಕೆ ಕಾರಣವಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಬಾಬಾ ಚೈತನ್ಯಾನಂದನ ಮಹಿಳಾ ಸಹಾಯಕಿಯರ ವಿಚಾರಣೆ


**ನವದೆಹಲಿ:** ಖಾಸಗಿ ಸಂಸ್ಥೆಯೊಂದರಲ್ಲಿ 17 ವಿದ್ಯಾರ್ಥಿಗಳಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪ ಹೊತ್ತಿರುವ ಚೈತನ್ಯಾನಂದ ಸರಸ್ವತಿ ಅವರನ್ನು ಹಾಗೂ ಅವರ ಇಬ್ಬರು ಮಹಿಳಾ ಸಹಾಯಕರು ವಿಚಾರಣೆಗೆ ಒಳಪಡಿಸಲಾಗಿದೆ. ಸ್ವಾಮಿಜಿ ಮಹಿಳಾ ಸಹಾಯಕಿಯರು ಸಂತ್ರಸ್ತರಿಗೆ ಬೆದರಿಕೆ ಹಾಕಿ ತಮ್ಮ ಅಶ್ಲೀಲ ಸಂದೇಶಗಳನ್ನು ಅಳಿಸುವಂತೆ ಒತ್ತಾಯಿಸಿದ್ದರು ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

62 ವರ್ಷದ ಸರಸ್ವತಿ ಅವರ ಫೋನ್‌ನಲ್ಲಿ ಅನೇಕ ಮಹಿಳೆಯರೊಂದಿಗೆ ಚಾಟ್ ಮಾಡಿರುವುದನ್ನು ಪೊಲೀಸರು ಕಂಡುಕೊಂಡಿದ್ದಾರೆ, ಅವರು ಸುಳ್ಳು ಭರವಸೆಗಳ ಮೂಲಕ ಅವರನ್ನು ಆಕರ್ಷಿಸಲು ಪ್ರಯತ್ನಿಸಿದರು. ಅವರ ಫೋನ್‌ಗಳಲ್ಲಿ ಅವರು ಏರ್ ಹೋಸ್ಟೆಸ್‌ಗಳೊಂದಿಗೆ ಇರುವ ಬಹು ಛಾಯಾಚಿತ್ರಗಳು ಮತ್ತು ಮಹಿಳೆಯರ ಪ್ರದರ್ಶನ ಚಿತ್ರಗಳ (ಡಿಪಿ) ಸ್ಕ್ರೀನ್‌ಶಾಟ್‌ಗಳು ಸಹ ಇದ್ದವು ಎಂದು ಅಧಿಕಾರಿ ಹೇಳಿದರು. ರಾಷ್ಟ್ರ ರಾಜಧಾನಿಯಲ್ಲಿ ಕೇಂದ್ರೀಯವಾಗಿ ಅನುಮೋದಿತ ಖಾಸಗಿ ಸಂಸ್ಥೆಯ ಅಧ್ಯಕ್ಷರಾಗಿ ನೇಮಕಗೊಂಡಾಗ ಸ್ವಯಂ ಘೋಷಿತ ದೇವಮಾನವ ತನ್ನ ಕ್ರಿಮಿನಲ್ ಕೃತ್ಯ ಎಸಗಿದ್ದಾನೆ ಎಂದು ಆರೋಪಿಸಲಾಗಿದೆ.

ಸರಸ್ವತಿ ತನಿಖೆಗೆ ಸಹಕರಿಸುತ್ತಿಲ್ಲ ಮತ್ತು ವಿಚಾರಣಾಧಿಕಾರಿಗಳನ್ನು ದಾರಿ ತಪ್ಪಿಸುತ್ತಲೇ ಇದ್ದಾರೆ ಎಂದು ಅಧಿಕಾರಿ ಹೇಳಿದರು. ಅವರು ತಮ್ಮ ಕೃತ್ಯಗಳಿಗೆ ಯಾವುದೇ ಪಶ್ಚಾತ್ತಾಪವನ್ನು ತೋರಿಸಿಲ್ಲ ಮತ್ತು ತಪ್ಪಿಸಿಕೊಳ್ಳುವ ಉತ್ತರಗಳನ್ನು ನೀಡುತ್ತಿದ್ದಾರೆ ಎಂದು ಅವರು ಹೇಳಿದರು. ಸಂಸ್ಥೆಯಲ್ಲಿ ವಿವಿಧ ಹುದ್ದೆಗಳಲ್ಲಿ ಕೆಲಸ ಮಾಡುತ್ತಿದ್ದ ಅವರ ಇಬ್ಬರು ಮಹಿಳಾ ಸಹಚರರನ್ನು ವಿಚಾರಣೆ ನಡೆಸಲಾಗುತ್ತಿದೆ ಮತ್ತು ತನಿಖೆಯ ಭಾಗವಾಗಿ ಅವರನ್ನು ಎದುರಿಸಲಾಗುತ್ತಿದೆ ಎಂದು ಅವರು ಹೇಳಿದರು. ವಿಚಾರಣೆಯ ಸಮಯದಲ್ಲಿ, ಸಾಕ್ಷ್ಯಾಧಾರಗಳನ್ನು ಎದುರಿಸಿದಾಗಲೂ, ಸರಸ್ವತಿ ಪದೇ ಪದೇ ಸುಳ್ಳು ಹೇಳಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ದಾಖಲೆಗಳು ಮತ್ತು ಡಿಜಿಟಲ್ ಪುರಾವೆಗಳನ್ನು ತೋರಿಸಿದಾಗ ಮಾತ್ರ ಅವನು ಇಷ್ಟವಿಲ್ಲದೆ ಪ್ರತಿಕ್ರಿಯಿಸುತ್ತಾನೆ ಎಂದು ಅವರು ಹೇಳಿದರು. ತನ್ನ ಬಲಿಪಶುಗಳಿಗೆ ಕರೆ ಮಾಡುತ್ತಿದ್ದ ಸ್ಥಳಗಳನ್ನು ತೋರಿಸಲು ಅವನನ್ನು ಸಂಸ್ಥೆಯ ಆವರಣಕ್ಕೆ ಕರೆದೊಯ್ಯಲಾಯಿತು.

## ಟಿವಿಕೆ ಇಬ್ಬರು ಕಾರ್ಯದರ್ಶಿಗಳಿಗೆ 14 ದಿನ ನ್ಯಾಯಾಂಗ ಬಂಧನ

**ಚೆನ್ನೈ:** ತಮಿಳುನಾಡಿನ ಕರೂರು ಜಿಲ್ಲೆಯಲ್ಲಿ ನಡೆದ ಭೀಕರ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಬಂಧಿತರಾದ ತಮಿಳಗ ವೆಟ್ರಿ ಕಳಗಂ ಪಕ್ಷದ ಇಬ್ಬರು ಕಾರ್ಯದರ್ಶಿಗಳನ್ನು ಪೊಲೀಸರು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದಾರೆ. ನ್ಯಾಯಾಧೀಶರು ಆರೋಪಿಗಳನ್ನು 14 ದಿನಗಳ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಟಿವಿಕೆ ಪಕ್ಷದ ಕರೂರು ಪಶ್ಚಿಮ ಜಿಲ್ಲಾ ಕಾರ್ಯದರ್ಶಿ ವಿ.ಪಿ.ಮತಿಯಾಳಗನ್ ಮತ್ತು ಕರೂರು ಕೇಂದ್ರ ಜಿಲ್ಲಾ ಕಾರ್ಯದರ್ಶಿ ಕಾಸಿ ಪೌನ್‌ರಾಜ್ ಅವರ ಹೆಸರನ್ನು ಎಫ್‌ಐಆರ್‌ನಲ್ಲಿ ಉಲ್ಲೇಖಿಸಲಾಗಿದ್ದು, ಅವರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ. ಟಿವಿಕೆ ಪಕ್ಷದ ರಾಜ್ಯ ಪ್ರಧಾನ ಕಾರ್ಯದರ್ಶಿ ಬಸ್ಸಿ ಆನಂದ್ ಮತ್ತು ಉಪ ಪ್ರಧಾನ ಕಾರ್ಯದರ್ಶಿ ನಿರ್ಮಲ್ ಕುಮಾರ್ ಅವರ ವಿರುದ್ಧವು ಎಫ್‌ಐಆರ್ ದಾಖಲಿಸಲಾಗಿದೆ. ಆದರೆ, ಅವರನ್ನು ಇನ್ನೂ ಬಂಧಿಸಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ. ಆರೋಪಿಗಳ ವಿರುದ್ಧ ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್ 105, 110, 125 ಮತ್ತು 223ರ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದರು.



## ರಾಜ್ಯ ಸ್ಥಾನಮಾನಕ್ಕಾಗಿ ಬಿಜೆಪಿ ಜೊತೆ ಮೈತ್ರಿ ಬದಲು ರಾಜೀನಾಮೆ ನೀಡುವೆ

**ಶ್ರೀನಗರ:** ಕೇಂದ್ರಾಡಳಿತ ಪ್ರದೇಶ ಜಮ್ಮು ಮತ್ತು ಕಾಶ್ಮೀರಕ್ಕೆ ರಾಜ್ಯದ ಸ್ಥಾನಮಾನಕ್ಕಾಗಿ ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಳ್ಳುವ ಬದಲು ರಾಜೀನಾಮೆ ನೀಡುತ್ತೇನೆ ಎಂದು ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಹೇಳಿದ್ದಾರೆ. ಜಮ್ಮು ಮತ್ತು ಕಾಶ್ಮೀರದ ಅನಂತನಾಗ್ ಜಿಲ್ಲೆಯ ಅಚಬಾಲ್ ಪ್ರದೇಶದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅಬ್ದುಲ್ಲಾ, ರಾಜ್ಯದ ಸ್ಥಾನಮಾನಕ್ಕಾಗಿ ಯಾವುದೇ ರಾಜಕೀಯ ರಾಜಿ ಮಾಡಿಕೊಳ್ಳಲು ಸಿದ್ಧರಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ರಾಜ್ಯದ ಸ್ಥಾನಮಾನಕ್ಕಾಗಿ ಬಿಜೆಪಿ ಜೊತೆ ಮೈತ್ರಿಗೆ ಜನರು ಸಿದ್ಧರಿದ್ದರೆ ನನಗೆ ತಿಳಿಸಲಿ. ಆ ವ್ಯಾಪಾರ ಮಾಡಲು ನಾನು ಸಿದ್ಧನಿಲ್ಲ. ಬಿಜೆಪಿಯನ್ನು ಸರ್ಕಾರದಲ್ಲಿ ಸೇರಿಸಿಕೊಳ್ಳಬೇಕಾದರೆ, ನನ್ನ ರಾಜೀನಾಮೆಯನ್ನು ಸ್ವೀಕರಿಸಿ. ಇಲ್ಲಿರುವ ಯಾವುದೇ ಶಾಸಕರನ್ನು ಮುಖ್ಯಮಂತ್ರಿಯನ್ನಾಗಿ ಮಾಡಿ ಬಿಜೆಪಿಯೊಂದಿಗೆ ಸರ್ಕಾರ ರಚಿಸಿ ಎಂದು ಅವರು ಹೇಳಿದ್ದಾರೆ. ನಾವು ಬಿಜೆಪಿಯನ್ನು ಸರ್ಕಾರದಲ್ಲಿ ಸೇರಿಸಿಕೊಳ್ಳಬೇಕೇ? ಬಿಜೆಪಿಯನ್ನು ಸರ್ಕಾರದಲ್ಲಿ ಸೇರಿಸಿಕೊಂಡಿದ್ದರೆ ನಮಗೆ ಉಡುಗೊರೆ ಸಿಗುತ್ತಿತ್ತೇ? ಬೇಗ ರಾಜ್ಯದ ಸ್ಥಾನಮಾನ ನೀಡುತ್ತಿದ್ದರೇ?' ಎಂದು ಪ್ರಶ್ನಿಸಿದ ಅವರು, ರಾಜ್ಯ ಸ್ಥಾನಮಾನ ಪಡೆಯುವುದಕ್ಕಾಗಿ ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಳ್ಳುವ ಬದಲು ರಾಜೀನಾಮೆ ನೀಡುವುದಾಗಿ ಹೇಳಿದ್ದಾರೆ.




# ಮ್ಯಾಂಗೋ ಪಚ್ಚ ಫಸ್ಟ್ ಟೀಸರ್ ರಿಲೀಸ್


ಸುದೀಪ್ ಅಳಿಯ ಸಂಚಿತ್ ಸಂಜೀವ್ ನಟನೆಯ ಮ್ಯಾಂಗೋ ಪಚ್ಚ ಚಿತ್ರದ ಟೀಸರ್ ರಿಲೀಸ್ ಆಗಿದೆ. ಇದೀಗ ಟೀಸರ್ ಅಲ್ಲಿ ಸಂಚಿತ್ ಫಸ್ಟ್ ಟೈಮ್ ಹೀರೋ ಅನಿಸೋದೇ ಇಲ್ಲ. ಆ ರೀತಿನೇ ಕಾಣಿಸುತ್ತಿದ್ದಾರೆ. ಆದರೆ, ಅಲ್ಲಲ್ಲಿ ಸುದೀಪ್ ಛಾಯೆ ಕಾಣಿಸುತ್ತದೆ.

ಕಿಚ್ಚ ಸುದೀಪ್ ಅಕ್ಕನ ಮಗ ಸಂಚಿತ್ ಸಂಜೀವ್ ಅಭಿನಯದ ಮ್ಯಾಂಗೋ ಪಚ್ಚ ಚಿತ್ರದ ಫಸ್ಟ್ ಟೀಸರ್ ರಿಲೀಸ್ ಆಗಿದೆ. ಈ ಚಿತ್ರದಲ್ಲಿ ಸುದೀಪ್ ಅವರನ್ನೆ ನೋಡಿದಂತೆ ಆಗುತ್ತದೆ. ಆ ರೀತಿನೇ ಸಂಚಿತ್ ಸಂಜೀವ್ ಇಲ್ಲಿ ಅಭಿನಯಿಸಿದ್ದಾರೆ. ಧ್ವನಿ ಅಂತಲೂ ಕಿಚ್ಚನಿಗಿಂತಲೂ ವಿಶೇಷ ಅನಿಸುತ್ತದೆ. ಮ್ಯಾನರಿಸಂ ಕೂಡ ಚೆನ್ನಾಗಿದೆ. ಮೊದಲ ಸಿನಿಮಾ ಅನಿಸೋದಿಲ್ಲ. ಆ ರೀತಿನೇ ಸಂಚಿತ್ ಸಂಜೀವ್ ಇಲ್ಲಿ ನಟಿಸಿದ್ದಾರೆ. ಈ ಚಿತ್ರದ ಟೀಸರ್ ಅನ್ನ ಸುದೀಪ್ ತಮ್ಮ ಎಕ್ಸ್ ಖಾತೆಯ ಪೇಜ್ ಅಲ್ಲೂ ಹಂಚಿಕೊಂಡಿದ್ದಾರೆ.

**ಮೈಸೂರು ಹುಡುಗನ ರಿಯಲ್ ಕಥೆ.:** ಮ್ಯಾಂಗೋ ಪಚ್ಚ ಚಿತ್ರದಲ್ಲಿ ರಿಯಲ್ ಘಟನೆಗಳ ಕಥೆ ಇದೆ. 1990 ರಿಂದ 2010 ರಲ್ಲಿ ನಡೆದ ಘಟನೆಗಳನ್ನೆ ಡೈರೆಕ್ಟರ್ ವಿವೇಕ್ ಇಲ್ಲಿ ಸಿನಿಮಾ ಮಾಡಿದ್ದಾರೆ. ಸಿಡಿ ಅಂಗಡಿಯ ಹುಡುಗ ಪ್ರಶಾಂತನ ಕಥೆಯನ್ನ ಇಲ್ಲಿ ಹೇಳುತ್ತಿದ್ದಾರೆ. ಆದರೆ, ಈ ಪ್ರಶಾಂತ ಮುಂದೆ ಪಚ್ಚ ಆಗಿದ್ದು ಹೇಗೆ? ಮ್ಯಾಂಗೋ ಪಚ್ಚ ಆಗಿರೋದು ಹೇಗೆ? ಈ ಎಲ್ಲಾ ಇಂಟ್ರಸ್ಟಿಂಗ್ ವಿಚಾರಗಳನ್ನ ಥಿಯೇಟರ್ ಅಲ್ಲಿಯೇ ನೋಡ್ಬೇಕು ಅನಿಸುತ್ತದೆ. ಈಗೀನ ಈ ಟೀಸರ್ ಅಲ್ಲಿ ಆ ವಿವರ ಏನೂ ಇಲ್ಲ. ಆದರೆ, ಟೀಸರ್ ಇಂಟ್ರಸ್ಟಿಂಗ್ ಆಗಿಯೇ ಇದೆ.

**ಅಳಿಯನ ನಟನೆಯಲ್ಲಿ ಮಾವನ ಛಾಯೆ:** ಮ್ಯಾಂಗೋ ಪಚ್ಚ ಚಿತ್ರದಲ್ಲಿ ಸುದೀಪ್ ಅಕ್ಕನ ಮಗ ಸಂಚಿತ್ ಸಂಜೀವ್ ಅಭಿನಯಿಸಿದ್ದಾರೆ. ಇದು ಇವರ ಮೊದಲ ಚಿತ್ರವೇ ಆಗಿದೆ. ಈ ಸಿನಿಮಾ ಮೂಲಕ ಸಂಚಿತ್ ನಾಯಕರಾಗಿ ಕನ್ನಡ ಇಂಡಸ್ಟ್ರಿಗೆ ಕಾಲಿಡುತ್ತಿದ್ದಾರೆ. ಚಿತ್ರದ ಟೀಸರ್ ನೋಡಿದ್ರೆ ಕೆಲವು ಕಡೆ ಸುದೀಪ್ ನೋಡಿದ ರೀತಿ ಫೀಲ್ ಆಗುತ್ತಿದೆ. ಸಿಗರೇಟ್ ಸೇದೋ ರೀತಿ ಸುದೀಪ್ ತರವೇ ಇದೆ. ಕುಳಿತುಕೊಳ್ಳುವ ರೀತಿನೂ ಹಾಗೆ ಅನಿಸುತ್ತದೆ.





# ನನಗೆ ಏನು ಬೇಕಾದರೆ ಮಾಡಿ ನನ್ನವರ ಬಿಟ್ಟುಬಿಡಿ

ತಮಿಳು ಚಿತ್ರರಂಗದ ಸೂಪರ್ ಸ್ಟಾರ್ ನಟ, ರಾಜಕೀಯ ಪಕ್ಷವನ್ನೂ ಸ್ಥಾಪಿಸಿರುವ ದಳಪತಿ ವಿಜಯ್ ಅವರ ಇತ್ತೀಚಿನ ರಾಜಕೀಯ ರ್‍ಯಾಲಿಯಲ್ಲಿ ನಡೆದ ಕಾಲ್ತುಳಿತದಲ್ಲಿ 40ಕ್ಕೂ ಹೆಚ್ಚು ಮಂದಿ ನಿಧನ ಹೊಂದಿದ್ದಾರೆ. ತಮಿಳುನಾಡಿನ ಕರೂರಿನಲ್ಲಿ ವಿಜಯ್ ಅವರ ರ್‍ಯಾಲಿ ಸಂದರ್ಭದಲ್ಲಿ ವಿಜಯ್ ಅವರನ್ನು ನೋಡಲು ಭಾರಿ ಸಂಖ್ಯೆಯ ಜನ ಸೇರಿದ್ದರು, ಈ ವೇಳೆ ನಡೆದ ಕಾಲ್ತುಳಿತದಲ್ಲಿ 40ಕ್ಕೂ ಹೆಚ್ಚು ಮಂದಿ ನಿಧನ ಹೊಂದಿದರು. ಘಟನೆ ನಡೆದು ಮೂರು ದಿನಗಳಾಗಿದ್ದು ಇದೀಗ ವಿಜಯ್ ವೀಡಿಯೊ ಮೂಲಕ ಮೊದಲ ಬಾರಿಗೆ ಪ್ರತಿಕ್ರಿಯೆ ನೀಡಿದ್ದಾರೆ.

ವೀಡಿಯೊನಲ್ಲಿ ನೋವಿನಿಂದ ಮಾತನಾಡಿರುವ ವಿಜಯ್, 'ನನ್ನ ಜೀವನದಲ್ಲಿಯೇ ಇಷ್ಟು ನೋವಿನ, ದುಃಖದ ದಿನವನ್ನು ನಾನು ಈವರೆಗೆ ನೋಡಿರಲಿಲ್ಲ, ನನ್ನ ಮೇಲಿನ ಪ್ರೀತಿಯಿಂದ ಅಷ್ಟು ಜನ ನೋಡಲು ಬಂದಿದ್ದರು, ಅವರ ಪ್ರೀತಿಗೆ ನಾನು ಎಂದಿಗೂ ಋಣಿಯಾಗಿರುತ್ತೇನೆ. ನಾನು ಮತ್ತೆ ಏಕೆ ಕರೂರಿಗೆ ಬರಲಿಲ್ಲ ಎಂದು ಪ್ರಶ್ನೆ ಮಾಡುತ್ತಿದ್ದಾರೆ. ಅದಕ್ಕೆ ಕಾರಣ ನನಗೆ ಅವರ ಮೇಲಿರುವ ಪ್ರೀತಿ. ನಾನು ಮತ್ತೆ ಬಂದರೆ ಸಮಸ್ಯೆ ಆಗುತ್ತದೆ. ಆದರೆ ಖಂಡಿತ ಸಂತ್ರಸ್ತ ಕುಟುಂಬಗಳನ್ನು ನಾನು ಭೇಟಿ ಆಗಲಿದ್ದೇನೆ' ಎಂದಿದ್ದಾರೆ ವಿಜಯ್.

'ನಾನು ಈ ವರೆಗೆ ಐದು ರ್‍ಯಾಲಿಗಳಲ್ಲಿ ಭಾಗಿ ಆಗಿದ್ದೇನೆ. ಎಲ್ಲಿಯೂ ಇಂಥಹಾ ಘಟನೆ ನಡೆದಿಲ್ಲ, ಜನರ ಸುರಕ್ಷತೆಗಾಗಿ ನಾವು ಪೊಲೀಸರ ಬಳಿ ಚರ್ಚೆ ಮಾಡಿದ್ದೆವು, ಸುರಕ್ಷಿತ ಜಾಗವನ್ನು ಆಯ್ಕೆ ಮಾಡಿಕೊಂಡಿದ್ದೆವು, ಆದರೂ ಈ ಘಟನೆ ಆಗಬಾರದಿತ್ತು, ಈ ಘಟನೆ ಆಗಿ ಹೋಗಿದೆ. ನಾನು ಕೂಡ ಮನುಷ್ಯನೇ. ಆದರೆ ಇಂದಿನಿಂದ ನನಗೆ ಜನರ ಸುರಕ್ಷತೆಯೇ ಮೊದಲ ಆದ್ಯತೆ ಆಗಲಿದೆ' ಎಂದಿದ್ದಾರೆ ವಿಜಯ್. 'ಏನೇನು ನಡೆಯುತ್ತಿದೆ, ಏನು ನಡೆದಿದೆ ಎಂಬುದನ್ನು ಜನ ನೋಡಿದ್ದಾರೆ, ನೋಡುತ್ತಿದ್ದಾರೆ. ಸತ್ಯ ಹೊರಗೆ ಬರಲಿದೆ. ನನ್ನ ರಾಜಕೀಯ ಪಯಣ ಇನ್ನಷ್ಟು ಶಕ್ತಿಯುತ ಆಗಿದೆ' ಎಂದಿರುವ ವಿಜಯ್, ತಮ್ಮ ಪಕ್ಷದ ಮುಖಂಡರನ್ನು ಬಂಧಿಸಿರುವ ಬಗ್ಗೆ ಮಾತನಾಡಿ, 'ಸ್ಟಾಲಿನ್ ಸರ್, ನನ್ನ ಜನರಿಗೆ ಏನೂ ಮಾಡಬೇಡಿ, ನಿಮಗೆ ದ್ವೇಷ ತೀರಿಸಿಕೊಳ್ಳಬೇಕು ಎಂಬುದಾದರೆ ನನ್ನ ಮೇಲೆ ಮಾಡಿ, ನಾನು ನನ್ನ ಮನೆಯಲ್ಲಿಯೇ ಇರುತ್ತೇನೆ ಅಥವಾ ಕಚೇರಿಯಲ್ಲಿರುತ್ತೇನೆ' ಎಂದಿದ್ದಾರೆ ವಿಜಯ್. ಕರೂರು ಕಾಲ್ತುಳಿತಕ್ಕೆ ಸಂಬಂಧಿಸಿದಂತೆ ವಿಜಯ್ ಅವರ ಟಿವಿಕೆ ಪಕ್ಷದ ಹಲವರ ಮೇಲೆ ಎಫ್‌ಐಆರ್ ದಾಖಲಿಸಲಾಗಿದೆ. ಕರೂರಿನ ಟಿವಿಕೆ ಮುಖಂಡರನ್ನು ಬಂಧಿಸಿ 14 ದಿನಗಳ ನ್ಯಾಯಾಂಗ ಬಂಧನಕ್ಕೆ ಸಹ ನೀಡಲಾಗಿದೆ. ಕರೂರು ಕಾಲ್ತುಳಿತದಲ್ಲಿ 41 ಮಂದಿ ನಿಧನ ಹೊಂದಿದ್ದಾರೆ.



# ಮಹಾಕಾಳಿ ಸಿನಿಮಾದ ಫಸ್ಟ್ ಲುಕ್ ರಿಲೀಸ್

ಬಾಲಿವುಡ್ ನಟ ಅಕ್ಷಯ್ ಖನ್ನಾ ಮತ್ತೆ ಆಶ್ಚರ್ಯ ಮೂಡಿಸಿದ್ದಾರೆ. ಛಾವಾ ಚಿತ್ರದಲ್ಲಿ ಔರಂಗಜೇಬ್ ರೋಲ್ ಮಾಡಿದ್ದರು. ಇದನ್ನ ನೋಡಿದವರು ಹುಬ್ಬೇರಿಸಿದ್ದರು. ಆದರೆ, ಈಗ ಅಸುರ ಗುರು ಶುಕ್ರಾಚಾರ್ಯರ ಪಾತ್ರ ಮಾಡಿದ್ದಾರೆ. ಇದಕ್ಕೆ ಪ್ರಶಂಸೆಯ ಸುರಿಮಳೆನೆ ಆಗುತ್ತಿದೆ.

ಬಾಲಿವುಡ್ ಆ್ಯಕ್ಟರ್ ಅಕ್ಷಯ್ ಖನ್ನಾ ನಿಜಕ್ಕೂ ಎಲ್ಲರಿಗೂ ಆಶ್ಚರ್ಯ ಮೂಡಿಸಿದ್ದಾರೆ. ಛಾವಾ ಚಿತ್ರದಲ್ಲಿ ಔರಂಗಜೇಬ್ ಪಾತ್ರ ಮಾಡಿ ಎಲ್ಲರೂ ಹುಬ್ಬೇರಿಸುವಂತೆ ಮಾಡಿದ್ದರು. ಆದರೆ, ಮಹಾಕಾಳಿ ಚಿತ್ರದಲ್ಲಿ ಅಸುರ ಗುರು ಶುಕ್ರಾಚಾರ್ಯ ಪಾತ್ರದಲ್ಲಿ ಈಗ ಕಂಗೊಳಿಸುತ್ತಿದ್ದಾರೆ. ಅರೆಕ್ಷಣ ಯಾರಪ್ಪ ಇದು ಅನ್ನೋ ಮಟ್ಟಿಗೆ ಶುಕ್ರಾಚಾರ್ಯರೇ ಆಗಿದ್ದಾರೆ. ಆದರೂ ಸಡನ್ ಆಗಿ ಅಮಿತಾಭ್ ಬಚ್ಚನ್ ನೋಡಿದ ಅನುಭವವೂ ಆಗುತ್ತದೆ. ಈ ರೀತಿಯ ಪ್ರಯೋಗಾತ್ಮಕ ಮತ್ತು ವಿಶೇಷ ಅನಿಸೋ ಪಾತ್ರವನ್ನೆ ನಿರೀಕ್ಷೆ ಮಾಡುವ ಅಕ್ಷಯ್ ಖನ್ನಾ ಇದೀಗ ಎಲ್ಲರೂ ಶಾಕ್ ತೆಗೆದುಕೊಳ್ಳುವಂತೆ ಮಾಡಿದ್ದಾರೆ.

ಹನುಮಾನ್ ಚಿತ್ರದ ಡೈರೆಕ್ಟರ್ ಪ್ರಶಾಂತ್ ವರ್ಮ ಈ ಮಹಾಕಾಳಿ ಚಿತ್ರಕ್ಕೆ ಕಥೆ ಬರೆದಿದ್ದಾರೆ. ಆದರೆ, ನಿರ್ದೇಶನದ ಜವಾಬ್ದಾರಿಯನ್ನ ಪೂಜಾ ಕೊಲ್ಲೂರು ಅವರಿಗೆ ಕೊಟ್ಟಿದ್ದಾರೆ. ಹಾಗೆ ಇದು ಮೊದಲ ಮಹಿಳಾ ಸೂಪರ್ ಹೀರೋ ಚಿತ್ರವೇ ಆಗಿದೆ.

ಈ ಚಿತ್ರದಲ್ಲಿಯೇ ಬಾಲಿವುಡ್ ನಟ ಅಕ್ಷಯ್ ಖನ್ನಾ ಅದ್ಭುತ ರೋಲ್ ಮಾಡಿದ್ದಾರೆ. ಅಸುರ ಗುರು ಶುಕ್ರಾಚಾರ್ಯ ಪಾತ್ರವನ್ನ ನಿರ್ವಹಿಸಿದ್ದಾರೆ. ಈ ಪಾತ್ರಕ್ಕಾಗಿ ಅದೆಷ್ಟು ತಯಾರಿ ಮಾಡಿಕೊಂಡಿದ್ದಾರೋ ಏನೊ ಆದರೆ, ಆ ಸಿದ್ಧತೆ ಎದ್ದು ಕಾಣಿಸುವಂತಹ ಪೋಸ್ಟರ್ ರಿಲೀಸ್ ಆಗಿದೆ.

# ಕನ್ನಡ ಸಿನಿಮಾ ಪರ ನಿಂತ ಪವನ್ ಕಲ್ಯಾಣ್

ರಿಷಬ್ ಶೆಟ್ಟಿ ಅವರ 'ಕಾಂತಾರ ಚಾಪ್ಟರ್ 1' ಸಿನಿಮಾಗೆ ತೆಲುಗು ರಾಜ್ಯಗಳಲ್ಲಿ ಸಮಸ್ಯೆ ಎದುರಾಗಿದೆ. ಅಲ್ಲಿನ ಕೆಲ ಮಂದಿ 'ಕಾಂತಾರ ಚಾಪ್ಟರ್ 1' ಸಿನಿಮಾವನ್ನು ಬಾಯ್ಕಾಟ್ ಮಾಡಬೇಕು ಎಂದು ಸಾಮಾಜಿಕ ಜಾಲತಾಣದಲ್ಲಿ ಅಭಿಯಾನ ಆರಂಭಿಸಿದ್ದಾರೆ. ಅಷ್ಟಕ್ಕೂ ಇದಕ್ಕೆ ಕಾರಣವೇನು? ಈಚೆಗೆ ಬೆಂಗಳೂರಿನಲ್ಲಿ ಪವನ್ ಕಲ್ಯಾಣ್ ಅವರ 'ಓಜಿ' ಸಿನಿಮಾದ ಪ್ರದರ್ಶನ ವೇಳೆ ಡಿಜೆ ಬಳಸಿ ಗಲಾಟೆ ಮಾಡಲಾಗಿತ್ತು. ಇದನ್ನು ಕೆಲ ಕನ್ನಡಪರ ಸಂಘಟನೆಗಳು ಖಂಡಿಸಿದ್ದವು. ಜೊತೆಗೆ ಹೈದರಾಬಾದ್‌ನಲ್ಲಿ ನಡೆದ 'ಕಾಂತಾರ ಚಾಪ್ಟರ್ 1' ಪ್ರೀ-ರಿಲೀಸ್ ಇವೆಂಟ್‌ನಲ್ಲಿ ರಿಷಬ್ ಕನ್ನಡದಲ್ಲಿ ಮಾತನಾಡಿದ್ದು, ಅಲ್ಲಿನವರಿಗೆ ಬೇಸರ ಉಂಟು ಮಾಡಿದೆಯಂತೆ. ಈ ಎಲ್ಲಾ ಕಾರಣಗಳಿಂದಾಗಿ 'ಕಾಂತಾರ ಚಾಪ್ಟರ್ 1' ಸಿನಿಮಾಗೆ ಅಡ್ಡಿ ಮಾಡುವುದಕ್ಕೆ ತೆಲುಗು ರಾಜ್ಯಗಳಲ್ಲಿ ಒಂದಷ್ಟು ಮಂದಿ ಮುಂದಾಗಿದ್ದಾರೆ. ಇದೀಗ ಈ ಬಗ್ಗೆ ನಟ ಪವನ್ ಕಲ್ಯಾಣ್ ಅವರು ಪ್ರತಿಕ್ರಿಯ ನೀಡಿದ್ದಾರೆ.

**ಪವನ್ ಕಲ್ಯಾಣ್ ಏನಂದ್ರು?:** ಕರ್ನಾಟಕದಲ್ಲಿ ಎದುರಾಗಿರುವ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು, ಅವರ ಸಿನಿಮಾಗಳಿಗೆ ನಾವು ತೊಂದರೆ ಕೊಡುವುದು ಸರಿಯಲ್ಲ. ನಾವು ಒಳ್ಳೆಯ ಹೃದಯ ಮತ್ತು ರಾಷ್ಟ್ರೀಯ ಭಾವನೆಯಿಂದ ಯೋಚಿಸಬೇಕು.

ಕನ್ನಡದ ಕಂಠೀರವ ಡಾ. ರಾಜ್‌ಕುಮಾರ್ ಅವರಿಂದ ಹಿಡಿದು ಕಿಚ್ಚ ಸುದೀಪ್, ಉಪೇಂದ್ರ, ಶಿವರಾಜ್‌ಕುಮಾರ್, ರಿಷಬ್ ಶೆಟ್ಟಿ ವರೆಗೆ ಎಲ್ಲರಿಗೂ ತೆಲುಗು ಜನರು ಯಾವಾಗಲೂ ಬೆಂಬಲ ನೀಡಿದ್ದಾರೆ. ನಾವು ಸಹೋದರತ್ವದಿಂದ ಮುಂದುವರಿಯಬೇಕು ಎಂದು ಡಿಸಿಎಂ ಪವನ್ ಕಲ್ಯಾಣ್ ಹೇಳಿದ್ದಾರೆ.



# ಅತ್ಯಾಚಾರಿಗಿಂತಲೂ ಕಡೆಯಾ ದರ್ಶನ್ ನ್ಯಾಯಾಲಯದಲ್ಲಿ ವಕೀಲರ ವಾದ

ರೇಣುಕಾ ಸ್ವಾಮಿ ಕೊಲೆ ಪ್ರಕರಣದಲ್ಲಿ ನ್ಯಾಯಾಂಗ ಬಂಧನದಲ್ಲಿರುವ ನಟ ದರ್ಶನ್, ಅವರಿಗೆ ಕೆಲ ಸೌಲಭ್ಯಗಳನ್ನು ಕೊಡಿಸಲು ವಕೀಲರು ಸತತ ಪ್ರಯತ್ನದಲ್ಲಿ ನಿರತರಾಗಿದ್ದಾರೆ. ನಟ ದರ್ಶನ್‌ಗೆ ಹೆಚ್ಚುವರಿ ಹಾಸಿಗೆ, ದಿಂಬು ಮತ್ತು ಬೆಡ್ ಶೀಟ್ ಕೊಡಿಸಲು ನ್ಯಾಯಾಲಯದಲ್ಲಿ ವಾದ-ಪ್ರತಿವಾದಗಳು ನಡೆಯುತ್ತಿವೆ.

ದರ್ಶನ್‌ಗೆ ಜೈಲಿನಲ್ಲಿ ಕೆಲವು ಸಾಮಾನ್ಯ ಸೌಲಭ್ಯಗಳನ್ನು ಕೊಡಿಸುವ ವಿಚಾರದಲ್ಲಿ ಜೈಲು ಅಧೀಕ್ಷಕರು ಇಂದು ನ್ಯಾಯಾಲಯಕ್ಕೆ ಹಾಜರಾಗಿ ವರದಿ ಸಲ್ಲಿಕೆ ಮಾಡಿದರು. ದರ್ಶನ್ ಪರ ವಾದ ಮಂಡಿಸಿದ ವಕೀಲ ಸುನಿಲ್, 'ಇಡೀ ದೇಶದ ಯಾವ ಜೈಲಿನಲ್ಲಿಯೂ ಇಲ್ಲದ ನಿಯಮಗಳನ್ನು ದರ್ಶನ್ ಮೇಲೆ ಹೇರಲಾಗಿದೆ. ಅದೇ ಜೈಲಿನಲ್ಲಿರುವ ಅತ್ಯಾಚಾರ ಆರೋಪಿ ಉಮೇಶ್ ರೆಡ್ಡಿಗೆ ಕಲರ್ ಟಿವಿ ಕೊಟ್ಟಿದ್ದಾರೆ, ಆದರೆ ದರ್ಶನ್‌ಗೆ ಅಗತ್ಯ ಸೌಲಭ್ಯಗಳನ್ನು ಸಹ ಕೊಡುತ್ತಿಲ್ಲ. ಬೇಕಾದರೆ ಆ ಬಗ್ಗೆ ಸಾಕ್ಷ್ಯ ನೀಡಲು ತಯಾರಿದ್ದೇವೆ' ಎಂದು ಏರಿದ ದನಿಯಲ್ಲಿ ವಾದಿಸಿದರು. ಜೈಲು ಅಧೀಕ್ಷಕರ ಪರವಾಗಿ ವಾದಿಸಿದ ಎಸ್‌ಪಿಪಿ ಪ್ರಸನ್ನ ಅವರು, 'ನಿಯಮಗಳ ಅನುಸಾರವಾಗಿ ದರ್ಶನ್‌ಗೆ ಏನು ಕೊಡಬೇಕೊ ಅದನ್ನು ನೀಡಲಾಗಿದೆ. ಬೆಳಿಗ್ಗೆ, ಸಂಜೆ ವಾಕಿಂಗ್‌ಗೆ ಅವಕಾಶ ನೀಡಲಾಗಿದೆ.

# ನ್ಯೂಜಿಲೆಂಡ್ ವಿರುದ್ಧ ಮ್ಯಾಕ್ಸ್‌ವೆಲ್ ಔಟ್

ಆಸ್ಟ್ರೇಲಿಯಾ ಕ್ರಿಕೆಟ್ ತಂಡದ ಸ್ಟಾರ್ ಆಟಗಾರ ಗ್ಲೆನ್ ಮ್ಯಾಕ್ಸ್‌ವೆಲ್ ಅವರು ಮೌಂಟ್ ಮೌಂಗನುಯಿಯಲ್ಲಿ ನೆಟ್ಸ್‌ನಲ್ಲಿ ಬೌಲಿಂಗ್ ಮಾಡುವಾಗ ಮಣಿಕಟ್ಟಿನ ಮುರಿತ ಗಾಯವಾಗಿದೆ. ಇದರಿಂದ ಚಿಕಿತ್ಸೆಗೆ ಆಸ್ಪತ್ರೆಗೆ ಸೇರಿದ್ದು ಮುಂದಿನ ನ್ಯೂಜಿಲೆಂಡ್ ವಿರುದ್ಧದ ಮೂರು ಟಿ 20 ಪಂದ್ಯಗಳ ಸರಣಿಯಿಂದ ಹೊರಬಿದಿದ್ದಾರೆ.



ವಿಕೆಟ್ ಕೀಪರ್/ಬ್ಯಾಟರ್ ಜೋಶ್ ಫಿಲಿಪ್ ಅವರನ್ನು ಬುಧವಾರದಿಂದ ಮೌಂಟ್ ಮೌಂಗನುಯಿಯಲ್ಲಿರುವ ಬೇ ಓವಲ್‌ನಲ್ಲಿ ನಡೆಯಲಿರುವ ಸರಣಿಗೆ ಕರೆಸಲಾಗಿದೆ. ಸರಣಿಯ ಪೂರ್ವಭಾವಿ ಹಂತದಲ್ಲಿ ಜೋಶ್ ಇಂಗ್ಲಿಸ್ ಅವರ ಕಾಲಿನ ಗಾಯದಿಂದ ಹೊರಗುಳಿದಿರುವುದು ಆಸ್ಟ್ರೇಲಿಯಾ ತಂಡಕ್ಕೆ ಮತ್ತೊಂದುಹಿನ್ನಡೆಯಾಗಿದೆ, ಕಳೆದ ತಿಂಗಳು ದಕ್ಷಿಣ ಆಫ್ರಿಕಾ ವಿರುದ್ಧದ ಟಿ-20 ಸರಣಿ ಗೆಲುವಿನಲ್ಲಿ ಅಜೇಯ ಅರ್ಧಶತಕ ಗಳಿಸಿದ 36 ವರ್ಷದ ಮ್ಯಾಕ್ಸ್‌ವೆಲ್ ನೆಟ್ಸ್‌ನಲ್ಲಿ ಬೌಲಿಂಗ್ ಮಾಡುವಾಗ ಬಲ ಮಣಿಕಟ್ಟಿಗೆ ಪೆಟ್ಟು ಬಿದ್ದಿದೆ. ಮ್ಯಾಕ್ಸ್‌ವೆಲ್ ಆಸ್ಟ್ರೇಲಿಯಾಕ್ಕೆ ಮರಳಲಿದ್ದಾರೆ ಮತ್ತು ತಜ್ಞರನ್ನು ಭೇಟಿಯಾಗಲಿದ್ದಾರೆ. ಅವರ ಬದಲಿ ಆಟಗಾರ ಫಿಲಿಪ್ ಇತ್ತೀಚಿನ ಭಾರತ ಪ್ರವಾಸದಲ್ಲೂ ಉತ್ತಮ ಪ್ರದರ್ಶನ ನೀಡಿದ್ದಾರೆ.

ಮುಂಬರುವ ಆಶಸ್ ಸರಣಿಗೆ ಆದ್ಯತೆ ನೀಡಲಾಗುತ್ತಿದೆ. ಬೆನ್ನು ನೋವಿನಿಂದಾಗಿ ಪ್ರಮುಖ ವೇಗಿ ಹಾಗು ತಂಡದ ನಾಯಕ ಪ್ಯಾಟ್ ಕಮಿನ್ಸ್ ಕೂಡ ಪ್ರಸ್ತುತ ಆಸ್ಟ್ರೇಲಿಯಾ ತಂಡದ ಭಾಗವಾಗಿಲ್ಲ, ಜೊತೆಗೆ ನಾಥನ್ ಎಲಿಸ್ ತಮ ಮೊದಲ ಮಗುವಿನ ಜನನದ ನಿಮಿತ್ತ ನ್ಯೂಜಿಲೆಂಡ್ ಸರಣಿಯಿಂದ ಹೊರಗುಳಿದಿದ್ದಾರೆ. ಹಿಗಾಗಿ ಆಸ್ಸಿಸ್ ಯುವ ತಂಡಕ್ಕೆ ಸರಣಿ ಸವಾಲಾಗಿದೆ.



# ಟೀಮ್ ಇಂಡಿಯಾಗೆ ಬಿಗ್ ಶಾಕ್ ಸ್ಟಾರ್ ಆಟಗಾರ 4 ವಾರ ಕಣಕ್ಕಿಳಿಯುವಂತಿಲ್ಲ

ಏಷ್ಯಾಕಪ್ ಗೆದ್ದು ಬೀಗಿರುವ ಟೀಮ್ ಇಂಡಿಯಾ ಇದೀಗ ಟೆಸ್ಟ್ ಸರಣಿಗಾಗಿ ಸಜ್ಜಾಗುತ್ತಿದೆ. ವೆಸ್ಟ್ ಇಂಡೀಸ್ ವಿರುದ್ಧದ 2 ಪಂದ್ಯಗಳ ಟೆಸ್ಟ್ ಮುಕ್ತಾಯದ ಬೆನ್ನಲ್ಲೇ ಭಾರತ ತಂಡ ಆಸ್ಟ್ರೇಲಿಯಾಗೆ ತೆರಳಲಿದೆ. ಈ ಸರಣಿಯಲ್ಲಿ ಟೀಮ್ ಇಂಡಿಯಾ 3 ಏಕದಿನ ಹಾಗೂ 5 ಟಿ20 ಪಂದ್ಯಗಳನ್ನಾಡಲಿದೆ.

ಆದರೆ ಈ ಪಂದ್ಯಗಳಿಗೆ ಟೀಮ್ ಇಂಡಿಯಾದ ಸ್ಟಾರ್ ಆಲ್‌ರೌಂಡರ್ ಹಾರ್ದಿಕ್ ಪಾಂಡ್ಯ ಅಲಭ್ಯರಾಗುವುದು ಬಹುತೇಕ ಖಚಿತವಾಗಿದೆ. ಏಷ್ಯಾಕಪ್‌ನ ಸೂಪರ್-4 ಹಂತದ ಕೊನೆಯ ಪಂದ್ಯದ ವೇಳೆ ಪಾಂಡ್ಯ ಕ್ವಾಡ್ರೈಸೆಪ್ಸ್ ನೋವಿನ ಸಮಸ್ಯೆಗೆ ಒಳಗಾಗಿದ್ದರು. ಹೀಗಾಗಿಯೇ ಅವರು ಪಾಕಿಸ್ತಾನ್ ವಿರುದ್ಧದ ಫೈನಲ್ ಪಂದ್ಯಕ್ಕೆ ಅಲಭ್ಯರಾಗಿದ್ದರು. ಇದೀಗ ಹಾರ್ದಿಕ್ ಪಾಂಡ್ಯ ಅವರ ವೈದ್ಯಕೀಯ ವರದಿ ಬಂದಿದ್ದು, ಈ ವರದಿಯಲ್ಲಿ ಅವರ ಎಡ ಕಾಲಿನ ಸ್ನಾಯುಗಳಲ್ಲಿ (ಕ್ವಾಡ್ರೈಸೆಪ್ಸ್) ಸಮಸ್ಯೆ ಇರುವುದು ಕಂಡು ಬಂದಿದೆ. ಹೀಗಾಗಿ ಹಾರ್ದಿಕ್ ಪಾಂಡ್ಯಗೆ ವೈದ್ಯರು ಕನಿಷ್ಠ 4 ವಾರಗಳ ವಿಶ್ರಾಂತಿ ಸೂಚಿಸಿದ್ದಾರೆ ಎಂದು ತಿಳಿದು ಬಂದಿದೆ.

ಈ ನಾಲ್ಕು ವಾರಗಳಲ್ಲಿ ಟೀಮ್ ಇಂಡಿಯಾ ಆಸ್ಟ್ರೇಲಿಯಾ ವಿರುದ್ಧ ಒಟ್ಟು 8 ಪಂದ್ಯಗಳನ್ನಾಡಲಿದೆ. ಅಕ್ಟೋಬರ್ 19 ರಿಂದ ಶುರುವಾಗಲಿರುವ ಈ ಸರಣಿಯಲ್ಲಿ ಮೊದಲು 3 ಪಂದ್ಯಗಳ ಏಕದಿನ ಸರಣಿ ಆಡಲಾಗುತ್ತದೆ. ಇದಾದ ಬಳಿಕ 5 ಮ್ಯಾಚ್‌ಗಳ ಟಿ20 ಸರಣಿ ನಡೆಯಲಿದೆ. ಇದೀಗ ಸ್ನಾಯು ಸೆಳೆತದ ಸಮಸ್ಯೆಗೆ ಒಳಗಾಗಿರುವ ಹಾರ್ದಿಕ್ ಪಾಂಡ್ಯ ಆಸ್ಟ್ರೇಲಿಯಾ ವಿರುದ್ಧದ ಸರಣಿಯಿಂದ ಸಂಪೂರ್ಣ ಹೊರಗುಳಿಯುವುದು ಖಚಿತ. ಅಲ್ಲದೆ ನವೆಂಬರ್‌ನಲ್ಲಿ ನಡೆಯಲಿರುವ ಸೌತ್ ಆಫ್ರಿಕಾ ವಿರುದ್ಧದ ಟಿ20 ಸರಣಿಯ ಮೂಲಕ ಕಂಬ್ಯಾಕ್ ಮಾಡುವ ಸಾಧ್ಯತೆಯಿದೆ.

# ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ಇಂಗ್ಲೆಂಡ್ ಸ್ಟಾರ್ ಆಟಗಾರ ಗುಡ್ ಬೈ

ಇಂಗ್ಲೆಂಡ್ ತಂಡದ ಸ್ಟಾರ್ ಆಟಗಾರ ಕ್ರಿಸ್ ವೋಕ್ಸ್ ಅಂತಾರಾಷ್ಟ್ರೀಯ ಕ್ರಿಕೆಟ್‌ನಿಂದ ದಿಢೀರ್ ನಿವೃತ್ತಿ ಘೋಷಿಸಿದ್ದಾರೆ. ಭಾರತದ ವಿರುದ್ಧದ ಟೆಸ್ಟ್ ಸರಣಿಯ ಕೊನೆಯ ಪಂದ್ಯದಲ್ಲಿ ಕಣಕ್ಕಿಳಿದಿದ್ದ ವೋಕ್ಸ್ ಪ್ರತಿಷ್ಠಿತ ಆಯಶಸ್ ಸರಣಿಗೂ ಮುನ್ನ ನಿವೃತ್ತಿ ಘೋಷಿಸಿ ಅಚ್ಚರಿ ಮೂಡಿಸಿದ್ದಾರೆ. ಲಂಡನ್‌ನ ಕೆನ್ನಿಂಗ್ಟನ್ ಓವಲ್ ಮೈದಾನದಲ್ಲಿ ನಡೆದ ಟೀಮ್ ಇಂಡಿಯಾ ವಿರುದ್ಧದ ಪಂದ್ಯದ ವೇಳೆ ಕ್ರಿಸ್ ವೋಕ್ಸ್ ಗಾಯಗೊಂಡಿದ್ದರು. ಈ ಗಾಯದ ಹೊರತಾಗಿಯೂ ಒಂದೇ ಕೈಯಲ್ಲಿ ಬ್ಯಾಟಿಂಗ್‌ಗೆ ಆಗಮಿಸಿ ಗಮನ ಸೆಳೆದಿದ್ದರು. ಇದೀಗ ದಿಢೀರನೆ ನಿವೃತ್ತಿ ನಿರ್ಧಾರ ಪ್ರಕಟಿಸಿದ್ದಾರೆ. ಈ ಬಗ್ಗೆ ಸೋಷಿಯಲ್ ಮೀಡಿಯಾ ಪೋಸ್ಟ್ ಹಂಚಿಕೊಂಡಿರುವ ಕ್ರಿಸ್ ವೋಕ್ಸ್, ನಾನು ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ಗುಡ್ ಬೈ ಹೇಳುವ ಸಮಯ ಬಂದಿದೆ. ಇಂಗ್ಲೆಂಡ್ ಪರ ಆಡುವುದು ನನ್ನ ಬಾಲ್ಯದ ಕನಸಾಗಿತ್ತು. ಈ ಕನಸು ನನಸಾಗಿರುವುದು ನನ್ನ ಅದೃಷ್ಟ. ಕಳೆದ 15 ವರ್ಷಗಳಲ್ಲಿ ಇಂಗ್ಲೆಂಡ್ ತಂಡದಲ್ಲಿ ನನಗೆ ಹಲವಾರು ಸ್ನೇಹಿತರು ಸಿಕ್ಕಿದ್ದಾರೆ. ಅವರೆಲ್ಲರಿಗೂ, ನನ್ನನ್ನು ಬೆಂಬಲಿಸಿದವರಿಗೂ ಈ ಸಂದರ್ಭದಲ್ಲಿ ನಾನು ಧನ್ಯವಾದಗಳನ್ನು ಅರ್ಪಿಸುತ್ತೇನೆ ಎಂದು ಕ್ರಿಸ್ ವೋಕ್ಸ್ ಬರೆದುಕೊಂಡಿದ್ದಾರೆ. ಕ್ರಿಸ್ ವೋಕ್ಸ್ ಇಂಗ್ಲೆಂಡ್ ಪರ 62 ಟೆಸ್ಟ್ ಪಂದ್ಯಗಳನ್ನಾಡಿದ್ದಾರೆ. ಈ ವೇಳೆ 99 ಇನಿಂಗ್ಸ್ ಆಡಿರುವ ಅವರು ಒಟ್ಟು 2034 ರನ್ ಕಲೆಹಾಕಿದ್ದಾರೆ. ಇನ್ನು ಬೌಲಿಂಗ್‌ನಲ್ಲಿ 192 ವಿಕೆಟ್ ಕಬಳಿಸಿ ಮಿಂಚಿದ್ದಾರೆ. ಏಕದಿನ ಕ್ರಿಕೆಟ್‌ನಲ್ಲಿ 122 ಪಂದ್ಯಗಳನ್ನಾಡಿರುವ ಕ್ರಿಸ್ ವೋಕ್ಸ್ 1588 ರನ್ ಕಲೆಹಾಕಿದರೆ, 173 ವಿಕೆಟ್ ಕಬಳಿಸಿದ್ದಾರೆ. ಹಾಗೆಯೇ ಇಂಗ್ಲೆಂಡ್ ಪರ 33 ಟಿ20 ಪಂದ್ಯಗಳನ್ನಾಡಿರುವ ವೋಕ್ಸ್ 147 ರನ್ ಜೊತೆ 31 ವಿಕೆಟ್ ಪಡೆದಿದ್ದಾರೆ.



# ವಿಶ್ವ ದಾಖಲೆಯ ಸೆಂಚುರಿ ಸಿಡಿಸಿದ ಬ್ರೆಂಡನ್ ಟೇಲರ್

ಜಿಂಬಾಬ್ವೆ ತಂಡದ ವಿಕೆಟ್ ಕೀಪರ್ ಬ್ಯಾಟರ್ ಬ್ರೆಂಡನ್ ಟೇಲರ್‌ಹೊಸ ವಿಶ್ವ ದಾಖಲೆ ನಿರ್ಮಿಸಿದ್ದಾರೆ. ಅದು ಕೂಡ ತಮ್ಮ 39ನೇ ವಯಸ್ಸಿನಲ್ಲಿ ಎಂಬುದು ವಿಶೇಷ. ಹರಾರೆಯಲ್ಲಿ ನಡೆದ ಟಿ20 ವಿಶ್ವಕಪ್‌ನ ಅರ್ಹತಾ ಸುತ್ತಿನ ಪಂದ್ಯದಲ್ಲಿ ಜಿಂಬಾಬ್ವೆ ಮತ್ತು ಬೋಟ್ಸ್ವಾನಾ ತಂಡಗಳು ಮುಖಾಮುಖಿಯಾಗಿದ್ದವು. ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಜಿಂಬಾಬ್ವೆ ಪರ 3ನೇ ಕ್ರಮಾಂಕದಲ್ಲಿ ಕಣಕ್ಕಿಳಿದ ಬ್ರೆಂಡನ್ ಟೇಲರ್ ಸಿಡಿಲಬ್ಬರದ ಬ್ಯಾಟಿಂಗ್ ಪ್ರದರ್ಶಿಸಿದರು. ಆರಂಭದಿಂದಲೇ ಬಿರುಸಿನ ಬ್ಯಾಟಿಂಗ್‌ಗೆ ಒತ್ತು ನೀಡಿದ್ದ ಟೇಲರ್ ಕೇವಲ 46 ಎಸೆತಗಳಲ್ಲಿ ಶತಕ ಪೂರೈಸಿದ್ದರು. ಅಲ್ಲದೆ ಈ ಪಂದ್ಯದಲ್ಲಿ 54 ಎಸೆತಗಳನ್ನು ಎದುರಿಸಿದ ಬ್ರೆಂಡನ್ ಟೇಲರ್ 5 ಭರ್ಜರಿ ಸಿಕ್ಸ್ ಹಾಗೂ 16 ಫೋರ್‌ಗಳೊಂದಿಗೆ (ಒಟ್ಟು 20 ಬೌಂಡರಿ) 123 ರನ್ ಗಳಿಸಿದರು. ಈ ಭರ್ಜರಿ ಶತಕದೊಂದಿಗೆ ಟಿ20 ಕ್ರಿಕೆಟ್ ಇತಿಹಾಸದಲ್ಲೇ ಶತಕ ಸಿಡಿಸಿದ ಅತ್ಯಂತ ಹಿರಿಯ ಬ್ಯಾಟರ್ ಎಂಬ ದಾಖಲೆ ಬ್ರೆಂಡನ್ ಟೇಲರ್ ಪಾಲಾಯಿತು. ಇದಕ್ಕೂ ಮುನ್ನ ಈ ಭರ್ಜರಿ ದಾಖಲೆ ಜಿಂಬಾಬ್ವೆ ತಂಡದ ಸಿಕಂದರ್ ರಾಝ ಹೆಸರಿನಲ್ಲಿತ್ತು. 2024 ರಲ್ಲಿ ಗಾಂಬಿಯಾ ವಿರುದ್ಧ ಸಿಕಂದರ್ ರಾಝ ಶತಕ ಬಾರಿಸಿದಾಗ ಅವರ ವಯಸ್ಸು 38 ವರ್ಷ. ಈ ಮೂಲಕ ಐಸಿಸಿ ಪೂರ್ಣ ಸದಸ್ಯ ರಾಷ್ಟ್ರದ ಪರ ಟಿ20 ಕ್ರಿಕೆಟ್‌ನಲ್ಲಿ ಶತಕ ಸಿಡಿಸಿದ ಹಿರಿಯ ಬ್ಯಾಟರ್ ಎನಿಸಿಕೊಂಡಿದ್ದರು.



# ಆರ್‌ಸಿಬಿ ತಂಡ ಮಾರಾಟ..?



## ತೆರೆ ಮರೆಯ ಸಿದ್ಧತೆಗಳು ಶುರು

ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿಯು ಡಿಯಾಜಿಯೋ ಕಂಪೆನಿಯ ಒಡೆತನದಲ್ಲಿದೆ. ಬ್ರಿಟನ್ ಮೂಲದ ಡಿಯಾಜಿಯೋ ತನ್ನ ಭಾರತೀಯ ಘಟಕವಾದ ಯುನೈಟೆಡ್ ಸ್ಪಿರಿಟ್ಸ್ ಲಿಮಿಟೆಡ್ ಎಂಬ ಆಲ್ಕೋಹಾಲ್ ಕಂಪನಿಯ ಮೂಲಕ ಆರ್‌ಸಿಬಿ ಫ್ರಾಂಚೈಸಿಯನ್ನು ಹೊಂದಿದೆ. ಇದೀಗ ಡಿಯಾಜಿಯೋ ಕಂಪೆನಿಯು ಆರ್‌ಸಿಬಿ ಫ್ರಾಂಚೈಸಿಯನ್ನು ಮಾರಾಟ ಮಾಡಲು ಮುಂದಾಗಿದ್ದಾರೆ ಎಂದು ಐಪಿಎಲ್‌ನ ಮಾಜಿ ಅಧ್ಯಕ್ಷರು ಹೇಳಿದ್ದಾರೆ. ಇಂಡಿಯನ್ ಪ್ರೀಮಿಯರ್ ಲೀಗ್‌ನ ಹಾಲಿ ಚಾಂಪಿಯನ್ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿ ಬದಲಾಗಲಿದೆಯಾ? ಇಂತಹದೊಂದು ಪ್ರಶ್ನೆ ಹುಟ್ಟಿಕೊಳ್ಳಲು ಮುಖ್ಯ ಕಾರಣ, ಐಪಿಎಲ್‌ನ ಮಾಜಿ ಅಧ್ಯಕ್ಷ ಲಲಿತ್ ಮೋದಿ ಮುಂದಿಟ್ಟಿರುವ ಹೊಸ ಸುದ್ದಿ. ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿಯನ್ನು ಮಾರಾಟ ಮಾಡಲು ಡಿಯಾಜಿಯೋ ಕಂಪೆನಿ ಮುಂದಾಗಿದೆ ಎಂದು ಲಲಿತ್ ಮೋದಿ ಹೇಳಿದ್ದಾರೆ. ಈ ಹಿಂದೆ ಆರ್‌ಸಿಬಿ ಇಂತಹ ಸುದ್ದಿಯನ್ನು ನಿರಾಕರಿಸಿತ್ತು. ಆದರೆ ಇದೀಗ ಆರ್‌ಸಿಬಿ ಮಾಲೀಕರು ತಮ್ಮ ಬ್ಯಾಲೆನ್ಸ್ ಶೀಟ್‌ನಿಂದ ತೆಗೆದು ಮಾರಾಟ ಮಾಡಲು ನಿರ್ಧರಿಸಿದ್ದಾರೆಂದು ತೋರುತ್ತಿದೆ.

ಆರ್‌ಸಿಬಿ ತಂಡಕ್ಕೆ ಅಪಾರ ಅಭಿಮಾನಿಗಳಿದ್ದಾರೆ. ಇದೀಗ ತಂಡ ಚಾಂಪಿಯನ್ ಪಟ್ಟವನ್ನು ಸಹ ಅಲಂಕರಿಸಿದೆ. ಹೀಗಾಗಿ ಉತ್ತಮ ನಿರ್ವಹಣಾ ತಂಡವನ್ನು ಫ್ರಾಂಚೈಸಿ ಹೊಂದಿದೆ. ಇದೇ ಕಾರಣದಿಂದಾಗಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿಯ ಸಂಪೂರ್ಣ ಶೇರು ಮಾರಾಟ ಮಾಡಲು ಡಿಯಾಜಿಯೋ ಕಂಪೆನಿ ಆಸಕ್ತಿ ತೋರಿದೆ. ಅಲ್ಲದೆ ಐಪಿಎಲ್ 2026 ಕ್ಕೂ ಮುನ್ನ ಒಟ್ಟಾರೆಯಾಗಿ ಲಭ್ಯವಿರುವ ಏಕೈಕ ತಂಡವಾಗಿ ಆರ್‌ಸಿಬಿ ಮಾರಾಟವಾಗಬಹುದು. ಬಿಗ್ ಗ್ಲೋಬಲ್ ಫಂಡ್‌ಗಳಲ್ಲಿ ಒಂದು ಅಥವಾ ಬೃಹತ್ ಹೂಡಿಕೆದಾರರು ಆರ್‌ಸಿಬಿ ತಂಡವನ್ನು ಖರೀದಿಸುವ ಸಾಧ್ಯತೆಯಿದೆ. ಏಕೆಂದರೆ ಭಾರತದಲ್ಲಿ ಹೂಡಿಕೆ ಮಾಡಲು ಇದಕ್ಕಿಂತ ಉತ್ತಮ ಅವಕಾಶ ಇನ್ನೊಂದಿಲ್ಲ. ಅದನ್ನು ಬಳಸಿಕೊಳ್ಳುವ ಯಾರಿಗಾದರೂ ಶುಭವಾಗಲಿ ಎಂದು ಲಲಿತ್ ಮೋದಿ ಸೋಷಿಯಲ್ ಮೀಡಿಯಾದಲ್ಲಿ ಬರೆದುಕೊಂಡಿದ್ದಾರೆ. ಇದಕ್ಕೂ ಮುನ್ನ ಜುಲೈ ತಿಂಗಳಲ್ಲಿ ಆರ್‌ಸಿಬಿ ಫ್ರಾಂಚೈಸಿಯನ್ನು ಮಾರಾಟ ಮಾಡಲಾಗುತ್ತದೆ ಎಂದು ವರದಿಯಾಗಿತ್ತು. ಅದು ಕೂಡ ಸುಮಾರು 2 ಬಿಲಿಯನ್ ಡಾಲರ್‌ಗೆ. ಅಂದರೆ ಭಾರತೀಯ ರೂಪಾಯಿ ಮೌಲ್ಯ ಬರೋಬ್ಬರಿ 17 ಸಾವಿರ ಕೋಟಿ ರೂ.ಗೆ ಆರ್‌ಸಿಬಿ ಫ್ರಾಂಚೈಸಿಯನ್ನು ಮಾರಾಟ ಮಾಡಲು ಡಿಯಾಜಿಯೋ ಕಂಪೆನಿ ಮುಂದಾಗಿದೆ ಎಂಬ ಸುದ್ದಿಗಳು ಹರಿದಾಡಿದ್ದವು. ಆದರೆ ಆ ಬಳಿಕ ಈ ಸುದ್ದಿಯನ್ನು ಆರ್‌ಸಿಬಿ ನಿರಾಕರಿಸಿತ್ತು. ಇದೀಗ ಲಲಿತ್ ಮೋದಿ ಪ್ರಕಾರ, ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿಯನ್ನು ಮಾರಾಟ ಮಾಡಲು ತೆರೆ ಮರೆಯ ಸಿದ್ಧತೆಗಳು ಶುರುವಾಗಿದೆ.

DIAGEO

ROYAL CHALLENGERS BANGALORE

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966